ಸಂಪುಟ: 04 ಸಂಚಿಕೆ: 269 ಪುಟಗಳು: 08 ಗುರುವಾರ 12 ಡಿಸೆಂಬರ್ 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ನಮ್ಮ ಜೀವನದಲ್ಲಿ ನಾವು ಮಾಡುವ ತೀರ್ಮಾನಗಳು ನಮ್ಮ ಹಣೆಬರಹವನ್ನು ನಿರ್ದೇಶಿಸುತ್ತವೆ.

# ಉದಯ ವಾಹಿನಿ


ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮುರುಡೇಶ್ವರದ ಸಮುದ್ರದಲ್ಲಿ ಮುಳುಗಿ ನಾಲ್ವರು ವಿದ್ಯಾರ್ಥಿಗಳು ಸಾವು

• ಉದಯವಾಹಿನಿ, ಬೆಂಗಳೂರು

ಮುರುಡೇಶ್ವರದ ಸಮುದ್ರದಲ್ಲಿ ಮುಳುಗಿ ನಾಲ್ವರು ವಿದ್ಯಾರ್ಥಿಗಳು ಮೃತಪಟ್ಟಿದ್ದು, ಸಿಎಂ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ. ಎಕ್ಸ್ ಖಾತೆಯಲ್ಲಿ ಟೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ ಕೋಲಾರ ಜಿಲ್ಲೆ ಮುಳಬಾಗಿಲು ತಾಲೂಕಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸಕ್ಕೆಂದು ಹೋದ ಸಂದರ್ಭದಲ್ಲಿ ಮುರುಡೇಶ್ವರ ಬಳಿಯ ಸಮುದ್ರದಲ್ಲಿ

**5 ಲಕ್ಷ ಪರಿಹಾರ ಘೋಷಣೆ.!**



ನೀರುಪಾಲಾದ ಸುದ್ದಿ ತಿಳಿದು ಆಘಾತವಾಯಿತು. ಮೃತ ಮಕ್ಕಳ ಆತ್ಮಕ್ಕೆ ಶಾಂತಿ ಕೋರುತ್ತೇನೆ.

ಮಕ್ಕಳ ದುಃಖತಪ್ತ ಪೋಷಕರಿಗೆ ನನ್ನ ಸಂತಾಪಗಳು. ಈ ದುರ್ಘಟನೆಯಲ್ಲಿ ಮಡಿದ ನಾಲ್ವರು ವಿದ್ಯಾರ್ಥಿಗಳ ಕುಟುಂಬಕ್ಕೆ ರಾಜ್ಯ ಸರ್ಕಾರದ ವತಿಯಿಂದ ತಲಾ 25 ಲಕ್ಷ ಪರಿಹಾರ ನೀಡಲಾಗುವುದು. ಉತ್ತರ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಗಳ ಜೊತೆ ಮಾತನಾಡಿ ಮೃತ ದೇಹಗಳನ್ನು ಹುಟ್ಟೂರಿಗೆ ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಿದ್ದೇನೆ.



ಪ್ರವಾಸದ ಸಂದರ್ಭದಲ್ಲಿ ಶಿಕ್ಷಕರು ಮಕ್ಕಳ ಬಗ್ಗೆ ಹೆಚ್ಚು ಜಾಗೃತೆ ವಹಿಸಬೇಕು. ಅಪಾಯಕಾರಿ ಸ್ಥಳಗಳಿಗೆ ಭೇಟಿನೀಡುವಾಗ ಮಕ್ಕಳ ಮೇಲೆ ನಿಗಾ ಇಡಬೇಕು. ಮಕ್ಕಳನ್ನು ಕಳೆದುಕೊಂಡ ಹೆತ್ತವರ ನೋವು ಸಂಕಟವನ್ನು ನಾನು ಅರ್ಥೈಸಿಕೊಳ್ಳಬಲ್ಲೆ, ಇಂತಹ ಅವಘಡಗಳು ಮತ್ತೆಂದೂ ಸಂಭವಿಸದಿರಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಟೀಟ್ ಮಾಡಿದ್ದಾರೆ.

# ಕೃಷ್ಣ ಪಂಚಭೂತಗಳಲ್ಲಿ ಲೀನ

**ಕರುನಾಡಲ್ಲಿ 'ಕೃಷ್ಣ' ಯುಗಾಂತ್ಯ**

## ಸಕಲ ಸರ್ಕಾರಿ ಗೌರವದೊಂದಿಗೆ ಸೋಮನಹಳ್ಳಿಯಲ್ಲಿ ಅಂತ್ಯಕ್ರಿಯೆ

• ಉದಯವಾಹಿನಿ, ಬೆಂಗಳೂರು

ದೂರದೃಷ್ಟಿಯ ಕನಸುಗಾರ, ರಾಜಕೀಯ ಸಂತೆಯೊಳಗಿನ ಸಂತ, ಮಾಜಿ ಮುಖ್ಯಮಂತ್ರಿ ಎಸ್.ಎಂ ಕೃಷ್ಣ ಅವರು ತಮ್ಮ ಬದುಕಿನ ಯಾತ್ರೆ ಮುಗಿಸಿ, ಪಂಚಭೂತಗಳಲ್ಲಿ ಲೀನವಾಗಿದ್ದಾರೆ. ತಮ್ಮ ಹುಟ್ಟೂರು ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ಸೋಮನಹಳ್ಳಿಯ



ಹೊರವಲಯದ ಕೆಫೆ ಕಾಫಿ ಡೇ ಆವರಣದಲ್ಲಿ ಒಕ್ಕಲಿಗ ಸಂಪ್ರದಾಯಂತೆ ಹಾಗೂ ಕುಶಾಲತೋಪು ಸಿಡಿಸಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಸಂಸ್ಕಾರ ನೆರವೇರಿಸಲಾಯ್ತು. ಪೊಲೀಸರ ತಂಡದಿಂದ ರಾಷ್ಟ್ರಗೀತೆ ನಮನ ಸಲ್ಲಿಸಲಾಯಿತು. ನಂತರ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು, ಎಸ್ ಎಂ ಕೃಷ್ಣ ಪತ್ನಿ ಪ್ರೇಮಾ ಕೃಷ್ಣ ಅವರಿಗೆ ರಾಷ್ಟ್ರಧ್ವಜ ಹಸ್ತಾಂತರಿಸಿದರು. ಬಳಿಕ ಭಾನುಪ್ರಕಾಶ್ ಶರ್ಮಾ, ಇತರ 15 ವೈದಿಕರ ತಂಡವು ಮಂತ್ರಘೋಷಗಳೊಂದಿಗೆ ಅಂತಿಮ ವಿಧಿವಿಧಾನ ನೆರವೇರಿಸಿದ ಬಳಿಕ, ಎಸ್.ಎಂ ಕೃಷ್ಣರ ಮೊಮ್ಮಗ ಅಮರ್ಥ್ಯ ಹೆಗ್ಡೆ ಚಿತೆಗೆ ಅಗ್ನಿಸ್ಪರ್ಶ ಮಾಡಿದರು.

**ಎಸ್.ಎಂ ಕೃಷ್ಣ ಅವರ ಶರೀರ ಮಾತ್ರ ನಮ್ಮ ಜತೆ ಇಲ್ಲ. ಅವರು ರಾಜಕೀಯವಾಗಿ ಗುರು**

ಚಿತೆಗೆ ಅರಣ್ಯ ಇಲಾಖೆಯಿಂದ 1 ಸಾವಿರ ಕೆಜಿ ಶ್ರೀಗಂಧದ ಕಟ್ಟಿಗೆ ಬಾಳೆ ಎಲೆಯಲ್ಲಿ ಪಾರ್ಥಿವ ಶರೀರ ಮುಚ್ಚಿ, 50 ಕೆಜಿ ತುಪ್ಪ ಬಳಸಿ ಚಿತೆಗೆ ಅಗ್ನಿಸ್ಪರ್ಶ ಮಾಡಲಾಯ್ತು. ಅಂತಿಮ ವಿಧಿ ವಿಧಾನದ ಇಡೀ ಉಸ್ತುವಾರಿ ಡಿಸಿಎಂ ಡಿಕೆ ಶಿವಕುಮಾರ್ ವಹಿಸಿಕೊಂಡಿದ್ದರು. ಇನ್ನು ಅಂತ್ಯ ಸಂಸ್ಕಾರದ ವೇಳೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ವಿಪಕ್ಷ ನಾಯಕ ಆರ್.ಅಶೋಕ್, ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಹೆಚ್.ಡಿ ಕುಮಾರಸ್ವಾಮಿ, ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಸಚಿವರು, ಶಾಸಕರು, ಸಂಸದರು, ಮಾಜಿ ಶಾಸಕರು, ನಿರ್ಮಲಾನಂದನಾಥ ಸ್ವಾಮೀಜಿ ಸೇರಿ ಪ್ರಮುಖ ಮಠಗಳ ಪೀಠಾಧಿಪತಿಗಳು ಹಾಜರಿದ್ದು, ಅಂತಿಮ ನಮನ ಸಲ್ಲಿಸಿದರು.

ಎಸ್‌ಎಂ ಕೃಷ್ಣ ಪಾರ್ಥಿವ ಶರೀರಕ್ಕೆ ಪುಷ್ಪಗುಚ್ಛ ಇರಿಸಿ ಅಂತಿಮ ದರ್ಶನ ಪಡೆದು ವಿದಾಯ ಹೇಳಿದ್ರು. ಅಲ್ಲದೇ ಅಪಾರ ಸಂಖ್ಯೆಯಲ್ಲಿ ಮಂಡ್ಯ, ರಾಮನಗರ ಜಿಲ್ಲೆ ಸೇರಿದಂತೆ ಬೇರೆ ಬೇರೆ ಜಿಲ್ಲೆಗಳಿಂದ ಜನರು ಕೂಡ ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡಿದ್ದರು. ಅಂತಿಮವಾಗಿ ಪಂಚಭೂತಗಳಲ್ಲಿ ಲೀನವಾಗುವ ಮೂಲಕ ಕರುನಾಡಿನ ಕಣ್ಮಣಿ ಕೃಷ್ಣ ಅಮರರಾದರು. ಎಸ್‌ಎಂ ಕೃಷ್ಣ ಅವರ ಅಂತ್ಯಕ್ರಿಯೆಗೂ ಮುನ್ನ ಸದಾಶಿವನಗರದ ಅವರ ಮನೆಯಲ್ಲಿ ಕೃಷ್ಣ ಅವರ ಪಾರ್ಥಿವ ಶರೀರಕ್ಕೆ ಪೂಜೆ ಸಲ್ಲಿಸಲಾಯ್ತು. ಡಿಸಿಎಂ ಡಿಕೆ ಶಿವಕುಮಾರ್ ಪೂಜೆ ಸಲ್ಲಿಸಿದ್ರು.

ಬಳಿಕ ಅಂತಿಮಯಾತ್ರೆಗೆ ಚಿರಶಾಂತಿ ವಾಹನ ಸಿದ್ಧಪಡಿಸಲಾಗಿತ್ತು. ಸಂಪೂರ್ಣ ಬಿಳಿ ಸೇವಂತಿಗೆ, ಗುಲಾಬಿ ಹೂಗಳು, ತುಳಸಿಯಿಂದ ವಾಹನಕ್ಕೆ ಅಲಂಕಾರ ಮಾಡಲಾಗಿತ್ತು. ಸರಿಯಾಗಿ ಬೆಳಗ್ಗೆ 8 ಗಂಟೆ ವೇಳೆಗೆ ಸದಾಶಿವನಗರದಿಂದ ಹುಟ್ಟೂರು ಸೋಮನಹಳ್ಳಿವರೆಗೆ ಅಂತಿಮಯಾತ್ರೆ ಸಾಗಿತು. ಪಾರ್ಥಿವ ಶರೀರದ ಜೊತೆಗೆ ವಾಹನದಲ್ಲಿ ಡಿಸಿಎಂ ಡಿ.ಕೆ ಶಿವಕುಮಾರ್ ಸಾಗಿದ್ರು. ಸೋಮನಹಳ್ಳಿಗೆ ಸಾಗುವ ಮಾರ್ಗದಲ್ಲಿ ಕೆಂಗೇರಿ, ಬಿಡದಿ, ರಾಮನಗರ, ಚನ್ನಪಟ್ಟಣ ಸೇರಿದಂತೆ ಮಧ್ಯದಲ್ಲಿ ಕೆಲ ಸಮಯ ಸಾರ್ವಜನಿಕರಿಗೆ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆಯಲು ಅವಕಾಶ ನೀಡಲಾಯ್ತು. ದಾರಿಯುದ್ದಕ್ಕೂ ಸ್ಥಳೀಯ ಶಾಸಕರು, ಸಾರ್ವಜನಿಕರು ಚಿರಶಾಂತಿ ವಾಹನಕ್ಕೆ ಹೂಗಳನ್ನ ಚೆಲ್ಲಿ ಅಭಿವೃದ್ಧಿ ಹರಿಕಾರನಿಗೆ ಅಂತಿಮ ನಮನ ಸಲ್ಲಿಸಿ ವಿದಾಯ ಹೇಳಿದ್ರು.



### ರಾಜಕೀಯ ಪ್ರವೇಶ

ಕಾಂಗ್ರೆಸ್‌ನಿಂದ ಮುಖ್ಯಮಂತ್ರಿಯಾದ ಎಸ್ ಎಂ ಕೃಷ್ಣ, ಮೊದಲು ರಾಜಕೀಯಕ್ಕೆ ಇಳಿದಿದ್ದು ಪಕ್ಷೇತರ ಅಭ್ಯರ್ಥಿಯಾಗಿ. 1962ರಲ್ಲಿ ಮದ್ದೂರು ವಿಧಾನಸಭೆ ಕ್ಷೇತ್ರದಲ್ಲಿ ಮೊದಲ ಚುನಾವಣೆಯಲ್ಲಿಯೇ ಗೆಲುವಿನ ನಗೆ ಬೀರಿದ್ದರು. ನಂತರ ಪ್ರಜಾ ಸೋಷಿಯಲಿಸ್ಟ್ ಪಕ್ಷ ಸೇರಿದ್ದರು. 1967ರಲ್ಲಿ ನಡೆದ ವಿಧಾನಸಭೆ ಚುನಾವಣೆಯಲ್ಲಿ ಸೋಲು ಅನುಭವಿಸಿದರು. 1968ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಸೋಲಿಸುವ ಮೂಲಕ ಸಂಸತ್ ಪ್ರವೇಶಿಸಿದರು. ಬಳಿಕ ಕಾಂಗ್ರೆಸ್ ಸೇರಿದ ಅವರು 1971 ಹಾಗೂ 1980ರ ಚುನಾವಣೆಗಳಲ್ಲಿ ಲೋಕಸಭೆಗೆ ಆಯ್ಕೆಯಾಗಿದ್ದರು.

1. ಹುಟ್ಟೂರಲ್ಲಿ ಎಸ್.ಎಂ.ಕೃಷ್ಣ ಅಂತ್ಯಕ್ರಿಯೆ; ಸಿಎಂ ಸೇರಿ ಅನೇಕ ಗಣ್ಯರಿಂದ ಅಂತಿಮ ನಮನ
2. ಒಕ್ಕಲಿಗ ಸಂಪ್ರದಾಯದಂತೆ ನಡೆದ ಅಂತ್ಯಸಂಸ್ಕಾರ... ಹುಟ್ಟೂರಲ್ಲಿ ನೀರವ ಮೌನ
3. 1999 ರಿಂದ 2004ರವರೆಗೂ ಕರ್ನಾಟಕದ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಿದ್ದ ಕೃಷ್ಣ

### ಅಂತ್ಯ ಸಂಸ್ಕಾರಕ್ಕೆ 1 ಸಾವಿರ ಕೆಜಿ ಶ್ರೀಗಂಧ ಬಳಕೆ

ಅಂತ್ಯಸಂಸ್ಕಾರದ ಸ್ಥಳದಲ್ಲಿ ಗಣ್ಯರಿಗೆ ಸಾರ್ವಜನಿಕರಿಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿದೆ. ಬೆಳಿಗ್ಗೆ 10.30 ಗಂಟೆಗೆಯಿಂದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗಿತ್ತು. ಬಾನು ಪ್ರಕಾಶ್ ಸ್ವಾಮೀಜಿ ನೇತೃತ್ವದಲ್ಲಿ ಪೂಜಾ ವಿಧಿ ವಿಧಾನ ನಡೆಸಲಾಯಿತು. ಸಕಲ ಸರ್ಕಾರಿ ಗೌರವದೊಂದಿಗೆ ಅಂತಿಮ ಸಂಸ್ಕಾರ ನೆರವೇರಿಸಲಾಯಿತು. ಅಂತ್ಯ ಸಂಸ್ಕಾರಕ್ಕೆ 1 ಸಾವಿರ ಕೆಜಿ ಶ್ರೀಗಂಧ ಬಳಕೆ ಮಾಡಲಾಯಿತು. 300 ಕೆಜಿ ಸೇವಂತಿಗೆ, ಗುಲಾಬಿ ಹಾಗೂ ಚೆಂಡು ಹೂವು ಬಳಕೆ ಮಾಡಲಾಗಿದೆ.



### ನಾಲ್ಕು ಸದನದ ಸದಸ್ಯ

ಮದ್ದೂರು ಕ್ಷೇತ್ರದಿಂದ 3 ಬಾರಿ ಹಾಗೂ ಚಾಮರಾಜಪೇಟೆಯಿಂದ 1 ಬಾರಿ ಶಾಸಕರಾಗಿದ್ದರು. ಮೂರು ಬಾರಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಸಂಸದರಾಗಿ, 1 ಬಾರಿ ವಿಧಾನ ಪರಿಷತ್ ಸದಸ್ಯರಾಗಿದ್ದರು. 2 ಬಾರಿ ರಾಜ್ಯಸಭಾ ಸದಸ್ಯರಾಗಿದ್ದರು. ಕರ್ನಾಟಕದಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸ್ಪೀಕರ್, ಕೈಗಾರಿಕೆ, ವಾಣಿಜ್ಯ ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. ವಿಧಾನಸಭೆ, ವಿಧಾನ ಪರಿಷತ್, ಲೋಕಸಭೆ, ರಾಜ್ಯಸಭೆ ಹೀಗೆ ದೇಶದ ನಾಲ್ಕೂ ಸದನಗಳ ಸದಸ್ಯರಾಗಿದ್ದ ಅಪರೂಪದ ರಾಜಕಾರಣಿಗಳಲ್ಲಿ ಕೃಷ್ಣ ಒಬ್ಬರು. ಶಾಸಕ, ಪರಿಷತ್ ಸದಸ್ಯ, ಸಚಿವ, ಸಂಸದ, ರಾಜ್ಯಸಭೆ ಸದಸ್ಯ, ಕೇಂದ್ರ ಸಚಿವ, ರಾಜ್ಯಪಾಲ ಇಷ್ಟು ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ ವಿರಳ ರಾಜಕಾರಣಿಗಳಲ್ಲಿ ಕೃಷ್ಣ ಒಬ್ಬರಾಗಿದ್ದರು.

**1980** ಕಾಂಗ್ರೆಸ್ ನಿಂದ ಸ್ಪರ್ಧಿಸಿದ್ದರು. ಮೂರನೇ ಬಾರಿಗೆ ಎಂಪಿಯಾದ ಹಿನ್ನಲೆಯಲ್ಲಿ ಕೇಂದ್ರ ಹಣಕಾಸು ಸಚಿವರಾಗಿದ್ದರು.


**1984** ಎಂಪಿ ಚುನಾವಣೆಯಲ್ಲಿ ಸಚಿವ ಕೆ.ವಿ.ಶಂಕರಗೌಡ ಅವರ ವಿರುದ್ಧ ಸೋಲು

**1989** ಮದ್ದೂರು ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿದು ಗೆದ್ದು ಡಿಸಿಎಂ ಹಾಗೂ ಸ್ಪೀಕರ್ ಹುದ್ದೆ ಅಲಂಕರಿಸುತ್ತಾರೆ.

**1999** ರಾಜ್ಯ ಸದಸ್ಯರಾಗಿ ಆಯ್ಕೆ , ೧೯೯೯ರಲ್ಲಿ ಗೆದ್ದು ರಾಜ್ಯದ ಸಿಎಂ ಆಗಿ ಅಧಿಕಾರ ಸ್ವೀಕಾರ 2004 ರಿಂದ 2014 ರವರಿಗೆ ಮಹಾರಾಷ್ಟ್ರದ ರಾಜ್ಯಪಾಲರಾಗಿ ಸೇವೆ

**2010** ರಾಜ್ಯಸಭಾ ಸದಸ್ಯರಾಗಿ ಆಯ್ಕೆಗೊಂಡು ಡಾ. ಮನ್ ಮೋಹನ್ ಸಿಂಗ್ ಸಂಪುಟದಲ್ಲಿ ಕೇಂದ್ರ ವಿದೇಶಾಂಗ ಸಚಿವರಾಗಿ ಕಾರ್ಯ ನಿರ್ವಹಣೆ ಮಾಡಿದರು.

**2017** ಕಾಂಗ್ರೆಸ್ ತ್ಯಜಿಸಿ ಬಿಜೆಪಿ ಸೇರ್ಪಡೆ, ಕೆಲ ತಿಂಗಳಲ್ಲಿ ಸಕ್ರಿಯ ರಾಜಕಾರಣಕ್ಕೆ ನಿವೃತ್ತಿ



### ರಾಜ್ಯಕ್ಕೆ ಇವರ ಕೊಡುಗೆ ಅಪಾರ

ಹಿರಿಯ ರಾಜಕಾರಣಿ, ಮಾಜಿ ಸಿಎಂ ಎಸ್‌ಎಂ ಕೃಷ್ಣ ನಿಧನ ಎಲ್ಲಾರಿಗೂ ನೋವನ್ನು ತಂದಿದೆ. ಉತ್ತಮ ರಾಜಕಾರಣಿಯಾಗಿದ್ದ ಇವರ ಸಾವು ಇದೀಗ ಎಲ್ಲಾರನ್ನೂ ಮೌನಕ್ಕೆ ಎಡೆಮಾಡಿ ಕೊಟ್ಟಿದೆ. ಇನ್ನು ರಾಜ್ಯಕ್ಕೆ ಇವರ ಕೊಡುಗೆ ಅಪಾರ. ಹಲವು ಅಭಿವೃದ್ಧಿ ಕೆಲಸಗಳನ್ನು ಇವರು ತಮ್ಮ ಅಧಿಕಾರದ ಅವಧಿಯಲ್ಲಿ ಮಾಡಿದ್ದರು.

### ಸಿಲಿಕಾನ್ ಸಿಟಿಯ ಹರಿಕಾರ

ಎಸ್.ಎಂ.ಕೃಷ್ಣ ಅವರ ಜೀವನಚರಿತ್ರೆ ಚಿತ್ರ ದೀಪ ಸಾಲು, ನೆನಪುಗಳ ಸಂಕಲನ ಸತಿವಾಹಿನಿ, ಜೀವನಚರಿತ್ರೆ ಕೃಷ್ಣಪಥ, ಚಿಂತನೆಗಳ ಸಂಕಲನ ಭವಿಷ್ಯನ, ಇಂಗ್ಲಿಷ್ ಕೃತಿಗಳಾದ ಡೌನ್ ಮೆಮೊರಿ ಲೇನ್ ಹಾಗೂ ಸ್ಟೇಟ್ಸನ್ ಎಸ್.ಎಂ.ಕೃಷ್ಣ ಕೃತಿಗಳು ನಾಲ್ಕು ವರ್ಷದ ಹಿಂದೆ ಬಿಡುಗಡೆ ಕಂಡಿದ್ದವು. ಮದ್ದೂರು ಕ್ಷೇತ್ರದಿಂದಲೇ ರಾಜಕೀಯ ಜೀವನ ಆರಂಭಿಸಿದ್ದ ಎಸ್.ಎಂ.ಕೃಷ್ಣ ಕಾಂಗ್ರೆಸ್‌ನಲ್ಲಿ ಉನ್ನತ ಹುದ್ದೆಗಳನ್ನು ಅನುಭವಿಸಿದವರು. ಕರ್ನಾಟಕದ ಮುಖ್ಯಮಂತ್ರಿಯಾಗಿ ಬೆಂಗಳೂರಿನ ಅಭಿವೃದ್ಧಿಗೂ ಕೊಡುಗೆ ನೀಡಿದ್ದವರು. ಕೇಂದ್ರದಲ್ಲೂ ಕೈಗಾರಿಕಾ ಸಚಿವ, ವಿದೇಶಾಂಗ ಸಚಿವರಾಗಿಯೂ ಕೆಲಸ ಮಾಡಿದ ಅನುಭವ ಹೊಂದಿದವರು. ಬಹುತೇಕ ತಮ್ಮ ರಾಜಕೀಯ ಜೀವನವನ್ನು ಕಾಂಗ್ರೆಸ್‌ನಲ್ಲಿಯೇ ಕಳೆದ ಕೃಷ್ಣ ಅವರು 2017ರಲ್ಲಿ ಬಿಜೆಪಿಗೆ ಸೇರಿದ್ದರು. ಅಲ್ಲಿಯೇ ಇದ್ದರು

## ಕೇರಳಕ್ಕೆ ಉಪಕಾರಿ; ಕರ್ನಾಟಕಕ್ಕೆ ಮಾರಿ

• ಉದಯವಾಹಿನಿ, ಬೆಂಗಳೂರು



ಕೇರಳದ ವಯನಾಡ್ ನೆರೆ ಸಂತ್ರಸ್ತರಿಗೆ ಮನೆ ನಿರ್ಮಾಣ ಮಾಡಿಕೊಡುವುದಾಗಿ ಕೇರಳ ಸಿಎಂ ಪಿಣರಾಯಿ ವಿಜಯನ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿರುವ ವಿಚಾರ ವಿಪಕ್ಷಗಳ ಕೆಂಗಣ್ಣಿಗೆ ಕಾರಣವಾಗಿದೆ. ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ. ಕೇರಳಕ್ಕೆ ಉಪಕಾರಿ, ಕರ್ನಾಟಕ್ಕೆ ಮಾರಿ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಆರ್. ಅಶೋಕ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಭ್ರಷ್ಟಾಚಾರದ ಕಳಂಕ ಮೆತ್ತಿಕೊಂಡು, ಭಂಡತನದಿಂದ ಖುರ್ಚಿ ಉಳಿಸಿಕೊಳ್ಳಲು ಹೆಣಗಾಡುತ್ತಿರುವ ಸಿಎಂ ಸಿದ್ದರಾಮಯ್ಯನವರ ಸರ್ಕಾರ, ಹೈಕಮಾಂಡ್ ನಾಯಕರನ್ನು ಮೆಚ್ಚಿಸಲು ಕನ್ನಡಿಗರ ತೆರಿಗೆ ಹಣವನ್ನು ಪೋಲು ಮಾಡುತ್ತಿದೆ ಎಂದು ಕಿಡಿಕಾರಿದ್ದಾರೆ.

**ರಸ್ತೆಗುಂಡಿ ಮುಚ್ಚಲು ಹಣವಿಲ್ಲ**

ಅಕಾಲಿಕ ಮಳೆಯಿಂದ ಬೆಳೆ ಹಾನಿಗೊಳಗಾಗಿ ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ಕೊಡಲು ಹಣವಿಲ್ಲ. ಸರ್ಕಾರಿ ಆಸ್ಪತ್ರೆಗಳಲ್ಲಿ ಕಳಪೆ ಔಷಧಿಯಿಂದ ಸಾವನ್ನಪ್ಪಿರುವ ಬಾಣಂತಿ ಮಹಿಳೆಯರ ಕುಟುಂಬಗಳಿಗೆ ಪರಿಹಾರ ಕೊಟ್ಟಿಲ್ಲ.

ಬೆಂಗಳೂರಿನ ಉದ್ದಗಲಕ್ಕೂ ಬಾಯ್ದೆರೆದಿರುವ ರಸ್ತೆಗುಂಡಿ ಮುಚ್ಚಲು ಹಣವಿಲ್ಲ. ಆದರೆ ಹೈಕಮಾಂಡ್ ನಾಯಕರನ್ನು ಓಲೈಸಲು ಕೇರಳದಲ್ಲಿ ಮನೆ ನಿರ್ಮಿಸಿಕೊಡಲು ಹೊರಟಿದೆ ಈ ನಾಡದ್ರೋಹಿ ಕಾಂಗ್ರೆಸ್ ಸರ್ಕಾರ ಎಂದು ವಾಗ್ದಾಳಿ ನಡೆಸಿದ್ದಾರೆ.

## ಶೈಕ್ಷಣಿಕ ಪ್ರವಾಸಗಳ ಆಯೋಜನೆ ಕುರಿತು ಮಹತ್ವದ ಸಲಹೆ



• ಉದಯವಾಹಿನಿ, ಬೆಂಗಳೂರು

ಮುರುಡೇಶ್ವರದಲ್ಲಿ ಶೈಕ್ಷಣಿಕ ಪ್ರವಾಸಕ್ಕೆ ಬಂದಿದ್ದ ಕೋಲಾರ ಜಿಲ್ಲೆಯ ನಾಲ್ವರು ವಿದ್ಯಾರ್ಥಿ ನೀರುಪಾಲಾಗಿ ಮೃತಪಟ್ಟಿರುವ ಘಟನೆ ಸದ್ಯ ಎಲ್ಲರನ್ನೂ ಬೆಚ್ಚಿಬೀಳಿಸಿದೆ. ಈ ಘಟನೆ ಬಗ್ಗೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕೂಡ ಬೇಸರ ವ್ಯಕ್ತಪಡಿಸಿದ್ದಾರೆ. ಔರಿಜಟಿ . ಅಂತಾರಾಷ್ಟ್ರೀಯ ಧಾರವಾಡ ಅಲ್ಲದೆ ಶೈಕ್ಷಣಿಕ ಪ್ರವಾಸಗಳನ್ನು ಆಯೋಜಿಸುವ ಸಂಬಂಧ ಮಹತ್ವದ ಸಲಹೆಯೊಂದನ್ನು ಸರ್ಕಾರಕ್ಕೆ ನೀಡಿದ್ದಾರೆ. ಬೆಂಗಳೂರು ಕೋಲಾರ ಜಿಲ್ಲೆ ಮುಳಬಾಗಿಲು ತಾಲೂಕಿನ ಮೊರಾರ್ಜಿ ದೇಸಾಯಿ ವಸತಿ ( ಮೈಸೂರು 23 ಶಾಲೆಯ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸಕ್ಕೆಂದು ಹೋದ ಸಂದರ್ಭದಲ್ಲಿ ಮುರುಡೇಶ್ವರ ಬಳಿಯ ಸಮುದ್ರದಲ್ಲಿ ಬೆಳಗಾವಿ ನೀರುಪಾಲಾಗಿರುವುದು ನಿಜಕ್ಕೂ ನೋವಿನ ಸಂಗತಿ ಎಂದು ಯತ್ನಾಳ್ ಸಂತಾಪ ಸೂಚಿಸಿದ್ದಾರೆ. ಪ್ರವಾಸ ಆಯೋಜನೆ ಮಾಡುವಾಗ ಕನಿಷ್ಠ ಸುರಕ್ಷತೆ ಹಾಗೂ ಮಾರ್ಗಸೂಚಿಗಳನ್ನು ಪಾಲಿಸದೆ ಮಕ್ಕಳನ್ನು ಬೇಕಾಬಿಟ್ಟಿ ಬಿಟ್ಟು ಹೋದದ್ದು ಶಿಕ್ಷಕರ ಬೇಜವಾಬ್ದಾರಿ ತೋರಿಸುತ್ತದೆ. ನೀರು ಇರುವ ಜಾಗದಲ್ಲಿ ಖುದ್ದು ಶಿಕ್ಷಕರು ಇದ್ದು, ಮೇಲ್ವಿಚಾರಣೆ ಮಾಡಬೇಕಿತ್ತು. ಇದು ಯಾವುದೂ ಆಗದೆ, ಬದುಕು ಬಾಳಬೇಕಾಗಿದ್ದ ಮಕ್ಕಳು ಇಂದು ನಮ್ಮೊಂದಿಗೆ ಇಲ್ಲ ಎಂದು ಕಂಬನಿ ಮಿಡಿದಿದ್ದಾರೆ.

## ಪಂಚಮಸಾಲಿ ಪ್ರತಿಭಟನಾಕಾರರ ಜೊತೆ ಅಮಾನವೀಯ ವರ್ತನೆ

• ಲಾಠಿಚಾರ್ಜ್‌ನಿಂದ ಹೋರಾಟದಲ್ಲಿ ಪಾಲ್ಗೊಂಡಿದ್ದ ಸಮುದಾಯಕ್ಕೆ ಸೇರಿದ ಪಂಚಮಸಾಲಿ ರೈತರಿಗೆ ಗಾಯ


• ಉದಯವಾಹಿನಿ, ಬೆಂಗಳೂರು

ಪಂಚಮಸಾಲಿ ಸಮಾಜದ ಶಾಂತಿಯುತ ಪ್ರತಿಭಟನೆ, ಹೋರಾಟಗಾರರ ಮೇಲೆ ಸರಕಾರವು ಲಾಠಿಚಾರ್ಜ್ ನಡೆಸಿ ಅಮಾನವೀಯವಾಗಿ ವರ್ತಿಸಿದೆ ಎಂದು ಬಿಜೆಪಿ ನಿಕಟಪೂರ್ವ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಅವರು ಆಕ್ಷೇಪಿಸಿದ್ದಾರೆ. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನ'ದಲ್ಲಿ ಇಂದು ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು ಸಾಮಾಜಿಕ ನ್ಯಾಯ ದಡಿ ಪಂಚಮಸಾಲಿಗಳಿಗೆ ನ್ಯಾಯ ಕೊಡುವ ಕೆಲಸ ಮಾಡಿ ಎಂದು ಆಗ್ರಹಿಸಿದರು.

**ನ್ಯಾಯಾಂಗ ತನಿಖೆ ಮಾಡಿಸುವಂತೆ ಒತ್ತಾಯ**

ನಿನ್ನೆ ನಡೆದ ಲಾಠಿಚಾರ್ಜ್ ಸಂಬಂಧ ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ನ್ಯಾಯಾಂಗ ತನಿಖೆ ಮಾಡಿಸುವಂತೆ ಒತ್ತಾಯವನ್ನು ಮುಂದಿಟ್ಟರು. ಬೆಳಗಾವಿಯಲ್ಲಿ ಶ್ರೀ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಪ್ರತಿಭಟನೆ ನಡೆಯುತ್ತಿತ್ತು. ಆಗ ನಡೆಸಿದ ಲಾಠಿಚಾರ್ಜ್‌ನಿಂದ ಹೋರಾಟದಲ್ಲಿ ಪಾಲ್ಗೊಂಡಿದ್ದ ನೂರಾರು ಜನ ಲಿಂಗಾಯತ ಸಮುದಾಯಕ್ಕೆ ಸೇರಿದ ಪಂಚಮಸಾಲಿ ರೈತರು ಗಾಯಗೊಂಡಿದ್ದಾರೆ. ಸರಕಾರದ್ದು ಸರ್ವಾಧಿಕಾರಿ ನಡೆ, ಪ್ರಜಾಪ್ರಭುತ್ವ ವಿರೋಧಿ ನಡೆ ಎಂದು ಖಂಡಿಸಿದರು.

ಪಂಚಮಸಾಲಿ ಸಮುದಾಯದ ಬೇಡಿಕೆ ಇವತ್ತು ನಿನ್ನೆಯದಲ್ಲ, 2 ಎ ಮೀಸಲಾತಿ ಸಂಬಂಧ ಈ ಸರಕಾರ ಬಂದ ಆರಂಭದಿಂದ ಅವರ ಬೇಡಿಕೆಗಳನ್ನು ಪುನರುಚ್ಚಾರ ಮಾಡುತ್ತಿದ್ದಾರೆ, ಬಿಜೆಪಿ ಸರಕಾರ ಇದ್ದಾಗ 2 ಸಿ, 2 ಡಿ ಅಡಿ ಎರಡು ರೀತಿ ಮೀಸಲಾತಿ ಕೊಟ್ಟು, ಅದರಡಿಯಲ್ಲಿ ವಿವಿಧ ಸಮುದಾಯಗಳನ್ನು ಒಟ್ಟು ಸೇರಿಸಿ ಮೀಸಲಾತಿ ಹೆಚ್ಚಿಸುವ ಕೆಲಸ ಮಾಡಿತ್ತು ಎಂದು ವಿವರಿಸಿದರು. 2 ಸಿಗೆ ಶೇ 4 ಮೀಸಲಾತಿ ಇದ್ದುದನ್ನು ಶೇ 6 ಮಾಡಿದ್ದು, 2 ಡಿ ಅಡಿ ಶೇ 5 ಇದ್ದುದನ್ನು ಶೇ 7 ಮಾಡಿದ್ದರು. ಪಂಚಮಸಾಲಿಗಳನ್ನೂ 2 ಡಿ ವ್ಯಾಪ್ತಿ ಒಳಗಡೆ ತರುವ ಕೆಲಸ ಮಾಡಲಾಗಿತ್ತು. ಅದನ್ನು ಈ ಕಾಂಗ್ರೆಸ್ ಸರಕಾರ ಅನುಷ್ಠಾನ ಮಾಡಿಲ್ಲ. 2 ಎ ಮೀಸಲಾತಿ ಬಗ್ಗೆಯೂ ಸರಿಯಾಗಿ ಸ್ಪಂದಿಸಿಲ್ಲ; ಈ ಮೂಲಕ ಹೋರಾಟಕ್ಕಿಳಿಯುವ ಅನಿವಾರ್ಯತೆಯನ್ನು ಸೃಷ್ಟಿ ಮಾಡಿದ್ದೇ ಆಳುವ ಕಾಂಗ್ರೆಸ್ ಸರಕಾರ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಕಾಂಗ್ರೆಸ್ಸಿಗರು ವಿಪಕ್ಷದಲ್ಲಿದ್ದಾಗ ಪಂಚಮಸಾಲಿ ಸಮಾಜದ ಹೋರಾಟಕ್ಕೆ ಸಂಬಂಧಿಸಿ ಮೊಸಳೆ ಕಣ್ಣೀರು ಸುರಿಸಿದ್ದರು. ಇವರ ಪಕ್ಷದ ಮುಖಂಡರು ರಾಜೀನಾಮೆ ಕೊಡುವ ಮಾತನಾಡಿದ್ದರು. ಲಾಠಿಚಾರ್ಜ್ ಆಗಿದೆ, ಸ್ವಾಮೀಜಿಗಳನ್ನು ಬಂಧಿಸಿದ್ದೀರಿ. ಲಕ್ಷ್ಮಿ ಹೆಬ್ಬಾಳ್ಕರ್ ಸೇರಿ ರಾಜೀನಾಮೆ ಕೊಡುವವರೆಲ್ಲ ಎಲ್ಲಿ ಬಿಲ ಸೇರಿಕೊಂಡಿದ್ದೀರಿ? ಎಂದು ಸಿ.ಟಿ. ರವಿ ಅವರು ಪ್ರಶ್ನಿಸಿದರು. ಇವರೆಲ್ಲ ಯಾವ ಮುಖ ಇಟ್ಟುಕೊಂಡು ಜನರಿಗೆ ಮುಖ ತೋರಿಸುತ್ತಾರೆ ಎಂದು ಕೇಳಿದರು. ಮನವಿ ಸ್ವೀಕರಿಸಲು ಸಾಧ್ಯವಾಗದಷ್ಟು ಮುಖ್ಯಮಂತ್ರಿಗಳು ಸರ್ವಾಧಿಕಾರಿ ಆಗಿಬಿಟ್ಟರೇ ಎಂದು ಪ್ರಶ್ನೆಯನ್ನು ಮುಂದಿಟ್ಟರು. ಲಾಠಿಚಾರ್ಜ್ ಮಾಡಿಸುವುದೇ ಸಮಾಜವಾದವೇ ಎಂದರು. ಧರ್ಮಾಧಾರಿತ ಮೀಸಲಾತಿಯನ್ನು ನಮ್ಮ ಸಂವಿಧಾನವೂ ನಿರಾಕರಿಸಿದೆ. ಆಂಧ್ರ, ಪಶ್ಚಿಮ ಬಂಗಾಲ ಸರಕಾರಗಳು ಧರ್ಮಾಧಾರಿತ ಮೀಸಲಾತಿ ಕೊಡುವುದನ್ನು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಅದು ಸಂವಿಧಾನಬಾಹಿರ ಎಂದು ತಿಳಿಸಿದೆ. ಹಾಗಾಗಿ ನೀವು ಬಿಜೆಪಿ ಸರಕಾರ ಜಾರಿಗೊಳಿಸಿದ್ದ 2 ಸಿ, 2ಡಿ ಯನ್ನಾದರೂ ಅನುಷ್ಠಾನಕ್ಕೆ ತನ್ನಿ ಎಂದು ಒತ್ತಾಯಿಸಿದರು. ಅಥವಾ 2 ಎ ಅಡಿ ಪಂಚಮಸಾಲಿಗಳಿಗೂ ಮೀಸಲಾತಿ ಕೊಡಿ ಎಂದು ಆಗ್ರಹಿಸಿದರು.



### ಹಲಾಲ್, ಹಿಜಾಬ್ ಪರ ಧ್ವನಿ ಎತ್ತಿದ್ದು ಕುಮಾರಸ್ವಾಮಿ

ನಮ್ಮ ಪಕ್ಷವು ಈ ಸಂಬಂಧ ವಿಧಾನಸಭೆ ಒಳಗಡೆಯೂ ಹೋರಾಟ ಮಾಡಲಿದೆ ಎಂದ ಅವರು, ಮುಖ್ಯಮಂತ್ರಿಗಳ ನಡವಳಿಕೆ ಪರಿಪಕ್ವವಾಗಿಲ್ಲ, ಪ್ರಜಾಪ್ರಭುತ್ವಕ್ಕೆ ತಕ್ಕದಾದ ನಡೆಯಲ್ಲ ಎಂದು ಖಂಡಿಸಿದರು. ಕಾಂಗ್ರೆಸ್ಸಿಗರು ತಪ್ಪಾಗಿದೆ, ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳುವುದಾಗಿ ಒಂದು ಮಾತನ್ನೂ ಆಡಿಲ್ಲ; ಕ್ಷಮೆ ಕೇಳುವ ಔದಾರ್ಯವನ್ನೂ ಪ್ರದರ್ಶಿಸಿಲ್ಲ ಎಂದು ಟೀಕಿಸಿದರು. ಕರ್ನಾಟಕದ ಎತ್ತಿನಹೊಳೆ ಸಂಬಂಧ ಬೇಲೂರಿನ ವಡ್ಡರಹಳ್ಳಿಯ ರೈತ ರಂಗಸ್ವಾಮಿ ಅವರು ಎತ್ತಿನಹೊಳೆಯ ಪರಿಹಾರ ಬಂದಿಲ್ಲ ಎಂದು ಅಲೆದಲೆದು ಸಾಕಾಗಿ ಲಂಚ ಕೇಳಿದ ಅಧಿಕಾರಿಯ ನಡೆಯಿಂದ ಬೇಸತ್ತು ಹೊಳೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹಾಸನದಲ್ಲಿ ಸಮಾವೇಶ ಮಾಡಿದ ನೀವು ಎತ್ತಿನಹೊಳೆ ದುರ್ಘಟನೆ, ಸರಣಿ ರೀತಿಯಲ್ಲಿ ಬಾಣಂತಿಯರ- ಹಸುಗೂಸುಗಳ ಸಾವು ಬಗ್ಗೆ ತೋರಿಸದ ಮಾನವೀಯ ಕಳಕಳಿ ವಯನಾಡಿಗೆ ಸೀಮಿತವಾದ ಮರ್ಮವೇನು ಎಂದು ಕೇಳಿದರು.

**ಈ ದಿನದ ದರ** | ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,947/Gram24ct ₹7,285/Gram22ct | ಬೆಳ್ಳಿ: ₹95.50/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ

### ವಿವಾದಿತ ಮಂದಿರ ಮಸೀದಿಗಳು

ಹತ್ತನೆಯದಾಗಿ ಕರ್ನಾಟಕದ ಶ್ರೀರಂಗಪಟ್ಟಣದ ಜಾಮಿಯಾ ಮಸೀದಿ. 1789 ರಲ್ಲಿ ಟಿಪ್ಪು ಸುಲ್ತಾನ್ ಇದನ್ನು 3 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದನೆಂದು ವದಂತಿ. ಆದರೆ ಇದಕ್ಕೂ ಮೊದಲು ಇದು ಹಿಂದುಗಳ ಆಂಜನೇಯ ದೇವಸ್ಥಾನವಾಗಿತ್ತು, ಟಿಪ್ಪು ಅದನ್ನು ನಾಶಪಡಿಸಿ ಅದರ ಮೇಲೆ ಈ ಮಸೀದಿಯನ್ನು ನಿರ್ಮಿಸಿದನೆಂದು ಹೇಳಲಾಗುತ್ತಿದೆ. ಹಿಂದು ದೇವಾಲಯದ ಕುರುಹುಗಳನ್ನು ಇಂದಿಗೂ ಇಲ್ಲಿ ಕಾಣಬಹುದಾಗಿದ್ದು ಆಗಾಗ ವಿವಾದ ತೋರುತ್ತದೆ. ಹನ್ನೊಂದನೆಯದಾಗಿ ಮಧ್ಯಪ್ರದೇಶದ ಕಮಲ್ ಮೌಲಾ ಮಸೀದಿ. ಧಾರಾ ನಗರದ ಈ ಮಸೀದಿ ಮೊದಲು 11 ನೇ ಶತಮಾನದ ಭೋಜ ಮಹಾರಾಜನ ವಿದ್ಯಾಶಾಲೆ. ಭೋಜಶಾಲಾ ಸರಸ್ವತೀ ವಿದ್ಯಾಮಂದಿರ ವಿವಿ ಎಂದೇ ವಿಖ್ಯಾತ. ಕವಿರತ್ನ ಕಾಳಿದಾಸ ಬಾಣ ಭವಭೂತಿ ಭಾರವಿ ದಂಡಿ ಮುಂತಾದ ಶ್ರೇಷ್ಠ ವಿದ್ವಾಂಸರಿದ್ದ ಸಂಸ್ಕೃತದ ಅಧ್ಯಯನ ಕೇಂದ್ರ. 13 – 14 ನೇ ಶತಮಾನದಲ್ಲಿ ಅಲ್ಲಾವುದ್ದೀನ್ ಖಿಲ್ಜಿಯಿಂದ ಹಿಂದುಗಳ ಈ ಸರಸ್ವತೀ ದೇವಾಲಯವು ಧ್ವಂಸಗೊಂಡು ಅವಶೇಷಗಳ ಬಳಕೆಯಿಂದ ಮಸೀದಿಯಾಗಿ ಪರಿವರ್ತನೆಗೊಂಡಿತೆಂಬುದಾಗಿ ಪುರಾತತ್ವ ಶಾಸ್ತ್ರಜ್ಞ ಪದ್ಮಶ್ರೀ ಕೆ. ಕೆ ಮಹಮ್ಮದ್ ಅಭಿಪ್ರಾಯ ಪಡುತ್ತಾರೆ. ಪ್ರಕರಣ ಈಗ ನ್ಯಾಯಾಲಯದಲ್ಲಿದೆ.

## ಹವಾಮಾನ ವರದಿ: ಬೆಂಗಳೂರಿನಲ್ಲಿ ಮತ್ತೆ ಮಳೆ, ಯೆಲ್ಲೊ ಅಲರ್ಟ್

• ಉದಯವಾಹಿನಿ, ಬೆಂಗಳೂರು

ಕೆಲವು ದಿನಗಳ ಹಿಂದೆ ಸೈಕ್ಲೋನ್ ಮಳೆ ಇಡೀ ಕರ್ನಾಟಕದಲ್ಲಿ ಮಳೆಗಾಲದ ವಾತಾವರಣ ಸೃಷ್ಟಿಸಿತ್ತು. ಇದೀಗ ಮತ್ತೆ ಕರ್ನಾಟಕದಲ್ಲಿ ಮಳೆಯಾಗಲಿರುವುದಾಗಿ ಹವಾಮಾನ ವರದಿ ಹೇಳಿದೆ. ರಾಜ್ಯ ರಾಜಧಾನಿ ಬೆಂಗಳೂರು ಸೇರಿದಂತೆ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಮುಂದಿನ 48 ಗಂಟೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ವರದಿ ನೀಡಿದೆ. ಕೆಲವು ಜಿಲ್ಲೆಗಳಿಗೆ ಈ ಹಿನ್ನಲೆಯಲ್ಲಿ ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ. ಯಾವೆಲ್ಲಾ ಜಿಲ್ಲೆಗಳಿಗೆ ಮಳೆಯಾಗಲಿದೆ ನೋಡಿ. ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುಡ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಚಿತ್ರದುರ್ಗ, ಕೊಡಗು, ಕೋಲಾರ, ಮೈಸೂರು, ರಾಮನಗರ, ಶಿವಮೊಗ್ಗ, ತುಮಕೂರು ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆಯಿದ್ದು ಯೆಲ್ಲೊ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿನಲ್ಲಿ ಬೆಳಿಗ್ಗೆಯಿಂದಲೇ ಸ್ವಲ್ಪ ಮೋಡ, ಸ್ವಲ್ಪ ಬಿಸಿಲು ಎನ್ನುವಂತಹ ವಾತಾವರಣವಿದೆ. ಬೆಂಗಳೂರಿನಲ್ಲಿ ಗರಿಷ್ಠ ಉಷ್ಣಾಂಶ 28 ಡಿಗ್ರಿ, ಕನಿಷ್ಠ ಉಷ್ಣಾಂಶ 19 ಡಿಗ್ರಿಯಷ್ಟಿದೆ. ಡಿಸೆಂಬರ್ 13 ರ ನಂತರ ಕೆಲವೆಡೆ ಮಳೆಯಾಗಲಿದೆ ಎಂದು ಕಳೆದ ವಾರವೇ ಮುನ್ಸೂಚನೆ ಸಿಕ್ಕಿತ್ತು.

## ಕೊನೆಯುಸಿರೆಳೆಯುವ ಮುನ್ನ ಎಸ್‌ಎಂ ಕೃಷ್ಣ ಕರೆ ಮಾಡಿದ್ದು ಇವರಿಗೆ

• ಉದಯವಾಹಿನಿ, ಬೆಂಗಳೂರು

ಮೊನ್ನೆ ತಡರಾತ್ರಿ ನಿಧನರಾದ ಮಾಜಿ ಸಿಎಂ ಎಸ್‌ಎಂ ಕೃಷ್ಣ ಕೊನೆಯದಾಗಿ ಕರೆ ಮಾಡಿದ್ದು ಯಾರಿಗೆ ಯಾರ ಜೊತೆ ಮಾತನಾಡಿದರೆಂಬುದು ಈಗ ಬಹಿರಂಗವಾಗಿದೆ. ಎಸ್‌ಎಂ ಕೃಷ್ಣ ಕಳೆದ ಕೆಲವು ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದರು. ಮೊನ್ನೆ ತಡರಾತ್ರಿ ಅವರಿಗೆ ಹೃದಯಾಘಾತವಾಗಿದ್ದು ಎಲ್ಲರನ್ನೂ ಬಿಟ್ಟು ಅಗಲಿದ್ದಾರೆ. ಇಂದು ಸೋಮನಹಳ್ಳಿಯಲ್ಲಿ ಅವರ ಅಂತ್ಯಕ್ರಿಯೆ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಲಿದೆ. ಇದಕ್ಕೆ ಸಾಕಷ್ಟು ಜನ ಗಣ್ಯರು ಆಗಮಿಸುತ್ತಿದ್ದಾರೆ. ನಾಡು ಕಂಡ ಶ್ರೇಷ್ಠ ಸಿಎಂಗಳ ಸಾಲಿನಲ್ಲಿ ಎಸ್‌ಎಂ ಕೃಷ್ಣ ಕೂಡಾ ಒಬ್ಬರು. ಅವರು ಇತ್ತೀಚೆಗಿನ ದಿನಗಳಲ್ಲಿ ರಾಜಕೀಯದಿಂದ ಕೊಂಚ ದೂರವೇ ಉಳಿದಿದ್ದರು. ಆದರೂ ತಮ್ಮ ಆತ್ಮೀಯರ ಜೊತೆ ವೈಯಕ್ತಿಕವಾಗಿ ಕರೆ ಮಾಡಿ ಮಾತನಾಡಿ ಸಲಹೆ, ಸೂಚನೆಗಳನ್ನು ನೀಡುತ್ತಿದ್ದರಂತೆ. ಇದೀಗ ತಮ್ಮ ಸಾವಿಗೆ ಮುನ್ನ ಎಸ್‌ಎಂಕೆ ಯಾರ ಜೊತೆಗೆ ಮಾತನಾಡಿದ್ದು ಎಂದು ಬಹಿರಂಗವಾಗಿದೆ. ಸಾವಿಗೆ ಮುನ್ನ ಕೊನೆಯದಾಗಿ ಅವರ ಕುಟುಂಬ ವೈದ್ಯ, ಡಾ ವಿಕೆ ಶ್ರೀನಿವಾಸ್ ಅವರಿಗೆ ಕರೆ ಮಾಡಿದ್ದರಂತೆ. ತಮ್ಮ ಆರೋಗ್ಯಕ್ಕೆ ಸಂಬಂಧಿಸಿದಂತೆ ಏನೇ ವಿಚಾರವಿದ್ದರೂ ಎಸ್‌ಎಂಕೆ ಕರೆ ಮಾಡುತ್ತಿದ್ದರು. ಇದೀಗ ಕೊನೆಯ ಬಾರಿಗೂ ವೈದ್ಯರಿಗೆ ಕರೆ ಮಾಡಿ ಸಲಹೆ ಪಡೆದಿದ್ದರಂತೆ.

## ರಾಜ್ಯದ ರೈತರಿಗೆ ಸಬ್ಸಿಡಿ ದರದಲ್ಲಿ ಸೌರ ಪಂಪ್ ಸೆಟ್ ಪಡೆಯಲು ಅರ್ಜಿ ಆಹ್ವಾನ

• ಉದಯವಾಹಿನಿ , ಬೆಂಗಳೂರು

ರಾಜ್ಯದ ರೈತರಿಗೆ ಗುಡ್ ನ್ಯೂಸ್ ಸಿಕ್ಕಿದ್ದು, ಸಬ್ಸಿಡಿ ದರದಲ್ಲಿ ಸೌರಪಂಪ್ ಸೆಟ್ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಸೌರ ಪಂಪ್ ಸೆಟ್ ಪಡೆಯಲು ಅರ್ಜಿ ಸಲ್ಲಿಸುವುದು ಹೇಗೆ..? ಇದಕ್ಕೆ ಏನೆಲ್ಲಾ ದಾಖಲೆಗಳು ಬೇಕು..? ಇಲ್ಲಿದೆ ಮಾಹಿತಿ. ರಾಜ್ಯ ಸರ್ಕಾರದಿಂದ ರೈತರಿಗೆ ಹಗಲು ವೇಳೆಯಲ್ಲಿ ನೀರಾವರಿ ಸೌಕರ್ಯವನ್ನು ಒದಗಿಸುವ ಮಹತ್ವಾಕಾಂಕ್ಷಿ ಸೋಲಾರ್ ಪಂಪ್ಸೆಟ್ ಯೋಜನೆ ಇದಾಗಿದೆ.. ನೀರಾವರಿಗೆ ಸಾಂಪ್ರದಾಯಿಕ ವಿದ್ಯುತ್ ಅವಲಂಬನೆಯನ್ನು ಕಡಿಮೆ ಮಾಡಿ, ಸೌರಶಕ್ತಿಯ ಬಳಕೆ ಮೂಲಕ ರೈತರು ಸ್ವಾವಲಂಬನೆ ಸಾಧಿಸಲು ಕುಸುಮ್ ಬಿ ಯೋಜನೆ ರೂಪಿಸಲಾಗಿದೆ. ರೈತರು ತಮ್ಮ ಆಧಾರ್, ಆರ್‌ಟಿಸಿ ಮತ್ತು ಬ್ಯಾಂಕ್ ವಿವರಗಳೊಂದಿಗೆ https://souramitra.com ನೋಂದಾಯಿಸಿಕೊಳ್ಳಬಹುದು. ರೈತರ ನೋಂದಣಿ ಸಮಸ್ಯೆ ಪರಿಹರಿಸಲು ಕ್ರೆಡಲ್‌ನಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದ್ದು ದೂರವಾಣಿ ಸಂಖ್ಯೆ 080–22202100 ಸಂಪರ್ಕಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಕರ್ನಾಟಕ ಸರ್ಕಾರದ ಸಂಪೂರ್ಣ ಸ್ವಾಮ್ಯಕ್ಕೆ ಒಳಪಟ್ಟಿದೆ) ನಿಗಮ ಕಛೇರಿ, ನವನಗರ ಪಿ.ಬಿ ರಸ್ತೆ, ಹುಬ್ಬಳ್ಳಿ 580025 : 0836– 2222535: hescom.Karanataka.gov.in • 2-2: hescom@gmail.com

## ಬೆಂಗಳೂರು ಏರ್‌ಪೋರ್ಟ್ ರಸ್ತೆಯಲ್ಲಿ ಹೊಸ ಮೇಲ್ಸೇತುವೆ

• ಉದಯವಾಹಿನಿ , ಬೆಂಗಳೂರು

ಸಂಚಾರ ದಟ್ಟಣೆಗೆ ಹೆಸರುವಾಸಿಯಾಗಿರುವ ಬೆಂಗಳೂರು ಟ್ರಾಫಿಕ್ ನಿಯಂತ್ರಣಕ್ಕೆ ಸರ್ಕಾರ ಹೊಸ ಹೊಸ ಪ್ಲಾನ್ ಮಾಡುತ್ತಲೇ ಇರುತ್ತದೆ. ಮುಂದುವರಿದ ಭಾಗವಾಗಿ ಬೆಂಗಳೂರು– ದೇವನಹಳ್ಳಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯಲ್ಲಿ ನೂತನ ಮೇಲೇತುವೆ ನಿರ್ಮಾಣಕ್ಕೆ ಗ್ರೀನ್ ಸಿಗ್ನಲ್ ಸಿಕ್ಕಿದೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಟೆಂಡರ್ ಆಹ್ವಾನಿಸಲಿದೆ. ಬೆಂಗಳೂರು ನಗರದಿಂದ ಹೆಬ್ಬಾಳ, ಯಲಹಂಕ ಮಾರ್ಗವಾಗಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ (ಕೆಐಎ) ತೆರಳುವವರು ಈ ಒಂದು ಸಿಗ್ನಲ್‌ನಲ್ಲಿ ನಿಮಿಷಗಳ ಕಾಲ ನಿಲ್ಲುವಂತಾಗಿದೆ. ಯಲಹಂಕ ಮೇತುವೆ ಮೂಲಕ ಸಾಗಿ ಬರುತ್ತಿದ್ದಂತೆ ಸಾದನಹಳ್ಳಿ ಜಂಕ್ಷನ್‌ನಲ್ಲಿ ಸಂಚಾರ ದಟ್ಟಣೆ ಉಂಟಾಗುತ್ತಿದೆ. ಈ ರಸ್ತೆಯಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆ ಕುರಿತು ಸಾಕಷ್ಟು ದೂರುಗಳು ಬಂದಿವೆ. ಬೆಂಗಳೂರಿನಿಂದ ಹೆಬ್ಬಾಳ ಮೂಲಕ ಸಾಗಿ ಯಲಹಂಕ ಮೇಲೇತುವೆ ಗಖಇಖ ಇನ್ನಷ್ಟು ತಿಳಿಯಿರಿ ಇಳಿಯುತ್ತಿದ್ದಂತೆ ಸಾದಹಳ್ಳಿ ಜಂಕ್ಷನ್‌ನಲ್ಲಿ ಸರ್ವೀಸ್ ರಸ್ತೆ ಅಡ್ಡವಾಗಿ ಓಡಾಡುವವರಿಗೆ ಅನುಕೂಲವಾಗಲೆಂದು ಸಿಗ್ನಲ್ ಹಾಕಲಾಗಿದೆ. ಇಲ್ಲಿ ಮೇತುವೆ ನಿರ್ಮಾಣದ ಅಗತ್ಯತೆ ಇದ್ದು ನಿರ್ಮಾಣ ಮಾಡಬೇಕೆಂದು ಕ್ಯಾಬ್, ಇತರ ಚಾಲಕ ಮನವಿಯನ್ನು ಪುರಸ್ಕರಿಸಲಾಗಿದೆ. ಈ ಸಾದನಹಳ್ಳಿ ಜಂಕ್ಷನ್ ನಲ್ಲಿ ಮೇತುವೆ ನಿರ್ಮಿಸಲಾಗುವುದೆಂದು ಓಊಂಖ ಅಧಿಕೃತ ಮಾಹಿತಿ ನೀಡಿದೆ.

# ಕೇರಳದ ಅಭಿವೃದ್ಧಿಗೆ ಮುಂದಾದ ಕಾಂಗ್ರೆಸ್

## ಇಲ್ಲಿ ಗುಂಡಿ ಮುಚ್ಚಲು ದುಡ್ಡಿಲ್ಲ, ವಯನಾಡಿಗೆ 100 ಮನೆ ಗಿಫ್ಟ್ ಏಕೆ?: ಜೆಡಿಎಸ್


• ಉದಯವಾಹಿನಿ , ಬೆಂಗಳೂರು

ರಾಜ್ಯದಲ್ಲೇ ಹಲವು ಸಮಸ್ಯೆಗಳಿದ್ದು, ರಾಜ್ಯ ಕಾಂಗ್ರೆಸ್ ಸರ್ಕಾರವು ಪಕ್ಕದ ಕೇರಳದ ಅಭಿವೃದ್ಧಿ ಮಾಡಲು ಮುಂದಾಗಿದೆ ಎನ್ನುವ ದೊಡ್ಡ ಆರೋಪ ಕೇಳಿಬಂದಿದೆ. ಇತ್ತೀಚೆಗೆ ಪ್ರಿಯಾಂಕಾ ಗಾಂಧಿ ಗೆಲುವು ಸಾಧಿಸಿದ ವಯನಾಡಿಗೆ ರಾಜ್ಯ ಸರ್ಕಾರವು 100 ಮನೆ ಕಟ್ಟಿಕೊಡಲು ಮುಂದಾಗಿದೆ ಎಂದು ಜೆಡಿಎಸ್ ಆರೋಪ ಮಾಡಿದೆ.

ಇದು ಕರುನಾಡಿಗೆ ಮಾರಿ, ಪರ ರಾಜ್ಯಕ್ಕೆ ಉಪಕಾರಿ, ಹೈಕಮಾಂಡ್ ಗುಲಾಮಗಿರಿ ಎಂದು ವ್ಯಂಗ್ಯ ಮಾಡಿದೆ. ಬೆಂಗಳೂರು ಸೇರಿದಂತೆ ರಾಜ್ಯದ ಬಹುತೇಕ ಸಾವಿರಾರು ರಸ್ತೆಗಳು ಗುಂಡಿಬಿದ್ದು ಹಾಳಾಗಿವೆ. ರಸ್ತೆಗಳು ಅಭಿವೃದ್ಧಿ ಕಾಣದೆ ಜನರ ನರಕಯಾತೆ ಅನುಭವಿಸುತ್ತಿದ್ದಾರೆ.

ಆದರೆ, ಹೈಕಮಾಂಡ್ ಗುಲಾಮಗಿರಿ ಮಾಡುತ್ತಿರುವ ಸಿದ್ದರಾಮಯ್ಯ ಅವರು ತಮ್ಮ ಮುಖ್ಯಮಂತ್ರಿ ಸ್ಥಾನ ಉಳಿಸಿಕೊಳ್ಳಲು, ಕೇರಳ ಸಂಸದರನ್ನು ಮೆಚ್ಚಿಸಲು ಕರ್ನಾಟಕದ ಬೊಕ್ಕಸ ಬರಿದು ಮಾಡುತ್ತಿದ್ದಾರೆ ಎಂದು ಆರೋಪ ಮಾಡಿದೆ. ಪ್ರಿಯಾಂಕಾ ಗಾಂಧಿ ಸಂಸದರಾಗಿರುವ ವಯನಾಡಿನಲ್ಲಿ 100 ಮನೆಗಳನ್ನು ಕಟ್ಟಿಕೊಡಲು ಹಾಗೂ ಭೂಮಿ ಖರೀದಿಯ ವೆಚ್ಚವನ್ನೂ ಬರಿಸುವುದಾಗಿ ಕೇರಳ ಸಿಎಂಗೆ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಗಾಂಧಿ ವಯನಾಡಿಗೆ ಬಂದಿರುವುದೇ ಕನ್ನಡಿಗರಿಗೆ ತುಂಬಲಾರದ ನಷ್ಟವಾಗಿ ಪರಿಣಮಿಸಿದೆ ಎಂದು ಆಕ್ರೋಶ ಹೊರಹಾಕಿದೆ.

ರಾಜ್ಯದಲ್ಲಿ 350ಕ್ಕೂ ಹೆಚ್ಚು ಶಿಶುಮರಣಗಳು,



ಉದಯವಾಹಿನಿ ಚಿತ್ರ

> **ಕೇರಳದಲ್ಲಿ ಆನೆ ದಾಳಿಗೆ ಬಲಿಯಾದರೂ ಕರ್ನಾಟಕದ ದುಡ್ಡನ್ನೇ ಕೊಡಬೇಕು. ಈಗ ವಯನಾಡಿಗೆ 100 ಮನೆ ಕೊಟ್ಟಿಕೊಡುತ್ತಿದ್ದಾರೆ. ರಾಜ್ಯದಲ್ಲಿ ಎಷ್ಟೋ ಕುಟುಂಬಗಳು ಸೂರಿಲ್ಲದೇ ನಿರ್ಗತಿಕರಾಗಿದ್ದಾರೆ. ಆದರೆ, ಇಟಲಿ ಮಾತೆ ಮತ್ತು ಅವರ ಮಕ್ಕಳನ್ನು ಮೆಚ್ಚಿಸಲು ಸಿದ್ದರಾಮಯ್ಯ ಅವರು ನಮ್ಮ ನಾಡಿನ ತೆರಿಗೆ ಹಣ ದುರ್ಬಳಕೆ ಮಾಡುತ್ತಿದ್ದಾರೆ ಎಂದು ಆರೋಪಿಸಿದೆ.**

**ಸರ್ಕಾರದ ದೊಡ್ಡ ಹಗರಣ ಬಿಜೆಪಿ ಕೂಡ ಆರೋಪ**

40 ತಾಯಂದಿರ ಧಾರವಾಡ ಬೆಂಗಳೂರು ಮೈಸೂರು ಬೆಳಗಾವಿ ಶಿವಮೊಗ್ಗ ಜಿಲ್ಲೆಗಳು ಸಾವುಗಳು, ವಕ್ಫ್ ಜಿಹಾದ್‌ನಿಂದ ಭೂಮಿ ಯನ್ನು ಕಳೆದುಕೊಳ್ಳುವ ರೈತರು, ವೇತನವಿಲ್ಲದ ಆಂಬ್ಯುಲೆನ್ಸ್ ಚಾಲಕರು ಮತ್ತು ಆಶಾ ಕಾರ್ಯಕರ್ತೆಯರು ಮತ್ತು ಬೆಂಗಳೂರಿನ ಮೂಲ ಸೌಕರ್ಯಗಳು ಕುಸಿದು ರಾಜ್ಯವು ಹೀನಾಯ ಸ್ಥಿತಿಯಲ್ಲಿದೆ.

> **ಇನ್ನು ಈ ಸಂಬಂಧ ಸಿಎಂ ಸಿದ್ದರಾಮಯ್ಯ ಅವರು ಬರೆದಿದ್ದಾರೆ ಎನ್ನಲಾದ ಪತ್ರವನ್ನು ಬಿಜೆಪಿ ಹಾಗೂ ಜೆಡಿಎಸ್ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದೆ. ಕೇರಳ ಸಿಎಂ ಪಿಣರಾಯಿ ವಿಜಯನ್ ಅವರಿಗೆ ಸಿಎಂ ಸಿದ್ದರಾಮಯ್ಯ ಅವರು ಪತ್ರ ಬರೆದಿದ್ದು. ಇದರಲ್ಲಿ ವಯನಾಡಿನಲ್ಲಿ 100 ಮನೆಗಳನ್ನು ಕಟ್ಟಿಕೊಡಲು ಹಾಗೂ ಅದರ ಭೂಮಿ ಖರೀದಿಯ ವೆಚ್ಚವನ್ನೂ ಬರಿಸುವುದಾಗಿ ಸಿಎಂ ಉಲ್ಲೇಖಿಸಿದ್ದಾರೆ ಎಂದು ವಿಪಕ್ಷಗಳು ಆರೋಪ ಮಾಡಿವೆ. ಈ ಮೂಲಕ ಹೈಕಮಾಂಡ್ ಅನ್ನು ಮೆಚ್ಚಿಸಲು ಸಿದ್ದರಾಮಯ್ಯ ಮುಂದಾಗಿದ್ದಾರೆ ಎಂದು ದೂರಿದೆ.**

ಆದರೂ, ತೆರಿಗೆದಾರರ ಹಣವನ್ನು ಕೇರಳದಲ್ಲಿ ಭೂಮಿ ಖರೀದಿಸಲು ಮತ್ತು ಮನೆಗಳನ್ನು ನಿರ್ಮಿಸಲು ಬೇರೆಡೆಗೆ ತಿರುಗಿಸಲಾಗುತ್ತಿದೆ. ಇದೊಂದು ರಾಜ್ಯ ಸರ್ಕಾರದ ದೊಡ್ಡ ಹಗರಣ ಎಂದು ಬಿಜೆಪಿ ಕೂಡ ಆರೋಪ ಮಾಡಿದೆ. ಇದು ಕಿರೀಟ ರಾಜಕುಮಾರ ರಾಹುಲ್ ಗಾಂಧಿ ಅವರನ್ನು ಸಮಾಧಾನಪಡಿಸುವ ಒಂದು ಅಬ್ಬರದ ಪ್ರಯತ್ನ ಕರ್ನಾಟಕಕ್ಕೆ ತನ್ನ ಜನರಿಗೆ ಆದ್ಯತೆ ನೀಡುವ ನಾಯಕರ ಅಗತ್ಯವಿದೆಯೇ ಹೊರತು ಬೇರೆಯವರಿಗೆ ತಲೆಬಾಗುವ ಏಜೆಂಟ್‌ಗಳಿಗಲ್ಲ. ಸಿದ್ದರಾಮಯ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಬಿಜೆಪಿ ಟೀಕಿಸಿದೆ.

## ಗ್ರಾಮ ಪಂಚಾಯತ್ ಕಛೇರಿ ಕಾರ್ಯವಿಧಾನದ ಕೈಪಿಡಿ ಬಿಡುಗಡೆ

• ಉದಯವಾಹಿನಿ , ಬೆಂಗಳೂರು

ರಾಜ್ಯ ಸರ್ಕಾರವು ರಾಜ್ಯದ ಗ್ರಾಮ ಪಂಚಾಯತ್ ಕಛೇರಿ ಕಾರ್ಯವಿಧಾನ, ಕೈಪಿಡಿ ಬಿಡುಗಡೆ ಮಾಡಿದ್ದು. ಸದರಿ ಆಕ್ಷೇಪಣೆ ಮತ್ತು ಸಲಹೆಗಳನ್ನು ಈ ನಿಯಮಗಳು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿತವಾದ ದಿನಾಂಕದಿಂದ ಹದಿನೈದು ದಿನಗಳೊಳಗಾಗಿ ಕಳುಹಿಸಲು ಸೂಚಿಸಲಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ ಪ್ರಕರಣ 311 ರ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು, ಕರ್ನಾಟಕ ಗ್ರಾಮ ಸ್ವರಾಜ್

> **ಆಕ್ಷೇಪಣೆಗಳನ್ನು ಅಥವಾ ಸಲಹೆಗಳನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, 3ನೇ ಹಂತ, 3ನೇ ಮಹಡಿ, ಡಾ|| ಅಂಬೇಡ್ಕರ್ ವೀದಿ, ಬೆಂಗಳೂರು-01, ಇವರಿಗೆ ಕಳುಹಿಸಲು ಕೋರಲಾಗಿದೆ.**



ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಕಛೇರಿ ಕಾರ್ಯವಿಧಾನ ಕೈಪಿಡಿ) ನಿಯಮಗಳು, 2024ರ ಕರಡನ್ನು ಇದರಿಂದ ಬಾಧಿತರಾಗುವ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಸದರಿ ಅಧಿನಿಯಮದ ಪ್ರಕರಣ 311 ರಲ್ಲಿ ನಿಗದಿಪಡಿಸಿದಂತೆ ಪ್ರಕಟಿಸಲಾಗಿದೆ, ಈ ಮೂಲಕ ಆಕ್ಷೇಪಣೆ ಸಲಹೆಗಳನ್ನು ಆಹ್ವಾನಿಸಿ, ಸದರಿ ಆಕ್ಷೇಪಣೆ ಮತ್ತು ಸಲಹೆಗಳನ್ನು ಈ ನಿಯಮಗಳು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿತವಾದ ದಿನಾಂಕದಿಂದ ಹದಿನೈದು ದಿನಗಳೊಳಗಾಗಿ ಕಳುಹಿಸಲು ಸೂಚಿಸಲಾಗಿದೆ. ನಿಗದಿಪಡಿಸಿದ ಅವಧಿಯು ಮುಕ್ತಾಯವಾಗುವ ಮೊದಲು ಸದರಿ ಕರಡಿಗೆ ಸಂಬಂಧಿಸಿದಂತೆ ಯಾವೊಬ್ಬ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಆಕ್ಷೇಪಣೆ ಮತ್ತು ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸುವುದು.

## ಸಾವಿರಾರು ಉದ್ಯೋಗ ಸೃಷ್ಟಿ: ಎಂಬಿ ಪಾಟೀಲ್

• ಉದಯವಾಹಿನಿ , ಬೆಂಗಳೂರು

ಕರ್ನಾಟಕಕ್ಕೆ ಬಂಡವಾಳ ಹೂಡಿಕೆ ಆಕರ್ಷಿಸಲು ಪ್ಯಾರಿಸ್ ಪ್ರವಾಸದಲ್ಲಿರುವ ಕರ್ನಾಟಕ ರಾಜ್ಯ ಕೈಗಾರಿಕೆ ಸಚಿವ ಎಂಬಿ ಪಾಟೀಲ್ ಅವರು ಸಿಹಿ ಸುದ್ದಿ ನೀಡಿದ್ದಾರೆ. ಕರ್ನಾಟಕ ಸರ್ಕಾರ ಬಂಡವಾಳ ಆಕರ್ಷಿಸುವಲ್ಲಿ ಯಶಸ್ವಿಯಾಗಿದೆ. ಪರಿಣಾಮ ಪ್ಯಾರಿಸ್ ಕಂಪನಿಯು ಬೆಂಗಳೂರಿನಲ್ಲಿ ತನ್ನ ತಯಾರಿಕಾ ಘಟಕ ಸ್ಥಾಪಿಸಲು ಸಹಮತ ನೀಡಿದೆ. ಇದರಿಂದ ಸಾವಿರಾರು ಉದ್ಯೋಗ ಸೃಷ್ಟಿಯಾಗಲಿವೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

ಬೆಂಗಳೂರಿನಲ್ಲಿ 2025ರ ಫೆಬ್ರವರಿಯಲ್ಲಿ ನಡೆಯಲಿರುವ ಕರ್ನಾಟಕ ಜಾಗತಿಕ ಹೂಡಿಕೆದಾರರ ಸಮಾವೇಶ 2025 ಸಂಬಂಧ ವಿದೇಶಗಳ ಹೂಡಿಕೆದಾರರನ್ನು ಆಕರ್ಷಿಸಲು ಸಚಿವರ ನಿಯೋಗ ಪ್ಯಾರಿಸ್‌ಗೆ ಭೇಟಿ ನೀಡಿದೆ. ಬುಧವಾರ ಪ್ಯಾರಿಸ್‌ನಲ್ಲಿ ಸ್ನೈಡರ್ ಎಲೆಕ್ಟ್ರಿಕ್‌ನ ಉಪಾಧ್ಯಕ್ಷ ಬ್ರುನೊ ಟರ್ಚೆಟ್ ಅವರನ್ನು ಭೇಟಿಯಾದರು. ಕರ್ನಾಟಕದಲ್ಲಿ ಬಂಡವಾಳ ಹೂಡಿಕೆ, ಅಗತ್ಯ ಸಹಕಾರ ಮತ್ತು ಸಂಪನ್ಮೂಲಗಳ ಕುರಿತು ಚರ್ಚಿಸಿದರು. ಇದೇ ಕಂಪನಿಯು ಈಗಾಗಲೇ ಬೆಂಗಳೂರಿನಲ್ಲಿ 10,000ಕ್ಕೂ ಅಧಿಕ ಉದ್ಯೋಗಿಗಳನ್ನು




ಉದಯವಾಹಿನಿ ಚಿತ್ರ


> **ರಾಜ್ಯ ಸರ್ಕಾರದ ಅಗತ್ಯ ಸಹಕಾರ, ಸಚಿವರ ಮಾತುಗಳು ಕೇಳುತ್ತಿದ್ದಂತೆ ಪ್ಯಾರಿಸ್‌ನ ಸ್ನೈಡರ್ ಎಲೆಕ್ಟ್ರಿಕ್ ಬೆಂಗಳೂರಿನಲ್ಲಿ ತನ್ನ ಹೊಸ ಪ್ರಿಂಟೆಡ್ ಸರ್ಕ್ಯೂಟ್ ಬೋರ್ಡ್ (ಪಿಸಿಬಿ) ತಯಾರಿಕಾ ಘಟಕ ಸ್ಥಾಪಿಸಲು ಸಹಮತಿಸಿತು. ಈ ಘಟನೆ ನಿರ್ಮಾಣವಾದರೆ ಇಲ್ಲಿ 5,000 ಉದ್ಯೋಗ ಅವಕಾಶಗಳು ಸೃಷ್ಟಿಯಾಗಲಿವೆ ಎಂದು ಸಚಿವರು ತಿಳಿಸಿದರು.**

ಹೊಂದಿದೆ. ಭವಿಷ್ಯದಲ್ಲಿ ಈ ತಯಾರಿಕೆ ಘಟನೆ ನಿರ್ಮಾಣದ ಬಳಿಕ ಈ ಉದ್ಯೋಗಿಗಳ ಪ್ರಮಾಣ ಇನ್ನಷ್ಟು ಹೆಚ್ಚಾಗಲಿದೆ. ವಾಹನ ಬಿಡಿಭಾಗ ತಯಾರಿಕೆಯ ವಿಶ್ವದ 7ನೇ ಅತಿದೊಡ್ಡ ಕಂಪನಿಯಾಗಿರುವ ಫೋರ್ವಿಯಾ ಕರ್ನಾಟಕದಲ್ಲಿನ ತನ್ನ ತಯಾರಿಕಾ ಸಾಮರ್ಥ್ಯ ಹೆಚ್ಚಿಸಲು ನಿರ್ಧರಿಸಿದೆ.

## ಟೆಕ್ಕಿ ಅತುಲ್ ಸುಭಾಷ್ ಸೂಸೈಡ್ ಕೇಸ್‌ಗೆ ಬಿಗ್ ಟ್ವಿಸ್ಟ್

• ಉದಯವಾಹಿನಿ , ಬೆಂಗಳೂರು

ಉತ್ತರ ಪ್ರದೇಶ ಮೂಲದ 34 ವರ್ಷದ ಟೆಕ್ಕಿಯೊಬ್ಬರು ಬೆಂಗಳೂರಿನ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದು, 24 ಪುಟಗಳ ಡೆತ್ ನೋಟ್ ಮತ್ತು ಅವರು ಮಾಡಿದಂತಹ ವೀಡಿಯೋ ರೆಕಾರ್ಡಿಂಗ್ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ವೀಡಿಯೋದಲ್ಲಿ, ಟೆಕ್ಕಿ ಅತುಲ್ ಸುಭಾಷ್ ತನ್ನ ಹೆಂಡತಿಯ ಕಿರುಕುಳವು ತನ್ನನ್ನು ಹೇಗೆ ಆತ್ಮಹತ್ಯೆಗೆ ಪ್ರೇರೇಪಿಸಿತು ಎಂಬುದನ್ನು ವಿವರಿಸಿದ್ದಾರೆ. ಬೆಂಗಳೂರಿನ ಖಾಸಗಿ ಕಂಪನಿಯೊಂದರಲ್ಲಿ ಕೆಲಸ ಮಾಡುತ್ತಿದ್ದ ಅತುಲ್ ಸುಭಾಷ್ (34) ನಗರದ ಮಂಜುನಾಥ್ ಲೇಔಟ್ ಪ್ರದೇಶದ ತಮ್ಮ ನಿವಾಸದಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ ಎಲ್ಲವನ್ನೂ ವಿವರಿಸುವ 84 ನಿಮಿಷಗಳ ವೀಡಿಯೋವನ್ನು ಮಾಡಿ ಸೂಸೈಡ್ ಮಾಡಿಕೊಂಡಿದ್ದಾರೆ.



ಉದಯವಾಹಿನಿ ಚಿತ್ರ

ವಿಡಿಯೋದಲ್ಲಿ, ಹಲೋ, ನನ್ನ ಹೆಸರು ಅತುಲ್ ಸುಭಾಷ್. ನನಗೆ ( ಸುಮಾರು 34 ವರ್ಷ ವಯಸ್ಸು. ನಾನು ಬೆಂಗಳೂರಿನಲ್ಲಿ ವಾಸಿಸುತ್ತಿದ್ದೇನೆ.

ನಾನು ಆತ್ಮಹತ್ಯೆ ಮಾಡಿಕೊಳ್ಳಲಿದ್ದೇನೆ. ಏಕೆಂದರೆ ನಾನು ಸಂಪಾದಿಸುತ್ತಿರುವ ಹಣದಿಂದ ನನ್ನ ಶತ್ರುವನ್ನು ಬಲಪಡಿಸುತ್ತಿದ್ದೇನೆ. ಅದೇ ಹಣವನ್ನು ನನ್ನನ್ನು ನಾಶಮಾಡಲು ಬಳಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

> **ಈ ನ್ಯಾಯಾಲಯ, ಈ ಪೊಲೀಸ್ ವ್ಯವಸ್ಥೆ ನನಗೆ ಮತ್ತು ನನ್ನ ಕುಟುಂಬಕ್ಕೆ ಕಿರುಕುಳ ನೀಡುತ್ತದೆ. ಆದ್ದರಿಂದ, ನಾನು ಆತ್ಮಹತ್ಯೆ ಮಾಡಿಕೊಳ್ಳಲಿದ್ದೇನೆ.ನನ್ನ ಪತ್ನಿ ನನ್ನ ವಿರುದ್ಧ ಒಂಬತ್ತು ಪ್ರಕರಣಗಳನ್ನು ದಾಖಲಿಸಿದ್ದಾರೆ. ಆರು ಪ್ರಕರಣಗಳು ಕೆಳ ನ್ಯಾಯಾಲಯದಲ್ಲಿ ಮತ್ತು ಮೂರು ಹೈಕೋರ್ಟ್‌ನಲ್ಲಿವ ಎಂದು ಶರ್ಮಾ ವೀಡಿಯೋದಲ್ಲಿ ಹೇಳಿದ್ದಾರೆ. ತನ್ನ ಪೋಷಕರು ಮತ್ತು ಸಹೋದರನ ವಿರುದ್ಧ 2022 ರಲ್ಲಿ ದಾಖಲಾದ ಪ್ರಕರಣಗಳಲ್ಲಿ ಕೊಲೆ, ವರದಕ್ಷಿಣೆ ಕಿರುಕುಳ, ಅಸ್ವಾಭಾವಿಕ ಲೈಂಗಿಕತೆಯಂತಹ ಆರೋಪಗಳು ಸೇರಿವ ಎಂದು ಅವರು ಹೇಳಿದ್ದಾರೆ.**

## ಯಲಹಂಕ ವಲಯದಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು

• ಉದಯವಾಹಿನಿ , ಬೆಂಗಳೂರು

ಯಲಹಂಕ ವಲಯ ವ್ಯಾಪ್ತಿಯ ವಿವಿಧ ಭಾಗಗಳಲ್ಲಿ ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡು ಸಾರ್ವಜನಿಕರಿಗೆ ಅಡ್ಡಿಪಡಿಸುತ್ತಿದ್ದ ಮಳಿಗೆಗಳ ಅನಧಿಕೃತ ಭಾಗಗಳು ಹಾಗೂ ರಸ್ತೆ ಬದಿ ಕಸವನ್ನು ಪಾಲಿಕೆ ಸಿಬ್ಬಂದಿ ಮಂಗಳವಾರ ತೆರವುಗೊಳಿಸಿದರು. 2. ಸಮಸ್ತ–ಕರ್ನಾಟಕ 6. ದೇಶ ೭. ವಿದೇಶ ರಾಜಕೀಯ ಕ್ರೀಡೆ ಅ ಆರೋಗ್ಯ – ಅಂಕಣ ನ ವಿಡಿಯೋ–ಗ್ಯಾಲರಿ ಇನ್ನಷ್ಟು ತಿಳಿಯಿರಿ ಈ ಮುಖಪುಟ ಕೆಂಪೇಗೌಡ ವಾರ್ಡ್ ವ್ಯಾಪ್ತಿಯ ರೈತರ ಸಂತೆ (ಜಕ್ಕೂರು ಮುಖ್ಯ ರಸ್ತೆ), ಬಿ.ಬಿ.ರಸ್ತೆ, ಸರ್ಕಾರಿ ಆಸ್ಪತ್ರೆ ರಸ್ತೆ, ಯಲಹಂಕ ಟೌನ್ ಹಾಗೂ ಡೌನ್ ಬಜಾರ್ ರಸ್ತೆಗಳಲ್ಲಿ ರಸ್ತೆಬದಿ ಮತ್ತು ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಅಂಗಡಿ ಮುಂಗಟ್ಟುಗಳನ್ನು ಮಾರ್ಷಲ್‌ಗಳು ಹಾಗು ಪೊಲೀಸ್




ಉದಯವಾಹಿನಿ ಚಿತ್ರ

ಸಿಬ್ಬಂದಿಗಳ ಸಹಯೋಗದೊಂದಿಗೆ ತೆರವುಗೊಳಿಸಿ ಫುಟ್‌ಪಾತ್ ಹಾದಿಗಳನ್ನು ಸಾರ್ವಜನಿಕರ ಓಡಾಟಕ್ಕೆ ಸುಗಮಗೊಳಿಸಲಾಯಿತು. ಇತ್ತೀಚಿಗೆ ಯಲಹಂಕದ ರೈತರ ಸಂತೆ ಸುತ್ತಮುತ್ತಲಿನ ಫುಟ್‌ಪಾತ್‌ಗಳನ್ನು ಮಳಿಗೆದಾರರು ಹಾಗೂ ರಸ್ತೆ ಬದಿ ವ್ಯಾಪಾರಿಗಳು ಪೂರ್ಣವಾಗಿ ಜಾಗವನ್ನು ಒತ್ತುವರಿ ಮಾಡಿಕೊಂಡು ವ್ಯಾಪಾರ ಮಾಡುತ್ತಿದ್ದಾರೆ. ಇದರಿಂದ ಸಂತೆಯೊಳಗೆ ಪ್ರವೇಶಿಸಲು ನಾಗರಿಕರಿಗೆ ತೊಂದರೆ ಆಗುತ್ತಿತ್ತು. ಜತೆಗೆ ಇಲ್ಲಿನ ಯಲಹಂಕ–ಜಕ್ಕೂರು ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅಡ್ಡಿಯಾಗುತ್ತಿದ್ದರಿಂದ ಸಮೀಪದ ಏರ್‌ಪೋರ್ಟ್ ರಸ್ತೆಯ ಸರ್ವಿಸ್ ರಸ್ತೆಯಲ್ಲಿ ಕೃತಕ ಟ್ರಾಫಿಕ್ ಜಾಮ್ ಆಗುತ್ತಿತ್ತು. ಈ ಬಗ್ಗೆ ಸಾರ್ವಜನಿಕರು ಹಾಗೂ ಮಾಜಿ ಕಾರ್ಪೊರೇಟರ್‌ಗಳು ಪಾಲಿಕೆಗೆ ದೂರು ನೀಡಿದ್ದರು.

> **ದೂರು ಆಧರಿಸಿ ವಲಯ ಆಯುಕ್ತ ಕರಿಗೌಡ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿ ಫುಟ್‌ಪಾತ್ ತೆರವಿಗೆ ಆದೇಶಿಸಿದ್ದರು. ತೆರವು ಕಾರ್ಯಾಚರಣೆ ವೇಳೆ ಪಾದಚಾರಿಗಳಿಗೆ ಅಡ್ಡಿಪಡಿಸುತ್ತಿದ್ದ ಅಂಗಡಿ ಮುಂಗಟ್ಟುಗಳಿಗೆ ದಂಡ ವಿಧಿಸಿ, 12,000 ರೂ. ದಂಡದ ಹವನ್ನು ವಸೂಲಿ ಮಾಡಲಾಯಿತು.**

## ಹರಿನಾಮ ಸಂಕೀರ್ತನೆ ಗಾಯನ

• ಉದಯವಾಹಿನಿ , ಬೆಂಗಳೂರು

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ, ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಡಿಸೆಂಬರ್ 12, ಗುರುವಾರ ಸಂಜೆ 5–30ಕ್ಕೆ ಶ್ರೀಮತಿ ವಿಂಧ್ಯಾ ಅಡಿಗ ಅವರಿಂದ



ಉದಯವಾಹಿನಿ ಚಿತ್ರ

ಹರಿನಾಮ ಸಂಕೀರ್ತನೆ ಗಾಯನ ಕಾರ್ಯಕ್ರಮ ಏರ್ಪಡಿಸಿದ್ದು, ಪಕ್ಕವಾದ್ಯದಲ್ಲಿ ಕು|| ಸೃಷ್ಟಿ ದೇಸಾಯಿ (ಕೀ–ಬೋರ್ಡ್) ಮತ್ತು ಚಿ|| ಋತುಪರ್ಣ ದೇಸಾಯಿ (ತಬಲಾ) ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ, ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು–41

## ಕೇರಳ ಸಂತ್ರಸ್ತರಿಗೆ ಮನೆ ನಿರ್ಮಾಣಕ್ಕೆ ಮುಂದಾದ ಸಿದ್ದರಾಮಯ್ಯ

• ಉದಯವಾಹಿನಿ , ಬೆಂಗಳೂರು

ಕೇರಳದ ವಯನಾಡು ನೆರೆ ಸಂತ್ರಸ್ತರಿಗೆ ಮನೆ ನಿರ್ಮಿಸಿಕೊಡುವ ಭರವಸೆ ನೀಡಿರುವ ಸಿಎಂ ಸಿದ್ದರಾಮಯ್ಯ, ಇದೀಗ ಕೇರಳ ಸಿಎಂ ಪಿಣರಾಯಿ ವಿಜಯನ್ ಅವರಿಗೆ ಪತ್ರ ಬರೆದಿರುವ ವಿಚಾರವಾಗಿ ಬಿಜೆಪಿ ಪರಿಷತ್ ಸದಸ್ಯ ಸಿ.ಟಿ.ರವಿ ಕಿಡಿಕಾರಿದ್ದಾರೆ. ರಾಜ್ಯದಲ್ಲಿನ ಬಾಣಂತಿಯರ ಸಾವು, ಶಿಶುಗಳ ಸಾವು, ರೈತರಿಗೆ ಬೆಳೆ ಪರಿಹಾರ, ಸಾಲು ಸಾಲು ಸಮಸ್ಯೆಗಳ ಬಗ್ಗೆ ಸ್ಪಂದಿಸುವ ಬದಲು ಕೇರಳದ ನೆರೆ ಸಂತ್ರಸ್ತರ ಸಂಕಷ್ಟಕ್ಕೆ ಮನೆ ನಿರ್ಮಿಸಿಕೊಡಲು ಮುಂದಾಗಿರುವ ಸಿಎಂ ಸಿದರಾಮಯ್ಯ ಕ್ರಮಕ್ಕೆ ಸಿ.ಟಿ.ರವಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸಿಎಂ ಸಿದ್ದರಾಮಯ್ಯನವರ ವಯನಾಡು ಕಳಕಳಿ ಗುಲಾಮಗಿರಿಯ ಸಂಕೇತ ಎಂದು ವಾಗ್ದಾಳಿ ನಡೆಸಿದ್ದಾರೆ.

ರಾಜ್ಯ ಸರ್ಕಾರ ಕೇರಳ ಸಂತ್ರಸ್ತರಿಗೆ ಮನೆ ನಿರ್ಮಿಸಿಕೊಡುವುದಾಗಿ ಹೇಳಿದೆ. ಮಾನವೀಯ ನೆಲೆಯಲ್ಲಿ ಮಾಡುವುದೇನೋ ಸರಿ. ಆದರೆ ಸಿದ್ದರಾಮಯ್ಯನವರ ಈ ನಡೆ ಮಾನವೀಯ ನೆಲೆಯಲ್ಲಿ ಕಾಣುತ್ತಿಲ್ಲ. ಇದು ಗುಲಾಮಗಿರಿಯ ಸಂಕೇತ. ಹಿಂದೆ ರಾಹುಲ್ ಗಾಂಧಿ, ಈಗ ಪ್ರಿಯಾಂಕಾ ಗಾಂಧಿ ಅಲ್ಲಿ ಸಂಸದರಾಗಿದ್ದಾರೆ. ನಮ್ಮ ರಾಜ್ಯದಲ್ಲಿ ಇಲ್ಲಿ ಬಾಣಂತಿಯರ ಸಾವು.



ಉದಯವಾಹಿನಿ ಚಿತ್ರ

> **ಬಾಣಂತಿಯರ ಸಾವು ಶಸುಗೂಸುಳ ಸಾವು, ಇಲ್ಲಿನ ಜನರ ಸಂಕಷ್ಟ ಬಿಟ್ಟು ಅಲ್ಲಿನ ಜನರಿಗೆ ಮನೆ ನಿರ್ಮಾಣದ ಬಗ್ಗೆ ಈಗ ಮುಂದಾಗಿರುವ ಸಿಎಂ ನಡೆ ಗುಲಾಮಗಿರಿ ಸಂಕೇತ ಈ ಬಗ್ಗೆ ನಾವು ವಿಧನಸಭೆಯಲ್ಲಿ ಚರ್ಚಿಸುತ್ತೇವೆ ಎಂದಿದ್ದಾರೆ. ಬಾಣಂತಿಯರ ಸಾವು, ಶಿಶುಗಳ ಸಾವು ಪ್ರಕರಣದ ತನಿಖೆಗೆ ಎಸ್ ಐಟಿ ರಚನೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ..**

ಎತ್ತಿನ ಹೊಳೆ ಯೋಜನೆ ಬಗ್ಗೆ ಅಧಿಕಾರಿಗಳ ಜೊತೆ ಜಗಳ ಮಾಡಿ ರೈತರೊಬ್ಬರು ಹೊಳಗೆ ಹಾರಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಇದರ ಬಗ್ಗೆ ರಾಜ್ಯ ಸರ್ಕಾರಕ್ಕೆ ಕಾಳಜಿ ಇಲ್ಲ

# ಭೂಮಿಗಾಗಿ ರಾಜಮನೆತನಕ್ಕೆ 3000 ಕೋಟಿ ರೂ. ನೀಡಲು ಸರ್ಕಾರ ನಿರ್ಧಾರ

## ಹೃದಯ ಭಾಗವಾಗಿರುವ ಅರಮನೆ ಸುತ್ತಮುತ್ತಲಿನ ಸಂಚಾರ ದಟ್ಟಣೆ ತಪ್ಪಿಸುವ ನಿಟ್ಟಿನಲ್ಲಿ ರಸ್ತೆ ಅಗಲೀಕರಣದ ಪ್ರಯತ್ನ

• ಉದಯವಾಹಿನಿ , ಬೆಂಗಳೂರು

ಬಳ್ಳಾರಿ ರಸ್ತೆ ಅಗಲೀಕರಣಕ್ಕಾಗಿ ಅರಮನೆಯ 15 ಎಕರೆ 39 ಗುಂಟೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಭಾರೀ ಮೊತ್ತದ ಪರಿಹಾರ ನೀಡಲು ಮುಂದಾಗಿದೆ. ಅರಮನೆ ವಾರಸುದಾರರಿಗೆ ಅಭಿವೃದ್ಧಿ ಹಕ್ಕು (ಟಿಡಿಆರ್) ಪ್ರಮಾಣಪತ್ರದ ರೂಪದಲ್ಲಿ ಮುಂದಿನ ಆರು ದಿನಗಳಲ್ಲಿ 3,000 ಕೋಟಿ ರೂಪಾಯಿ ನೀಡಲು ಸರ್ಕಾರ ನಿರ್ಧರಿಸಿದೆ. ಇದಕ್ಕೆ ತೀವ್ರ ವಿರೋಧ ವ್ಯಕ್ತವಾಗಿದೆ.

ಬೆಂಗಳೂರಿನ ಹೃದಯ ಭಾಗವಾಗಿರುವ ಅರಮನೆ ಸುತ್ತಮುತ್ತಲಿನ ಸಂಚಾರ ದಟ್ಟಣೆ ತಪ್ಪಿಸುವ ನಿಟ್ಟಿನಲ್ಲಿ ರಸ್ತೆ ಅಗಲೀಕರಣದ ಪ್ರಯತ್ನಗಳು ನಡೆಯುತ್ತಿವೆ. ಬೆಂಗಳೂರಿನ ಬಳ್ಳಾರಿ ರಸ್ತೆ ಮತ್ತು ಜಯಮಹಲ್ ರಸ್ತೆಗಳನ್ನು ವಿಸ್ತರಿಸಲು ಅರಮನೆ ಮೈದಾನದ 15 ಎಕರೆ 39 ಗುಂಟೆ ಭೂಮಿಯನ್ನು ಬಳಸಿಕೊಳ್ಳಲು ಸರ್ಕಾರ ನಿರ್ಧರಿಸಿದೆ. ಈ ಭೂಮಿಗೆ ಪರಿಹಾರವಾಗಿ 3,000 ಕೋಟಿ ರೂಪಾಯಿಯನ್ನು ಭೂ ಮಾಲೀಕರಿಗೆ ಅಂದರೆ ಅರಮನೆ ವಾರಸುದಾರರಿಗೆ ಮುಂದಿನ ಆರು ದಿನಗಳಲ್ಲಿ ನೀಡಲು ಸರ್ಕಾರ ತೀರ್ಮಾನಿಸಿದೆ. ಅರಮನೆಗೆ ಸಂಬಂಧಿಸಿದ ಭೂಮಿಯಾದ್ದರಿಂದ ಸರ್ಕಾರ ಭಾರೀ ಮೊತ್ತದ ಹಣ ನೀಡುತ್ತಿದೆ.

**ಪ್ರತಿ ಚದರ ಮೀಟರ್‌ಗೆ 2,04,000 ರೂ. ಮೌಲ್ಯವನ್ನು ನಿಗದಿ**



ಉದಯವಾಹಿನಿ ಚಿತ್ರ

ಆದರೆ ಈ ಭೂಮಿ ರೈತರದ್ದಾಗಿದ್ದರೆ ಸರ್ಕಾರ ಇಷ್ಟೊಂದು ಹಣ ನೀಡುತ್ತಿರಲಿಲ್ಲ ಎನ್ನುವ ಮಾತುಗಳು ಕೇಳಿ ಬಂದಿವೆ. ಅರ್ಕಾವತಿ, ಕೆಂಪೇಗೌಡ, ಶಿವರಾಮ ಕಾರಂತ ಮುಂತಾದ ಬಡಾವಣೆಗಳ ನಿರ್ಮಾಣಕ್ಕಾಗಿ ಭೂಮಿ ಕಳೆದುಕೊಂಡವರು ಇಂದಿಗೂ ಕೋರ್ಟ್ ಕಚೇರಿ ಅಲೆಯುತ್ತಿದ್ದಾರೆ.

ಆದರೆ ಸರ್ಕಾರ ಈ ಬಗ್ಗೆ ತಲೆ ಕೆಡಿಸಿಕೊಂಡಿಲ್ಲ. ಹೀಗಾಗಿ ಭೂ ಸ್ವಾಧೀನ ವಿಚಾರದಲ್ಲಿ ಸರ್ಕಾರ ಅನ್ಯಾಯ ಮಾಡುತ್ತಿದೆ ಎನ್ನುವ ಮಾತುಗಳು ಕೇಳಿ ಬರುತ್ತಿವೆ. ಅಂದಹಾಗೆ ಸುಪ್ರೀಂ ಕೋರ್ಟ್ ತೀರ್ಪಿನ ಪ್ರಕಾರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಬಳ್ಳಾರಿ ರಸ್ತೆಗೆ ಹೊಂದಿಕೊಂಡಿರುವ

> **ಇದು ಸರ್ಕಾರದ ಅಂದಾಜುಗಿಂತ ಸರಿಸುಮಾರು 2,00,000 ಪಟ್ಟು ಹೆಚ್ಚಾಗಿದೆ. ಇದರಲ್ಲಿ ರಿಯಲ್ ಎಸ್ಟೇಟ್ ಲಾಬಿ ಕೂಡ ನಡೆದಿದೆ ಎನ್ನುವ ಆರೋಪಗಳು ಇವೆ. ಹಿಂದೆ 2019ರಲ್ಲಿ ಎಚ್.ಡಿ.ಕುಮಾರಸ್ವಾಮಿ ನೇತೃತ್ವದ ಸಮ್ಮಿಶ್ರ ಸರ್ಕಾರ ರಸ್ತೆ ವಿಸ್ತರಣೆಗಾಗಿ ಅರಮನೆ ಭೂಮಿಯನ್ನು ವಶಪಡಿಸಿಕೊಳ್ಳಲು ನಿರ್ಧರಿಸಿತ್ತು.**

ಬೆಂಗಳೂರು ಅರಮನೆ ಭೂಮಿಗೆ ಪ್ರತಿ ಚದರ ಮೀಟರ್‌ಗೆ 2,83,500 ರೂಪಾಯಿ ಮತ್ತು ಜಯಮಹಲ್ ರಸ್ತೆಗೆ ಹೊಂದಿಕೊಂಡಿರುವ ಭೂಮಿಗೆ ಪ್ರತಿ ಚದರ ಮೀಟರ್‌ಗೆ 2,04,000 ರೂಪಾಯಿ ಮೌಲ್ಯವನ್ನು ನಿಗದಿಪಡಿಸಬೇಕಾಗಿದೆ. ಇದರ ಪ್ರಕಾರ ಸರ್ಕಾರ ಭೂ ಮಾಲೀಕರಿಗೆ ಸರಿಸುಮಾರು 3,000 ಕೋಟಿ ರೂಪಾಯಿ ಅಥವಾ ಪ್ರತಿ ಎಕರೆಗೆ 194 ಕೋಟಿ ರೂಪಾಯಿಗಳ ಟಿಡಿಆರ್ ಪರಿಹಾರ ನೀಡಬೇಕಾಗುತ್ತದೆ. ರಸ್ತೆ ಮಾತ್ರವಲ್ಲದೆ ಈ ಪ್ರದೇಶದಲ್ಲಿ ಬಹುಮಹಡಿ ಕಟ್ಟಡಗಳನ್ನೂ ನಿರ್ಮಾಣ ಮಾಡಲಾಗುತ್ತದೆ.

ಅರಮನೆ ಮೈದಾನಕ್ಕೆ ಹೊಂದಿಕೊಂಡಿರುವ ಎರಡೂ ಬದಿಯ ರಸ್ತೆಗಳನ್ನು ವಿಸ್ತರಗೊಳಿಸಲು ಈ ಭೂಮಿ ಬಳಕೆಯಾಗಲಿದೆ. ಈ ಜಾಗದಲ್ಲಿ ಜಯಮಹಲ್ ಮತ್ತು ಬಳ್ಳಾರಿ ರಸ್ತೆಗಳ ವಿಸ್ತರಣೆಯಾಗಲಿದೆ.

> **ಏಪ್ರಿಲ್ 2024ರಲ್ಲಿ ರಾಜ್ಯ ಸರ್ಕಾರವು ಬೆಂಗಳೂರು ಅರಮನೆ (ಸ್ವಾಧೀನ ಮತ್ತು ವರ್ಗಾವಣೆ) ಕಾಯಿದೆ 1996 ರ ಪ್ರಕಾರ ಪ್ರತಿ ಚದರ ಮೀಟರ್ 120.68 ರೂಪಾಯಿಯಂತೆ ಅರಮನೆಯ ಭೂಮಿಯ ಮೌಲ್ಯವನ್ನು ನಿರ್ಧರಿಸಿತು. ಸರ್ವೋಚ್ಚ ನ್ಯಾಯಾಲಯವು ತನ್ನ ತೀರ್ಪಿನಲ್ಲಿ ಮಾರುಕಟ್ಟೆ ಮೌಲ್ಯವನ್ನು ನಿಗದಿಪಡಿಸಲು ಪಕ್ಕದ ಪ್ರದೇಶಗಳಲ್ಲಿ ಚಾಲ್ತಿಯಲ್ಲಿರುವ ಮಾರ್ಗದರ್ಶಿ ಮೌಲ್ಯವನ್ನು ಗಣನೆಗೆ ತೆಗೆದುಕೊಂಡಿದೆ.**

ನಂತರ ರಚನೆಯಾದ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ 2022ರ ಸೆಪ್ಟೆಂಬರ್‌ನಲ್ಲಿ ಎರಡೂ ಬದಿಯ ರಸ್ತೆ ವಿಸ್ತರಣೆ ಯೋಜನೆಯನ್ನು ಕೈಬಿಟ್ಟಿರುವುದಾಗಿ ಆದೇಶ ಹೊರಡಿಸಿತ್ತು. ದೊಡ್ಡ ಮೊತ್ತದ ಟಿಡಿಆರ್ ನೀಡಬೇಕಾಗುತ್ತದೆ ಎಂಬ ಕಾರಣವನ್ನು ನೀಡಿ ರಸ್ತೆ ಅಗಲೀಕರಣವನ್ನು ಕೈ ಬಿಟ್ಟಿತ್ತು. ಈಗ ಇದೇ ಪ್ರಕ್ರಿಯೆ ನಡೆದಿದೆ.

ಉದಯವಾಹಿನಿ
ಪ್ರಾದೇಶಿಕ
ಗುರುವಾರ 12 ಡಿಸೆಂಬರ್ 2024


# ಪ್ರಾಣ ತೆಗೆಯುವ ಅವೈಜ್ಞಾನಿಕ ರಸ್ತೆ: ರಸ್ತೆ ಉಬ್ಬುಗಳ ಬಗ್ಗೆ ಚರ್ಚೆ

## • ರಸ್ತೆ ಉಬ್ಬುಗಳನ್ನು ಹಾಕುವುದರಿಂದ ಅಪಘಾತ ನಿಯಂತ್ರಣ ಮಾಡಬೇಕಾದ ರಸ್ತೆ ಉಬ್ಬುಗಳೇ ಅಪಘಾತಕ್ಕೆ ಕಾರಣವಾಗುತ್ತಿವೆ

• **ಉದಯವಾಹಿನಿ, ಕೆಜಿಎಫ್**

ಅವೈಜ್ಞಾನಿಕ ರಸ್ತೆ ಉಬ್ಬಿನಿಂದಾಗಿ ಇತ್ತೀಚೆಗಷ್ಟೇ ಜೀವ ತೆತ್ತ ನಗರದ ಊರಿಗಾಂ ನಿವಾಸಿ ಡಾ.ಸಂಧ್ಯಾ ಅವರ ಸಾವಿನ ಪ್ರಕರಣದಿಂದ ರಸ್ತೆಯಲ್ಲಿ ಅನಧಿಕೃತವಾಗಿ ಹಾಕಲ್ಪಟ್ಟಿರುವ ರಸ್ತೆ ಉಬ್ಬುಗಳ ಬಗ್ಗೆ ಚರ್ಚೆ ಶುರುವಾಗಿದೆ.

**ಎಲ್ಲೆಂದರಲ್ಲಿ ರಸ್ತೆ ಉಬ್ಬು**

ಬೂದಿಕೋಟೆಯಲ್ಲಿ ವೈದ್ಯೆಯಾಗಿದ್ದ ಸಂಧ್ಯಾ ಅವರು ಎಂದಿನಂತೆ ಊರಿಗಾಂನಿಂದ ಬಂಗಾರಪೇಟೆಗೆ ಹೋಗುವ ರೈಲು ತಪ್ಪಿತ್ತು ತಮ್ಮ ತಂದೆಯೊಡನೆ ಬೈಕ್ ನಲ್ಲಿ ಬೂದಿಕೋಟೆಗೆ ಹೋಗುತ್ತಿದ್ದಾಗ, ಗಾಜಗ ಗ್ರಾಮದ ಬಳಿ ಅನಧಿಕೃತವಾಗಿ ಹಾಕಲ್ಪಟ್ಟಿದ್ದ ಅವೈಜ್ಞಾನಿಕ ರಸ್ತೆ ಉಬ್ಬಿನಿಂದಾಗಿ ಕೆಳಕ್ಕೆ ಬಿದ್ದು, ತಲೆಗೆ ತೀವ್ರ ಪೆಟ್ಟು ಬಿದ್ದು, ಆಸ್ಪತ್ರೆಯಲ್ಲಿ ಮೃತಪಟ್ಟಿದ್ದರು.

ಕೆಲ ದಿನಗಳ ಹಿಂದೆ ತಾಲ್ಲೂಕಿನ ಕರಡಗೂರು ಗ್ರಾಮದ ಬಳಿ ದೇವಾಲಯದ ಉಸ್ತುವಾರಿ ವಹಿಸಿದ್ದ ವ್ಯಕ್ತಿಯೊಬ್ಬ ಮುಖ್ಯ ರಸ್ತೆಯಲ್ಲಿ ಸಿಮೆಂಟ್ ಬ್ಲಾಕ್ ಇಟ್ಟು ಅದರ ಮೇಲೆ ಡಾಂಬರು ಹಾಕಿ ರಸ್ತೆ ಉಬ್ಬು ನಿರ್ಮಿಸಿದ್ದ ದೊಡ್ಡದಾದ ಉಬ್ಬನ್ನು ದಾಟುವಾಗ ಬಿದ್ದ ಬೈಕ್ ಸವಾರರೊಬ್ಬರು ಗಾಯಗೊಂಡು ನಂತರ ಮೃತಪಟ್ಟಿದ್ದರು. ಇತ್ತೀಚಿನ ದಿನಗಳಲ್ಲಿ ಮುಖ್ಯ ಹೆದ್ದಾರಿಗಳಲ್ಲಿ ಕೂಡ ಎಲ್ಲೆಂದರಲ್ಲಿ ರಸ್ತೆ ಉಬ್ಬು ನಿರ್ಮಾಣವಾಗಿವೆ. ಬಂಗಾರಪೇಟೆಯಿಂದ ಕೆಜಿಎಫ್‌ಗೆ ಬರುವ ಮುಖ್ಯ ರಸ್ತೆಯಲ್ಲಿಯೇ ಬೆಂಗನೂರು, ಸೋರೆಗೌಡನ ಕೋಟೆ, ದಾಸರಹೊಸಹಳ್ಳಿ, ಬೆಮಲ್ ನಗರದ ಆಲದ ಮರ, ಬೆಮಲ್ ಕಾರ್ಖಾನೆ, ಆರ್‌ಟಿಒ ಕಚೇರಿ ಮುಂಭಾಗದಲ್ಲಿ ಹೆನ್ರಿಸ್ ಲೈನ್ ಬಳಿ, ಊರಿಗಾಂ ರೈಲ್ವೆ ನಿಲ್ದಾಣ, ರಾಬರ್ಟಸನ್‌ಪೇಟೆಯ ನ್ಯಾಯಾಲಯದ ಮುಂದೆ... ಹೀಗೆ ಎಲ್ಲೆಂದರಲ್ಲಿ ರಸ್ತೆ ಉಬ್ಬುಗಳನ್ನು ಹಾಕಲಾಗಿದೆ. ಅದರ ಪೈಕಿ ಊರಿಗಾಂ ರೈಲ್ವೆ ನಿಲ್ದಾಣದ ಬಳಿ ರೈಲ್ವೆ ಇಲಾಖೆ ಅತಿ ಎತ್ತರದ ಉಬ್ಬನ್ನು ಹಾಕಿದೆ. ಅದರ ಎತ್ತರ ತಗ್ಗಿಸಿ ಎಂದು ಲೋಕೋಪಯೋಗಿ ಇಲಾಖೆ ಹೇಳಿದರೂ, ರೈಲ್ವೆ ಇಲಾಖೆ ಸೂಚನೆಯನ್ನು ನಿರ್ಲಕ್ಷಿಸಿದೆ.

ತೀವ್ರ ಅನಿವಾರ್ಯ ಸ್ಥಳಗಳಲ್ಲಿ ಮಾತ್ರ ಮುಖ್ಯ ರಸ್ತೆಗಳಲ್ಲಿ ರಸ್ತೆ ಉಬ್ಬು ನಿರ್ಮಿಸಬೇಕು ಎಂದು ನಿಯಮವಿದೆ. ಉಬ್ಬು ನಿರ್ಮಿಸಬೇಕಾದರೆ ಕೂಡ ಹಲವಾರು



ಉದಯವಾಹಿನಿ ಚಿತ್ರ

ಮಾನದಂಡಗಳನ್ನು ಪಾಲಿಸಬೇಕಾಗುತ್ತದೆ. ಉಬ್ಬಿನ ಪ್ರಮಾಣ ಕೂಡ ನಿಗದಿತ ಎತ್ತರವನ್ನು ಮೀರಿರಬಾರದು.

ಉಬ್ಬು ವೇಗ ನಿಯಂತ್ರಣ ಮಾಡಲು ಉಪಯೋಗವಾಗುವಂತಿರಬೇಕು. ಬಂಗಾರಪೇಟೆಯಿಂದ ಬೆಮಲ್ ನಗರದ ಮಾರ್ಗವಾಗಿ ಬೇತಮಂಗಲಕ್ಕೆ ಹೋಗುವ ರಸ್ತೆಯನ್ನು ಈಚೆಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಭಿವೃದ್ಧಿ ಪಡಿಸಿತು.

ರಸ್ತೆಯನ್ನು ಲೋಕೋಪಯೋಗಿ ಇಲಾಖೆಗೆ ಇನ್ನೂ ಹಸ್ತಾಂತರ ಮಾಡುವ ಮೊದಲೇ ಹಲವಾರು ಕಡೆಗಳಲ್ಲಿ ಅವೈಜ್ಞಾನಿಕವಾಗಿ ರಸ್ತೆ ಉಬ್ಬನ್ನು ನಿರ್ಮಿಸಿತು. ಯಾವುದಾದರೂ ಒಂದು ಅಪಘಾತವಾದರೆ ಸಾಕು, ಪೊಲೀಸ್ ಅಧಿಕಾರಿಗಳೇ ರಸ್ತೆ ಉಬ್ಬು ಹಾಕಲು ಒತ್ತಡ ಹೇರುತ್ತಾರೆ. ಕೆಲವೆಡೆ ಪೊಲೀಸ್ ಅಧಿಕಾರಿಗಳೇ ನಿಂತು ರಸ್ತೆ ಉಬ್ಬು ಹಾಕಿಸಿದ್ದಾರೆ. ಇನ್ನು ಕೆಲವೆಡೆ ಗ್ರಾಮಸ್ಥರೇ ಉಬ್ಬು ನಿರ್ಮಿಸಿಕೊಂಡಿದ್ದಾರೆ. ತೆರವು ಮಾಡಲು ಹೋದರೆ ಪ್ರತಿಭಟನೆ ಮಾಡುತ್ತಾರೆ ಎಂದು ರಾಷ್ಟ್ರೀಯ ಹೆದ್ದಾರಿ ವಿಭಾಗದ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಅಸಹಾಯಕತೆಯನ್ನು ವ್ಯಕ್ತಪಡಿಸುತ್ತಾರೆ. ವೈದ್ಯೆ ಬಿದ್ದು ಮೃತಪಟ್ಟ ರಸ್ತೆ ಉಬ್ಬನ್ನು ಕೂಡ ಗ್ರಾಮಸ್ಥರೇ ಅನಧಿಕೃತವಾಗಿ ನಿರ್ಮಾಣ ಮಾಡಿದ್ದು ಅದನ್ನು ತೆರೆಯಲು ಹೋದಾಗ ಗ್ರಾಮಸ್ಥರು ವಿರೋಧ ವ್ಯಕ್ತಪಡಿಸಿದ್ದರು.

### ಪ್ರಭಾವಿಗಳಿಂದ ಒತ್ತಡ

**ಅಕಸ್ಮಾತ್ ಉಬ್ಬನ್ನು ಗಮನಿಸಿದ ವೇಗವಾಗಿ ಹೋದರೆ ಪ್ರಾಣಾಪಾಯ ಉಂಟಾಗುವ ಸಾಧ್ಯತೆಗಳು ಇರಬಾರದು. ಆದರೆ, ಸಾರ್ವಜನಿಕರ ಮತ್ತು ಜನಪ್ರತಿನಿಧಿಗಳ ಒತ್ತಡದಿಂದ ಎಲ್ಲೆಂದರಲ್ಲಿ ಹೇಗೆಂದರೆ ಹಾಗೆ ಅನಧಿಕೃತ ಉಬ್ಬುಗಳ ನಿರ್ಮಾಣವಾಗುತ್ತಿವೆ. ಅವುಗಳನ್ನು ತೆರವು ಮಾಡಲು ಹೋದರೆ ಪ್ರಭಾವಿಗಳಿಂದ ಒತ್ತಡ ಬರುತ್ತದೆ. ಸಮಸ್ಯೆಯಾದಾಗ ಅಧಿಕಾರಿಗಳ ತಲೆ ಮೇಲೆ ಗೂಬೆ ಕೂರಿಸಲಾಗುತ್ತದೆ ಎಂದು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಹೇಳುತ್ತಾರೆ.**

**ಈಗ ನಡೆದ ದುರ್ಘಟನೆ ನಂತರ ಅದನ್ನು ತೆರವು ಮಾಡಲಾಗಿದೆ ಎಂದು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.ರಸ್ತೆಯಲ್ಲಿ ವಾಹನ ವೇಗದ ಮಿತಿಯ ಬಗ್ಗೆ ಸೂಚನಾ ಫಲಕಗಳನ್ನು ಹಾಕಲಿ, ಅಗತ್ಯವಿದ್ದಲ್ಲಿ ವೈಜ್ಞಾನಿಕ ರಸ್ತೆ ಉಬ್ಬುಗಳನ್ನು ಹಾಕಲಿ. ಆದರೆ ಎಲ್ಲೆಂದರಲ್ಲಿ ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ಹಾಕುವುದರಿಂದ ಅಪಘಾತ ನಿಯಂತ್ರಣ ಮಾಡಬೇಕಾದ ರಸ್ತೆ ಉಬ್ಬುಗಳೇ ಅಪಘಾತಕ್ಕೆ ಕಾರಣವಾಗುತ್ತಿವೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.**

---

# ಸುಗ್ಗಿ ಹಿಗ್ಗಿನ ಹುತ್ತರಿ: ಸಾಂಸ್ಕೃತಿಕ ಕಲರವಕ್ಕೆ ಮಂದ್ ಸಿದ್ಧತೆ

• **ಉದಯವಾಹಿನಿ,ಗೋಣಿಕೊಪ್ಪಲು**

ಕೊಡಗಿನ ಸುಗ್ಗಿ ಹಬ್ಬ ಎಂದೇ ಕರೆಯಲಾಗುವ ಹುತ್ತರಿ ಹಬ್ಬದ ಕೋಲಾಟಕ್ಕೆ ಮಂದ್‌ಗಳು ಸಿದ್ಧಗೊಳ್ಳುತ್ತಿವೆ. ಕೊಡಗಿನ ಬಹುತೇಕ ಊರುಗಳಲ್ಲಿ ಕೋಲ್ ಮಂದ್‌ಗಳಿವೆ. ಹುತ್ತರಿ ಕೋಲ್ ಮಂನ್‌ಗಾಗಿಯೇ ನೂರಾರು ವರ್ಷಗಳಿಂದ ಜಾಗವನ್ನು ಗುರುತಿಸಿ ಅವುಗಳನ್ನು ಸಂರಕ್ಷಿಸಿಕೊಂಡು ಬರಲಾಗುತ್ತಿದೆ.

ಬಹಳಷ್ಟು ಊರುಗಳಲ್ಲಿ ಈ ಮಂದ್‌ಗಳು ಒತ್ತುವರಿಯಾಗಿ ಇಲ್ಲವೇ ಕಾಡು ಬೆಳೆದು ಮುಚ್ಚಿಹೋಗಿದ್ದವು. ಆದರೆ, ಇತ್ತೀಚಿನ ವರ್ಷಗಳಲ್ಲಿ ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಮತ್ತು ಇತರ ಸಂಘ ಸಂಸ್ಥೆಗಳ ಒತ್ತಾಸೆ ಮತ್ತು ಸಹಕಾರದೊಂದಿಗೆ ಮಂದ್ರಗಳಿಗೆ ಪುನರುಜೀವ ಕೊಡಲಾಗಿದೆ.

ಹೀಗಾಗಿ ಹುತ್ತರಿ ಹಬ್ಬ ಮುಗಿದ ಬಳಿಕ ಒಂದು ತಿಂಗಳವರೆಗೂ ಆಯಾ ಮಂದ್‌ಗಳಲ್ಲಿ ಹುತ್ತರಿ ಕೋಲಾಟ ವಿಜೃಂಭಣೆಯಿಂದ ಜರುಗುತ್ತಿದೆ. ಪೊನ್ನಂಪೇಟೆ ತಾಲ್ಲೂಕಿನ ಬೆಕ್ಕೆಸೊಣ್ಣೂರು, ಬಾಳೆಲೆ, ಕಾರ್ಮಾಡು, ಕಾನೂರು, ಶ್ರೀಮಂಗಲ, ಬಿರುನಾಣಿ, ಬೀರುಗ, ಹುದಿಕೇರಿ, ಕುಂದ, ಕಿರುಗೂರು ಭಾಗಗಳ ಮಂದ್‌ಗಳಲ್ಲಿಯೂ ಹುತ್ತರಿ ಕೋಲಾಟವನ್ನು ನಡೆಸಲಾಗುತ್ತಿದೆ. ಐದಾರು ವರ್ಷಗಳ ಹಿಂದಿನವರೆಗೂ ಈ ಮಂದ್‌ಳು ಕಾರ್ಯಕ್ರಮಗಳಿಲ್ಲದೆ ಕಾಡು ಬೆಳೆದು ಕಳೆಗುಂದಿದ್ದವು. ಆದರೆ, ಇತ್ತೀಚಿನ ವರ್ಷಗಳಲ್ಲಿ ನಿತಂತರವಾಗಿ ನಡೆಯುತ್ತಿರುವ ಹುತ್ತರಿ ಕೋಲಾಟದಿಂದ ಸ್ವಚ್ಛಗೊಂಡು ಕಂಗೊಳಿಸುತ್ತಿವೆ.



ಉದಯವಾಹಿನಿ ಚಿತ್ರ

**ಮಂದ್‌ಗಳಲ್ಲಿ ಹುತ್ತರಿ ಕೋಲಾಟ ನಡೆಸುವ ಸಂದರ್ಭದಲ್ಲಿ ಕೊಡವ ಜನರು ಸಾಂಪ್ರದಾಯಿಕ ಕೊಡವ ಉಡುಪುಗಳನ್ನು ಧರಿಸುತ್ತಾರೆ. ಪುರುಷರು ಕುಪ್ಪೆಚ್ಯಾಲೆ, ಮಂಡೆತುಣಿ ಧರಿಸಿದರೆ ಮಹಿಳೆಯರು ಕೂಡ ತಲೆ ವಸ್ತ್ರ, ಕೊಡವ ಸೀರೆ ಧರಿಸಿ ಮಂದ್‌ಗೆ ಇಳಿಯುತ್ತಾರೆ.**

ಹುತ್ತರಿ ಹಬ್ಬ ಸಮೀಪಿಸುತ್ತಿದ್ದಂತೆ ಆಯಾ ಊರಿನ ಮುಖಂಡರು ಮಂದ್‌ಗಳನ್ನು ಸ್ವಚ್ಛಗೊಳಿಸುವ ಕಾರ್ಯದಲ್ಲಿ ತೊಡಗುತ್ತಾರೆ.

ಈ ಮೂಲಕ ಕೊಡವ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಪ್ರಯತ್ನವನ್ನು ಪ್ರಾಮಾಣಿಕವಾಗಿ ಮಾಡುತ್ತಿದ್ದಾರೆ. ಊರಿನ ಹಿರಿಯರು ಇದರ ಬಗ್ಗೆ ಹೆಚ್ಚಿನ ಮುತುವರ್ಜಿ ಮತ್ತು ಆಸಕ್ತಿ ವಹಿಸಿ ಕೆಲಸ ಮಾಡುತ್ತಿದ್ದಾರೆ.

ಮಂದ್ ಎನ್ನುವಂತಹದ್ದು ಕೇವಲ ಹುತ್ತರಿ ಕೋಲಾಟ ನಡೆಸುವ ಮೈದಾನ ಮಾತ್ರವಲ್ಲ, ಅದು ಕೊಡವ ಸಂಸ್ಕೃತಿಯ ಅವಿಭಾಜ್ಯ ಅಂಗವೂ ಹೌದು. ಮಂದ್‌ಗಳು ಹಾಡು, ಕುಣಿತ ಮತ್ತಿತರ ಸಂಭ್ರಮವನ್ನು ಒಳಗೊಂಡ ಕೊಡವ ಸಾಂಸ್ಕೃತಿಕ ಕೇಂದ್ರ' ಎನ್ನುತ್ತಾರೆ ಅಖಿಲ ಕೊಡವ ಯೂತ್ ವಿಂಗ್ ಅಧ್ಯಕ್ಷ ಚಮ್ಮಟೀರ ಪ್ರವೀಣ್ ಉತ್ತಪ್ಪ, ಈ ಕಾರಣದಿಂದ ಮುಂದಿನ ಪೀಳಿಗೆಗೆ ಮಂದ್ ಮಹತ್ವ ಮತ್ತು ಅದರ ಸಾಂಸ್ಕೃತಿಕ ಹಿನ್ನೆಲೆ ತಿಳಿಸುವುದಕ್ಕಾಗಿಯೇ ತಜ್ಞರಿಂದ ವಿಚಾರ ಸಂಕಿರಣಗಳು ನಡೆಯುತ್ತಿವೆ.

---

# ಮೈಸೂರು ಒಡೆಯರ್ ಯದುವೀರ್ - ತ್ರಿಷಿಕಾ ದಂಪತಿಯ ಎರಡನೇ ಪುತ್ರನಿಗೆ ತೊಟ್ಟಿಲು ಶಾಸ್ತ್ರ

• **ಉದಯವಾಹಿನಿ, ಮೈಸೂರು**

ಮೈಸೂರು ರಾಜವಂಶಸ್ಥರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮತ್ತು ತ್ರಿಷಿಕಾ ದಂಪತಿಗೆ ಎರಡನೇ ಗಂಡು 2017ರ ಡಿಸೆಂಬರ್ 6 ರಂದು ಜನಿಸಿತ್ತು. ಇದೀಗ ಪುತ್ರನಿಗೆ ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ತೊಟ್ಟಿಲು ಶಾಸ್ತ್ರ ನೆರವೇರಿಸಲಾಗಿದೆ. ಮೈಸೂರು-ಕೊಡಗು ಸಂಸದರೂ ಆಗಿರುವ ಯದುವೀರ್ ಒಡೆಯರ್, ತ್ರಿಷಿಕಾ ದೇವಿ ದಂಪತಿಯ ಕಿರಿಯ ಪುತ್ರನಿಗೆ ತೊಟ್ಟಿಲುಶಾಸ್ತ್ರವು ಆಪ್ತರ ಮಧ್ಯೆ, ಸಂಭ್ರಮ ನೆರವೇರಸಲಾಗಿದೆ.

ಇದಕ್ಕೂ ಮೊದಲು ರಾಜವಂಶಸ್ಥರು ಚಾಮುಂಡಿ ದೇವಿಗೆ ವಿಶೇಷ ಪೂಜೆ ನೆರವೇರಿಸಿದರು.

ದೇವಿಗೆ ಪೂಜೆ ಕಾರ್ಯಗಳೆಲ್ಲ ಮುಗಿದ ಮೇಲೆ ಚಾಮುಂಡಿಬೆಟ್ಟದಲ್ಲಿ ದೇವಾಲಯದ ಬಳಿ ಇರುವ ಸಂಪಿಗೆ ಮರಕ್ಕೆ ತೊಟ್ಟಿಲು ಕಟ್ಟಿ ಪೂಜೆ ಮಾಡಲಾಯಿತು. ಇದಾದ ಮೇಲೆ ತೊಟ್ಟಿಲು ಶಾಸ್ತ್ರ ಮಾಡಲಾಯಿತು. ಈ ವೇಳೆ ರಾಜಮಾತೆ ಪ್ರಮೋದಾದೇವಿ ಒಡೆಯರ್ ಉಪಸ್ಥಿತರಿದ್ದರು. ವಿಶ್ವವಿಖ್ಯಾತ ದಸರಾ ಸಂದರ್ಭದಲ್ಲೇ ಯದುವೀರ್-ತ್ರಿಷಿಕಾ ದಂಪತಿಯು ಎರಡನೇ ಮಗುವನ್ನು ಬರಮಾಡಿಕೊಂಡಿದ್ದರು. ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ತ್ರಿಷಿಕಾ ಎರಡನೇ ಮಗುವಿಗೆ ಜನ್ಮ ನೀಡಿದ್ದರು. ಯುವರಾಜ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ತ್ರಿಷಿಕಾ ಕುಮಾರಿ ಅವರನ್ನು 2016ರಲ್ಲಿ ಅದ್ದೂರಿಯಾಗಿ ವಿವಾಹವಾಗಿದ್ದರು.



ಉದಯವಾಹಿನಿ ಚಿತ್ರ

---

# ಎಸ್.ಎಂ.ಕೃಷ್ಣಗೆ ಅಂತಿಮ ನಮನ ಸಲ್ಲಿಸಿದ ಜನ

• **ಉದಯವಾಹಿನಿ, ರಾಮನಗರ**

ಜಿಲ್ಲೆ ಮೂಲಕ ಮಂಡ್ಯಕ್ಕೆ ಹೋದ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ಪಾರ್ಥಿವ ಶರೀರದ ಅಂತಿಮ ದರ್ಶನವನ್ನು ಜಿಲ್ಲೆಯ ಜನಪ್ರತಿನಿಧಿಗಳು, ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಕಾರ್ಯಕರ್ತರು ಸಂಘ-ಸಂಸ್ಥೆ, ಸಂಘಟನೆಗಳ ಪದಾಧಿಕಾರಿಗಳು, ಸರ್ಕಾರಿ ಅಧಿಕಾರಿಗಳು ಹಾಗೂ ಸಾರ್ವಜನಿಕರು ಪಡೆದರು. ಬೆಂಗಳೂರಿನ ಸದಾಶಿವನಗರದಲ್ಲಿರುವ ಕೃಷ್ಣ ಅವರ ನಿವಾಸದಿಂದ ಬೆಳಿಗ್ಗೆ ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಸೋಮನಹಳ್ಳಿಗೆ ಗಾಜಿನ ವಾಹನದಲ್ಲಿ ಪಾರ್ಥಿವ ಶರೀರ ತೆಗೆದುಕೊಂಡು ಹೋಗಲಾಯಿತು.

ಜಿಲ್ಲೆ ಮಾರ್ಗವಾಗಿ ಹೊರಟ ಶರೀರದ ಅಂತಿಮ ದರ್ಶನಕ್ಕೆ ಬಿಡದಿ, ರಾಮನಗರ ಹಾಗೂ ಚನ್ನಪಟ್ಟಣದಲ್ಲಿ ಜಿಲ್ಲಾಡಳಿತವು ಪೆಂಡಾಲ್ ಹಾಕಿಸಿ, ಸರದಿಯಲ್ಲಿ ದರ್ಶನ ಪಡೆಯಲು ಬ್ಯಾರಿಕೇಡ್ ಹಾಕಿ ವ್ಯವಸ್ಥೆ ಮಾಡಲಾಗಿತ್ತು. ಬಿಡದಿಯನ್ನು ಬೆಳಿಗ್ಗೆ 10 ಗಂಟೆಗೆ



ಉದಯವಾಹಿನಿ ಚಿತ್ರ

ಪ್ರವೇಶಿಸಿದ ಪಾರ್ಥಿವ ಶರೀರದ ವಾಹನವನ್ನು ಬಿಜಿಎಸ್ ವೃತ್ತದಲ್ಲಿ 10 ನಿಮಿಷ ನಿಲ್ಲಿಸಿ, ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಲಾಯಿತು. ನಂತರ ಅಲ್ಲಿಂದ ಹೊರಟ ವಾಹನವು 10.45ರ ಸುಮಾರಿಗೆ ರಾಮನಗರ ಪ್ರವೇಶಿಸಿತು. ಅಂಬೇಡ್ಕರ್ ನಗರ, ಗಾಂಧಿನಗರ ರೇಷ್ಮೆ ಮಾರುಕಟ್ಟೆ ಬಳಿ ಅಂತಿಮ ದರ್ಶನಕ್ಕೆ ಜನ ಜಮಾಯಿಸಿದ್ದರಿಂದ ಅಲ್ಲಿ ವಾಹನವನ್ನು ನಿಧಾನಗೊಳಿಸಲಾಯಿತು. ಜನಪ್ರತಿನಿಧಿಗಳು, ರಾಜಕಾರಣಿಗಳು, ಮುಖಂಡರು, ಕಾರ್ಯಕರ್ತರು, ಅಧಿಕಾರಿಗಳು, ಸಾರ್ವಜನಿಕರು, ಅಭಿಮಾನಿಗಳಿಗೆ ದರ್ಶನಕ್ಕೆ 15 ನಿಮಿಷ ಅವಕಾಶ ನೀಡಲಾಯಿತು.

---

# ಭತ್ತಕ್ಕೆ 2500, ರಾಗಿಗೆ 2,900 ನಿಗದಿ

• **ಉದಯವಾಹಿನಿ, ಮಂಡ್ಯ**

ರೈತರಿಗೆ ಕಂಬೈಂಡ್ ಹಾರ್ವೆಸ್ಟರ್ ಚೈನ್ ಮಾದರಿ ಭತ್ತದ ಯಂತ್ರಕ್ಕೆ 2,500 ಹಾಗೂ ಟೈರ್ (ಗ್ರಿಪ್) ಯಂತ್ರಕ್ಕೆ 2,000 ದಂತೆ ಪ್ರತಿ ಗಂಟೆಗೆ ತೆಗೆದುಕೊಳ್ಳುವಂತೆ ಭತ್ತ, ರಾಗಿ ಬೆಳೆಗಳ ಕಟಾವಿಗೆ ಸಂಬಂಧಿಸಿದಂತೆ ಬಾಡಿಗೆ ದರವನ್ನು ಜಿಲ್ಲಾಧಿಕಾರಿ ಕುಮಾರ ನಿಗದಿಪಡಿಸಿದರು.

ಜಿಲ್ಲಾ ಪಂಚಾಯಿತಿ ಕಚೇರಿಯ ಕಾವೇರಿ ಸಭಾಂಗಣದಲ್ಲಿ ಕೃಷಿ ಇಲಾಖೆಗೆ ಸಂಬಂಧಿಸಿದ ವಿವಿಧ ವಿಷಯಗಳ ಬಗ್ಗೆ ಸಭೆ ನಡೆಸಿ ಅವರು ಮಾತನಾಡಿದರು.

ಮಂಡ್ಯ ಜಿಲ್ಲೆಯ 2024-25ನೇ ಸಾಲಿನಲ್ಲಿ ನೆರೆಯ ಜಿಲ್ಲೆಗಳ ವ್ಯಾಪ್ತಿಯಲ್ಲಿ ಭತ್ತ ಕಂಬೈಂಡ್ ಹಾರ್ವೆಸ್ಟರ್‌ಗಳ ಬಾಡಿಗೆ ದರಗಳನ್ನು ನಿಗದಿಪಡಿಸಲಾಗಿದ್ದು, ಟೈರ್ (ಸಾಮಾನ್ಯ) ಮಾದರಿ ಭತ್ತದ ಕಟಾವು ಯಂತ್ರಕ್ಕೆ ಪ್ರತಿ ಗಂಟೆಗೆ 1,800 ಹಾಗೂ ರಾಗಿ ಯಂತ್ರಕ್ಕೆ ಪ್ರತಿ ಗಂಟೆಗೆ 2,900 ಗಳನ್ನು ನಿಗದಿಪಡಿಸಲಾಗಿದೆ ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

**ಭದ್ರತೆ ಒದಗಿಸುವುದು ಯೋಜನೆಯ ಉದ್ದೇಶ**

ಜಿಲ್ಲೆಯಲ್ಲಿ 2024-25 ನೇ ಸಾಲಿನ ಮುಂಗಾರು ಹಂಗಾಮಿನ ಭತ್ತ ಬೆಳೆಯ 2 57,804 ,1-54,018 ಬೆಳೆಯ ವಿಸ್ತೀರ್ಣವು- 40,361 ಹೆಕ್ಟೇರ್ ಇದೆ.

ಕರ್ನಾಟಕ ರೈತ ಸುರಕ್ಷಾ -ಪ್ರಧಾನ ಮಂತ್ರಿ ಬಿಮಾ (ವಿಮಾ) ಯೋಜನೆಯು ಅತಿವೃಷ್ಟಿ/ಅನಾವೃಷ್ಟಿ, ಅಕಾಲಿಕ ಮಳೆ ಮುಂತಾದ ಪ್ರಕೃತಿ ವಿಕೋಪಗಳು ಸೇರಿದಂತೆ ಹಲವು ಕಾರಣಗಳಿಂದ ಬೆಳಗಿನಷ್ಟ ಸಂಭವಿಸಿದ್ದರೆ ರೈತರಿಗೆ ಪರಿಹಾರ ನೀಡುವ ಮೂಲಕ ಭದ್ರತೆ ಒದಗಿಸುವುದು ಯೋಜನೆಯ ಉದ್ದೇಶವಾಗಿದೆ ಎಂದರು.

ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಭೀಮಾ ಯೋಜನೆಯು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಿಂಗಾರು ಹಂಗಾಮಿಗೆ ಮದ್ದೂರು, ಮಂಡ್ಯ, ನಾಗಮಂಗಲ, ಪಾಂಡವಪುರ ಮತ್ತು ಶ್ರೀರಂಗಪಟ್ಟಣ ತಾಲ್ಲೂಕುಗಳ ಅಧಿಸುಚಿತ ಗ್ರಾಮ ಪಂಚಾಯಿತಿಗಳಲ್ಲಿ ಹುರುಳಿ (ಮಳೆಯಾಶ್ರಿತ) ಬೆಳೆಗೆ ರೈತರು ಬೆಳೆ ವಿಮೆಗೆ ನೋಂದಾಯಿಸಬಹುದಾಗಿರುತ್ತದೆ.

**ಬೇಸಿಗೆ ಹಂಗಾಮಿಗೆ ಮಂಡ್ಯ. ಪಾಂಡವಪುರ ಮತ್ತು ಶ್ರೀರಂಗಪಟ್ಟಣ ತಾಲೂಕುಗಳ ಅಧಿಸೂಚಿತ ಗ್ರಾಮ ಪಂಚಾಯಿತಿಗಳಲ್ಲಿ ಭತ್ತ (ನೀರಾವರಿ) ಬೆಳೆಗೆ ರೈತರು ಬೆಳೆ ವಿಮೆಗೆ ನೋಂದಾಯಿಸಬಹುದಾಗಿರುತ್ತದೆ ಎಂದು ತಿಳಿಸಿದರು.**

---

# ಕೊಡಗು ಜಿಲ್ಲೆಗೆ ಎಸ್.ಎಂ. ಕೃಷ್ಣ ವಿಶೇಷ ಕೊಡುಗೆ

• **ಉದಯವಾಹಿನಿ, ಮಡಿಕೇರಿ**

ಹಿರಿಯ ಮುತ್ಸದ್ಧಿ ಎಸ್.ಎಂ.ಕೃಷ್ಣ ಅವರ ಹೆಸರು ಕೊಡಗಿನ ಇತಿಹಾಸದಲ್ಲಿ ಶಾಶ್ವತವಾಗಿ ಉಳಿಯುವಂತಹದ್ದಾಗಿದ್ದು, ಅವರ ಕೊಡುಗೆ ಗಳು ಅಷ್ಟು ಸುಲಭವಾಗಿ ಮರೆಯುವಂಥದ್ದಲ್ಲ ಎಂದು ಇಲ್ಲಿನ ಹಿರಿಯ ರಾಜಕಾರಣಿಗಳು ನೆನಪಿಸಿಕೊಳ್ಳುತ್ತಾರೆ. ಪ್ರತ್ಯೇಕ ರಾಜ್ಯ ವಾಗಿದ್ದ ಕೊಡಗು ಕರ್ನಾಟಕ ದೊಂದಿಗೆ ವಿಲೀನವಾದ ನಂತರ ತನ್ನ ಅಧಿಕಾರ ರಾಜಕಾರಣದಲ್ಲಿಸುವರ್ಣ ಯುಗವನ್ನು ಕಂಡಿದ್ದು ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗಲೇ. ಈ ಕಾರಣದಿಂದ ಕೊಡಗಿನ ರಾಜಕೀಯ ಇತಿಹಾಸದಲ್ಲಿ ಎಸ್.ಎಂ.ಕೃಷ್ಣ ಅವರ ಕಾಲಘಟ್ಟವು ಮಹತ್ವದ್ದು ಮಾತ್ರವಲ್ಲ ಐತಿಹಾಸಿಕವೂ ಆಗಿದೆ.

ಎಸ್.ಎಂ.ಕೃಷ್ಣ ಅವರು ಮೊದಲ ಬಾರಿಗೆ ಏಕಕಾಲಕ್ಕೆ ಕೊಡಗು ಜಿಲ್ಲೆಯ ಮೂವರಿಗೆ ತಮ್ಮ ಸಂಪುಟದಲ್ಲಿ ಸ್ಥಾನ ನೀಡಿದರು. ಇಲ್ಲಿನ ವಿರಾಜಪೇಟೆ ವಿಧಾನಸಭಾ ಕ್ಷೇತ್ರದಿಂದ ಆಯ್ಕೆ ಯಾಗಿದ್ದ ಸುಮಾ ವಸಂತ್, ಮಡಿಕೇರಿ ಕ್ಷೇತ್ರದಿಂದ ಆಯ್ಕೆ ಯಾಗಿದ್ದ ಎಂ.ಎಂ.ನಾಣಯ್ಯ ಹಾಗೂ ವಿಧಾನಪರಿಷತ್ ಸದಸ್ಯರಾಗಿದ್ದ ಟಿ.ಜಾನ್ ಅವರಿಗೆ ಏಕಕಾಲದಲ್ಲಿ ಸಚಿವ ಸ್ಥಾನ ನೀಡಿದ್ದರು. ಎಂ.ಎಂ.ನಾಣಯ್ಯ ಅಬಕಾರಿ ಸಚಿವರಾಗಿ, ಸುಮಾ ವಸಂತ್ ಅವರು ಮುಜರಾಯಿ ಸಚಿವರಾಗಿ ಹಾಗೂ ಟಿ.ಜಾನ್ ಅವರು ವಿಮಾನಯಾನ ಸಚಿವರಾಗಿ ಎಸ್.ಎಂ.ಕೃಷ್ಣ ಅವರ ಸಂಪುಟದಲ್ಲಿ ಕಾರ್ಯ ನಿರ್ವಹಿಸಿದ್ದರು.ಇದು ನಿಜಕ್ಕೂ ಅಧಿಕಾರ ರಾಜ ಕಾರಣದ ಸುವರ್ಣಯುಗವೆಂದೇ ರಾಜಕೀಯ ಚರಿತ್ರೆಯಲ್ಲಿ ದಾಖಲಾಗಿದೆ.

ಆಗ ಕೊಡಗಿನ ಎಂ.ಸಿ.ನಾಣಯ್ಯ ಅವರು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾಗಿದ್ದದ್ದು ವಿಶೇಷ. ಇಂತಹ ಎಲ್ಲ ವಿಶೇಷ ಸಂದರ್ಭಗಳನ್ನು ಎಸ್.ಎಂ.ಕೃಷ್ಣ ಅವರ ನಂತರ ಇನ್ನಾವುದೇ ಮುಖ್ಯಮಂತ್ರಿಯ ಕಾಲದಲ್ಲಿ ಕೊಡಗು ಕಂಡಿಲ್ಲ. ಹಿರಿಯ ಮುತ್ಸದ್ದಿ ಎಂ.ಸಿ.ನಾಣಯ್ಯ, ನಾನು ಇಲ್ಲಿನ ಡಿಸಿಸಿ ಬ್ಯಾಂಕ್ ಅಧ್ಯಕ್ಷನಾಗಿದ್ದ ವೇಳೆ ಜನರಲ್ ತಿಮ್ಮಯ್ಯ ಪ್ರತಿಮೆ ನಿರ್ಮಾಣವಾಗಿ, ಉದ್ಘಾಟನೆಯಲ್ಲಿ ಭಾಗಿಯಾಗಲು ಆಗ ಕೇಂದ್ರ ಸಚಿವರಾಗಿದ್ದ ಎಸ್.ಎಂ.ಕೃಷ್ಣ ಅವರು ಒಂದು ದಿನ ಮುಂಚಿತವಾಗಿಯೇ ಬಂದಿದ್ದು ವಿಶೇಷವಾಗಿತ್ತು' ಎಂದು ಅಂದಿನ ದಿನಗಳನ್ನು ನೆನಪಿಸಿಕೊಂಡರು.



**ಭೀಕರವಾದ ಬರಗಾಲ ಬಂದಿದ್ದಾಗ ಎಸ್.ಎಂ.ಕೃಷ್ಣ ಅವರು ಭಾಗಮಂಡಲ-ತಲಕಾವೇರಿ ಕ್ಷೇತ್ರದ ಅಭಿವೃದ್ಧಿಗೆ ಚಿಂತನೆ ನಡೆಸಿ, ಅದಕ್ಕೊಂದು ಅಸ್ತಿಭಾರ ಹಾಕಿ, ಯೋಜನೆ ರೂಪಿಸಿದ್ದರು. ನಂತರದ ಕಾಲದಲ್ಲಿ ಹಂತಹಂತವಾಗಿ ಕ್ಷೇತ್ರ ಬೆಳವಣಿಗೆ ಕಂಡಿತು**

**-ಕೆ.ಜಿ.ಬೋಪಯ್ಯ, ಬಿಜೆಪಿಯ ಹಿರಿಯ ಮುಖಂಡ**

---

# 29ರಿಂದ ನಗರದಲ್ಲಿ ಸಿಪಿಎಂ ಸಮ್ಮೇಳನ

• **ಉದಯವಾಹಿನಿ, ತುಮಕೂರು**

ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ರಾಜ್ಯ ಸಮ್ಮೇಳನ ನಗರದಲ್ಲಿ ಡಿ. 29ರಿಂದ 31ರ ವರೆಗೆ ಮೂರು ದಿನ ನಡೆಯಲಿದೆ.

ನಗರದ ಜನ ಚಳವಳಿ ಕೇಂದ್ರದಲ್ಲಿ ಸಿಪಿಎಂ ಪಕ್ಷದ 24ನೇ ರಾಜ್ಯ ಸಮ್ಮೇಳನದ ಲಾಂಛನವನ್ನು ಪಕ್ಷದ ರಾಜ್ಯ ಕಾರ್ಯಕಾರಿ ಮಂಡಳಿ ಸದಸ್ಯ ಮೀನಾಕ್ಷಿ ಸುಂದರಂ ಬಿಡುಗಡೆ ಮಾಡಿ ಮಾತನಾಡಿದರು.

ರಾಜ್ಯದ ಎಲ್ಲಾ ಭೌಗೋಳಿಕ ಪ್ರದೇಶಗಳಲ್ಲಿ ಸಮಗ್ರವಾದ ಹಾಗೂ ಸಮಾನವಾದ ಅಭಿವೃದ್ಧಿ ಯೋಜನೆಗಳನ್ನು ರೂಪಿಸಬೇಕು. ಸಮಾನವಾದ ಅಭಿವೃದ್ಧಿಯನ್ನು ರೂಪಿಸದ ಕಾರಣ ಜಿಲ್ಲೆಗಳಲ್ಲಿ ಅಸಮಾನತೆ ಹೆಚ್ಚಾಗಿದ್ದು ಉದ್ಯೋಗಾವಕಾಶ ಸೃಷ್ಟಿಯಾಗುತ್ತಿಲ್ಲ ಎಂದು ಅವರು ಆತಂಕ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ

ನಿರುದ್ಯೋಗಿಗಳು ನಗರಗಳಿಗೆ ವಲಸೆ ಬಂದು ನಗರಗಳಲ್ಲಿ ಕೊಳೆಗೇರಿಗಳು ನಿರ್ಮಾಣವಾಗುತ್ತಿವೆ, ಬಡವರ ಸಂಖ್ಯೆ ಹೆಚ್ಚಾಗುತ್ತಿದೆ.

ಬೆಂಗಳೂರಿನಲ್ಲಿ ತಲಾ ಆದಾಯ 7.50 ಲಕ್ಷ ಇದ್ದರೆ, ತುಮಕೂರಿನ ತಲಾ ಆದಾಯ 2 ಲಕ್ಷ ಇದೆ. ಇದು ಅಸಮಾನತೆಯ ಬೆಳವಣಿಗೆ, ಅಭಿವೃದ್ಧಿಯ ಹಿನ್ನಡೆಯನ್ನು ತೋರಿಸುತ್ತದೆ. ಬಂಡವಾಳ ಶಾಹಿಗಳಿಗೆ ಅನುಕೂಲವಾಗುವಂತೆ ನಗರ ಕೇಂದ್ರೀಕೃತ ಅಭಿವೃದ್ಧಿಯು ಅಸಮಾನತೆಯನ್ನು ಹೆಚ್ಚಿಸುತ್ತಿದೆ ಎಂದು ಹೇಳಿದರು.

---

# ಬೀದಿ ದೀಪಗಳಿಲ್ಲದೇ ಕತ್ತಲೆ ಕೂಪವಾದ ರಸ್ತೆಗಳು: ಬಸ್ಸಿನ ಸೌಲಭ್ಯವೂ ಇಲ್ಲ

## ★ ಗ್ರಾಮದಲ್ಲಿ ಬಹುತೇಕ ಪರಿಶಿಷ್ಟ ಜಾತಿಗೆ ಸೇರಿದ 41 ಮನೆಗಳಿದ್ದು ಸುಮಾರು 325 ಜನಸಂಖ್ಯೆ ಇದೆ

• **ಉದಯವಾಹಿನಿ, ಮುಳಬಾಗಿಲು**

ಬೀದಿ ದೀಪಗಳಿಲ್ಲದೇ ಕತ್ತಲೆ ಕೂಪವಾದ ರಸ್ತೆಗಳು, ಸೂಕ್ತ ಚರಂಡಿ ವ್ಯವಸ್ಥೆ ಇಲ್ಲದೆ ರಸ್ತೆಗೇ ಹರಿಯುವ ಚರಂಡಿ ನೀರು, ಎಲ್ಲಿ ನೋಡಿದರೂ ಕಸ ಕಡ್ಡಿ, ಪೊದೆಗಳು... ಕುಡಿಯಲೂ ನೀರಿಲ್ಲದಂತಹ ದಟ್ಟ ಅವ್ಯವಸ್ಥೆ ತುಂಬಿರುವ ಗ್ರಾಮವನ್ನು ನೋಡಬೇಕೆಂದರೆ ತಾಲ್ಲೂಕಿನ ಗುಡಿಪಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಗ್ಗಲನ ಗ್ರಾಮಕ್ಕೆ ಬರಬೇಕು. ಗ್ರಾಮದಲ್ಲಿ ಬಹುತೇಕ ಪರಿಶಿಷ್ಟ ಜಾತಿಗೆ ಸೇರಿದ 41 ಮನೆಗಳಿದ್ದು ಸುಮಾರು 325 ಜನಸಂಖ್ಯೆ ಇದೆ.

ಹೆಸರಿಗಷ್ಟೇ ಕೆಲವರು ಚಪ್ಪಡಿಗಳಲ್ಲಿ ಮನೆಗಳನ್ನು ಕಟ್ಟಿಕೊಂಡಿದ್ದರೆ ಎಲ್ಲಿ ನೋಡಿದರೂ ಬಹುತೇಕ ಪ್ಲಾಸ್ಟಿಕ್ ಪೇಪರನ್ನು ಹೊಡ್ಡ ಹಾಗೂ ಹಳೆಯ ಬಟ್ಟೆಗಳು ಹಾಗೂ ಸೀರೆಗಳನ್ನೇ ಹೊದಿಕೆಯಾಗಿಸಿಕೊಂಡಿರುವ ಗುಡಿಸಿಲುಗಳೇ ಕಣ್ಣಿಗೆ ಕಾಣುತ್ತವೆ.

ಗ್ರಾಮದಲ್ಲಿ ಹೆಸರಿಗೆ ಎರಡು ಬೀದಿಗಳಿದ್ದರೂ ಎರಡೂ ಬೀದಿಗಳಲ್ಲಿ ಸಿಮೆಂಟ್ ಕಿತ್ತಿಹೋಗಿದ್ದು, ಕಲ್ಲು-ಮಣ್ಣಿನ ಹಳ್ಳ ದಿನ್ನೆಗಳಿಂದ ಕೂಡಿದೆ. ಇರುವ ಒಂದೇ ಒಂದು ಚರಂಡಿಯಲ್ಲಿ ಹುಲ್ಲು ಹಾಗೂ ಗಿಡಗಂಟೆಗಳು ಬೆಳೆದು ನಿಂತಿದ್ದು, ಚರಂಡಿಯಿಂದ ನೀರು ಹರಿದು ಹೋಗಲೂ ಆಗದಂತಹ ಸ್ಥಿತಿ ಇದೆ.

### ಶಾಲೆಯ ಆವರಣವೇ ಆಸರೆ

**ಇಲ್ಲಿಯೂ ಗ್ರಾಮ ಪಂಚಾಯಿತಿ ಅಧಿಕಾರಿಗಳ ಕರ್ತವ್ಯ ಲೋಪ ಎದ್ದು ಕಾಣುತ್ತದೆ. ಗ್ರಾಮದಲ್ಲಿ ಸುಮಾರು 15 ಗುಡಿಸಿಲುಗಳಿದ್ದು ಪಂಚಾಯಿತಿಯಿಂದ ವಸತಿ ಸೌಲಭ್ಯಗಳನ್ನು ಪಡೆಯಬೇಕೆಂದರೆ 20ರಿಂದ 25 ಸಾವಿರ ಹಣ ನೀಡಬೇಕು. ಹೀಗೆ ಮನೆ ಮಾಡಿಕೊಡುವ ಆಸೆ ತೋರಿಸಿ ಈಗಾಗಲೇ ಐದಾರು ಜನರಿಂದ 10 ರಿಂದ ?25 ಸಾವಿರ ಹಣ ಪಡೆದಿದ್ದರೂ ಮನೆಯ ಮಾತು ಇನ್ನೂ ದೂರವೇ ಉಳಿದಿದೆ. ಮಳೆ ಬಂದರೆ ಶಾಲೆಯ ಆವರಣವೇ ಆಸರೆ: ಗ್ರಾಮದಲ್ಲಿ ಮಳೆ ಬಂದರೆ ಚರಂಡಿ ಹಾಗೂ ಬೀದಿಗಳ ವ್ಯವಸ್ಥೆ ಇಲ್ಲದ ಕಾರಣ ಮಳೆಯ ನೀರು ಗುಡಿಸಲುಗಳಿಗೆ ನುಗ್ಗುತ್ತದೆ.**



ಉದಯವಾಹಿನಿ ಚಿತ್ರ

**ಊರ ತುಂಬ ಗುಡಿಸಲುಗಳೇ:** ಗ್ರಾಮದಲ್ಲಿರುವ 41 ಮನೆಗಳಲ್ಲಿ 15 ಮನೆಗಳು ಗುಡಿಸಲುಗಳೇ ಆಗಿವೆ. ಒಳಗೆ ಪ್ರವೇಶಿಸಿದರೆ ತಲೆ ಎತ್ತಿ ನಿಂತುಕೊಳ್ಳಲೂ ಆಗದಂತಹ ಪರಸ್ಥಿತಿ ಇದೆ. ಬಹುತೇಕ ಗುಡಿಸಿಲುಗಳಲ್ಲಿ ಸೌದೆಯ ಒಲೆಗಳೇ ಇದ್ದು ಒಲೆಯ ಹೊಗೆಯಿಂದ ಒಳಗಿರುವಷ್ಟು ಹೊತ್ತು ಉಸಿರು ಕಟ್ಟಿಸುವ ಸ್ಥಿತಿ ಇದೆ.

ಕೇಂದ್ರ ಸರ್ಕಾರ ಈಚೆಗೆ ಉಜ್ವಲ ಯೋಜನೆಯ ಮೂಲಕ ಎಲ್ಲಾ ಮನೆಗಳಿಗೂ ಅನಿಲ ಸಂಪರ್ಕ ವ್ಯವಸ್ಥೆಯನ್ನು ಉಚಿತವಾಗಿ ಕಲ್ಪಿಸಿದ್ದರೂ ಗ್ರಾಮದ ಬಹುತೇಕ ಮನೆಗಳಿಗೆ ಗ್ಯಾಸ್ ಸೌಲಭ್ಯವೂ ಲಭ್ಯವಾಗಿಲ್ಲ. ಯೋಜನೆಗಳನ್ನು ಜನರಿಗೆ ತಲುಪಿಸಬೇಕಾದ ಗ್ರಾಮ ಪಂಚಾಯಿತಿ ಕಗ್ಗಲನತ್ತ ಗ್ರಾಮದತ್ತ ತಿರುಗಿಯೂ ನೋಡಿದಂತಿಲ್ಲ.

**ಇಲ್ಲದ ಶೌಚಾಲಯ ಸೌಲಭ್ಯ:** ಈಚೆಗೆ ಕೋಲಾರ ಜಿಲ್ಲೆ ಶೌಚ ಮುಕ್ತ ಜಿಲ್ಲೆಯಾಗಿ ಶ್ಲಾಘನೆಗೆ ಒಳಗಾಗಿತ್ತು. ಆದರೆ ಗ್ರಾಮದಲ್ಲಿ ಕೇವಲ ಮೂರು ಅಥವಾ ನಾಲ್ಕು ಮನೆಗಳಿಗೆ ಶೌಚಾಲಯ ಸೌಲಭ್ಯವಿದ್ದರೆ ಉಳಿದ ಬಹುತೇಕ ಮಂದಿ ಬಯಲು ಶೌಚಾಲಯವನ್ನೇ ಅವಲಂಭಿಸಿದ್ದಾರೆ. ಗ್ರಾಮದಲ್ಲಿ ಚರಂಡಿ ವ್ಯವಸ್ಥೆ ಇಲ್ಲದ ಕಾರಣ ಮನೆಗಳಿಂದ ಹೊರ ಬರುವ ಚರಂಡಿ ನೀರು ರಸ್ತೆಯ ಮೇಲೆ ಎಲ್ಲೆಂದರಲ್ಲಿ ಹರಿದು ಹೋಗುತ್ತದೆ. ಹೀಗಾಗಿ ಮಳೆಯ ಸಮಯದಲ್ಲಿ ಗುಡಿಸಲು ನಿವಾಸಿಗಳು ತಮ್ಮ ಮನೆಯ ಸಾಮಾಗ್ರಿಗಳ ಸಮೇತ ಗ್ರಾಮದ ಶಾಲೆಯ ಆವರಣದಲ್ಲಿ ತಂಗಬೇಕಾದ ಸ್ಥಿತಿ ಇದೆ ಎಂದು ಗ್ರಾಮಸ್ಥ ಕಾಂತರಾಜ್ ಅಳಲು ತೋಡಿಕೊಂಡರು.

**ಉಸಿರು ಕಟ್ಟಿಸುವ ಸ್ಥಿತಿ**

ಕೋಳಿ ಗೂಡಲ್ಲ ಇದು ಕಗ್ಗಲನತ್ತ ಗ್ರಾಮದಲ್ಲಿರುವ ಗುಡಿಸಲು ಗ್ರಾಮಕ್ಕೆ ಡಾಂಬರು ರಸ್ತೆಯೂ ಇಲ್ಲ ಬಸ್ಸೂ ಇಲ್ಲ, ಇನ್ನು ಗುಡಿಪಲ್ಲಿ ಗ್ರಾಮದಿಂದ ಸುಮಾರು ಮೂರು ಕಿಲೋಮೀಟರ್ ಹಾಗೂ ಮುಳಬಾಗಿಲು ಗೂಕುಂಟೆ ಮಾರ್ಗದ ರಸ್ತೆಯಿಂದ ಸುಮಾರು ಮೂರು ಕಿಲೋಮೀಟರ್ ದೂರದಲ್ಲಿರುವ ಗ್ರಾಮಕ್ಕೆ ಇದುವರೆಗೂ ಡಾಂಬರು ರಸ್ತೆಯೂ ಇಲ್ಲ.

**ಬಸ್ಸಿನ ಸೌಲಭ್ಯವೂ ಇಲ್ಲ. ಮಕ್ಕಳು ವಯೋವೃದ್ಧರು ಸೇರಿದಂತೆ ಸಾಮಾನ್ಯ ಜನ ಕಾಲ್ನಡಿಗೆಯಲ್ಲಿ ಸಂಚರಿಸುವ ಸ್ಥಿತಿ ಇದೆ. ಹೀಗಾಗಿ ಎಷ್ಟೋ ಮಂದಿಗೆ ಕಾಯಿಲೆ ಬಂದರೂ ಅಷ್ಟು ದೂರ ನಡೆಯಲಾಗದ ಕಾರಣ ಮನೆಗಳಲ್ಲಿಯೇ ನಾಟಿ ಔಷಧದ ಮೊರೆ ಹೋಗುವುದಿದೆ. ವಿದ್ಯಾರ್ಥಿಗಳು, ಶಾಲೆಯ ಶಿಕ್ಷಕರು ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಪ್ರತಿನಿತ್ಯ ಕಾಲ್ನಡಿಗೆಯಲ್ಲಿ ಸಂಚರಿಸುತ್ತಿರುವುದು ಅನಿವಾರ್ಯ ಎಂದು ನೋವು ತೋಡಿಕೊಳ್ಳುತ್ತಾರೆ**

**-ನಾರಾಯಣ ಸ್ವಾಮಿ, ಗ್ರಾಮಸ್ಥ**

---

# ಮಿನಿ ನ್ಯೂಸ್

## ಕೋಡಿ ಗೇಟ್ ಬಂದ್‌ಗೆ ರೈತರ ಮನವಿ

• **ಉದಯವಾಹಿನಿ ದೇವನಹಳ್ಳಿ**

ಇಲ್ಲಿನ ಅಮಾನಿಕೆರೆ ಭರ್ತಿಯಾಗಿ ಕೋಡಿ ಹರಿಯಲು ಆರಂಭವಾಗಿ ಒಂದೂವರೆ ತಿಂಗಳು ಕಳೆದಿದೆ. ಹೊರಗೆ ಹರಿದು ಬಿಡುತ್ತಿರುವ ನೀರು ಬಂದ್ ಮಾಡಬೇಕು ಎಂದು ಸ್ಥಳೀಯರು ಮನವಿ ಮಾಡಿದ್ದಾರೆ. ಅಮಾನಿಕೆರೆಗೆ ಎರಡು ಕಡೆಗಳಲ್ಲಿ ಕೋಡಿ ಇದೆ. ಚಿಕ್ಕನಹಳ್ಳಿ ಬಳಿಯಿರುವ ಕೋಡಿ ಬಳಿ ಎತ್ತಿನಹೊಳೆ ಯೋಜನೆಯ ಅಧಿಕಾರಿಗಳು ಗೇಟ್ ಅಳವಡಿಸಿದ್ದಾರೆ. ಈ ಗೇಟ್‌ನಲ್ಲಿ ಅರ್ಧ ಅಡಿಯಷ್ಟು ನೀರು ನಿರಂತರವಾಗಿ ಹೊರಗೆ ಹರಿಯಬಿಡಲಾಗುತ್ತಿದ್ದು, ಕೆರೆಯಲ್ಲಿ ಒಂದು ಅಡಿಯಷ್ಟು ನೀರು ಕಡಿಮೆಯಾಗಿದೆ.

ಈ ಕೆರೆಗೆ ಬೇರೆ ಕೆರೆಗಳಿಂದ ನೀರು ಹರಿದು ಬರಲ್ಲ. ಜೊತೆಗೆ ಮುಂದಿನ ದಿನಗಳಲ್ಲಿ ಮಳೆಯಾಗುವ ಖಚಿತತೆಯೂ ಇಲ್ಲ. ಹೀಗಾಗಿ, ಕೆರೆಯಿಂದ ನೀರು ಬಿಡುಗಡೆ ಮಾಡುವುದನ್ನು ನಿಲ್ಲಿಸಬೇಕು ಎಂದು ಸ್ಥಳೀಯ ವೆಂಕಟೇಶಪ್ಪ ಎಂಬುವರು ಒತ್ತಾಯಿಸಿದರು.

ಕೆರೆಗೆ ನೀರು ತುಂಬಿಕೊಂಡ ನಂತರ ಸುತ್ತಮುತ್ತಲಿನ ಕೊಳವೆ ಬಾವಿಗಳಲ್ಲಿ ಅಂತರ್ಜಲದ ಮಟ್ಟ ವೃದ್ಧಿಯಾಗಿರುವ ಜೊತೆಗೆ, ತೋಡುಬಾವಿಗಳಲ್ಲೂ ನೀರು ಕಾಣಿಸಿಕೊಂಡಿದೆ. ಕೆರೆಯಲ್ಲಿನ ನೀರು ಹೊರಗೆ ಹೋದರೆ ಮತ್ತು ಬೇಸಿಗೆಯಲ್ಲಿ ನೀರು ಹೆಚ್ಚು ಇಂಗುವುದರಿಂದ ಕೊಳವೆಬಾವಿಗಳಲ್ಲಿ ಅಂತರ್ಜಲದ ಮಟ್ಟ ಕುಸಿಯುತ್ತದೆ. ಕುಡಿಯುವ ನೀರಿಗೂ ತಾತ್ಪರವಾಗಲಿದೆ ಎಂದು ಕೃಷ್ಣಪ್ಪ ಮನವಿ ಮಾಡಿದರು.

## ಪೌಳಿದೊಡ್ಡಿಯಲ್ಲಿ ಹೆಬ್ಬಾವು ರಕ್ಷಣೆ

• **ಉದಯವಾಹಿನಿ ಚನ್ನಪಟ್ಟಣ**

ತಾಲ್ಲೂಕಿನ ಪೌಳಿದೊಡ್ಡಿ ಗ್ರಾಮದಲ್ಲಿ ಮಂಗಳವಾರ ರೈತರೊಬ್ಬರ ಹೊಲದಲ್ಲಿ ರಾಗಿ ಬೆಳೆ ಕಟಾವು ಮಾಡುವಾಗ ಏಳು ಅಡಿ ಉದ್ದದ ಹೆಬ್ಬಾವು ಪ್ರತ್ಯಕ್ಷವಾಗಿದ್ದು, ಇದನ್ನು ನೀಲಸಂದ್ರ ಗ್ರಾಮದ ಸ್ನೇಕ್ ಹೇಮಂತ್ ರಕ್ಷಿಸಿ ಚಿಕ್ಕಮಣ್ಣುಗುಡ್ಡೆ ಅರಣ್ಯ ಪ್ರದೇಶಕ್ಕೆ ಬಿಟ್ಟಿದ್ದಾರೆ. ಬೆಂಗಳೂರು ಗ್ರಾಮಾಂತರ ಬೀದರ್ ಚಾಮರಾಜ ನಗರ ಹೊಲದಲ್ಲಿ ರಾಗಿ ಬೆಳೆ ಕಟಾವು ಮಾಡುವಾಗ ಬೆಳೆ ಮಧ್ಯದಲ್ಲಿ ಮಲಗಿದ್ದ ಹೆಬ್ಬಾವು ನೋಡಿ ರೈತ-ಕಾರ್ಮಿಕರು ಆತಂಕಕ್ಕೊಳಗಾಗಿದ್ದಾರೆ. ನಂತರ ಅದನ್ನು ಸಾಯಿಸುವ ಬದಲು ಸ್ನೇಕ್ ಹೇಮಂತ್ ಅವರಿಗೆ ದೂರವಾಣಿ ಕರೆ ಮಾಡಿದ್ದಾರೆ. ಸ್ಥಳಕ್ಕೆ ಬಂದ ಅವರು ಹೆಬ್ಬಾವು ರಕ್ಷಿಸಿದ್ದಾರೆ.

## ರೇಷ್ಮೆನಗರಿಯಲ್ಲಿ ಸಚಿವರ ಸಭೆ ನಡೆಸಿದ್ದ ಕೃಷ್ಣ

• **ಉದಯವಾಹಿನಿ, ರಾಮನಗರ**

ಎಸ್.ಎಂ. ಕೃಷ್ಣ ಅವರು ಮುಖ್ಯಮಂತ್ರಿಯಾಗಿದ್ದ 2002ರ ಅವಧಿಯಲ್ಲಿ ರಾಜ್ಯವು ಬರಗಾಲಕ್ಕೆ ಸಾಕ್ಷಿಯಾಗಿತ್ತು. ನೀರಿನ ಕೊರತೆ ಇದ್ದಿದ್ದರಿಂದ ಆಗ ತಮಿಳುನಾಡಿಗೆ ವಾಡಿಕೆಯಂತೆ ಕಾವೇರಿ ನೀರು ಹರಿಸುವುದಿಲ್ಲ ಎಂದು ಘೋಷಿಸಿದ್ದರು. ಕಾವೇರಿ ಪರವಾಗಿ ಬೆಂಗಳೂರಿನಿಂದ ಮಂಡ್ಯದವರೆಗೆ 6 ದಿನ 100 ಕಿ.ಮೀ. ಪಾದಯಾತ್ರೆ ಹಮ್ಮಿಕೊಂಡಿದ್ದರು. ಮಾರ್ಗಮಧ್ಯೆ ರಾಮನಗರದ ಪ್ರವಾಸಿ ಮಂದಿರದಲ್ಲಿ ತಂಗಿದ್ದ ಕೃಷ್ಣ ಅವರು ತಮ್ಮ ಸಂಪುಟದ ಸಹೋದ್ಯೋಗಿಗಳೊಂದಿಗೆ ಅಲ್ಲಿಯೇ ಸಭೆ ನಡೆಸಿದ್ದರು. ರಾಜ್ಯವು ಬರದ ಸಂಕಷ್ಟದಲ್ಲಿದ್ದರೂ, ತನ್ನ ಪಾಲಿನ ನೀರನ್ನು ಕರ್ನಾಟಕ ಹರಿಸಬೇಕು ಎಂದು ತಮಿಳುನಾಡು ಸುಪ್ರೀಂಕೋರ್ಟ್ ಮೆಟ್ಟಿಲೇರಿತ್ತು.

ಕೋರ್ಟ್ ನಿತ್ಯ 1.25 ಟಿಎಂಸಿ ಅಡಿ ನೀರು ಬಿಡುವಂತೆ ರಾಜ್ಯಕ್ಕೆ ಆದೇಶಿಸಿತ್ತು. ಇದರ ವಿರುದ್ಧ ರಾಜ್ಯಾದ್ಯಂತ ರೈತರ ಪ್ರತಿಭಟನೆ ಭುಗಿಲೆದ್ದಿತ್ತು. ಕೆಲವೆಡೆ ಹಿಂಸಾಚಾರ ಶುರುವಾಗಿತ್ತು. ಒತ್ತಡಕ್ಕೆ ಮಣಿದ ಕೃಷ್ಣ ಅವರು ನೀರು ಹರಿಸುವುದಿಲ್ಲ ಎಂದು ಘೋಷಿಸಿದ್ದರು. ರೈತರ ಹೋರಾಟಕ್ಕೆ ದನಿಯಾಗಿ 2002ರ ಅಕ್ಟೋಬರ್‌ನಲ್ಲಿ ಬೆಂಗಳೂರಿನಿಂದ ಮಂಡ್ಯದ ಕೆಆರ್‌ಎಸ್ ಜಲಾಶಯದವರೆಗೆ ಪಾದಯಾತ್ರೆ ಹಮ್ಮಿಕೊಂಡಿದ್ದರು. ಆಗ ರಾಮನಗರದಲ್ಲಿ ಒಂದು ದಿನ ವಾಸ್ತವ್ಯ ಮಾಡಿದ್ದರು. ಅವರೊಂದಿಗೆ ಸಚಿವರ ದಂಡು ರಾಮನಗರದಲ್ಲಿ ಬೀಡು ಬಿಟ್ಟಿತ್ತು. ಆಗ ಸಹೋದ್ಯೋಗಿಗಳೊಂದಿಗೆ ಸಭೆ ನಡೆಸಿ ಕೆಲ ತೀರ್ಮಾನಗಳನ್ನು ಕೈಗೊಂಡಿದ್ದರು ಎನ್ನುತ್ತಾರೆ ಜಿಲ್ಲೆಯ ಹಿರಿಯ ರಾಜಕಾರಣಿಗಳು.

## ಶಾಸಕರ ಮನೆ ಮುಂದೆ ತಮಟೆ ಚಳವಳಿ

• **ಉದಯವಾಹಿನಿ, ತುಮಕೂರು**

ಪರಿಶಿಷ್ಟ ಜಾತಿಯವರಿಗೆ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಡಿ. 14ರಂದು ರಾಜ್ಯದ ಎಲ್ಲಾ ಶಾಸಕರ ಮನೆ ಮುಂದೆ ತಮಟೆ ಚಳವಳಿ, ಡಿ. 16ರಂದು ಬೆಳಗಾವಿಯಲ್ಲಿ ಮಾದಿಗ ಸಮುದಾಯದ ಮುಖಂಡರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಮಾದಿಗ ಜನಾಂಗದ ಒಕ್ಕೂಟದ ಮುಖಂಡ ಹೊಸಕೋಟೆ ನಟರಾಜ್ ತಿಳಿಸಿದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಎರಡು ತಿಂಗಳಲ್ಲಿ ಒಳ ಮೀಸಲಾತಿ ಜಾರಿ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ಕೊಟ್ಟಿದ್ದರು. ಆದರೆ ಅಧಿಕಾರಕ್ಕೆ ಬಂದು ಒಂದೂವರೆ ವರ್ಷ ಕಳೆದರೂ ಈವರೆಗೂ ಜಾರಿ ಮಾಡಿಲ್ಲ.

ಅನಗತ್ಯವಾಗಿ ವಿಳಂಬ ನೀತಿ ಅನುಸರಿಸಲಾಗುತ್ತಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದರು. ಒಳ ಮೀಸಲಾತಿ ಜಾರಿ ಸಂಬಂಧ ಸುಪ್ರೀಂ ಕೋರ್ಟ್ ತೀರ್ಪಿನ ನಂತರವೂ ಸಾಕಷ್ಟು ಕಾರಣಗಳನ್ನು ಹೇಳಿಕೊಂಡು ಬರಲಾಗುತ್ತಿದೆ.

ಬೆಳಗಾವಿಯಲ್ಲಿ ನಡೆಯುವ ಸಮಾವೇಶದಲ್ಲಿ ಪಕ್ಷಾತೀತವಾಗಿ ಮುಖಂಡರು ಭಾಗವಹಿಸಲಿದ್ದಾರೆ ಎಂದು ಹೇಳಿದರು. ಮುಖಂಡರಾದ ಪಿ.ಎನ್.ರಾಮಯ್ಯ, ಗೋವಿಂದಪ್ಪ, ಆಶಾ ಉಪಸ್ಥಿತರಿದ್ದರು.

## ವಿದ್ಯಾರ್ಥಿ ಸಾವು: ತನಿಖೆಗೆ ಒತ್ತಾಯ

• **ಉದಯವಾಹಿನಿ, ತುಮಕೂರು**

ಕೊರಟಗೆರೆ ತಾಲ್ಲೂಕು ಬಜ್ಜನಹಳ್ಳಿಯ ಏಕಲವ್ಯ ವಸತಿ ಶಾಲೆಯಲ್ಲಿ ವಿದ್ಯಾರ್ಥಿ ಅನುಮಾನಾಸ್ಪದವಾಗಿ ಮೃತಪಟ್ಟ ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ಒಪ್ಪಿಸುವಂತೆ ರಾಷ್ಟ್ರೀಯ ಬುಡಕಟ್ಟು ಬೇಡರ ಪಡೆ ಒತ್ತಾಯಿಸಿದೆ. ಅಭಿಷೇಕ್ ಎಂಬ ವಿದ್ಯಾರ್ಥಿ ಮಲಗಿದ್ದಲ್ಲೇ ಉಸಿರು ಚೆಲ್ಲಿದ್ದರು. ಈ ಸಾವು ಹಲವು ಅನುಮಾನಗಳನ್ನು ಹುಟ್ಟು ಹಾಕಿದೆ. ಮೂಗಿನಿಂದ ರಕ್ತ, ಬಾಯಿಯಿಂದ ನೊರೆ ಬಂದಿದೆ. ಖಾಸಗಿ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ.

ಈವರೆಗೆ ನಿಖರ ಕಾರಣ ಬಹಿರಂಗಪಡಿಸಿಲ್ಲ. ಜಿಲ್ಲಾ ಆಡಳಿತ ಪ್ರಕರಣ ಮುಚ್ಚಿಹಾಕಲು ಹೊರಟಿದೆ ಎಂದು ಬೇಡರ ಪಡೆಯ ರಾಷ್ಟ್ರೀಯ ಅಧ್ಯಕ್ಷ ಮರಳೂರು ನಾಗರಾಜು, ರಾಜ್ಯ ಅಧ್ಯಕ್ಷ ಮಾರಣ್ಣ ಪಾಳೇಗಾರ ಆರೋಪಿಸಿದ್ದಾರೆ. 'ವಿದ್ಯಾರ್ಥಿ ಕುಟುಂಬದ ಸದಸ್ಯರಿಗೆ ಉದ್ಯೋಗ ನೀಡುತ್ತೇವೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಿ.ಪರಮೇಶ್ವರ ನೀಡಿದ ಭರವಸೆ ಈಡೇರಿಲ್ಲ. ಎಫ್‌ಎಸ್‌ಎಲ್ ವರದಿ ಬರುವ ತನಕ ಕಾಯದೆ ಸಾವಿಗೆ ಕಾರಣರಾದವರ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ಕಾಡಾನೆ ಹಾವಳಿ ನಿಯಂತ್ರಿಸದಿದ್ದರೆ ಉಗ್ರ ಹೋರಾಟ

## ಸರ್ಕಾರ, ಅಧಿಕಾರಿಗಳ ವಿರುದ್ಧ ಆಕ್ರೋಶ, ಬೇಲೂರು ಬಂದ್, ರೈತರ ಬೆಳೆ ನಾಶ, ಜೀವಹಾನಿಗೆ ಬೆಲೆಯಿಲ್ಲ: ದೂರು

• ಉದಯವಾಹಿನಿ, ಬೇಲೂರು

ಕಾಡಾನೆಗಳ ಉಪಟಳಕ್ಕೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಆಗ್ರಹಿಸಿ ಹಾಸನದ ಹೇಮಾವತಿ ಪ್ರತಿಮೆ ಬಳಿ ಹಮ್ಮಿಕೊಂಡಿರುವ ಧರಣಿ ಸತ್ಯಾಗ್ರಹಕ್ಕೆ ತೆರಳುವ ಬೈಕ್, ಆಟೋ ಜಾಥಾಕ್ಕೆ ತಾಲ್ಲೂಕಿನ ಬಿಕ್ಕೋಡು ಗ್ರಾಮದಲ್ಲಿ ಜಯಕರ್ನಾಟಕ ಸಂಘಟನೆ ರಾಜ್ಯ ಘಟಕದ ಅಧ್ಯಕ್ಷ ಬಿ.ಎನ್. ಜಗದೀಶ್ ಮಂಗಳವಾರ ಚಾಲನೆ ನೀಡಿದರು.


ಉದಯವಾಹಿನಿ ಚಿತ್ರ

**ಐದು ದಿನಗಳ ಧರಣಿ ಸತ್ಯಾಗ್ರಹ**

ಬಿ.ಎನ್.ಜಗದೀಶ್ ಮಾತನಾಡಿ, ಬೇಲೂರು, ಆಲೂರು, ಸಕಲೇಶಪುರ ತಾಲ್ಲೂಕಿನಲ್ಲಿ ಕಾಡಾನೆಗಳ ದಾಳಿ ನಾಲ್ಕು ದಶಕಗಳಿಂದ ನಿರಂತರವಾಗಿ ನಡೆ ಯುತ್ತಿದ್ದು, ಕೇಂದ್ರ, ರಾಜ್ಯ ಸರ್ಕಾರಗಳು ಈ ಬಗ್ಗೆ ಗಮನಹರಿಸುತ್ತಿಲ್ಲ. ಹಾಸನ ಜಿಲ್ಲೆಯವರು ಇಬ್ಬರು ಮುಖ್ಯಮಂತ್ರಿಗಳು, ಒಬ್ಬರು ಪ್ರಧಾನಿ, ಹಲವಾರು ಜನ ಸಚಿವರಾದರೂ ಈ ಸಮಸ್ಯೆಗೆ ತಾರ್ಕಿಕ ಅಂತ್ಯ ಕಾಣಿಸಲು ವಿಫಲರಾಗಿದ್ದಾರೆ.

ಕಾಡಾನೆಗಳಿಂದ ಪ್ರಾಣ ಹಾನಿಯಾದ ಕುಟುಂಬದವರು, ಬೆಳೆ ಹಾನಿಯಾದ ರೈತರು, ಸರ್ಕಾರಕ್ಕೆ ಭಿಕ್ಷೆ ಬೇಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ವ್ಯಕ್ತ ಪಡಿಸಿದರು. ಜಿಲ್ಲೆಯ ಜನಪ್ರತಿನಿಧಿಗಳು ಸದನ ದಲ್ಲಿ ಈ ಬಗ್ಗೆ ಮಾತನಾಡಬೇಕು.

ಕಾಡಾನೆ ಸಮಸ್ಯೆಯನ್ನು ಬಗೆಹರಿಸದಿದ್ದರೆ, ಈ ಹೋರಾಟ ವಿಧಾನಸೌಧ ಚಲೋ ಆಗುತ್ತದೆ' ಎಂದು ಎಚ್ಚರಿಸಿದರು. ಜಯ ಕರ್ನಾಟಕ ಸಂಘಟನೆ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಕೆ.ಆರ್. ಸೋಮೇಶ್ ಮಾತನಾಡಿ, ಸರ್ಕಾರ ಕಾಡಾನೆ ಸ್ಥಳಾಂತರ ಮಾಡದೇ,

**ಹೇಮಾವತಿ ಪ್ರತಿಮೆ ಬಳಿ ಧರಣಿ ಆರಂಭ**

**ಜಿಲ್ಲೆಯಲ್ಲಿ ಕಾಡಾನೆ ಹಾವಳಿಗೆ ಶಾಶ್ವತ ಪರಿಹಾರ ಒದಗಿಸದ ಸರ್ಕಾರದ ಧೋರಣೆ ಖಂಡಿಸಿ ಜಯ ಕರ್ನಾಟಕ ಸಂಘಟನೆ ನೇತೃತ್ವದಲ್ಲಿ 5 ದಿನಗಳ ಧರಣಿ ಸತ್ಯಾಗ್ರಹವನ್ನು ಆರಂಭಿಸಲಾಯಿತು.**

ರೇಡಿಯೊ ಕಾಲರ್ ಅಳವಡಿಸಿ ಕಣ್ಮರೆಸುವ ಕೆಲಸ ಮಾಡುತ್ತಿದೆ. ಜಿಲ್ಲೆಯ ಶಾಸಕರು ಮತ್ತು ಸಂಸದರು ಈ ಬಗ್ಗೆ ಹೆಚ್ಚಿನ ಗಮನ ನೀಡಬೇಕು ಎಂದು ಒತ್ತಾಯಿಸಿದರು.ಬಿಕ್ಕೋಡು ಆಲೂರು ಮಾರ್ಗವಾಗಿ 400 ಕ್ಕೂ ಹೆಚ್ಚು ಬೈಕ್ ಹಾಗೂ ಆಟೋ ರ್‍ಯಾಲಿ ಮೂಲಕ ಬಂದ ಜಯ ಕರ್ನಾಟಕ ಸದಸ್ಯರು ಧರಣಿಯಲ್ಲಿ ಪಾಲ್ಗೊಂಡರು. ಧರಣಿಗು ಮುನ್ನ ಮಹಾತ್ಮ ಗಾಂಧಿ ಪ್ರತಿಮೆಗೆ ಪುಷ್ಪಾರ್ಚನೆ ನೆರವೇರಿಸಿದರು.

ನಿಧನ ರಾದ ಮಾಜಿ ಮುಖ್ಯಮಂತ್ರಿ ಎಸ್.

> **ರಾಷ್ಟ್ರೀಯ ವನ್ಯಜೀವಿ ಸಂರಕ್ಷಣಾ ಕಾಯ್ದೆಗೆ ತಿದ್ದುಪಡಿ ಮಾಡಿ ಸಮಸ್ಯೆಗೆ ಶಾಶ್ವತ ಪರಿಹಾರ ನೀಡಬೇಕಿದೆ. ಕಾಯ್ದೆಗೆ ತಿದ್ದುಪಡಿ ತರುವಂತೆ ಜನಪ್ರತಿನಿಧಿಗಳಿಗೆ ನಾವೇ ಬೀದಿಯಲ್ಲಿ ಕೂರಿಸಿಕೊಂಡು ಪಾಠ ಹೇಳಬೇಕಿದೆ**
>
> **-ಬಳ್ಳೂರು ಸ್ವಾಮಿಗೌಡ**
> **ರೈತ ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ**

ಎಂ. ಕೃಷ್ಣ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ನಂತರ ಜಯ ಕರ್ನಾಟಕ ರಾಜ್ಯ ಘಟಕದ ಅಧ್ಯಕ್ಷ ಜಗದೀಶ್ ಮಾತನಾಡಿ ಐದು ದಿನದವರೆಗೂ ಸಂಘಟನೆಯಿಂದ ಧರಣಿ ಆರಂಭಿಸಲಾಗಿದೆ.

ರಾಜ್ಯದಲ್ಲಿ ಮಾಜಿ ಮುಖ್ಯಮಂತ್ರಿ ಎಸ್‌ಎಂ ಕೃಷ್ಣ ನಿಧನದ ಹಿನ್ನೆಲೆಯಲ್ಲಿ ಶೋಕಾಚರಣೆ ಇರುವುದರಿಂದ ಸಂಘಟನೆಯಿಂದ ಮೌನ ಧರಣಿಯನ್ನು ನಡೆಸಲಾಗುವುದು. ನಂತರದ ದಿನಗಳಲ್ಲಿ ಸರ್ಕಾರ ಎಚ್ಚರಿಸಲು ನಮ್ಮ ಹೋರಾಟ ತೀವ್ರಗೊಳ್ಳಲಿದೆ' ಎಂದು ತಿಳಿಸಿದರು.

ಕಾಫಿ ಬೆಳೆಗಾರರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಅದ್ದೂರಿ ಕುಮಾರ್, ಪ್ರಧಾನ ಕಾರ್ಯದರ್ಶಿ ಕೌರಿ ಸಂಜಯ್, ಭೂಮಿಪುತ್ರ ಬೆಳೆಗಾರರ ಸಂಘದ ಅಧ್ಯಕ್ಷ ರೇಣುಕಣ್ಣ, ಜಯಕರ್ನಾಟಕ ಸಂಘಟನೆ ತಾಲ್ಲೂಕು ಘಟಕದಅಧ್ಯಕ್ಷ ಸನ್ಯಾಸಿಹಳ್ಳಿ ರಾಜಣ್ಣ ಮಾತನಾಡಿದರು. ಜಯ ಕರ್ನಾಟಕ ಸಂಘಟನೆ ರಾಜ್ಯ ಘಟಕದ ಕಾರ್ಯಾಧ್ಯಕ್ಷ ರಾಮಚಂದ್ರಯ್ಯ, ಉಪಾಧ್ಯಕ್ಷ ಮುನಿಸ್ವಾಮಿ, ಪ್ರಧಾನ ಕಾರ್ಯದರ್ಶಿ ಗಂಗನ್ ರಾಜ್, ಸಂಘಟನಾ ಕಾರ್ಯದರ್ಶಿ ದಿವ್ಯಾ, ಜಿಲ್ಲಾ ಘಟಕದ ಉಪಾಧ್ಯಕ್ಷ ಶ್ರೇಯಸ್, ತಾಲ್ಲೂಕು ಘಟಕದ ಕಾರ್ಯಾಧ್ಯಕ್ಷ ಬಿ.ಎಲ್.ಲಕ್ಷ್ಮಣ್, ಪ್ರಧಾನ ಕಾರ್ಯದರ್ಶಿ ಮಂಜು, ಗೌರವಾಧ್ಯಕ್ಷ ಐ.ಎನ್. ಅರುಣ್ ಕುಮಾರ್, ಪದಾಧಿಕಾರಿಗಳಾದ ನಾರ್ವೆ ಮಲ್ಲಿಕಾರ್ಜುನ್, ಸನ್ಯಾಸಿಹಳ್ಳಿ ನರೇಂದ್ರ, ಶಶಿ, ಗುರು ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ರೈತರು ಇದ್ದರು.

# ಕಬ್ಬಿನ ದರ ನಿಗದಿಪಡಿಸದಿದ್ದಲ್ಲಿ ಹೆದ್ದಾರಿ ಬಂದ್

• ಉದಯವಾಹಿನಿ, ಬೀದರ್

ಜಿಲ್ಲೆಯಲ್ಲಿ ಸಕ್ಕರೆ ಕಾರ್ಖಾನೆಗಳು ಕಳೆದ ಒಂದು ತಿಂಗಳಿಂದ ಕಬ್ಬು ನುರಿಸುವಿಕೆ ಆರಂಭಿಸಿದ್ದರೂ ಇದುವರೆಗೆ ದರ ನಿಗದಿಪಡಿಸಿಲ್ಲ. ನಾಲ್ಕೈದು ದಿನಗಳಲ್ಲಿ ಬೆಲೆ ನಿಗದಿಪಡಿಸದಿದ್ದಲ್ಲಿ ಹೈದರಾಬಾದ್- ಮುಂಬೈ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಹೋರಾಟ ನಡೆಸಬೇಕಾಗುತ್ತದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಎಚ್ಚರಿಕೆ ನೀಡಿದೆ.

ರೈತ ಸಂಘದ ಮುಖಂಡರು ನಗರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರ ಹೆಸರಿಗೆ ಬರೆದ ಮನವಿ ಪತ್ರವನ್ನು ಜಿಲ್ಲಾಧಿಕಾರಿಗೆ ಸಲ್ಲಿಸಿದರು. ಕಬ್ಬಿಗೆ ದರ ನಿಗದಿಪಡಿಸಿದ ಕಾರಣ ಕಬ್ಬು ಬೆಳೆಗಾರರು ಗೊಂದಲಕ್ಕೆ ಒಳಗಾಗಿದ್ದಾರೆ. ಕೂಡಲೇ ದರ ನಿಗದಿಪಡಿಸಬೇಕು. ಈಗಾಗಲೇ ಉದ್ದು, ಸೋಯಾ ಬೆಳೆ ಮಳೆಯಿಂದ ನಾಶವಾಗಿದೆ. ಸರ್ವೆ ಮಾಡಿ, ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆ. ಆದರೆ, ಸರ್ಕಾರದ ವತಿ


ಉದಯವಾಹಿನಿ ಚಿತ್ರ

ಯಿಂದ ಇಲ್ಲಿಯವರೆಗೆ ಯಾವ ರೈತರಿಗೂ ಪರಿಹಾರ ಸಿಕ್ಕಿಲ್ಲ. ಕೂಡಲೇ ರೈತರ ಖಾತೆಗೆ ಬೆಳೆ ಹಾನಿ ಪರಿಹಾರ ಜಮೆ ಮಾಡಬೇಕು ಎಂದು ಆಗ್ರಹಿಸಿದರು. ಬೀದರ್ ಜಿಲ್ಲೆಯಲ್ಲಿ 13,295 ಎಕರೆ ಜಮೀನು ವಕ್ಫ್ ಆಸ್ತಿ ಎಂದು ರೈತರ ಪಹಣಿಯಲ್ಲಿ ನಮೂದಿಸಲಾಗಿದೆ. ಆದರೆ, ಒಂದು ತಿಂಗಳ ಹಿಂದೆ ಮುಖ್ಯಮಂತ್ರಿಗಳು ಅದನ್ನು ಪಹಣಿಯಿಂದ ತೆಗೆಯಲು ಜಿಲ್ಲಾಧಿಕಾರಿಗಳಿಗೆ ಆದೇಶ ಮಾಡಿರುತ್ತಾರೆ. ಆದರೆ, ಇದುವರೆಗೆ ಪಹಣಿಯಿಂದ ವಕ್ಫ್ ಆಸ್ತಿ ಎಂದು ನಮೂದಾಗಿರುವುದನ್ನು ತೆಗೆದಿರುವುದಿಲ್ಲ. ಕೂಡಲೇ ಅದನ್ನು ತೆಗೆಸಬೇಕು ಎಂದು ಒತ್ತಾಯಿಸಿದರು.

ಮೇಲಿನ ಬೇಡಿಕೆಗಳು ಶೀಘ್ರ ಈಡೇರದಿದ್ದಲ್ಲಿ

**ಪ್ರಕ್ರಿಯೆಯನ್ನು ಕೈಬಿಡಬೇಕು**

**ಬಿಎಸ್‌ಎಸ್ ಸಕ್ಕರೆ ಕಾರ್ಖಾನೆ ಡಿಸಿಸಿ ಬ್ಯಾಂಕ್ ವಶಕ್ಕೆ ತೆಗೆದುಕೊಂಡಿದೆ. ಅದನ್ನು ಮಾರಾಟ ಮಾಡಲು ಹುನ್ನಾರ ನಡೆಸಲಾಗುತ್ತಿದೆ. ಈ ಪ್ರಕ್ರಿಯೆಯನ್ನು ಕೈಬಿಡಬೇಕು. ಜಿಲ್ಲಾ ಉಸ್ತುವಾರಿ ಸಚಿವರು ಸರ್ಕಾರದಿಂದ ಅನುದಾನ ತಂದು ಕಾರ್ಖಾನೆ ಮತ್ತೆ ಆರಂಭಿಸಬೇಕು ಎಂದು ಒತ್ತಾಯಿಸಿದರು.**

ಅಂತಿಮ ಆಯ್ಕೆಯೆಂಬಂತೆ ಹೆದ್ದಾರಿ ಬಂದ್ ಮಾಡಿ ಪ್ರತಿಭಟಿಸಲಾಗುವುದು ಎಂದು ಎಚ್ಚರಿಸಿದರು. ರೈತ ಸಂಘದ ಜಿಲ್ಲಾಧ್ಯಕ್ಷ ಸಿದ್ರಾಮಪ್ಪ ಆಣದೂರೆ, ಪ್ರಧಾನ ಕಾರ್ಯದರ್ಶಿ ದಯಾನಂದ ಸ್ವಾಮಿ ಸಿರ್ಸಿ,ಸುಮಂತ ಗ್ರಾಮಲೆ, ಧೂಳಪ್ಪ ಆಣದೂರ ಮತ್ತಿತರರು ಹಾಜರಿದ್ದರು.

# ರಾಗಿ ಖರೀದಿಗೆ ನೋಂದಣಿ ಆರಂಭ

• ಉದಯವಾಹಿನಿ, ಹಿರೀಸಾವೆ

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದಿಂದ ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿಗೆ ಹೆಸರು ನೋಂದಣಿ ಆರಂಭವಾಗಿದೆ. ಇಲ್ಲಿನ ಕೃಷಿ ಪತ್ತಿನ ಸಹ ಕಾರ ಸಂಘದ ಆವರಣದ ಎಪಿಎಂಸಿ ನೋಂದಣಿ ಕೇಂದ್ರದಲ್ಲಿ ಸೋಮವಾರ 200, ಮಂಗಳವಾರ 75 ರೈತರು ನೋಂದಣಿ ಮಾಡಿಸಿದ್ದಾರೆ.

ಮಂಗಳವಾರ ಆಗಾಗ್ಗೆ ಸರ್ವರ್ ಸಮಸ್ಯೆಯಿಂದಾಗಿ ನೋಂದಣಿ ನಿಧಾನವಾಯಿತು.

2024-25ನೇ ಸಾಲಿನ ಮುಂಗಾರು ಋತುವಿನಲ್ಲಿ ರೈತರು ಬೆಳೆದಿರುವ ಎಫ್‌ಎಕ್ಯೂ ಗುಣಮಟ್ಟದ ರಾಗಿ ಮತ್ತು ಭತ್ತವನ್ನು ಸರ್ಕಾರವು ಕನಿಷ್ಠ ಬೆಂಬಲ ಬೆಲೆಯಲ್ಲಿ ಖರೀದಿಸಲು ನೋಂದಣಿ ಕೇಂದ್ರವನ್ನು ತೆರೆದಿದೆ. 4,290, 2,300, (2) 2,320 ಬೆಂಬಲ ಬೆಲೆಯನ್ನು ಸರ್ಕಾರ ಘೋಷಣೆ ಮಾಡಿದೆ. ರಾಜ್ಯದಿಂದ ನಾಲ್ಕೂವರೆ ಲಕ್ಷ ಟ ನ್ ರಾಗಿ ಖರೀದಿಗೆ ಒಪ್ಪಿಗೆ ನೀಡಲಾಗಿದೆ. ಈ ಭಾಗದಲ್ಲಿ ಹೆಚ್ಚಾಗಿ ರಾಗಿ ಬೆಳೆಯುತ್ತಾರೆ. ಒಂದು ಎಕರೆಗೆ 10 ಕ್ವಿಂಟ ಲ್‌ನಂತೆ ಒಬ್ಬ ರೈತ ಗರಿಷ್ಠ 20 ಕ್ವಿಂಟಲ್


ಉದಯವಾಹಿನಿ ಚಿತ್ರ

ರಾಗಿ ಮಾರಾಟ ಮಾಡಲು ಅವಕಾಶ ನೀಡಿದೆ. ರೈತರು ನೋಂದಣಿ ಕೇಂದ್ರಕ್ಕೆ ಬಂದು, ಆಧಾರ್ ಕಾರ್ಡ್ ನಕಲು ಪ್ರತಿ ಮತ್ತು ಕೃಷಿ ಇಲಾಖೆ ನೀಡಿರುವ ಫ್ರೂಟ್ ಐಡಿ ಸಂಖ್ಯೆಯನ್ನು ನೀಡಿ, ಬೆರಳಚ್ಚು ನೀಡುವ ಮೂಲಕ ಹೆಸರನ್ನು ನೋಂದಾಯಿಸಿಕೊಳ್ಳುತ್ತಿದ್ದಾರೆ.

ಚನ್ನರಾಯಪಟ್ಟಣ ವಿಭಾಗದ ಹಿರೀಸಾವೆ, ನುಗ್ಗೆಹಳ್ಳಿ, ಶ್ರವಣಬೆಳಗೊಳ, ಉದಯಪುರ, ಬಾಗೂರು, ಗಂಡಸಿ, ಚನ್ನರಾಯ ಪಟ್ಟಣ, ಹೊಳೇನರಸಿಪುರ, ಹಳ್ಳಿಮೈಸೂರು ಸೇರಿ 9 ಕಡೆಯಿಂದ ನೋಂದಣಿ ಮಾಡಲಾಗುತ್ತಿದೆ. ಜನವರಿ 1 ರಿಂದ ಮಾರ್ಚ್ 31ರವರೆಗೆ ರಾಗಿ ಖರೀದಿ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ಅಧಿಕಾರಿ ಕಾವ್ಯ ತಿಳಿಸಿದರು. ಹೆಸರು ನೋಂದಣಿಗೆ ಉತ್ತಮ ಪ್ರತಿಕ್ರಿಯೆಯಿದೆ' ಎಂದು ಕೆಎಸ್‌ಎಂಎಫ್‌ನ ಅಧಿಕಾರಿ ರವೀಂದ್ರ ಮಾಹಿತಿ ನೀಡಿದರು.

# ಮಲೆನಾಡಲ್ಲಿ ವ್ಯಾಪಕಗೊಂಡ ಎಲೆ ಚುಕ್ಕಿ ರೋಗ: ಅರ್ಧಕ್ಕರ್ಧ ಅಡಿಕೆ ಇಳುವರಿ ಕುಂಠಿತ

• ಉದಯವಾಹಿನಿ, ಹೊಸನಗರ

ಈ ಬಾರಿ ಮಳೆ ಹೆಚ್ಚಳದಿಂದ ಮಲೆನಾಡಿನ ಅಡಿಕೆ ತೋಟಗಳಲ್ಲಿ ತೇವಾಂಶ ಹೆಚ್ಚಿದ್ದು ಎಲೆ ಚುಕ್ಕಿ ರೋಗ ಭಾದೆಯೂ ವ್ಯಾಪಿಸುತ್ತಿದೆ. ಮಳೆಗಾಲದ ನಂತರವೂ ರೋಗ ಹೆಚ್ಚುತ್ತಿರುವುದರಿಂದ ಅದರ ತೀವ್ರತೆಗೆ ಮಲೆನಾಡಿನ ಅಡಿಕೆ ತೋಟಗಳು ಬರಿದಾಗುತ್ತಿವೆ. ಫಸಲು ನಮ್ಮ, ಇಳುವರಿ ಕುಂಠಿತದಿಂದ ಅಡಿಕೆ ಬೆಳೆಗಾರರು ಆತಂಕದಲ್ಲಿದ್ದಾರೆ.

**ಮತ್ತೆ ವಕ್ಕರಿಸಿತು ರೋಗ:** ಎಲೆಚುಕ್ಕಿ ರೋಗ ಕಳದ ನಾಲ್ಕು ವರ್ಷಗಳಿಂದ ತನ್ನ ತೀವ್ರತೆ ಹೆಚ್ಚಿಸಿಕೊಳ್ಳುತ್ತಲೇ ಇದೆ. ಕಳೆದ ವರ್ಷ ಮಳೆ ಕಡಿಮೆ ಆಗಿದ್ದ ಕಾರಣ ತುಸು ಇಳಿಕೆಯಾಗಿದ್ದ ರೋಗ ಬಾಧೆ, ಡಿಸೆಂಬರ್‌ನಲ್ಲಿ ಸುರಿದ ಮಳೆಯ ಕಾರಣ ಮತ್ತೆ ಉಗ್ರರೂಪ ತಾಳಿದೆ. ಇದರಿಂದ ಕೃಷಿಯನ್ನೇ ನಂಬಿದ್ದ ರೈತರು ಚಿಂತಾ ಕ್ರಾಂತರಾಗಿದ್ದಾರೆ.

**ಮರಗಳು ಸಾಯುತ್ತಿವೆ:** ಅಕ್ಟೋ ಬರ್ ತಿಂಗಳಿಂದ ರೋಗ ಹರಡುತ್ತಿದ್ದು ಇದೀಗ ರೋಗ ಬಾಧೆಯಿಂದ


ಉದಯವಾಹಿನಿ ಚಿತ್ರ

ಮರಗಳು ಸಾಯುತ್ತಿವೆ. ರೋಗ ಬಾಧೆಯಲ್ಲಿದ್ದ ಮರಗಳು ಪೋಷಣೆ ಇಲ್ಲದಂತಾಗಿ ಇಳುವರಿ ಕುಂಠಿತವಾಗಿದೆ. ಫಸಲು ಬೆಳವಣಿಗೆ ಆಗದೇ ಧರೆಗುರುಳುತ್ತಿವೆ. ಗರಿಗಳು ಸಂಪೂರ್ಣ ಒಣಗುತ್ತಿವೆ. ಶಿವಮೊಗ್ಗ, ಉತ್ತರ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು ಸೇರಿದಂತೆ 5 ಜಿಲ್ಲೆಗಳಲ್ಲಿ ಎಲೆಚುಕ್ಕಿ ರೋಗದ ಬಾಧೆ ಹೆಚ್ಚಾಗಿದೆ. ಒಟ್ಟಾರೆ ರಾಜ್ಯದಲ್ಲಿ 53,000 ಹೆಕ್ಟೇರ್‌ಗಿಂತಲೂ

> **ಎಲೆಚುಕ್ಕಿ ರೋಗ ವ್ಯಾಪಿಸಿದ್ದ ಅಡಿಕೆ ತೋಟಗಳನ್ನು ಪ್ರಾಯೋಗಿಕವಾಗಿ ಗುರುತಿಸಿ ನಿರ್ವಹಣೆ ಮಾಡುವ ಕೆಳದಿ ಶಿವಪ್ಪ ನಾಯಕ ತೋಟಗಾರಿಕೆ ವಿಶ್ವವಿದ್ಯಾಲಯದ ಕಾರ್ಯವೂ ಪ್ರಯೋಜನಕ್ಕೆ ಬಾರದಂತಾಗಿದೆ. ಎಡತೊಟ್ಟು ರೈತ ವೆಂಕಟಾಚಲ ಭಟ್ ತೋಟದ ಅಡಿಕೆ ಮರಗಳ ಕಡಿಯಲು ಮುಂದಾದ ಸಂದರ್ಭ ವಿಶ್ವವಿದ್ಯಾಲಯವೇ ಪ್ರಾಯೋಗಿಕವಾಗಿ ಆ ತೋಟದ ನಿರ್ವಹಣೆ ಕೈಗೆತ್ತಿಕೊಂಡಿತ್ತು. ಅದೇನೂ ಉಪಯೋಗವಾಗಿಲ್ಲ**
>
> **-ಪುರುಷೋತ್ತಮ ಬೆಳ್ಳಕ್ಕ , ರೈತ**

ಹೆಚ್ಚು ಪ್ರದೇಶದಲ್ಲಿ ಎಲೆಚುಕ್ಕಿ ರೋಗದಿಂದ ಹಾನಿ ಸಂಭವಿಸಿದೆ ಎಂದು 2023-2024ನೇ ಸಾಲಿನಲ್ಲಿ ಅಂದಾಜಿಸಲಾಗಿತ್ತು. ಆದರೆ ವ್ಯಾಪಿಸುವ ವೇಗ ಗಮನಿಸಿದರೆ ಎಲೆಚುಕ್ಕಿ ರೋಗ ಹೆಚ್ಚಳವಾಗುವ ಆತಂಕ ವಿದೆ ಎಂದು ತೋಟಗಾರಿಕೆ ಇಲಾಖೆ ಮೂಲಗಳು ಹೇಳುತ್ತವೆ.

2019 ರಲ್ಲಿ ಕಂಡು ಬಂದ ಎಲೆಚುಕ್ಕಿ ರೋಗ ಹತೋಟಿಗೆ ತರಲು ಸರ್ಕಾರಕ್ಕೆ ಸಾಧ್ಯವಾಗದ ಕಾರಣ ರೈತರು ವಿಶ್ವಾಸ ಕಳೆದುಕೊಳ್ಳುತ್ತಿದ್ದಾರೆ. ತಜ್ಞರ ಸಮಿತಿ ಕೊಟ್ಟ ಶಿಫಾರಸ್ಸು ಯಶಸ್ಸು ಕಂಡಿಲ್ಲ-ಸುರೇಶ್ ಅಡಿಕೆ ಬೆಳೆಗಾರ ಸಂಪೇಮನೆನಾಲ್ಕು ವರ್ಷದಿಂದ ಅಡಿಕೆ ಫಸಲು ಇಳಿಮುಖ ಆಗುತ್ತಿದೆ. ಈ ಬಾರಿ ಕೊಳೆರೋಗ ಮತ್ತು ಎಲೆ ಚುಕ್ಕಿ ರೋಗ ವ್ಯಾಪಕವಾಗಿದೆ. ಫಸಲು ನಷ್ಟವಾಗಿದೆ. ಅಡಿಕೆಯನ್ನೇ ನಂಬಿದ ನಮ್ಮಂತ ರೈತರ ಬದುಕು ನಿಧಾನವಾಗಿ ಬೀದಿಗೆ ಬರುತ್ತಿದೆ ಕೇಂದ್ರಕ್ಕೆ 222 ಕೋಟಿ ಪ್ರಸ್ತಾವ ಎಲೆಚುಕ್ಕಿ ರೋಗದ ಬಗ್ಗೆ ಸಮಗ್ರ ಅಧ್ಯಯನಕ್ಕಾಗಿ 7 ಜನ ತಜ್ಞರ ತಂಡವನ್ನು ಸರ್ಕಾರ ನೇಮಕ ಮಾಡಿತ್ತು.

ಅಧ್ಯಯನ ತಂಡ ಸುಳ್ಯ ಉಡುಪಿ ಕಳಸ ಕೊಪ್ಪ ಶೃಂಗೇರಿ ಸಾಗರ ಸಿದ್ದಾಪುರ ಉತ್ತರಕನ್ನಡ ನಗರ ನಿಟ್ಟೂರು ಸೇರಿದಂತೆ ವಿವಿಧ ಭಾಗಕ್ಕೆ ತೆರಳಿ ಅಧ್ಯಯನ ನಡೆಸಿತ್ತು. ರೋಗಬಾಧಿತ ತೋಟಗಳಿಗೆ ಔಷಧಿ ಸಿಂಪಡಣೆ ಕಾರ್ಯಾಗಾರ ಪೋಷಕಾಂಶ ನಿರ್ವಹಣೆಗಾಗಿ 222 ಕೋಟಿ ಅನುದಾನ ಬಿಡುಗಡೆಗಾಗಿ ಕೇಂದ್ರದ ಕೃಷಿ ಸಚಿವಾಲಯ ರಾಜ್ಯ ಸರ್ಕಾರಕ್ಕೆ 2023 ಸೆಪ್ಟೆಂಬರ್ ತಿಂಗಳಲ್ಲಿ ಪ್ರಸ್ತಾಪ ಸಲ್ಲಿಸಿತ್ತು. ಪ್ಯಾಕೇಜ್ ಇನ್ನೂ ಬಿಡುಗಡೆಯಾಗಿಲ್ಲ ಎಂದು ತಜ್ಞರ ತಂಡದಲ್ಲಿದ್ದ ಕಾಸರಗೋಡು ಕೇಂದ್ರೀಯ ಅಡಿಕೆ ಸಂಶೋಧನಾ ಕೇಂದ್ರದ ವಿಜ್ಞಾನಿ ಡಾ.ವಿನಾಯಕ ಹೆಗಡೆ ಹೇಳುತ್ತಾರೆ.

# ಮುರುಡೇಶ್ವರ: ಪ್ರವಾಸಕ್ಕೆ ಹೋಗಿದ್ದ ಕೋಲಾರದ ಮೂವರು ವಿದ್ಯಾರ್ಥಿನಿಯರ ಮೃತದೇಹ ಪತ್ತೆ

• ಉದಯವಾಹಿನಿ, ಭಟ್ಕಳ

ತಾಲ್ಲೂಕಿನ ಮುರುಡೇಶ್ವರದ ಸಮುದ್ರದಲ್ಲಿ ಮುಳುಗಿ ಕಣ್ಮರೆಯಾಗಿದ್ದ ಕೋಲಾರ ಜಿಲ್ಲೆಯ ಮುಳುಬಾಗಿಲು ತಾಲ್ಲೂಕಿನ ಎಂ.ಕೊತ್ತೂರು ಗ್ರಾಮದ ಮೊರಾರ್ಜಿ ವಸತಿ ಶಾಲೆಯ ಮೂವರು ವಿದ್ಯಾರ್ಥಿಗಳಾದ ದೀಕ್ಷಾ ಜೆ(15), ಲಾವಣ (15) ಹಾಗು ವಂದನಾ (15) ಮೃತದೇಹ ಬುಧವಾರ ಮುರುಡೇಶ್ವರದ ಸಮುದ್ರದಲ್ಲಿ ಪತ್ತೆಯಾಗಿದೆ.

ಬುಧವಾರ ಬೆಳಿಗ್ಗೆ 11.30ಕ್ಕೆ ಇಬ್ಬರು ವಿದ್ಯಾರ್ಥಿ ನಿಯರ ಮೃತದೇಹ ಆರದ.ಎನ್.ಎಸ್ ರೆಸಿಡೆನ್ಸಿ ಹಿಂಬದಿ ಕಲ್ಲುಬಂಡೆ ಸಮೀಪ ಪತ್ತೆಯಾದರೆ ಇನ್ನೋರ್ವ ವಿದ್ಯಾರ್ಥಿನಿ ಮೃತದೇಹ ಪಕ್ಕದ ಗುಡ್ಡದ ಕೆಳಗಡೆ ಪತ್ತೆಯಾಗಿದೆ. ಕರಾವಳಿ ಪೊಲೀಸ್ ಕಾವಲು ಪಡೆ ಸಿಪಿಐ ಕುಸುಮಧರಾ ಅವರ ನೇತ್ರತ್ವದಲ್ಲಿ ಪತ್ತೆ ಕಾರ್ಯ ನಡೆಸಲಾಗಿತ್ತು. ಮಂಗಳವಾರ ಸಂಜೆ ಶ್ರಾವಂತಿ ಗೋಪಾಲಪ್ಪ (15) ಸಾವನಪ್ಪಿದ್ದಳು.


ಉದಯವಾಹಿನಿ ಚಿತ್ರ

**ಕರಾವಳಿ ಕಾವಲು ಪೊಲೀಸ್ ಪಡೆ ಹಾಗೂ ಸ್ಥಳೀಯ ಮೀನುಗಾರರ ಸಹಾಯದಿಂದ ಬುಧವಾರ ಮುಂಜಾನೆಯಿಂದ ಮೃತದೇಹದ ಪತ್ತೆ ಕಾರ್ಯಾಚರಣೆ ಆರಂಭಿಸಲಾಗಿತ್ತು.**

ಜಿಲ್ಲಾಧಿಕಾರಿ ಲಕ್ಷ್ಮಿಪ್ರಿಯಾ, ಉಪವಿಭಾಗಾ ಧಿಕಾರಿ ಡಾ.ನಯನಾ ಸ್ಥಳದಲ್ಲಿಯೇ ಇದ್ದು ಮೃತದೇಹ ಪತ್ತೆ ಕಾರ್ಯಾಚರಣೆಗೆ ಮಾರ್ಗದರ್ಶನ ನೀಡಿದರು.

# ಹೂಳು ತುಂಬಿದ ಶಿವಮೊಗ್ಗ ಚರಂಡಿಗಳು: ಸ್ವಚ್ಛತೆ ಮರೀಚಿಕೆ

• ಉದಯವಾಹಿನಿ, ಗಜೇಂದ್ರಗಡ

ಸಮೀಪದ ಲಕ್ಕಲಕಟ್ಟಿ ಗ್ರಾಮದಲ್ಲಿ ಸ್ವಚ್ಚತೆ ಮರೀಚಿಕೆಯಾಗಿದ್ದು ಅವ್ಯವಸ್ಥೆಗಳ ಆಗರವಾಗಿದೆ. ಚರಂಡಿಗಳಲ್ಲಿ ಹೂಳು ತುಂಬಿಕೊಂಡಿದ್ದು ಮಳೆ ಸಂದ ರ್ಭದಲ್ಲಿ ಸಾಕಷ್ಟು ಅವಾಂತರ ಸೃಷ್ಟಿಯಾಗುತ್ತದೆ. ಮಹಿಳೆಯರಿಗೆ ಸಾಮೂಹಿಕ ಶೌಚಾಲಯ ಇಲ್ಲ, ಇದರಿಂದ ಮಹಿಳೆಯರು ಗ್ರಾಮದಿಂದ ಸುಮಾರು ಅರ್ಧ ಕಿ.ಮೀ ದೂರ ನಡೆದು ಗಿಡ, ಮುಳ್ಳುಕಂಟಿಗಳ ಮರೆಯಲ್ಲಿ ಶೌಚಕ್ಕೆ ಹೋಗಬೇಕಾದ ಸ್ಥಿತಿ ಇದೆ.

**ಅವ್ಯವಸ್ಥೆ ಆಗರ ಲಕ್ಕಲಕಟ್ಟಿ**

ಸರ್ಕಾರಿ ಪ್ರಾಥಮಿಕ ಶಾಲೆ ಮುಂದಿನ ಮುಖ್ಯ ರಸ್ತೆ ಹಾಗೂ ದಿಂಡೂರ ಗ್ರಾಮ ಸಂಪರ್ಕಿಸುವ ರಸ್ತೆಯಲ್ಲಿರುವ ಚರಂಡಿಗಳು ಶಿಥಿಲಗೊಂಡಿವೆ. ಇದರಲ್ಲಿ ತ್ಯಾಜ್ಯ ತುಂಬಿಕೊಂಡು ಮುಂದೆ ಹರಿಯಲಾಗದೆ ಕೊಳಚೆ ನೀರು ರಸ್ತೆ ಮೇಲೆಯೇ ಹರಿಯುತ್ತಿದೆ. ಹರಸಾಹಸಪಟ್ಟು ತ್ಯಾಜ್ಯದ ನೀರು ದಾಟಿಕೊಂಡು ವಿದ್ಯಾರ್ಥಿಗಳು ಶಾಲೆಗೆ ತೆರಳುವಂತಾಗಿದೆ. ಅಲ್ಲದೆ,


ಉದಯವಾಹಿನಿ ಚಿತ್ರ

ತ್ಯಾಜ್ಯದ ನೀರು ನಿಂತು, ಅಲ್ಲಿ ಸೊಳ್ಳೆಗಳು ಉತ್ಪತ್ತಿಯಾಗಿ ಜನರಲ್ಲಿ ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಿದೆ. ಗ್ರಾಮದಲ್ಲಿ ಅಳಬಸವೇಶ್ವರ ಜಾತ್ರೆ ಅಂಗವಾಗಿ ಗ್ರಾಮದ ಎಲ್ಲಾ ಚರಂಡಿಗಳನ್ನು 15 ದಿನಗಳ ಹಿಂದೆ ಸ್ವಚ್ಚಗೊಳಿಸಲಾಗಿದೆ ಎಂದು ಗ್ರಾಮ ಪಂಚಾಯಿತಿಯವರು ಹೇಳುತ್ತಾರೆ.

ಇದರಲ್ಲಿನ ನೀರು ವಾಸನೆಯಿಂದ ಕೂಡಿದೆ. ಆನಂದ ನಗರದಲ್ಲಿ ಸರಿಯಾದ ಮೂಲ ಸೌಲಭ್ಯಗಳಿಲ್ಲ. ಅಲ್ಲದೆ, ಜನತಾ ಪ್ಲಾಟ್ ನಲ್ಲಿ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಾಗುತ್ತಿಲ್ಲ' ಎಂಬುದು ನಿವಾಸಿಗಳು ಆರೋಪ. 'ಲಕ್ಕಲಕಟ್ಟಿ ಗ್ರಾಮದಲ್ಲಿ ಅಳಬಸವೇಶ್ವರ ಜಾತ್ರೆ ಅಂಗವಾಗಿ ಪ್ರತಿವರ್ಷ ಗ್ರಾಮದ ಎಲ್ಲಾ ಕಡೆ ಸ್ವಚ್ಚತೆ ಮಾಡಿಸಲಾಗುತ್ತಿತ್ತು. ಆದರೆ ಈ ಬಾರಿ ಗ್ರಾಮದ ದಿಂಡೂರ ರಸ್ತೆ, ದೇವಸ್ಥಾನದ ಸುತ್ತ ಹಾಗೂ ಅಧ್ಯಕ್ಷರ ಮನೆಯಿರುವ ಓಣಿಯಲ್ಲಿನ ಚರಂಡಿ ಸ್ವಚ್ಚಗೊಳಿಸಿದ್ದಾರೆ.

ನಮ್ಮ ತಾಂಡಾದಲ್ಲಿನ ಚರಂಡಿಗಳನ್ನು ಸ್ವಚ್ಚಗೊಳಿಸಿಲ್ಲ ಎಂದು ಲಕ್ಕಲಕಟ್ಟಿ ತಾಂಡಾದ ನಾಯಕ ಬಪ್ಪ ರಾಠೋಡ ದೂರಿದರು.

**ಒಂದು ಘಟಕ ಮಾತ್ರ ಚಾಲನೆ**

**ಆದರೆ ದೇವಸ್ಥಾನದಿಂದ ಗ್ರಾಮ ಪಂಚಾಯಿತಿಗೆ ತೆರಳುವ ರಸ್ತೆ ಪಕ್ಕದ ಚರಂಡಿಯಲ್ಲಿ ಇನ್ನೂ ಹೂಳು ತುಂಬಿಕೊಂಡಿದೆ. ಗ್ರಾಮದಲ್ಲಿ ಎರಡು ಶುದ ಕುಡಿಯುವ ನೀರಿನ ಘಟಕಗಳಿದು ಅದರಲ್ಲಿ'ಗ್ರಾಮದಲ್ಲಿ ಎರಡು ಶುದ್ಧ ಕುಡಿಯುವ ನೀರಿನ ಘಟಕಗಳಿದ್ದು ಅದರಲ್ಲಿ ಒಂದು ಘಟಕ ಮಾತ್ರ ಚಾಲನೆಯಲ್ಲಿದೆ.**

# ಕಾಮಗಾರಿ ಪೂರ್ಣಗೊಂಡರೂ ನಿವೇಶನ ಹಂಚಿಕೆ ಸುಲಭವಲ್ಲ

## 58 ಎಕರೆ ಭೂಸ್ವಾಧೀನ ಬಾಕಿ ಇರುವುದು ಬಡಾವಣೆಗೆ ಗ್ರಹಣವಾಗಿ ಕಾಡುತ್ತಿದೆ, ಭೂಮಾಲೀಕರು ನಿವೇಶನ ಕನಸು ಸದ್ಯಕ್ಕೆ ಈಡೇರುವ ಲಕ್ಷಣಗಳಿಲ್ಲ

• ಉದಯವಾಹಿನಿ, ಚಿಕ್ಕಮಗಳೂರು

ನಗರದ ಹೊರ ವಲಯದ ಇಂದಾವರ ಬಳಿ ನಿರ್ಮಾಣ ವಾಗುತ್ತಿರುವ ಹೊಸ ಬಡಾವಣೆ ಕಾಮಗಾರಿ ಆಮೆ ಗತಿಯಲ್ಲಿ ಸಾಗಿದ್ದು, 58 ಎಕರೆ ಭೂಸ್ವಾಧೀನ ಬಾಕಿ ಇರುವುದು ಬಡಾವಣೆಗೆ ಗ್ರಹಣವಾಗಿ ಕಾಡುತ್ತಿದೆ. ಅರ್ಜಿದಾರರು ಮತ್ತು ಭೂಮಾಲೀಕರು ನಿವೇಶನ ಕನಸು ಸದ್ಯಕ್ಕೆ ಈಡೇರುವ ಲಕ್ಷಣಗಳಿಲ್ಲ.


ಉದಯವಾಹಿನಿ ಚಿತ್ರ

**ಇಂದಾವರ ಬಡಾವಣೆಗೆ ಭೂ ಗ್ರಹಣ**

ನಗರದಿಂದ ಮೂರು ಕಿಲೋ ಮೀಟರ್ ದೂರ ದಲ್ಲಿರುವ ಇಂದಾವರ ಗ್ರಾಮದ ಸುತ್ತಮುತ್ತಲ ರೈತರ ಜಮೀನಿನಲ್ಲಿ ಬಡಾವಣೆ ನಿರ್ಮಾಣವಾಗುತ್ತಿದೆ. 208 ಎಕರೆ 37 ಗುಂಟೆ ಜಾಗದಲ್ಲಿ ಹೊಸ ಬಡಾವಣೆ ತಲೆ ಎತ್ತುತ್ತಿದೆ. ಭೂಮಾಲೀಕರ ಸಹಭಾಗಿತ್ವದಲ್ಲಿ ಚಿಕ್ಕ ಮಗಳೂರು ನಗರಾಭಿವೃದ್ಧಿ ಪ್ರಾಧಿಕಾರ ಈ ಕಾಮಗಾರಿ ಆರಂಭಿಸಿದೆ. ಮೊದಲ ಹಂತದಲ್ಲಿ ನಿವೇ ಶನ ಅಭಿವೃದ್ಧಿ, ರಸ್ತೆ, ಮಳೆ ನೀರು ಹರಿಯಲು ಚರಂಡಿ, ರಸ್ತೆ ಬದಿಯ ಚರಂಡಿಗಳನ್ನು ನಿರ್ಮಿಸಲು ಒಟ್ಟುಕೋಟಿ ಮೊತ್ತದ 130.50 40, 42 39.50 ಕೋಟಿ ಮೊತ್ತದ ಮೂರು ಪ್ಯಾಕೇಜ್‌ಗಳಾಗಿ ವಿಂಗ ಡಿಸಲಾಗಿದೆ. ರಸ್ತೆಗಳನ್ನು ಗುರುತಿಸಿರುವ ಜಾಗದ ಎರಡೂ ಬದಿಯಲ್ಲಿ ಚರಂಡಿ ನಿರ್ಮಿಸುವ ಕಾಮಗಾರಿ ಒಂದೂವರೆ ವರ್ಷಗಳಿಂದ ನಡೆಯು ತ್ತಲೇ ಇದೆ. ಎರಡನೇ ಹಂತದಲ್ಲಿ ವಿದ್ಯುತ್ ಸಂಪರ್ಕ ಮತ್ತು ಕುಡಿಯುವ ನೀರು ಪೂರೈಸಲು ಅಗತ್ಯ ಪೈಪ್‌ಲೈನ್ ಕಾಮಗಾರಿ, 26 ಕೋಟಿ ಮೊತ್ತದಲ್ಲಿ ವಿದ್ಯುತ್ ಮಾ ರ್ಗದ ಕಾಮಗಾರಿ ಕೈಗೆತ್ತಿಕೊಳ್ಳಲು ಉದ್ದೇಶಿಸಿದೆ.

ಒಟ್ಟಾರೆ 180 ಕೋಟಿ ಮೊತ್ತದ ಯೋಜನೆ ಇದಾಗಿದೆ. 2023ರ ಮಾರ್ಚ್ 25ರಂದು ಕಾಮಗಾರಿಗೆ ಚಾಲನೆ ನೀಡಿದರೂ ಇನ್ನೂ ಪೂರ್ಣಗೊಂಡಿಲ್ಲ. ಕಾಮಗಾರಿ ಪೂರ್ಣಗೊಂಡರೂ ನಿವೇಶನ ಹಂಚಿಕೆ ಸುಲಭವಲ್ಲ. 2,589 ನಿವೇಶನಗಳನ್ನು ಅಭಿವೃದ್ಧಿ ಪಡಿಸಲು ಸಿಡಿಎ ಉದ್ದೇಶಿಸಿದೆ. ಆದರೆ, ಇನ್ನೂ

> **ಈಗ 208 ಎಕರೆಯಲ್ಲಿ ನಿವೇಶನಗಳು ಮತ್ತು ರಸ್ತೆಗಳು ನಿರ್ಮಾಣವಾಗುತ್ತಿವೆ. ಬಾಕಿ 58 ಎಕರೆ ಬಿಟ್ಟುಕೊಡಲು ರೈತರು ಒಪ್ಪದಿದ್ದರೆ ಈ ಬಡಾವಣೆಗೆ ತೆರಳಲು ಸಂಪರ್ಕ ರಸ್ತೆಯೇ ಇಲ್ಲವಾಗಲಿದೆ. ಮಲ್ಲಂದೂರು ರಸ್ತೆ ಬದಿಯಲ್ಲಿ ಇರುವ ಜಾಗವನ್ನು ಕೊಡಲು ರೈತರು ಒಪ್ಪುತ್ತಿಲ್ಲ. ಆದ್ದರಿಂದ ಬಡಾವಣೆಗೆ ತೆರಳಲು ರಸ್ತೆಯೇ ಇಲ್ಲವಾಗಲಿದೆ. ರೈತರ ಮನವೊಲಿಸುವ ಪ್ರಯತ್ನವನ್ನು ಸರ್ಕಾರ ಮಾಡಬೇಕು ಎಂಬುದು ಸ್ಥಳೀಯರ ಒತ್ತಾಯ. ರೈತರ ಮನವೊಲಿಸಲು ಪ್ರಯತ್ನ ಬಾಕಿ 58 ಎಕರೆ ಜಮೀನು ಪಡೆದುಕೊಳ್ಳಲು ರೈತರ ಮನವೊಲಿಸುವ ಪ್ರಯತ್ನ ನಡೆಯುತ್ತಿದೆ**
>
> **-ನಯಾಜ್**
> **ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ**

58 ಎಕರೆ ಜಾಗ ಸ್ವಾಧೀನ ಬಾಕಿ ಇದೆ. ಶೇ 50ರ ಪಾಲುದಾರಿಕೆಯಲ್ಲಿ ಸಹಭಾಗಿತ್ವ ಪಡೆದುಕೊಳ್ಳಲು ಈ ರೈತರು ಒಪ್ಪಿಗೆ ಸೂಚಿಸಿಲ್ಲ. ಹೆಚ್ಚಿನ ಪರಿಹಾರ ಬೇಕು ಎಂಬುದು ಅವರ ಪಟ್ಟು. ಶೇ 50ರಷ್ಟು ನಿವೇಶನ ಪಾಲುದಾರಿಕೆಯಲ್ಲಿ ಸಮ್ಮತಿ ನೀಡಿದರೆ ರೈತರಿಗೇ ಅನುಕೂಲ ಆಗಲಿದೆ. ಸರ್ಕಾರವೇ ಸ್ವಾಧೀನ ಮಾಡಿಕೊಂಡರೆ ಕಡಿಮೆ ಮೊತ್ತ ಸಿಗಲಿದೆ ಎಂಬುದು ಸಿಡಿಎ ಅಭಿಪ್ರಾಯ. ಜಾಗ ಕೊಟ್ಟಿರುವ ರೈತರು ಅತಂತ್ರ ಈಗಾಗಲೇ ಜಾಗ ಕೊಟ್ಟಿರುವ ರೈತರು ಅತಂತ್ರರಾಗಿದ್ದಾರೆ. ಇತ್ತ ಬೆಳೆ ಬೆಳೆಯಲೂ ಸಾಧ್ಯವಿಲ್ಲ ಅತ್ತ ನಿವೇಶನವೂ ಇಲ್ಲದಂತಾಗಿದೆ ಎಂದು ಬೇಸರ ವ್ಯಕ್ತಪಡಿಸುತ್ತಾರೆ.

ಭತ್ತ ಬೆಳೆಯುತ್ತಿದ್ದ ಎರಡು ಎಕರೆ ಜಮೀನನ್ನು ನಗರಾಭಿವೃದ್ಧಿ ಪ್ರಾಧಿಕಾರ ವಶಕ್ಕೆ ಪಡೆದಿದೆ. ಬಡಾವಣೆ ಅಭಿವೃದ್ಧಿಯಾದ ನಂತರ ನಮ್ಮ ಜಮೀನಿನ ಅರ್ಧದಷ್ಟು ನಿವೇಶನಗಳನ್ನು ಅಳತೆ ಮಾಡಿ ಬಿಟ್ಟು ಕೊಡಲಿದ್ದಾರೆ. ಅಲ್ಲಿಯ ತನಕ ಜೀವನ ನಡೆಸುವುದೇ ಕಷ್ಟವಾಗಿದೆ' ಎಂದು ರೈತರು ಹೇಳುತ್ತಾರೆ. 'ಭತ್ತ ಬೆಳೆದು ಜೀವನ ನಡೆಸುತ್ತಿದ್ದ ನಮಗೆ ಈಗ ಮೂರು ವರ್ಷಗಳಿಂದ ಅದೂ ಇಲ್ಲವಾಗಿದೆ. ಜಮೀನು ಸಮ ಮಾಡಿ ಲೇಔಟ್ ನಿರ್ಮಾಣ ಮಾಡುತ್ತಿದ್ದಾರೆ. ನಮ್ಮ ಜಮೀನು ಯಾವುದೆಂಬುದೇ ಗೊತ್ತಾಗದ ಸ್ಥಿತಿ ಇದೆ. ಅನ್ನಭಾಗ್ಯ ಯೋಜನೆಯ ಅಕ್ಕಿ ಮತ್ತು ಕೂಲಿಯೇ ನಮಗೆ ಗತಿಯಾಗಿದೆ' ಎಂದು ರೈತ ಮಲ್ಲಿಕಾರ್ಜುನ್ ಬೇಸರ ವ್ಯಕ್ತಪಡಿಸಿದರು.

**32 ಕೋಟಿ ಮೊತ್ತದ ಟೆಂಡರ್ ಪ್ರಕ್ರಿಯೆ ಆರಂಭ**

**50:50 ಅನುಪಾತದಲ್ಲಿ ನಿವೇಶನ ಪಡೆಯಲು ಒಪ್ಪಿದರೆ ರೈತರಿಗೆ ಅನುಕೂಲ ಆಗಲಿದೆ. ಭೂಸ್ವಧೀನ ಪ್ರಕ್ರಿಯೆ ನಡೆಸಿದರೆ ಸರ್ಕಾರದ ಮಾರ್ಗಸೂಚಿ ಪ್ರಕಾರ ಪರಿಹಾರ ಬರಲಿದೆ. ಅದು ರೈತರಿಗೆ ನಷ್ಟವಾಗಲಿದೆ. ಆದ್ದರಿಂದ ರೈತರು ಪಾಲುದಾರಿಕೆಗೆ ಒಪ್ಪಬೇಕೆಂದು ಮನವಿ ಮಾಡುತ್ತಿದ್ದೇವೆ' ಎಂದರು. ನಿರಂತರವಾಗಿ ಮಳೆಯಾಗಿದ್ದರಿಂದ ಕಾಮಗಾರಿ ವಿಳಂಬವಾಗಿದೆ. ಯುಜಿಡಿ ಡಾಂಬರ್ ಮತ್ತು ವಿದ್ಯುತ್ ಮಾರ್ಗದ ಕಾಮಗಾರಿ ಬಾಕಿ ಇದೆ. ಮಳೆ ನಿಂತಿರುವುದರಿಂದ ಈಗ ಕಾಮಗಾರಿ ಆರಂಭವಾಗಿದೆ. ವಿದ್ಯುತ್ ಉಪಕೇಂದ್ರ ನಿರ್ಮಾಣಕ್ಕೂ 32 ಕೋಟಿ ಮೊತ್ತದ ಟೆಂಡರ್ ಪ್ರಕ್ರಿಯೆ ಆರಂಭವಾಗಿದೆ ಎಂದು ಹೇಳಿದರು.**

## ಮಿನಿ ನ್ಯೂಸ್

### ಆಟವಾಡುತ್ತಲೇ ಬಾವಿಗೆ ಬಿದ್ದು ಇಬ್ಬರು ಬಾಲಕಿಯರ ಸಾವು

• ಉದಯವಾಹಿನಿ, ಚಿಕ್ಕಮಗಳೂರು

ಚಿಕ್ಕಮಂಗಳೂರಿನಲ್ಲಿ ಘೋರ ದುರಂತ ಒಂದು ನಡೆದಿದ್ದು, ಇಬ್ಬರು ಬಾಲಕಿಯರು ಆಟವಾಡುತ್ತಲೆ ಕಾಲು ಜಾರಿ ಬಾವಿಗೆ ಬಿದ್ದು ದಾರುಣವಾಗಿ ಸಾವನ್ನಪ್ಪಿರುವ ಘಟನೆ, ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲ್ಲೂಕಿನ ಅಮ್ಮಡಿ ಬಳಿಯ ಕಾಫಿ ಎಸ್ಟೇಟ್‌ನಲ್ಲಿ ನಡೆದಿದೆ. ಹೌದು ಮಧ್ಯಪ್ರದೇಶದ ನಜೀರಾಬಾದ್‌ನ ಸುನಿತಾ ಬಾಯಿ ಮತ್ತು ಅರ್ಜುನ್ ಸಿಂಗ್ ಅವರ ಮಕ್ಕಳಾದ ಸೀಮಾ(6) ಮತ್ತು ರಾಧಿಕಾ(2) ಮೃತಪಟ್ಟ ಮಕ್ಕಳು ಎಂದು ತಿಳಿದುಬಂದಿದೆ. ಮಧ್ಯಪ್ರದೇಶದಿಂದ ಬಂದು ಕೊಪ್ಪದಲ್ಲಿ ಕೂಲಿ ಕೆಲಸ ಮಾಡುತ್ತಿದ್ದ ಸೀಮಾ ದಂಪತಿ ತೋಟದ ಮನೆಯಲ್ಲಿದ್ದರು. ನಿನ್ನೆ ಮಕ್ಕಳನ್ನು ಮನೆಯಲ್ಲೇ ಬಿಟ್ಟು ತಾಯಿ ಸೀಮಾ ತೋಟದ ಕೆಲಸಕ್ಕೆ ತೆರಳಿದ್ದರು. ಸಂಜೆ 7 ಗಂಟೆ ವೇಳೆ ಮನೆಗೆ ಹಿಂದಿರುಗಿದಾಗ ಮಕ್ಕಳು ಕಾಣೆಯಾಗಿದ್ದರು. ಬಳಿಕ ಇತರ ಕಾರ್ಮಿಕರ ಜೊತೆಗೂಡಿ ಹುಡುಕಾಡಿದಾಗ 8 ಗಂಟೆ ವೇಳೆ ಬಾವಿಯಲ್ಲಿ ಮಕ್ಕಳ ಮೃತದೇಹಗಳು ಪತ್ತೆಯಾಗಿವೆ. ಈ ಬಗ್ಗೆ ಕೊಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಬಳ್ಳಾರಿ, ಬೆಳಗಾವಿ ಬಳಿಕ ರಾಯಚೂರಲ್ಲೂ ನಾಲ್ವರು ಬಾಣಂತಿಯರ ಸಾವು

• ಉದಯವಾಹಿನಿ, ರಾಯಚೂರು

ಈಗಾಗಲೇ ಬಳ್ಳಾರಿಯಲ್ಲಿ ಹಾಗೂ ಬೆಳಗಾವಿಯಲ್ಲಿ ಬಾಣಂತಿಯರ ಹಾಗೂ ಶಿಶುಗಳ ಸಾವು ಪ್ರಕರಣ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶಕ್ಕೆ ಕಾರಣವಾಗಿದೆ. ಇದರ ಬೆನ್ನಲ್ಲೇ ಇದೀಗ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕು ಸರ್ಕಾರಿ ಆಸ್ಪತ್ರೆಯಲ್ಲಿ ಕಳೆದ ಅಕ್ಟೋಬರ್ ಒಂದೇ ತಿಂಗಳಲ್ಲಿ ನಾಲ್ವರು ಬಾಣಂತಿಯರು ಸಾವನ್ನಪ್ಪಿರುವುದು ತಡವಾಗಿ ಬೆಳಕಿಗೆ ಬಂದಿದೆ.ಹೌದು ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕು ಸರ್ಕಾರಿ ಆಸ್ಪತ್ರೆಯಲ್ಲಿ ಕಳೆದ ಅಕ್ಟೋಬರ್ ತಿಂಗಳಿನಲ್ಲಿ ನಾಲ್ವರು ಬಾಣಂತಿಯರು ಹೆರಿಗೆ ದಾಖಲಾಗಿದ್ದರು ಈ ವೇಳೆ ಹೆರಿಗೆ ಬಳಿಕ ನಾಲ್ವರು ಬಾಣಂತಿಯರು ಸಾವನಪ್ಪಿದ್ದಾರೆ ಎಂದು ತಿಳಿದುಬಂದಿದೆ.

ಮೃತ ಬಾಣಂತಿಯರನ್ನು ಚಂದ್ರಕಲಾ(26), ರೇಣುಕಮ್ಮ (32), ಮೌಸಮಿ ಮಂಡಲ್(22), ಹಾಗೂ ಚೆನ್ನಮ್ಮ ಎಂದು ಗುರುತಿಸಲಾಗಿದೆ. ಕಳೆದ ಅಕ್ಟೋಬರ್ ತಿಂಗಳಲ್ಲಿ ಒಟ್ಟು 300 ಬಾಣಂತಿಯರ ಹೆರಿಗೆಯಾಗಿತ್ತು. ಅವರಲ್ಲಿ 7 ಬಾಣಂತಿಯರ ಆರೋಗ್ಯ ಸ್ಥಿತಿ ಗಂಭೀರವಾಗಿತ್ತು. ಈ ವೇಳೆ ಅ.21 ರಂದು ಚನ್ನಮ್ಮ ಅವರಿಗೆ ಸಿಜೇರಿಯನ್ ಮೂಲಕ ಹೆರಿಗೆಯಾಗಿತ್ತು. ಅದಾದ 9 ದಿನಗಳ ಬಳಿಕ ಸಾವನ್ನಪ್ಪಿದ್ದರು. ಅ.22 ರಂದು ಆರ್‌ಎಚ್ ಕ್ಯಾಂಪ್-3ರಲ್ಲಿ ಮೌಸಮಿ ಮಂಡಲ್ ಹೆರಿಗೆಯಾಗಿತ್ತು. ಬಳಿಕ ಮಾರನೇ ದಿನ ಸಾವನ್ನಪ್ಪಿದ್ದರು. ಅ.31 ರಂದು ರೇಣುಕಮ ಹೆರಿಗೆಯಾಗಿತು ಮಾರನೇ ದಿನ ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ.

### ಬಾಣಂತಿ ಸಾವು ವೈದ್ಯರ ನಿರ್ಲಕ್ಷ್ಯವೇ ಕಾರಣ: ಆರೋಪ

• ಉದಯವಾಹಿನಿ, ಚಿತ್ರದುರ್ಗ

ಬಳ್ಳಾರಿಯ ಬಿಮ್ಸ್ ಹಾಗೂ ಬೆಳಗಾವಿಯಲ್ಲಿ ಬಾಣಂತಿಯ ಸಾವು ಪ್ರಕರಣ ಈಗಾಗಲೇ ರಾಜ್ಯದಲ್ಲಿ ಭಾರಿ ಸಂಚಲನ ಸೃಷ್ಟಿಸಿದ್ದು ಇದೀಗ ಚಿತ್ರದುರ್ಗದ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯೊಬ್ಬರು ಸಾವನ್ನಪ್ಪಿರುವ ಘಟನೆ ನಡೆದಿದೆ. ಇದಕ್ಕೆ ವೈದ್ಯರ ನಿರ್ಲಕ್ಷ್ಯವೇ ಕಾರಣ ಎಂದು ಆರೋಪ ಕೇಳಿ ಬರುತ್ತಿದೆ. ಹೌದು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಜಾಗನೂರು ಹಟ್ಟಿಯ ಗ್ರಾಮದ ರೋಜಾ (25) ಮೃತ ಬಾಣಂತಿ ಎಂದು ತಿಳಿದು ಬಂದಿದೆ. ಚಿತ್ರದುರ್ಗದ ಜಿಲ್ಲಾ ಆಸ್ಪತ್ರೆಯ ವೈದ್ಯೆ ಡಾ.ರೂಪಶ್ರೀ ಎನ್ನುವವರು ರೋಜಾಗೆ ಸಿಸೇರಿಯನ್ ಮೂಲಕ ಹೆರಿಗೆ ಮಾಡಿದ್ದರು. ಹೆರಿಗೆ ಬಳಿಕ ರೋಜಾ ಮನೆಗೆ ತೆರಳಿದ್ದರು. ಇವಳ ಹೊಲಿಗೆ ಹಾಕಿದ ಭಾಗದಲ್ಲಿ ರೋಜಾಗೆ ತೀವ್ರ ನೋವು ಕಾಣಿಸಿಕೊಂಡಿದೆ. ಹೊಟ್ಟೆ ಭಾಗದಲ್ಲಿ ತೀವ್ರ ನೋವು ಹಾಗೂ ಸೋಂಕಿನಿಂದ ರೋಜಾ ಬಳಲುತ್ತಿದ್ದರು. ಅಲ್ಲದೇ ವಾಂತಿ ಭೇದಿಯಿಂದ ಕೂಡ ನೋವು ಅನುಭವಿಸುತ್ತಿದ್ದರು.ಹಾಗಾಗಿ ನಿನ್ನೆ ಜಿಲ್ಲಾ ಆಸ್ಪತ್ರೆಗೆ ಮತ್ತೆ ಬಂದು ದಾಖಲಾಗಿದ್ದರು ಎಂದು ತಿಳಿದುಬಂದಿದೆ. ಈ ಸಂದರ್ಭದಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿ ದಾಖಲಾಗಿದ್ದ ರೋಜಾ ಗೆ ವೈದ್ಯರು ಹಾಗೂ ಸಿಬ್ಬಂದಿಗಳು ಸರಿಯಾದ ರೀತಿಯಲ್ಲಿ ಸೂಕ್ತವಾದ ಚಿಕಿತ್ಸೆ ನೀಡಿಲ್ಲ, ಎಂದು ಮೃತ ರೋಜಾಳ ಪತಿ ವೆಂಕಟೇಶ್, ಸಹೋದರಿ ಶಾರದಮ್ಮ ಎನ್ನುವವರು ವೈದ್ಯರ ವಿರುದ್ಧ ಇದೀಗ ಆರೋಪ ಮಾಡುತ್ತಿದ್ದಾರೆ.

### ಅಲೆಮಾರಿಗಳಿಗೆ ಸೂರು ಒದಗಿಸಲು ಆಗ್ರಹ

• ಉದಯವಾಹಿನಿ, ಬೀದರ್

ನಗರದ ಚೌಳಿ ಕಮಾನ ಸಮೀಪ ಬೀಡು ಬಿಟ್ಟಿರುವ ಅಲೆಮಾರಿಗಳಿಗೆ ಸೂರು ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ವಿಶ್ವಕ್ರಾಂತಿ ದಿವ್ಯಪೀಠ ಸಂಘಟನೆಯ ನೇತೃತ್ವದಲ್ಲಿ ಅಲೆಮಾರಿಗಳು ಇಲ್ಲಿನ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ಕಚೇರಿ ಎದುರು ಧರಣಿ ನಡೆಸಿದರು. ಆ ನಂತರ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಸಿಂಧು ಅವರಿಗೆ ಮನವಿ ಪತ್ರ ಸಲ್ಲಿಸಿದರು. ಚೌಳಿ ಕಮಾನ್ ಸಮೀಪ ಸುಮಾರು 40 ವರ್ಷಗಳಿಂದ ಅಲೆಮಾರಿಗಳು ಟೆಂಟ್‌ಗಳಲ್ಲಿ ಬದುಕು ನಡೆಸುತ್ತಿದ್ದಾರೆ.

ಬಿಸಿಲು, ಮಳೆ, ಚಳಿಯಲ್ಲೇ ಬದು ಕು ಕಳೆ ಯುತ್ತಿದ್ದಾರೆ. 64 ಕುಟುಂಬಗಳು ಅಲ್ಲಿ ನೆಲೆಯೂರಿವೆ. 20 17ರಲ್ಲಿ ಎರಡು ಎಕರೆ ಜಮೀನು ಒದಗಿಸಿ ಶೆಡ್ ನಿರ್ಮಿಸಿಕೊಡಲು ಜಿಲ್ಲಾಡಳಿತ ನಿರ್ಧರಿಸಿತ್ತು. ಆದರೆ, ಅದು ನನೆಗುದಿಗೆ ಬಿದ್ದಿದೆ. ಇತ್ತೀ ಚೆಗೆ ಕೆಲ ಪ್ರಭಾವಿಗಳು ಜೆಸಿಬಿಯಿಂದ ಟೆಂಟ್‌ಗಳನ್ನು ತೆಗೆಯಲು ಪ್ರಯತ್ನಿಸಿದ್ದರು. ವಿರೋಧದ ನಂತರ ಸುಮ್ಮನಾಗಿದ್ದಾರೆ. ಕೂಡಲೇ ಜಿಲ್ಲಾಡಳಿತ ಅಲೆಮಾರಿಗಳಿಗೆ ಶೆಡ್ ಒದಗಿಸಲು ಮುಂದಾಗಬೇಕೆಂದು ಒತ್ತಾಯಿಸಿದರು.

### ಮಾರಕಾಸ್ತ್ರಗಳನ್ನು ಹಿಡಿದು ಬೀದಿಯಲ್ಲಿ ಹೊಡೆದಾಡಿಕೊಂಡ ಯುವಕರು

• ಉದಯವಾಹಿನಿ, ಗದಗ

ಹಾಡಹಗಲೇ ಬೀದಿಯಲ್ಲಿ ಯುವಕರಿಬ್ಬರು ಮರಕಾಸ್ತ್ರಗಳಿಂದ ಹೊಡೆದಾಡಿಕೊಂಡಿರುವ ಘಟನೆ ಗದಗ ನಗರದ ಚನ್ನಮ್ಮ ಸರ್ಕಲ್ ನಲ್ಲಿ ನಡೆದಿದೆ. ಹಣಕಾಸು ಹಾಗೂ ಕೌಟುಂಬಿಕ ಕಾರಣದಿಂದ ಇಬ್ಬರು ಯುವಕರು ಚಾಕು ಹಿಡಿದುಕೊಂಡು ಹೊಡೆದಾಡಿಕೊಂಡಿದ್ದಾರೆ ಎನ್ನಲಾಗಿದೆ. ಫಕಿರೇಶ ನಂದಿಹಳ್ಳಿ, ಗಂಗಾಧರ ಹಿರೇಮಠ ಹೊಡೆದಾಡಿಕೊಂಡ ಯುವಕರು ಮುಂಡರಗಿ ತಾಲ್ಲೂಕಿನ ಚರ್ಚಿಹಾಳ ಗ್ರಾಮದ ನಿವಾಸಿಗಳಾದ ಇಬ್ಬರೂ ಗದಗ ನಾಗರದ ಹುಡೋ ಕಾಲೋನಿಯಲ್ಲಿ ನಾಲ್ಕು ವರ್ಷಗಳಿಂದ ವಾಸವಗಿದ್ದರು.

ಫಕೀರೇಶನ ಕುತ್ತಿಗೆ, ಮುಖ, ಎದೆಗೆ ಗಂಗಾಧರ್ ಚಾಕುವಿನಿಂದ ಇರಿದಿದ್ದಾನೆ. ಗಾಯಾಳುವನ್ನು ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಗದಗ ಶಹರ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ.

**ವೃಷಭ** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು.

**ಮಿಥುನ** ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು– ಸಮಯದ ಜೊತೆ ನಿಮ್ಮ ಆಲೋಚನೆಗಳನ್ನು ಬದಲಾಯಿಸಿಕೊಳ್ಳಿ–ಇದು ನಿಮ್ಮ ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುತ್ತದೆ.

**ಕರ್ಕಾಟಕ** ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ.

**ಸಿಂಹ** ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ. ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ.

**ಕನ್ಯಾ** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಆರ್ಥಿಕವಾಗಿ ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ.

**ತುಲಾ** ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ನಿಮ್ಮ ಪ್ರಿಯತಮೆಯ ಕಠಿಣ ಪದಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ಕೆಲಸದಲ್ಲಿ ಅಭಿನಂದನೆಗಳನ್ನು ಪಡೆಯಬಹುದು.

**ವೃಶ್ಚಿಕ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ಧನಸ್ಸು** ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ.

**ಮಕರ** ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ. ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು.

**ಕುಂಭ** ಮನೆಯಲ್ಲಿ ಒತ್ತಡ ನಿಮಗೆ ಸಿಟ್ಟು ತರಿಸಬಹುದು. ಅವುಗಳನ್ನು ದಮನ ಗೊಳಿಸುವುದು ಕೇವಲ ದೈಹಿಕ ಸಮಸ್ಯೆಯನ್ನು ಹೆಚ್ಚಿಸುತ್ತದೆ. ದೈಹಿಕ ಚಟುವಟಿಕೆಯೊಂದಿಗೆ ಇದನ್ನು ತೊಡೆದುಹಾಕಿ.

**ಮೀನ** ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ. ಇಲ್ಲದಿದ್ದಲ್ಲಿ ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ.

# ಲಾಠಿ ಚಾರ್ಜ್ ಖಂಡಿಸಿ ಇಂದು ರಾಜ್ಯಾದ್ಯಂತ ಪ್ರತಿಭಟನೆ

## ಅನಗತ್ಯವಾಗಿ ಲಾಠಿ ಚಾರ್ಜ್ ಮಾಡಿದ ಪೊಲೀಸ್ ಆಯುಕ್ತ ಹಾಗೂ ಎಸ್ಪಿಯನ್ನು ಅಮಾನತು ಮಾಡಬೇಕು

• ಉದಯವಾಹಿನಿ, ಬೆಳಗಾವಿ

ಲಿಂಗಾಯತ ಪಂಚಮಸಾಲಿ ಮೀಸಲಾತಿ ಹೋರಾಟ ಹಿಂಸಾಚಾರಕ್ಕೆ ತಿರುಗಿದ್ದು ಈ ಕುರಿತು ನಡೆದ ಪೊಲೀಸ್ ಲಾಠಿ ಚಾರ್ಜ್ ಖಂಡಿಸಿ ಇಂದು ರಾಜ್ಯಾದ್ಯಂತ ಪ್ರತಿಭಟನೆ ಘೋಷಣೆ ಮಾಡಲಾಗಿದೆ. ಹೌದು...ಲಾಠಿಚಾರ್ಜ್ ಮಾಡಿದ ಸರ್ಕಾರದ ಕ್ರಮ ಖಂಡಿಸಿ ಡಿ.12ರಂದು ರಾಜ್ಯದಾದ್ಯಂತ ಹೋರಾಟ ಮಾಡಲು ಪಂಚಮ ಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಕರೆ ನೀಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಹೋರಾಟ ಹತ್ತಿಕ್ಕಲು ಸಾಧ್ಯವಿಲ್ಲ, ನೀವು ಮಾಡಿದ ದಬ್ಬಾಳಿಕೆಯಿಂದ ಈ ಹೋರಾಟ ರಾಜ್ಯದಾದ್ಯಂತ ತೀವ್ರ ಸ್ವರೂಪ ಪಡೆಯಲಿದೆ. ತಡೆದು ತೋರಿಸಿ' ಎಂದೂ ಸವಾಲು ಹಾಕಿದರು.

ಅಲ್ಲದೇ ಅನಗತ್ಯವಾಗಿ ಲಾಠಿ ಚಾರ್ಜ್ ಮಾಡಿದ ಬೆಳಗಾವಿ ಪೊಲೀಸ್ ಆಯುಕ್ತ ಹಾಗೂ ಎಸ್ಪಿಯನ್ನು ಅಮಾನತು ಮಾಡಬೇಕೆಂದು ಅವರು ಒತ್ತಾಯಿಸಿದ್ದಾರೆ.

**ಹೈಕೋರ್ಟ್ ಆದೇಶ ಪಾಲನೆ**

ಕಾನೂನು ಸುವ್ಯವಸ್ಥೆಗೆ ಧಕ್ಕೆ ಆಗದಂತೆ ಪ್ರತಿಭಟಿಸಲು ಹೈಕೋರ್ಟ್ ಆದೇಶ ಇದ್ದು, ಹೈಕೋರ್ಟ್ ಆದೇಶವನ್ನ ನಾವು ಪಾಲನೆ ಮಾಡಿದ್ದೇವೆ. ಲಾಠಿಚಾರ್ಜ್ ವಿಚಾರದಲ್ಲಿ ಹೈಕೋರ್ಟ್ ಆದೇಶ ಪಾಲಿಸಿದ್ದೇವೆ ಎಂದು ಸ್ಪಷ್ಟಪಡಿಸಿದರು. ಬೆಳಗಾವಿ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಮಾತನಾಡಿ, 'ಕಾನೂನು ಸುವ್ಯವಸ್ಥೆ ಕಾಪಾಡುವುದು ಪೊಲೀಸರ ಜವಾಬ್ದಾರಿ.

ಜಿಲ್ಲಾಡಳಿತ ಸ್ಪಷ್ಟನೆ ಇನ್ನು ಇತ್ತ ಲಾಠಿಚಾರ್ಜ್ ವಿಚಾರ ವ್ಯಾಪಕ ಸುದ್ದಿಗೆ ಗ್ರಾಸವಾದ ಬೆನ್ನಲ್ಲೇ ಐಜಿಪಿ, ಡಿಸಿ, ಕಮಿಷನರ್ ತುರ್ತು ಜಂಟಿ ಸುದ್ದಿಗೋಷ್ಠಿ ನಡೆಸಿ ಲಾಠಿಚಾರ್ಜ್ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿಸಿ ಮೊಹ್ಮದ್ ರೋಷನ್, '2 ದಿನದ ಹಿಂದೆ ಪಂಚಮಸಾಲಿ



☛ ಉದಯವಾಹಿನಿ ಚಿತ್ರ

ಹೋರಾಟದ ಅರ್ಜಿ ಇತ್ತು. ಅದರ ಮೇಲೆ ಜಿಲ್ಲಾಡಳಿತದಿಂದ ನಿರ್ಬಂಧ ವಿಧಿಸಿತ್ತು. ಡಿಸಿ ಆದೇಶ ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅದ್ರೆ, ನಿನ್ನೆ ಪಂಚಮಸಾಲಿ ಸ್ವಾಮೀಜಿ ಜೊತೆಗೆ ಸಭೆ ಮಾಡಿದ್ವಿ.

ಇದರಲ್ಲಿ ಹೋರಾಟದ ಕುರಿತು ಚರ್ಚೆ ಮಾಡಲಾಗಿತ್ತು. ಹೋರಾಟಕ್ಕೆ ಬೇಕಾದ ಎಲ್ಲಾ ವ್ಯವಸ್ಥೆ ಮಾಡಿಕೊಟ್ಟಿದ್ದಿ, ಬೆಳಗಾವಿಗೆ ಹೋರಾಟಗಾರರು, ಮುಖಂಡರು ಬರಬಹುದು. ಇವರ ಮೇಲೆ ಯಾವುದೇ ನಿಷೇಧ ಇಲ್ಲ. ಶಾಂತಿಯುತವಾಗಿ ಹೋರಾಟ ನಡೆಸುವಂತೆ ಆದೇಶ ಮಾಡಲಾಗಿತ್ತು. ಹೋರಾಟ ಮಾಡುತ್ತೇವೆ ಎಂದು ಮನವಿ ಮಾಡಿಕೊಂಡಿದ್ದರು. ಶಾಂತವಾಗಿ ಧರಣಿ ಮಾಡಿ ಎಂದು ಅನುಮತಿ ಕೊಟ್ಟಿದ್ವಿ. ಈ ಸಂಬಂಧ ನಿನ್ನೆ ರಾತ್ರಿ ಸಮಾಜದ ಮುಖಂಡರ ಜತೆ ಸಭೆ ಮಾಡಿದ್ವಿ, ಹೈಕೋರ್ಟ್ ಆದೇಶ ಪ್ರತಿ ಕೂಡ ಅವರಿಗೆ ತೋರಿಸಿದ್ದೆವು ಎಂದು ಹೇಳಿದ್ದಾರೆ. ಲಾಠಿ ಚಾರ್ಜ್ ಖಂಡಿಸಿ ಬಿಜೆಪಿಯಿಂದ ಲಿಂಗಾಯತ ಪಂಚಮಸಾಲಿ ಮೀಸಲಾತಿ ಹೋರಾಟಗಾರರ ಮೇಲಿನ ಲಾಠಿಚಾರ್ಜ್ ಅನ್ನು ಬಿಜೆಪಿ ಖಂಡಿಸಿದ್ದು, ಈ ಕುರಿತು ಟ್ವೀಟ್ ಮಾಡಿರುವ ಬಿಜೆಪಿ ನಾಯಕ ಶ್ರೀರಾಮುಲು, ಪಂಚಮಸಾಲಿ ಮೀಸಲಾತಿ ಹೋರಾಟದ ನಾಯಕ, ವಹಿಸಿರುವ ಪಂಚಮ ಸಾಲಿ ಲಿಂಗಾಯತ ಸಮಾಜದ ಪರಮ ಪೂಜ್ಯ ಬಸವ ಮೃತ್ಯುಂಜಯ ಸ್ವಾಮೀಜಿಯೊಂದಿಗೆ ದೂರವಾಣಿಯಲ್ಲಿ ತಾವು ಮಾತನಾಡಿ ಶಾಂತಿಯುತ ಹೋರಾಟ ಮಾಡುವವರನ್ನು ಲಾಠಿಚಾರ್ಜ್ ಮಾಡಿಸಿ ಗುಂಡಾ ಧೋರಣೆ ಅನುಸರಿಸಿರುವ ಸರ್ಕಾರಕ್ಕೆ ನನ್ನ ದಿಕ್ಕಾರ ಎಂದು ಟೀಟ್ ಮಾಡಿದ್ದಾರೆ.

> ಬೆಳಗಾವಿ ನಗರದಲ್ಲಿ ಪಂಚಮಸಾಲಿ 2ಎ ಮೀಸಲಾತಿ ಹಾಗೂ ಲಿಂಗಾಯತ ಒಳಪಂಗಡಗಳಿಗೆ ಕೇಂದ್ರದ ಒಬಿಸಿ ಪಟ್ಟಿಯಲ್ಲಿ ಸೇರಿಸಲು ಕೇಂದ್ರಕ್ಕೆ ಶಿಫಾರಸ್ಸು ಮಾಡಲು ಒತ್ತಾಯಿಸಿ ಶಾಂತವಾಗಿ ನಡೆಸುತ್ತಿದ್ದ ಹೋರಾಟ ನಡೆಸುತ್ತಿದ್ದ ಸಂದರ್ಭದಲ್ಲಿ ಹೋರಾಟ ಹತ್ತಿಕ್ಕಲು ಪೊಲೀಸರು ನಡೆಸಿದ ಲಾಠಿಚಾರ್ಜ್ ದಿಂದ ಗಾಯಗೊಂಡು, ಕೆ.ಎಲ್. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳ ಆರೋಗ್ಯ ವಿಚಾರಿಸಲಾಯಿತು ಎಂದು ಟ್ವಿಟ್ ಮಾಡಿದ್ದಾರೆ
> -ಬಸನಗೌಡ ಪಾಟೀಲ್ ಯತ್ನಾಳ್

**ನಮ್ಮ ಹೋರಾಟ ಹತ್ತಿಕ್ಕಲು ಸಾಧ್ಯವಿಲ್ಲ**

## ಹಳೆಯ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರ ಹಾಗೂ ಶಾಲಾ ಮಕ್ಕಳ ಆರೋಗ್ಯ ತಪಾಸಣಾ ಶಿಬಿರ

• ಉದಯವಾಹಿನಿ, ಚಿತ್ರದುರ್ಗ

ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಹಾಜರಾತಿ ಇಲ್ಲದೆ ರಾಜ್ಯದ ಹಲವು ಶಾಲೆಗಳು ಮುಚ್ಚಿ ಹೋಗುತ್ತಿವೆ. ಇಂತಹ ಸಂದರ್ಭದಲ್ಲಿ ಹಳೆ ವಿದ್ಯಾರ್ಥಿಗಳು ತಾವು ಓದಿದ ಸರ್ಕಾರಿ ಕನ್ನಡ ಶಾಲೆಗೆ ಮೂಲಭೂತ ಸೌಕರ್ಯ ಒದಗಿಸಿ ಆರ್ಥಿಕವಾಗಿ ಹಿಂದುಳಿದ ಮಕ್ಕಳ ಕಲಿಕೆಗೆ ಅನುಕೂಲಕರ ವಾತಾವರಣ ನಿರ್ಮಿಸುವ ಪ್ರಯತ್ನ ನಿಜಕ್ಕೂ ಶ್ಲಾಘನೀಯವಾದದ್ದು ಬಾಲ್ಯದಲ್ಲಿ ನಾವು ಊರಿನ ಶಾಲೆಯನ್ನು ಗುರುಗಳನ್ನು ಎಂದಿಗೂ ಮರೆಯ ಬಾರದು ಎಂದು ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ನಾಗಭೂಷಣ್ ಅಭಿಪ್ರಾಯಪಟ್ಟಿದ್ದಾರೆ.

ಅವರು ತಾಲ್ಲೂಕಿನ ದೊಡ್ಡಸಿದ್ದವನಹಳ್ಳಿ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ದಿ.. ಶ್ರೀಮತಿ ಮೂಲಂಗಿ ಶಾರದಮ್ಮ ರಂಗರೆಡ್ಡಿ ಇವರ ಸ್ಮರಣಾರ್ಥವಾಗಿ ಹಮ್ಮಿಕೊಳ್ಳಲಾಗಿದ್ದ ಮಕ್ಕಳ ಪ್ರತಿಭಾ ಪುರಸ್ಕಾರ ಹಾಗೂ ಮಕ್ಕಳ ಆರೋಗ್ಯ ತಪಾಸಣಾ ಶಿಬಿರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ದೊಡ್ಡಸಿದ್ದವನಹಳ್ಳಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಶ್ರೀಮತಿ ಶಮೀಲಾ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ ನಡೆಸಿದರು. ಇದೇ ಸಂದರ್ಭದಲ್ಲಿ ಹಳೆಯ ವಿದ್ಯಾರ್ಥಿ



☛ ಉದಯವಾಹಿನಿ ಚಿತ್ರ

ಗಳಾದ ಆದರ್ಶ್, ಆರ್ ಶ್ರೀನಿವಾಸ ರೆಡ್ಡಿ ಹಾಗೂ ಇತರ ವಿದ್ಯಾರ್ಥಿಗಳು ಸೇರಿ ಶಾಲೆಗೆ ಅಗತ್ಯವಿರುವ ತುರ್ತು ವಿದ್ಯುತ್ ಘಟಕ ಕೊಡುಗೆಯಾಗಿ ಹಾಗೂ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿದರು. ಶಾಲೆಯ ಮುಖ್ಯ ಶಿಕ್ಷಕ ಮಂಜುನಾಥ್ ರೆಡ್ಡಿ ಅಧ್ಯಕ್ಷತೆಯನ್ನು ವಹಿಸಿದ್ದ ಈ ಕಾರ್ಯಕ್ರಮದಲ್ಲಿ ಮುಖ್ಯ ಹತ್ತಿಗಳಾಗಿ ಜಿಲ್ಲಾ ಆಸ್ಪತ್ರೆ ನೇತ್ರಾಧಿಕಾರಿ ರಾಮು ಕೆ. ಡಾಕ್ಟರ್ ಚೇತನ್ ರಾಮ್, ಕೃಷ್ಣಮೂರ್ತಿ ಇನ್ನಿತರರು ಭಾಗವಹಿಸಿದ್ದ ಈ ಕಾರ್ಯಕ್ರಮದಲ್ಲಿ ಶ್ರೀಮತಿ ಗಾಯಿತ್ರಿ ಎಲ್ಲರನ್ನೂ ಸ್ವಾಗತಿಸಿದರೆ, ಶ್ರೀಮತಿ ಪಾರಿಜಾತ ಸುಂದರ ನಿರೂಪಣೆಯಿಂದ ಕಾರ್ಯಕ್ರಮಕ್ಕೆ ಮೆರುಗು ನೀಡಿದರು.

> ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸರ್ಕಾರದ ಅನುದಾನವನ್ನೇ ಕಾಯುತ್ತಾ ಕೂರುವ ಬದಲು ಹಳೆಯ ವಿದ್ಯಾರ್ಥಿಗಳು ಎಲ್ಲಾ ಸೇರಿ ತಾವು ಓದಿದ ಶಾಲೆಯ ಅಭಿವೃದ್ಧಿಗೆ ಸಹಕಾರ ನೀಡುವುದು ಅತಿ ಅಗತ್ಯ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಕೊರತೆ ಅಥವಾ ಯಾವುದೇ ಕೊರತೆಯಿಂದ ನಾವು ಓದಿದ ಶಾಲೆ ಮುಚ್ಚದಂತೆ ನೋಡಿಕೊಳ್ಳುವುದು ಹಳೆಯ ವಿದ್ಯಾರ್ಥಿಗಳ ಜವಾಬ್ದಾರಿಯಾಗಿದೆ ಈ ದಿನ ದೊಡ್ಡ ಸಿದ್ದವನಹಳ್ಳಿ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳಾದ ಆದರ್ಶ್, ರಾಮಣ್ಣ ಹಾಗೂ ಕುಟುಂಬದವರು ಹಮ್ಮಿಕೊಂಡಿರುವ ಪ್ರತಿಭಾ ಪುರಸ್ಕಾರ ಇತರ ಹಳೆಯ ವಿದ್ಯಾರ್ಥಿಗಳಿಗೆ ಕುಡಿದಿದ್ದಾಯಕವಾಗಲಿ
> -ಎನ್ ಜೆ ದೇವರಾಜ್ ರೆಡ್ಡಿ, ಹಳೆಯ ವಿದ್ಯಾರ್ಥಿಗಳ ಸಂಘದ ಗೌರವಾಧ್ಯಕ್ಷ ಹಾಗೂ ಖ್ಯಾತ ಭೂಗರ್ಭ ಶಾಸ್ತ್ರಜ್ಞ

## ಸ್ಲಂ ಬೋರ್ಡ್ ವಿರುದ್ಧ ಕ್ರಮಕ್ಕೆ ಆಗ್ರಹ

• ಉದಯವಾಹಿನಿ, ಬೀದರ್



ಕೊಳೆಗೇರಿ ಪ್ರದೇಶಗಳಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಮನೆಗಳ ನಿರ್ಮಾಣ ಕಾಮಗಾರಿಯಲ್ಲಿ ಭಾರಿ ಭ್ರಷ್ಟಾಚಾರ ನಡೆದಿದ್ದು, ಸ್ಲಂ ಬೋರ್ಡ್ ಹಾಗೂ ಸಂಬಂಧಿಸಿದ ಗುತ್ತಿಗೆದಾರರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು' ಎಂದು ಆರ್‌ಪಿಐ ಅಂಬೇಡ್ಕರ್ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಮಹೇಶ ಗೋರನಾಳಕರ್ ಒತ್ತಾಯಿಸಿದ್ದಾರೆ. ನಗರದ ಮೈಲೂರು, ಹಾರೂರಗೇರಿ, ಅಂಬೇಡ್ಕರ್ ಕಾಲೊನಿ, ಚಿದ್ರಿ, ಶಹಾಪುರ ಗೇಟ್ ಹಾಗೂ ಅಬ್ದುಲ್ ಫೈಜ್ ದರ್ಗಾ ಏರಿಯಾದಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ನಿರ್ಮಿಸಿರುವ ಮನೆಗಳಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿದೆ. ಮನೆಗಳ ನಿರ್ಮಾಣಕ್ಕೆ ಬಳಸಿದ ಕಲ್ಲು, ಸಿಮೆಂಟ್, ಕಾಂಕ್ರೀಟ್, ಮರಳು ಕೂಡ ಕಳಪೆ ಬಳಸಲಾಗಿದೆ ಎಂದು ಆರೋಪಿಸಿದ್ದಾರೆ. ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲ ಅಧಿವೇಶನಕ್ಕೆ ಜಿಲ್ಲೆಯಿಂದ ಸುಮಾರು 500 ಜನ ಫಲಾನುಭವಿಗಳು ತೆರಳಿ ಮುಖ್ಯಮಂತ್ರಿ, ರಾಜ್ಯದ ವಸತಿ ಸಚಿವರು ಸೇರಿದಂತೆ ಸಂಬಂಧಪಟ್ಟ ಹಿರಿಯ ಅಧಿಕಾರಿಗಳ ಗಮನಕ್ಕೆ ಈ ವಿಷಯ ತಂದು ಕಾನೂನು ಕ್ರಮಕ್ಕೆ ಒತ್ತಾಯಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ.

ದಲಿತ ಯುನಿಟಿ ಮೂಮೆಂಟ್ ರಾಜ್ಯ ಘಟಕದ ಅಧ್ಯಕ್ಷ ಪ್ರಕಾಶ ರಾವಣ, ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಉಪಾಧ್ಯಕ್ಷ ರಾಜಕುಮಾರ ಮೂಲಭಾರತಿ, ಭೀಮ ವಾದ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಸಂಜುಕುಮಾರ ಮೇತ್ರೆ, ಸ್ವಾಭಿಮಾನಿ ಕರ್ನಾಟಕ ಭೋವಿ ವಡ್ಡರ್ ವೇದಿಕೆ ರಾಜ್ಯ ಘಟಕದ ಅಧ್ಯಕ್ಷ ಸಂತೋಷ ಎಣಕುರೆ, ಯುವ ಮುಖಂಡ ವರುಣ್ ಮೈಲೂರಕರ್, ಪವನ ಕುದುರೆ ಮನವಿಗೆ ಸಹಿ ಹಾಕಿದ್ದಾರೆ.

## ಟಿಎಪಿಸಿಎಂಎಸ್‌ಗೆ ಕಾಶಿನಾಥ ಪೂಜಾರಿ ಕೋ ಆಪ್ಟ್ ನಿರ್ದೇಶಕರಾಗಿ ನೇಮಕ

• ಉದಯವಾಹಿನಿ, ಚಿಂಚೋಳಿ



ತಾಲ್ಲೂಕಾ ಒಕ್ಕುಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ ನಿಯಮಿತಕ್ಕೆ ಪರಿಶಿಷ್ಟ ಪಂಗಡದ ಪ್ರತಿನಿಧಿ ನಿರ್ದೇಶಕ ಸ್ಥಾನಕ್ಕೆ ಕಾಶಿನಾಥ ರಾಯಪ್ಪ ಪೂಜಾರಿ ಅವರನ್ನು ಕೋ ಆಪ್ಟ್ ಆಗಿ ಸಂಘದ ಆಡಳಿತ ಮಂಡಳಿ ಸಭೆ ನಡುವಳಿಯಲ್ಲಿ ಠರಾವು ಪಾಸ್ ಮಾಡಿ ನೇಮಕ ಮಾಡಲಾಗಿದೆ. ಎಂದು ಟಿಎಪಿಸಿಎಂಎಸ್ ಸಿಇಓ ಅತೀಕ್ ಪಾಷಾ ತಿಳಿಸಿದ್ದಾರೆ. ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು, ತಾಲ್ಲೂಕಾ ಒಕ್ಕುಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ ನಿಯಮಿತ ನಿರ್ದೇಶಕರಾದ ಅಮೃತ ದೇವಪ್ಪ ಪರಿಶೀಷ್ಟ ಪಂಗಡದ ಪ್ರತಿನಿಧಿಯನ್ನು ಸಹಕಾರ ಸಂಘಗಳ ಉಪನಿಬಂಧಕರು 2024ರ ನ.25ರಂದು ಅನರ್ಹಗೊಳಿಸಿ ಆದೇಶ ಹೊರಡಿಸಿರುತ್ತಾರೆ ಆ ಖಾಲಿಯಿರುವ ನಿರ್ದೇಶಕ ಸ್ಥಾನಕ್ಕೆ ಕಾಶಿನಾಥ ರಾಯಪ್ಪ ಪೂಜಾರಿ ಅವರನ್ನು ಆಡಳಿತ ಮಂಡಳಿ ಸಭೆ ನಡುವಳಿಯಲ್ಲಿ ಠರಾವು ಪಾಸ್ ಮಾಡಿ ಕೋ ಆಪ್ಟ್ ಆಗಿ ನೇಮಕ ಮಾಡಲಾಗಿದೆ ಎಂದು ಟಿಎಪಿಸಿಎಂಎಸ್ ಸಿಇಓ ಮತ್ತು ಅಧ್ಯಕ್ಷರಾದ ರಮೇಶ ಯಾಕಾಪೂರ ತಿಳಿಸಿದ್ದಾರೆ.

## ವಿದ್ಯಾರ್ಥಿನಿಯರು ಸಮುದ್ರ ಪಾಲಾಗಿ ಸಾವು ಮುಖ್ಯ ಶಿಕ್ಷಕಿ ಸೇರಿ 6 ಜನರ ವಿರುದ್ಧ ಕೇಸ್

• ಉದಯವಾಹಿನಿ, ಉತ್ತರಕನ್ನಡ

ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲೂಕಿನ ಮುರುಡೇಶ್ವರ ಸಮುದ್ರದ ಬಿಸ್ನಲ್ಲಿ ವಿದ್ಯಾರ್ಥಿನಿಯರು ಸಮುದ್ರ ಪಾಲಾಗಿ ಸಾವನ್ನಪ್ಪಿರುವ ಘಟನೆಗೆ ಸಂಬಂಧಿಸಿದಂತೆ ಇದೀಗ ಮುರುಡೇಶ್ವರ ಪೊಲೀಸರು ಮೊರಾರ್ಜಿ ವಸತಿ ಶಾಲೆಯ ಮುಖ್ಯ ಶಿಕ್ಷಕಿ ಸೇರಿದಂತೆ ಆರು ಜನರ ವಿರುದ್ಧ ಸ್ವಯಂ ಪ್ರೇರಿತ ಸುಮೋಟೋ ಕೇಸ್ ದಾಖಲಿಸಿಕೊಂಡಿದ್ದಾರೆ. ಹೌದು ಕೋಲಾರ ಜಿಲ್ಲೆಯ ಮುಳಬಾಗಿಲು ತಾಲ್ಲೂಕಿನ ಕೊತ್ತೂರು ಗ್ರಾಮದ ವಸತಿ ಶಾಲೆಯ ಶಿಕ್ಷಕರ ವಿರುದ್ಧ ಸ್ವಯಂಪ್ರೇರಿತ ದೂರು ದಾಖಲಾಗಿದೆ. ಉತ್ತರ ಕನ್ನಡ ಜಿಲ್ಲೆಯ ಮುರುಡೇಶ್ವರ ಪೊಲೀಸರಿಂದ ಇದೀಗ ಸುಮೋಟೋ ಕೇಸ್ ದಾಖಲಾಗಿದೆ. ಮೊರಾರ್ಜಿ ವಸತಿ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕರ ವಿರುದ್ಧ ಪೊಲೀಸರು ಸುಮೋಟೋ ಕೇಸ್ ದಾಖಲಿಸಿಕೊಂಡಿದ್ದಾರೆ. ಮುಖ್ಯ ಶಿಕ್ಷಕಿ ಶಕಲಾ (40) ಶಿಕ್ಷಕರಾದ ಆರು ಸುನಿಲ್ (33) ಎಸ್ ಚೌಡಪ್ಪ (34) ಎಸ್ ವಿಶ್ವನಾಥ್ (27) ಸಿಎನ್ ಶಾರದಮ್ಮ (37) ಹಾಗೂ ಕೆ ನರೇಶ್ (30) ಎನ್ನುವವರ ವಿರುದ್ಧ ಮುರುಡೇಶ್ವರ ಪೊಲೀಸರು ಸುಮೋಟೋ ಕೇಸ್ ದಾಖಲಿಸಿಕೊಂಡಿದ್ದಾರೆ. ಈಗಾಗಲೇ ಹಲವು ಶಿಕ್ಷಕ, ಸಿಬ್ಬಂದಿಗಳನ್ನು ವಜಾ ಕೂಡ ಮಾಡಲಾಗಿದೆ.

## ಬೀದಿ ನಾಯಿಗಳ ದಾಳಿ: ತಲೆಗೆ ಪೆಟ್ಟು ಬಿದ್ದು ಕೋಮಾ ಸ್ಥಿತಿ ತಲುಪಿದ ಯುವತಿ

• ಉದಯವಾಹಿನಿ, ರಾಯಚೂರು

ಇತ್ತೀಚಿಗೆ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಮಕ್ಕಳು ಎನ್ನದೆ ಎಲ್ಲರ ಮೇಲು ನಾಯಿಗಳು ದಾಳಿ ಮಾಡುತ್ತಿವೆ. ಇದೀಗ ರಾಯಚೂರಿನಲ್ಲಿ ಬೀದಿ ನಾಯಿಗಳು ದಾಳಿ ಮಾಡಿದಾಗ ಅವುಗಳಿಂದ ತಪ್ಪಿಸಿಕೊಳ್ಳಲು ಹೋಗಿ ಕೆಳಗೆ ಬಿದ್ದು ತಲೆಗೆ ಪೆಟ್ಟಾಗಿ ಯುವತಿ ಒಬ್ಬಳು ಕೋಮಾ ಸ್ಥಿತಿಗೆ ತಲುಪಿರುವ ಘಟನೆ ನಡೆದಿದೆ. ರಾಯಚೂರಿನ ಬಡ್ಡಿಪೇಟೆಯಲ್ಲಿ ಈ ಒಂದು ಘಟನೆ ನಡೆದಿದ್ದು ಕೋಮಾ ಸ್ಥಿತಿ ತಲುಪಿದೆ ಯುವತಿಯನ್ನು ಮಹಾದೇವಿ (20) ಎಂದು ತಿಳಿದುಬಂದಿದೆ.

ದೇವಾಲಯಕ್ಕೆ ಹೋಗುವ ವೇಳೆ ನಾಯಿಗಳು ದಾಳಿ ಮಾಡಿವೆ. ನಾಯಿಯಿಂದ ತಪ್ಪಿಸಿಕೊಳ್ಳಲು ಹೋಗಿ ಕೆಳಗೆ ಬಿದ್ದ ಪರಿಣಾಮ ತಲೆಗೆ ಬಲವಾದ ಪೆಟ್ಟಾಗಿದೆ. ಕೆಳಗೆ ಬಿದ್ದ ಯುವತಿಯನ್ನು ನಾಯಿಗಳು ಎಳೆದಾಡಿವೆ.

ಯುವತಿಯನ್ನು ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾಳೆ. ಬಳ್ಳಾರಿಯಿಂದ ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿಗೆ ರೆಫರ್ ಮಾಡಿದ್ದಾರೆ. ಆದರೆ ತೀವ್ರ ಬಡತನವಿರುವ ಕಾರಣ ಪುನಃ ರಾಯಚೂರು ಜಿಲ್ಲಾಸ್ಪತ್ರೆಗೆ ಕರೆತರಲಾಯಿತು ಎಂದು ಪಾಲಕರು ತಿಳಿಸಿದ್ದಾರೆ.

## ರಾಜಕಾರಣಿಗಳನ್ನು ಹೊರಗಿಟ್ಟರಷ್ಟೇ ಹೋರಾಟಕ್ಕೆ ಯಶಸ್ಸು

• ಉದಯವಾಹಿನಿ, ಕೊಪ್ಪಳ



ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ಪಡೆದುಕೊಳ್ಳಲು ನಡೆಯುತ್ತಿರುವ ಹೋರಾಟದಲ್ಲಿ ರಾಜಕಾರಣಿಗಳನ್ನು ಹೊರಗಿಟ್ಟರೆ ಮಾತ್ರ ನಮಗೆ ಯಶಸ್ಸು ಸಿಗುತ್ತದೆ' ಎಂದು ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ರಾಜ್ಯಾಧ್ಯಕ್ಷ ಸೋಮನಗೌಡ ಎಂ. ಪಾಟೀಲ ಹೇಳಿದರು. ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ನಮ್ಮ ಹೋರಾಟ ಹತ್ತಿಕ್ಕಲು ಬೆಳಗಾವಿಯಲ್ಲಿ ಬಲಪ್ರಯೋಗ ಮಾಡಿದ್ದು ಸರಿಯಲ್ಲ. ಇದನ್ನು ಖಂಡಿಸಿ ಗುರುವಾರ ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ನಮ್ಮ ಸಂಘದಿಂದ ಹೆದ್ದಾರಿ ತಡೆದು ಪ್ರತಿಭಟಿಸುತ್ತೇವೆ' ಎಂದು ತಿಳಿಸಿದರು. ಜಿಲ್ಲಾ ಕೇಂದ್ರದಲ್ಲಿ ಮನವಿ ಸಲ್ಲಿಸಲಾಗುತ್ತದೆ ಎಂದರು. ಕಾಂಗ್ರೆಸ್ ಹಾಗೂ ಬಿಜೆಪಿಯ ಕುತಂತ್ರದಿಂದಾಗಿ ಬೆಳಗಾವಿಯಲ್ಲಿ ಹಿಂಸಾಚಾರ ನಡೆದಿದೆ. ತನಿಖೆ ಮಾಡಿ ನಮ್ಮ ಸಮುದಾಯದ ಜನರಿಗೆ ನ್ಯಾಯ ದೊರಕಿಸಿಕೊಡಬೇಕು. ಹೋರಾಟದಲ್ಲಿ ರಾಜಕಾರಣಿಗಳು ಭಾಗಿಯಾಗುವುದಕ್ಕಿಂತ ಗುರುಪೀಠದವರ ಹೋರಾಟ ಮುಖ್ಯ. ಕೂಡಲ ಸಂಗಮದ ಬಸವಜಯ ಮೃತ್ಯುಂಜಯ ಸ್ವಾಮೀಜಿ ರಾಜಕೀಯೇತರ ಹೋರಾಟಕ್ಕಾಗಿ ಸಮುದಾಯದ ಎಲ್ಲರ ಜೊತೆಗೂ ಚರ್ಚಿಸಿ ಹೋರಾಟದ ಯೋಜನೆ ರೂಪಿಸಬೇಕು.

ಈ ಎಲ್ಲಾ ವಿಷಯಗಳ ಬಗ್ಗೆ ಚರ್ಚಿಸಲು ಡಿ. 14 ರಂದು ಚಿತ್ರದುರ್ಗದಲ್ಲಿ ಪಂಚಮಸಾಲಿ ಸಂಘದ ಸಭೆ ಕರೆಯಲಾಗಿದೆ ಎಂದು ಹೇಳಿದರು. ಸಂಘದ ಜಿಲ್ಲಾಧ್ಯಕ್ಷ ಬಸವನಗೌಡ ತೊಂಡಿಹಾಳ, ಕೊಪ್ಪಳ ತಾಲ್ಲೂಕು ಅಧ್ಯಕ್ಷ ಕರಿಯಪ್ಪ ಮೇಟಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದೇವರಾಜ ಹಾಲಸಮುದ್ರ ಮತ್ತು ಯುವ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಶೇಖರಪ್ಪ ಮುತ್ತೇನವರ ಪಾಲ್ಗೊಂಡಿದ್ದರು.

## ಕಡಿಮೆ ಆದಾಯ: ಆಲೂರು ಜಂಕ್ಷನ್‌ನಲ್ಲಿ ರೈಲು ನಿಲುಗಡೆ ರದ್ದು

• ಉದಯವಾಹಿನಿ, ಹಾಸನ

ಹಾಸನ ಜಂಕ್ಷನ್ ನಿಂದ 12 ಕಿ.ಮೀ ದೂರದಲ್ಲಿರುವ ಆಲೂರು ಜಂಕ್ಷನ್‌ನಲ್ಲಿ ಆದಾಯ ನಷ್ಟದ ಕಾರಣ ನೀಡಿ ರೈಲುಗಳ ನಿಲುಗಡೆ ರದ್ದುಗೊಳಿಸಿರುವ ನೈಋತ್ಯ ರೈಲ್ವೆ ನಿರ್ಧಾರದ ವಿರುದ್ಧ ವಿವಿಧ ಸಂಘಟನೆಗಳ ಸದಸ್ಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಜನರ ಆಕ್ರೋಶ**

ಡಿಸೆಂಬರ್ 4 ರಿಂದ ಎಲ್ಲಾ ರೈಲುಗಳ ನಿಲುಗಡೆ ರದ್ದುಗೊಳಿಸಿದ ನೈರುತ್ಯ ರೈಲ್ವೆ ಅಧಿಕಾರಿಗಳ ಹಠಾತ್ ನಿರ್ಧಾರದಿಂದ ಸ್ಥಳೀಯರು ಮತ್ತು ವ್ಯಾಪಾರ ವರ್ಗ ಆತಂಕಗೊಂಡಿದೆ.

ಅಧಿಕಾರಿಗಳು ತಮ್ಮ ನಿರ್ಧಾರವನ್ನು ಮರು ಪರಿಶೀಲಿಸದಿದ್ದಲ್ಲಿ ಪ್ರತಿಭಟನೆಯನ್ನು ತೀವ್ರಗೊಳಿಸಲಾಗುವುದು ಎಂದು ರಾಧಮ್ಮ ಸೇವಾ ಟ್ರಸ್ಟ್ ಅಧ್ಯಕ್ಷ ಹೇಮಂತ್ ಕುಮಾರ್ ಎಚ್ಚರಿಕೆ ನೀಡಿದ್ದಾರೆ. ರೈಲ್ವೆ ಇಲಾಖೆ ಒಂದು ತಿಂಗಳಿಗೆ 50,000 ಆದಾಯವನ್ನು ನಿರೀಕ್ಷಿಸಿತ್ತು. ಆದರೆ





☛ ಉದಯವಾಹಿನಿ ಚಿತ್ರ

ಸಂಗ್ರಹವು ತುಂಬಾ ಕಳಪೆಯಾಗಿದೆ.

10,000 ಕೂಡ ದಾಟು ತ್ತಿರಲಿಲ್ಲ ಎಂದು ಮೂಲಗಳು ತಿಳಿಸಿವೆ. ದಶಕದ ಹಿಂದೆ ನಿರ್ಮಿಸಿದ ಆಲೂರು ಜಂಕ್ಷನ್ ಬಗ್ಗೆ ರೈಲ್ವೆ ಅಧಿಕಾರಿಗಳು ಸಂಪೂರ್ಣ ನಿರ್ಲಕ್ಷ್ಯ ವಹಿಸಿದ್ದಾರೆ ಎನ್ನುತ್ತಾರೆ ಸ್ಥಳೀಯರು. ಆಲೂರು ಮತ್ತು ಅಕ್ಕಪಕ್ಕದ ಗ್ರಾಮಗಳ ಜನರು ರೈಲು ಸೇವೆ ಪಡೆಯಲು ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಹಾಸನಕ್ಕೆ ತೆರಳಬೇಕು.

ಅದೇ ರೀತಿ ಹಾಸನ ಜಂಕ್ಷನ್‌ನಲ್ಲಿ ಇಳಿದು ತಮ್ಮ ಊರುಗಳಿಗೆ ತೆರಳಲು ವಾಹನಗಳನ್ನೇ ಅವಲಂಬಿಸಬೇಕಾಗಿದೆ. ರಾತ್ರಿ ವೇಳೆ ಆಲೂರಿಗೆ ವಾಹನಗಳು ಸಿಗದ ಕಾರಣ ರಾತ್ರಿ ರೈಲುಗಳಲ್ಲಿ ಹಾಸನ ಜಂಕ್ಷನ್‌ಗೆ ಬಂದ ಪ್ರಯಾಣಿಕರು ಹಾಸನ ಜಂಕ್ಷನ್‌ನ್ನಲ್ಲಿ ರಾತ್ರಿ ಕಳೆಯಬೇಕಾದ ಅನಿವಾರ್ಯತೆ ಎದುರಾಗಿದೆ.

> ರೈಲ್ವೆ ಇಲಾಖೆಯು ಆಲೂರು ಜಂಕ್ಷನ್‌ನ ನೌಕರರಿಗೆ ಸಂಬಳ ಮತ್ತು ಸೌಲಭ್ಯಗಳಿಗಾಗಿ ಲಕ್ಷಗಳನ್ನು ಖರ್ಚು ಮಾಡುತ್ತಿದೆ. ಎಂದು ಹೇಮಂತ್ ಕುಮಾರ್ ಹೇಳಿದರು.ಈ ಸಂಬಂಧ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್‌ಡಿ ಕುಮಾರಸ್ವಾಮಿ ಹಾಗೂ ಸೋಮಣ್ಣ ಅವರೊಂದಿಗೆ ಮಾತುಕತೆ ನಡೆಸುವುದಾಗಿ ಮಾಜಿ ಶಾಸಕ ಎಚ್‌ಕೆ ಕುಮಾರಸ್ವಾಮಿ ಹೇಳಿದರು.

## ನಗರಸಭೆ ಬಜೆಟ್ ಪೂರ್ವಭಾವಿ ಸಭೆಗೆ ನಾಗರಿಕರಿಗೆ ಆಹ್ವಾನ: ಎಂ ಸಮೀವುಲ್ಲಾ

• ಉದಯವಾಹಿನಿ, ಅರಸೀಕೆರೆ

ಸ್ಥಳೀಯ ನಗರಸಭೆ ವತಿಯಿಂದ 2025 26 ನೇ ಸಾಲಿನ ಆಯವ್ಯಯವನ್ನು ತಯಾರಿಸುವ ಸಂಬಂಧ ಪೂರ್ವಭಾವಿ ಸಭೆಯನ್ನು ಡಿಸೆಂಬರ್ 16ರಂದು ಸೋಮವಾರ ಮಧ್ಯಾಹ್ನ 3 ಗಂಟೆಗೆ ಆಯೋಜಿಸಲಾಗಿದ್ದು ಅರಸೀಕೆರೆ ನಗರದ ನಾಗರೀಕರು ಸಂಘ ಸಂಸ್ಥೆಗಳ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಲಹೆಗಳನ್ನು ನೀಡಬೇಕೆಂದು ಅರ್ಸಿಕೆರೆ ನಗರಸಭೆ ಅಧ್ಯಕ್ಷರಾದ ಎಂ ಸಮಿವುಲ್ಲಾ ಮನವಿ ಮಾಡಿದರು.

ಬಜೆಟ್ ಪೂರ್ವಭಾವಿಗಾಗಿ ಕರೆಯಲಾಗಿದ್ದ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ. ಅವರು. ನಗರದ ಗಡಿ ಪ್ರದೇಶಗಳ ಪ್ರಾರಂಭದಲ್ಲಿ ಸ್ವಾಗತ ಫಲಕ ಅಳವಡಿಕೆ ವಾರ್ಡ್‌ಗಳಲ್ಲಿರುವ ಮುಖ್ಯ ಮತ್ತು ಅಡ್ಡ ರಸ್ತೆಗಳ ಮಾಹಿತಿಯುಳ್ಳ ನಾಮಫಲಕ ಸ್ಥಾಪನೆ ಮಾಡಲು ಸಾರ್ವಜನಿಕ ವಲಯದಿಂದ ಕೋರಿಕೆ ಬಂದಿದೆ ಆ ನಿಟ್ಟಿನಲ್ಲಿ ನೂತನ ನಾಮಫಲಕಗಳ ತಯಾರಿಕೆ ಪ್ರಾರಂಭವಾಗಿದ್ದು ಶೀಘ್ರದಲ್ಲೇ ಅವುಗಳನ್ನು ಎಲ್ಲಾ ವಾರ್ಡ್‌ಗಳಲ್ಲಿ ಸ್ಥಾಪಿಸಲಾಗುವುದು ಕಂತೆನಹಳ್ಳಿ ಬಡಾವಣೆ



☛ ಉದಯವಾಹಿನಿ ಚಿತ್ರ

ಕೆರೆಯಂಗಳದಲ್ಲಿರುವ ಅರಸೀ ಉದ್ಯಾನವನದಲ್ಲಿರುವ ಆಸನಗಳಿಗೆ ಹಿರಿಯ ನಾಗರಿಕರಿಗಾಗಿ ವಿಶೇಷ ಮೇಲ್ಚಾವಣಿ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ಎಂದರು.

ಸಭೆಯಲ್ಲಿ ಉಪಸ್ಥಿತರಿದ್ದ ನಗರಸಭೆ ಸದಸ್ಯರುಗಳು ಕೆಲವು ಸಾರ್ವಜನಿಕರು ಮುಖಂಡರುಗಳು ಬೀದಿ ದೀಪಗಳ ನಿರ್ವಹಣೆ ಚರಂಡಿಗಳ ದುರಸ್ತಿ ಅಂಗನವಾಡಿ ಕೇಂದ್ರಗಳಿಗೆ ನೂತನ ಕಟ್ಟಡ ನಿರ್ಮಾಣ ಮಾಡಲು ನಿವೇಶನ ಗುರುತಿಸುವಿಕೆ ಕುಡಿಯುವ ನೀರು ಮತ್ತು ಒಳಚಂಡಿ ಮಾರ್ಗಗಳ ನಿರ್ವಹಣೆ ಸೇರಿದಂತೆ ಅನೇಕ ಸಮಸ್ಯೆಗಳ ಪರಿಹಾರದ ಬಗ್ಗೆ ಸಭೆಯಲ್ಲಿ ಗಮನ ಸೆಳೆದರು. ಸಭೆಯಲ್ಲಿ ಪೌರಾಯುಕ್ತಾರಾದ ಕೃಷ್ಣಮೂರ್ತಿ ಉಪಾಧ್ಯಕ್ಷ ಮನೋಹರ್ ನಗರಸಭೆ ಸದಸ್ಯರುಗಳಾದ ಭಾಸ್ಕರ್ ಯುವರಾಜ್ ದರ್ಶನ್ ಇಮ್ರಾನ್ ಖಾನ್ ನಾಮಿನಿ ಸದಸ್ಯರಾದ ಕಿರಣ್ ಕುಮಾರ್ ಹಾಗೂ ಇನ್ನಿತರ ಉಪಸ್ಥಿತರಿದ್ದರು.



> ಈಗಾಗಲೇ ಬಜೆಟ್ ಪೂರ್ವಭಾವಿಯಾಗಿ ಸಭೆ ಕರೆದಿದ್ದು ಈ ಸಭೆಯಲ್ಲಿ ಸಾರ್ವಜನಿಕರು ಸಾಕಷ್ಟು ಸಲಹೆಗಳನ್ನು ನೀಡಿದ್ದು ಮತ್ತೊಮ್ಮೆ ಡಿಸೆಂಬರ್ 16ರ ಸೋಮವಾರ ಮಧ್ಯಾಹ್ನ 3 ಗಂಟೆಗೆ ನಗರ ಸಭೆಯ ಆವರಣದಲ್ಲಿ ಸಭೆಯನ್ನು ಅಯೋಜಿಸಲಾಗಿದ್ದು ನಗರದ ನಾಗರಿಕರು ಮತ್ತು ಸಾರ್ವಜನಿಕರು ಸಂಘ ಸಂಸ್ಥೆಗಳ ಮುಖಂಡರು ಭಾಗವಹಿಸಿ ತಮ್ಮ ಅಮೂಲ್ಯವಾದ ಸಲಹೆಗಳನ್ನು ನೀಡಿ ಅರಸೀಕೆರೆ ನಗರವನ್ನು ಮಾದರಿ ಮತ್ತು ಸ್ವಚ್ಛ ನಗರವನ್ನು ಮಾಡಲು. ಸಹಕರಿಸಬೇಕು
> -ಎಂ ಸಮಿವುಲ್ಲಾ, ನಗರಸಭೆ ಅಧ್ಯಕ್ಷ

## 128 ಮಳಿಗೆ ಮರು ಹರಾಜಿಗೆ ಪುರಸಭೆ ಅನುಮೋದನೆ

• ಉದಯವಾಹಿನಿ,ಸಕಲೇಶಪುರ

ಪಟ್ಟಣದಲ್ಲಿರುವ ಪುರಸಭೆ ವಾಣಿಜ್ಯ ಮಳಿಗೆಗಳ ಕರಾರು ಅವಧಿ ಮುಗಿದು 12 ವರ್ಷಗಳು ಕಳೆದಿದದು ಎಲ್ಲಾ ಮಳಿಗೆಗಳನ್ನು ಮರು ಹರಾಜು ಮಾಡಲು ಪುರಸಭಾ ಅಧ್ಯಕ್ಷೆ ಆರ್.ಬಿ.ಜ್ಯೋತಿ ರಾಜ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು.

ಪಟ್ಟಣದ ಬಿ.ಎಂ. ರಸ್ತೆಯಲ್ಲಿರುವ ಹೇಮಾವತಿ ಕಾಂಪ್ಲೆಕ್ಸ್, ಪುರಸಭಾ ಮುಂಭಾಗದ ವಾಣಿಜ್ಯ ಮಳಿಗೆ, ಕ್ರಾಫರ್ಡ್ ಆಸ್ಪತ್ರೆಯ ರಸ್ತೆಯಲ್ಲಿರುವ ಮಳಿಗೆಗಳು ಸೇರಿದಂತೆ ಒಟ್ಟು 128 ಮಳಿಗೆಗಳನ್ನು ಮರು ಹರಾಜು ಮಾಡಲು ಎಲ್ಲಾ ಸದಸ್ಯರು ಒಪ್ಪಿಗೆ ಸೂಚಿಸಿದರು. 15ನೇ ಹಣಕಾಸು ಯೋಜನೆಯ ವಿವಿಧ ಕಾಮಗಾರಿಗಳ ಮರು ಹರಾಜಿಗೆ ಸಭೆಯಲ್ಲಿ ಸರ್ವಾನುಮತದ ಒಪ್ಪಿಗೆ ದೊರೆಯಿತು. ಕುಡಿಯುವ ನೀರು ಯೋಜನೆಯ ಅನೇಕ ಟೆಂಡರ್‌ಗಳನ್ನು ಅನುಮೋದಿಸುವ, ಸಕಲೇಶ್ವರಸ್ವಾಮಿ ರಥೋತ್ಸವ ಅಂಗವಾಗಿ ನಡೆಯುವ ವಸ್ತು ಪ್ರದರ್ಶನಕ್ಕೆ ಸಂಬಂಧಿಸಿದಂತೆ ಸಭೆಯಲ್ಲಿ ಚರ್ಚೆ ನಡೆಯಿತು.

# ಜಿಪಂ.ಸಿಇಓ ದಿಢೀರನೆ ಚಿಂಚೋಳಿ ಭೇಟಿ: ವಿವಿಧೆಡೆ ಪರಿಶೀಲನೆ

## ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಂಥಾಲಯಗಳು ಕೂಸಿನ ಮನೆಗಳ ಸ್ಥಿತಿಗತಿ ನಿರ್ವಹಣೆ ಬಗ್ಗೆ ಸಮಗ್ರ ಮಾಹಿತಿ

• ಉದಯವಾಹಿನಿ, ಚಿಂಚೋಳಿ

**ಸುಲೇಪೇಟ ಗ್ರಂಥಾಲಯಕ್ಕೆ ಸಿಇಒ ಭೇಟಿ**

ತಾಲ್ಲೂಕಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರಸಿಂಗ್ ಮೀನಾ ಭೇಟಿನೀಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಾಂಥಾಲಯಗಳು ಕೂಸಿನ ಮನೆಗಳ ಸ್ಥಿತಿಗತಿ ನಿರ್ವಹಣೆ ಬಗ್ಗೆ ಸಮಗ್ರ ಮಾಹಿತಿ ಕಲೆಹಾಕಿ ಸ್ಥಿತಿಗತಿ ವಿಕ್ಷಿಸಿ ಪರಿಶೀಲಿಸಿದರು.

ತಾಲ್ಲೂಕಿನ ಸುಲೇಪೇಟ್, ಚಿಮ್ಮಾಯಿದ್ಲಾಯಿ, ಚಿಮ್ಮಾನಚೋಡ,ಹಸರಗುಂಡಗಿ, ಸಾಲೆಬೀರನಳ್ಳಿ ಸೇರಿದಂತೆ ವಿವಿಧೆಡೆ ಗ್ರಾಂಥಾಲಯ ಕುಸಿನ ಮನೆ ಭೇಟಿನೀಡಿ ಪರಿಶೀಲಿಸಿ ಮಾತನಾಡಿದ ಅವರು,ಗ್ರಂಥಾಲಯಕ್ಕೆ ಓದುಗರ ಮನ ಸೇಳೆಯಲು ಅವರಿಗೆ ಅನುಕೂಲವಾಗುವಂತೆ ಸರ್ಕಾರದ ಎಲ್ಲಾ ಸೌಲಭ್ಯಗಳನ್ನು ಸಂಬಂಧಿಸಿದ ಪಿಡಿಒಗಳು ಒದಗಿಸಿಕೊಡಬೇಕು ಎಂದರು.

**ಸುಲೇಪೇಟ ಗ್ರಂಥಾಲಯಕ್ಕೆ ಸಿಇಒ ಭೇಟಿ:-** ಗ್ರಂಥಾಲಯದಲ್ಲಿ ಓದುಗರ ಸೆಳೆಯಲು ಉತ್ತಮ ವಾತಾವರಣ ಮತ್ತು ಸೇವೆ ನೀಡಬೇಕು.

ಸೂಕ್ತ ಬೆಳಕಿನ ವ್ಯವಸ್ಥೆ ಸರಿಯಾದ ಆಸನ, ನೀರು ಮತ್ತು ಉತ್ತಮ ಗಾಳಿ, ಬೆಳಕು ಹಾಗೂ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಗ್ರಂಥಾಲಯಕ್ಕೆ ಕಟ್ಟಡ ನಿರ್ಮಿಸಿದ್ದು ಚನ್ನಾಗಿ ಬಣ್ಣ ಮಾಡುವುದರ ಜೋತೆ ಕೆಳಗೆ ಟೈಲ್ಸ್ ಹಾಕಿ ಗೋಡೆಗಳಿಗೆ ಬಿಳಿ ದೀಪ ಹಾಕಿ ನಾಲ್ಕು ಕಡೆ ಬೆಳಕು ಬರುವಂತೆ ದೀಪಗಳು ಅಳವಡಿಸಬೇಕು ಎಂದು ಜಿಪಂ.ಸಿಇಓ ಭಂವರಸಿಂಗ್ ಮೀನಾ ಪಿಡಿಓ ಮತ್ತು ಅಧ್ಯಕ್ಷರಿಗೆ ಸೂಚಿಸಿದರು.



☛ ಉದಯವಾಹಿನಿ ಚಿತ್ರ

**ಚಿಮ್ಮಾನಚೋಡ ಭೇಟಿ:-** ಚಿಮ್ಮಾನಚೋಡ ಬಸ್ ತಂಗುದಾಣದಲ್ಲಿ ತೆರೆದ ಪುಸ್ತಕ ಗೂಡು ಉದ್ಘಾಟಿಸಿದ್ದರು. ತಾಪಂ.ಕಾರ್ಯನಿರ್ವಾಹಕ ಅಧಿಕಾರಿ ಶಂಕರ ರಾಠೋಡ್, ಸುಲೇಪೇಟ್ ಗ್ರಾಪಂ.ಅಧ್ಯಕ್ಷ ಸಂತೋಷಕುಮಾರ ರಾಠೊಡ್, ಚಿಮ್ಮಾನಚೋಡ ಗ್ರಾಪಂ.ಅಧ್ಯಕ್ಷ ಮಲ್ಲಿಕಾರ್ಜುನ ನರನಾಳ, ನಾಗಾಯಿದ್ಲಾಯಿ ಗ್ರಾಪಂ.ಅಧ್ಯಕ್ಷ ಸವಿತಾ ಶಿವಯೋಗಿ,ಪಿಡಿಒಗಳು ಗೋವಿಂದ ರೆಡ್ಡಿ, ಹೀರಾಸಿಂಗ್ ಚವ್ಹಾಣ, ಪ್ರತೀಕ್ಷಾ, ಸೇರಿದಂತೆ ತಾಲ್ಲೂಕಾ ಯೋಜನಾ ಅಧಿಕಾರಿ ಮಲ್ಲಿಕಾರ್ಜುನ ಕಟ್ಟಿ, ಸಹಾಯಕ ನಿರ್ದೇಶಕ ನಾಗೇಂದ್ರಪ್ಪಾ, ಪಿಡಿಓ ದಶರಥ ಪಾತ್ರೆ,ಲಲಿತಾ ಪಾಟೀಲ, ವಾಹೀದ್ ಅಲಿ,ಐನೋಳ್ಳಿ ಪಿಡಿಓ ರೀಯಾಜ್ ಅಮೀನ್, ತಾಐಇಸಿ ಸಂಯೋಜಕರಾದ ಭೀಮಾಶಂಕರ, ಆರ್.ಡಿ.ಪಿ.ಆರ್.ಫೆಲೋಶಿಪ್ ನಂದನಾ,ಕಾರ್ಯದರ್ಶಿ ಜಗನ್ನಾಥರೆಡ್ಡಿ ಚಟ್ನಳ್ಳಿ,ಮಹೀಳಾ ಸಂಘದ ಲಕ್ಷ್ಮೀ ನರನಾಳ ಹಾಗೂ ಗ್ರಾ ಪಂ ಸಿಬ್ಬಂದಿ ಸೇರಿದಂತೆ ಮುಖಂಡರಾದ ವಿರೇಶ ಹೀರೇನ್, ಅಮೃತ ದಸ್ತಾಪೂರ, ರೇವಣಸಿದ್ದಪ್ಪಾ,ರವಿ ಅಲ್ಲಾಪೂರ, ರಾಮರೆಡ್ಡಿ ಚಿಮ್ಮಾನಚೋಡ ಅನೇಕರಿದ್ದರು.

> ಗ್ರಂಥಾಲಯಗಳಲ್ಲಿ ಓದುಗರಿಗೆ ಹಾಗೂ ವಿದ್ಯಾರ್ಥಿಗಳಿಗೆ ಗಮನ ಸೇಳೆಯಲು ಸೂಕ್ತ ಸ್ಥಳವಕಾಶ,ಉತ್ತಮ ಬೆಳಕು ವ್ಯವಸ್ಥೆ,ಗಾಳಿ ವ್ಯವಸ್ಥೆ,ಕುಡಿಯಲು ನೀರಿನ ವ್ಯವಸ್ಥೆ,ಸ್ವಚ್ಛತೆಗೆ ಆದ್ಯತೆ ನೀಡಿ,ಗ್ರಂಥಾಲಯ ಗೋಡೆಗಳಿಗೆ ಉತ್ತಮ ಬಣ್ಣ,ಒಳೆಗೆ ದ್ವೀಪಲಾಂಕಾರ,ಕೆಳಗೆ ಟೈಲ್ಸ್ ಹಾಕಿ ಸರ್ಕಾರ ಎಲ್ಲಾ ಸೌಲಭ್ಯಗಳು ಕಲ್ಪಿಸಿಸಿದರೆ ಓದುಗರ ಸಂಖ್ಯೆ ಹೆಚ್ಚಾಳವಾಗುತ್ತದೆ ಆಗ ಮೋಬೈಲ್ ಬಿಟ್ಟು ಓದುಗರು ಪುಸ್ತಕ ಕಡೆ ಒಲವು ಹೆಚ್ಚಾಗುತ್ತದೆ ಕಾರಣ ಎಲ್ಲಾ ಗ್ರಾಪಂ.ಪಿಡಿಓ ಅಧ್ಯಕ್ಷರು ತೆರಿಗೆ ಹಣದಲ್ಲಿ ಅಥವಾ ವಿಶೇಷ ಅನುದಾನದಲ್ಲಿ ನಿರ್ವಹಣೆ ಮಾಡಿ ಇಲ್ಲಾದಿದ್ದರೆ ಬೇಕಾದರೆ ಅನುದಾನ ಬಿಡುಗಡೆ ಮಾಡುತ್ತೇನೆ – ಭಂವರಸಿಂಗ್ ಮೀನಾ, ಜಿಪಂ.ಸಿಇಓ ಕಲಬುರ್ಗಿ.

# ವೇದಿಕೆ ಮೇಲೆ ಟ್ರಂಪ್ ಅಂಬೇಡ್ಕರ್ ಫೋಟೋ ಪ್ರದರ್ಶನ ಮಾಡಿದ್ರಾ?

## ಟ್ರಂಪ್ ತೋರಿಸಿರುವ ಫೋಟೋದಲ್ಲಿ ಒಂದು ಬದಿಯಲ್ಲಿ ಅಂಬೇಡ್ಕರ್ ಚಿತ್ರ, ಇನ್ನೊಂದು ಬದಿಯಲ್ಲಿ ಜೈ ಭೀಮ್ ಎಂದು ಬರೆದಿರುವುದು ಇದೆ

**ಹೊಸದಿಲ್ಲಿ:** ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಪ್ ಅವರು ಭಾರತ ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಅವರ ಪೋಸ್ಟರ್ ಹಿಡಿದುಕೊಂಡು ಪ್ರದರ್ಶನ ಮಾಡಿರುವ ಫೋಟೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಆ ಫೋಟೋ ನಕಲಿ ಎಂಬುದು ದೃಢಪಟ್ಟಿದೆ. ಫೋಟೋದಲ್ಲಿ ಡೊನಾಲ್ಡ್ ಟ್ರಪ್ ಅವರು ಕ್ಯಾಮೆರಾದ ಕಡೆಗೆ ಫೈಲ್ ತೋರಿಸುತ್ತಿದ್ದಾರೆ. ಆ ಫೈಲ್‌ನ ಒಂದು ಬದಿಯಲ್ಲಿ ಬಾಬಾಸಾಹೇಬ್ ಡಾ. ಬಿಆರ್ ಅಂಬೇಡ್ಕರ್ ಅವರ ಚಿತ್ರ ಇದೆ. ಇನ್ನೊಂದು ಬದಿಯಲ್ಲಿ ಜೈ ಭೀಮ್ ಎಂದು ಬರೆಯಲಾಗಿದೆ.

**ಏನೆಲ್ಲಾ ವೈರಲ್?:** ಟ್ವೀಟರ್‌ನಲ್ಲಿ (ಎಕ್ಸ್) ಬಳಕೆದಾರರಾದ @tarun jatav ಎಂಬುವವರು ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಈ ಚಿತ್ರವನ್ನು




ಲೇಖನಿ ಹಿಡಿದವರು ಕ್ರಾಂತಿಯನ್ನೇ ಸೃಷ್ಟಿಸಿದರು

ಪೋಸ್ಟ್ ಮಾಡಿದ್ದಾರೆ. ಸ್ಥಾನಮಾನಕ್ಕೂ ಸ್ಥಾನಮಾನಕ್ಕೂ ವ್ಯತ್ಯಾಸವಿದೆ ಸಾರ್.

ಕೊಡಲಿ ಹಿಡಿದವರು ಅಪರಾಧ ಮಾಡಿದ್ದು ಬಿಟ್ಟರೆ ಬೇರೇನೂ ಮಾಡಿಲ್ಲ ಲೇಖನಿ ಹಿಡಿದವರು ಕ್ರಾಂತಿಯನ್ನೇ ಸೃಷ್ಟಿಸಿದರು ಎಂದು ಹಿಂದಿಯಲ್ಲಿ ಬರೆದುಕೊಂಡಿದ್ದಾರೆ. ಮತ್ತೊಬ್ಬ ಮಾಜಿ ಬಳಕೆದಾರ @priyanshu-63 ಕೂಡ ಡೊನಾಲ್ಡ್ ಟ್ರಂಪ್ ಅವರ ಜೈ ಭೀಮ್ ಚಿತ್ರವನ್ನು ಹಂಚಿಕೊಂಡಿದ್ದಾರೆ. ಈಗ ಡಿಎನ್‌ಎ ಮಿಶ್ರಿತ ಕೆಲವರು ಬಂದು ಈ ಸಂಪಾದನೆ ಬಾಬಾ ಸಾಹೇಬರ ಮ್ಯಾಜಿಕ್ ಎಂದು ಹೇಳುತ್ತಾರೆ ಎಂದು ಬರೆದುಕೊಂಡಿದ್ದಾರೆ.

### ಫೋಟೋದ ಅಸಲಿಯತ್ತೇನು?

ಸಾಮಾಜಿಕ ಜಾಲತಾಣದಲ್ಲಿ ಡೊನಾಲ್ಡ್ ಟ್ರಂಪ್ ಅವರು ಬಿಆರ್ ಅಂಬೇಡ್ಕರ್ ಫೋಟೋ ಹಿಡಿದುಕೊಂಡಿದ್ದಾರೆ ಎಂಬ ಪೋಸ್ಟ್ ವೈರಲ್ ಆಗುತ್ತಿದೆ. ನಿಜಕ್ಕೂ ಅಂಬೇಡ್ಕರ್ ಫೋಟೋವನ್ನು ಟ್ರಂಪ್ ಪ್ರದರ್ಶನ ಮಾಡಿದ್ದರಾ? ಈ ಫೋಟೋದ ಅಸಲಿಯತ್ತೇನು? ಈ ಬಗ್ಗೆ ಸಂಪೂರ್ಣ ವಿವರ ಇಲ್ಲಿದೆ.

**ಸತ್ಯಾಸತ್ಯತೆ ಏನು?:** ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ಈ ಚಿತ್ರವನ್ನು ಸಜಗ್ ತಂಡ ತನಿಖೆ ನಡೆಸಿದಾಗ ಗೂಗಲ್‌ನಲ್ಲಿ ಚಿತ್ರವೊಂದು ಪತ್ತೆಯಿತು. ಅಮೆರಿಕದ ನಿಯೋಜಿತ ಅಧ್ಯಕ್ಷರ ಆ ಚಿತ್ರವು ಸುಳ್ಳು ಎಂಬುದು ತಿಳಿದುಬಂದಿತು. 2017 ರ swarajyamag.com ನ ವರದಿಯಲ್ಲಿ ಡೊನಾಲ್ಡ್ ಟ್ರಂಪ್ ಅಮೆರಿಕವನ್ನು ಟ್ರಾನ್ಸ್ - ಪೆಸಿಫಿಕ್ ಪಾಲುದಾರಿಕೆಯಿಂದ ಹಿಂತೆಗೆದುಕೊಳ್ಳುವ ಕಾರ್ಯಕಾರಿ ಆದೇಶಕ್ಕೆ ಸಹಿ ಹಾಕಿದ್ದಾರೆ. ಆ

- ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಪ್ ಡಾ. ಬಿ ಆರ್ ಅಂಬೇಡ್ಕರ್ ಅವರ ಪೋಸ್ಟರ್ ಪ್ರದರ್ಶನ ಮಾಡಿರುವ ಪೋಸ್ಟ್ ವೈರಲ್.
- ಸಜಗ್ ತನಿಖೆಯಲ್ಲಿ ಈ ಫೋಟೋ ನಕಲಿ ಎಂಬುದು ದೃಢಪಟ್ಟಿದೆ.

ಫೋಟೋವನ್ನು ತಿರುಚಿ ಡಾ.ಬಿಆರ್ ಅಂಬೇಡ್ಕರ್ ಅವರ ಫೋಟೋ ಹಾಕಲಾಗಿದೆ.

ಕೇಬಲ್-ಸ್ಯಾಟಲೈಟ್ ಪಬ್ಲಿಕ್ ಅಫೇರ್ಸ್ ನೆಟ್‌ವರ್ಕ್‌ನ ಫಿ ಹ್ಯಾಂಡಲ್‌ನಲ್ಲಿ ಈ ಪೋಸ್ಟ್ ಅನ್ನು ಕಂಡುಕೊಂಡಿದೆ. ಟ್ರಾನ್ಸ್-ಪೆಸಿಫಿಕ್ ಪಾಲುದಾರಿಕೆ ಟಿಪಿಪಿಯಿಂದ ಅಮೆರಿಕವನ್ನು ಹೊರಗಿಡಲು ಅಧ್ಯಕ್ಷ ಟ್ರಂಪ್ ಕಾರ್ಯನಿರ್ವಾಹಕ ಆದೇಶಕ್ಕೆ ಸಹಿ ಹಾಕಿದರು ಎಂದು ಅದರಲ್ಲಿ ಬರೆಯಲಾಗಿದೆ. ಜತೆಗೆ ವಿಡಿಯೋವನ್ನು ಹಾಕಿದ್ದಾರೆ.

**ಅಂತಿಮ ತೀರ್ಮಾನ ಏನು?:** ಜೈ ಭೀಮ್ ಎಂದು ಬರೆದಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಚಿತ್ರವನ್ನು ಎಡಿಟ್ ಮಾಡಲಾಗಿದೆ. ಸಜಗ್ ಅವರ ತನಿಖೆಯಲ್ಲಿ, ಮೂಲ ಚಿತ್ರವನ್ನು 2017 ರಲ್ಲಿ ಕ್ಲಿಕ್ ಮಾಡಲಾಗಿದೆ. ಅದರಲ್ಲಿ ಒಪ್ಪಂದ ಒಂದರ ಫೈಲ್ ಕೈಲಿ ಹಿಡಿದಿದ್ದಾರೆ. ಅಂಬೇಡ್ಕರ್ ಚಿತ್ರ ಅಲ್ಲ ಎಂದು ಎಂದು ಪತ್ತೆಯಾಗಿದೆ.

# ಐವಿ ಫೀಡಿಂಗ್ ಬ್ಯಾಗ್ ಮಾಲಿನ್ಯದಿಂದ 17 ಮಕ್ಕಳ ಸಾವು

**ಮೆಕ್ಸಿಕೋ:** ಮಧ್ಯ ಮೆಕ್ಸಿಕೋದಲ್ಲಿ ಐವಿ ಫೀಡಿಂಗ್ ಬ್ಯಾಗ್‌ಗಳ ಶಂಕಿತ ಮಾಲಿನ್ಯದಿಂದ ಮೃತಪಟ್ಟ ಮಕ್ಕಳ ಸಂಖ್ಯೆ 17ಕ್ಕೇರಿದೆ. ಐವಿ ಫೀಡಿಂಗ್ ಬ್ಯಾಗ್‌ಗಳ ಮಾಲಿನ್ಯದಲ್ಲಿ ಮೊದಲ ನಾಲ್ಕು ಮಕ್ಕಳು ಸಾವನ್ನಪ್ಪಿದ್ದರು ನಂತರ ಇತರ 13 ಮಕ್ಕಳು ಬಲಿಯಾಗಿದ್ದಾರೆ ಎಂದು ಆರೋಗ್ಯ ಕಾರ್ಯದರ್ಶಿ ಡೇವಿಡ್ ಕೆರ್ಶನೊಬಿಚ್ ತಿಳಿಸಿದ್ದಾರೆ.

ಮಲ್ಟಿಡ್ರಗ್-ರೆಸಿಸ್ಟೆಂಟ್ ಬಗ್ ಸೇರಿದಂತೆ ಎರಡು ಬ್ಯಾಕ್ಟೀರಿಯಾಗಳು ಮಕ್ಕಳ ಸಾವಿಗೆ ಕಾರಣ ಇರಬಹುದು ಎಂದು ಶಂಕಿಸಲಾಗಿದೆ ಎಂದು ಅವರು ಹೇಳಿದರು. 4 ಪೌಷ್ಟಿಕಾಂಶದ ಮಿಶ್ರಣವನ್ನು ತಯಾರಿಸಿದ ಟೊಲುಕಾ ನಗರದ ಸ್ಥಾವರದಲ್ಲಿ ಬ್ಯಾಕ್ಟೀರಿಯಾದ ಮಾಲಿನ್ಯವು ಸ್ಪಷ್ಟವಾಗಿ ಸಂಭವಿಸಿದೆ ಮತ್ತು ಕಂಪನಿಯನ್ನು ತಾತ್ಕಾಲಿಕವಾಗಿ ಮುಚ್ಚಲಾಗಿದೆ ಮತ್ತು ಉತ್ಪನ್ನದ ಬಳಕೆಯನ್ನು ನಿಲ್ಲಿಸಲಾಗಿದೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ. ನವೆಂಬರ್ 22 ರಿಂದ ಮೊದಲ ಸೋಂಕುಗಳು ವರದಿಯಾ



ಗಿವೆ ಮತ್ತು ಕೊನೆಯದಾಗಿ ಡಿಸೆಂಬರ್ 3 ರಂದು ಗುರುತಿಸಲಾಯಿತು. ಸುಮಾರು 20 ಇತರ ರೋಗಿಗಳು ಸೋಂಕಿನಿಂದ ಅಸ್ವಸ್ಥರಾಗಿದ್ದರು ಮತ್ತು ಅದಕ್ಕೆ ಚಿಕಿತ್ಸೆ ಪಡೆಯುತ್ತಿದ್ದಾರೆ. ಎಲ್ಲಾ 13 ಮೊದಲ ಸಾವುಗಳು ಮೆಕ್ಸಿಕೋ ನಗರದ ಹೊರವಲಯದಲ್ಲಿರುವ ಮೆಕ್ಸಿಕೋ ರಾಜ್ಯದಲ್ಲಿ ಮೂರು ಸರ್ಕಾರಿ ಆಸ್ಪತ್ರೆಗಳಲ್ಲಿ ಮತ್ತು ಒಂದು ಖಾಸಗಿ ಆಸ್ಪತ್ರೆಯಲ್ಲಿ ಸಂಭವಿಸಿವೆ.

ಎಲ್ಲಾ ಸಾವುಗಳಲ್ಲಿ ಒಂದೇ ಬ್ಯಾಕ್ಟೀರಿಯಾ ಮತ್ತು ಅದೇ ಐವಿ ಫೀಡಿಂಗ್ ಚೀಲಗಳು ಭಾಗಿಯಾಗಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಈ ಹಿಂದೆ, ಫೆಡರಲ್ ಸಾರ್ವಜನಿಕ ಆರೋಗ್ಯ

**ಕೆರ್ಶನೊಬಿಚ್ ಅವರು ಯಾವುದೇ ಇತರ ಸಾವುಗಳನ್ನು ನಿರೀಕ್ಷಿಸುವುದಿಲ್ಲ ಎಂದು ಹೇಳಿದರು, ಆದರೆ ಮೆಕ್ಸಿಕೊ ರಾಜ್ಯದಲ್ಲಿ ಇದೇ ರೀತಿಯ ಗುಣಲಕ್ಷಣಗಳೊಂದಿಗೆ ಇತರ ಸಂಭವನೀಯ ಪ್ರಕರಣಗಳನ್ನು ಅಧಿಕಾರಿಗಳು ಪತ್ತೆಹಚ್ಚಿದ್ದಾರೆ, ಅದು ತನಿಖೆಯಲ್ಲಿದೆ. ನೆರೆಯ ರಾಜ್ಯವಾದ ಮೈಕೋವಾಕನ್‌ನಲ್ಲಿ ಮತ್ತು ಉತ್ತರ-ಮಧ್ಯ ರಾಜ್ಯವಾದ ಗುವಾನಾಜುವಾಟೊದಲ್ಲಿ ಇನ್ನೂ ಮೂರು ಸಾವುಗಳು ಸಂಭವಿಸಿವೆ ಎಂದು ಕಂಡುಬಂದಿದೆ.**

ಇಲಾಖೆಯು ಪೊಡಕ್ಟೋಸ್ ಹಾಸ್ಪಿಟಾರಿಯೊಸ್ ಎಸ್‌ಎ ಡಿ ಸಿವಿ ಕಂಪನಿಯಿಂದ ತಯಾರಿಸಿದ ಐವಿ ನ್ಯೂಟ್ರಿಷನ್ ಬ್ಯಾಗ್‌ಗಳನ್ನು ಬಳಸದಂತೆ ದೇಶಾದ್ಯಂತ ವೈದ್ಯರಿಗೆ ಆದೇಶ ನೀಡಿತು.

# ಪ್ರೇಯಸಿಯನ್ನು ಕೊಂದು ಶವ ಹೂತಿಟ್ಟಿದ್ದವ ಅರೆಸ್ಟ್

**ನಾಗ್ಪುರ:** ಸೇವೆಯಿಂದ ವಜಾಗೊಂಡ ಪೊಲೀಸ್ ಅಧಿಕಾರಿಯೊಬ್ಬ ತನ್ನ ಪ್ರೇಯಸಿಯನ್ನು ಕೊಂದು ನಂತರ ಶವವನ್ನು ನಿರ್ಮಾಣ ಹಂತದಲ್ಲಿರುವ ಕಟ್ಟಡದ ಹಿಂದೆ ಹೂತಿಟ್ಟಿದ್ದ ಘಟನೆ ಇಲ್ಲಿ ನಡೆದಿದೆ. ಆರೋಪಿಯನ್ನು ನರೇಶ್ ಅಲಿಯಾಸ್ ನರೇಂದ್ರ ಪಾಂಡುರಂಗ ದಹುಲೆ (40)ಎಂದು ಗುರುತಿಸಲಾಗಿದ್ದು ,ನೆರೆಯ ಚಂದ್ರಾಪುರ ಜಿಲ್ಲೆಯಲ್ಲಿ ಬಂಧಿಸಲಾಗಿದೆ ಮತ್ತು ಕೊಲೆ ಮತ್ತು ಸಾಕ್ಷ್ಯ ನಾಶದ ಆರೋಪ ಹೊರಿಸಲಾಗಿದೆ ಎಂದು ಪೊಲೀಸರು ಹೇಳಿದರು.




ಆರೋಪಿಯು ಹಿಂದೆ ಮುಂಬೈ ಪೊಲೀಸ್ ಪಡೆಯಲ್ಲಿ ಕೆಲಸ ಮಾಡಿದ್ದ , ಆದರೆ ಸೇವೆಯಿಂದ ವಜಾಗೊಳಿಸಲಾಗಿತ್ತು ಎಂದು ತಿಳಿಸಿದ್ದಾರೆ. ಚಂದ್ರಾಪುರ ಜಿಲ್ಲೆಯ ಚಿಮೂರ್ ನಿವಾಸಿ ವಿವಾಹಿತ ಮಹಿಳೆಯೊಂದಿಗೆ ಆರೋಪಿ ಸಂಭಂಧ ಹೊಂದಿದ್ದ. ಶಾಲಾ ಅವಧಿಯಲ್ಲಿ ಸಹಪಾಠಿಗಳಾಗಿದ್ದ ದಾಹುಲೆ, ಮಹಿಳೆ ಆಗಸ್ಟ್‌ನಲ್ಲಿ ಫೇಸ್‌ಬುಕ್ ಮೂಲಕ ತಮ ಪರಿಚಯ ಮಾಡಿಕೊಂಡಿದ್ದರು .ಅದು ಶೀಘ್ರದಲ್ಲೇ ಪ್ರಣಯ ಸಂಬಂಧವನ್ನು ತಿರುಗಿತ್ತು ಮತ್ತು ಜೊತೆಯಾಗಿ ಇರಲು ನಿರ್ಧರಿಸಿದರು. ಕಳೆದ ನ.26 ರಂದುಮುಂದಿನ ಭವಿಷ್ಯದ ಬಗ್ಗೆ ತೀವ್ರ ವಾದ-ಪ್ರತಿವಾದ ನಡೆದು ಅದು ಜಗಳಕ್ಕೆ ಕಾರಣವಾಗಿದೆ ಇದು ವಿಕೋಪಕ್ಕೆ ಹೋಗಿ ಕೋಪದಲ್ಲಿ ದಾಹುಲೆ ತನ್ನ ಪ್ರಿಯಸಿಯ ಕತ್ತು ಹಿಸುಕಿ ಕೊಂದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ನಂತರ ಅಪರಾಧವನ್ನು ಮರೆಮಾಚಲು, ಶವದೊಂದಿಗೆ ಕದ್ದ ಕಾರಿನಲ್ಲಿ ಗಂಟೆಗಟ್ಟಲೆ ತಿರುಗಾಡಿದ್ದಾನೆ.

ರಾತ್ರಿ ಬೆಲ್ತರೋಡಿ ಪೊಲೀಸ್ ಠಾಣಾ ವ್ಯಾಪ್ತಿಯ ವೇಲಾ ಹರಿ ಪ್ರದೇಶದಲ್ಲಿ ನಿರ್ಮಾಣ ಹಂತದಲ್ಲಿರುವ ಕಟ್ಟಡದ ಹಿಂದಿನ ಸೆಪ್ಟಿಕ್ ಟ್ಯಾಂಕ್‌ನಲ್ಲಿ ಶವವನ್ನು ಎಸೆದು ಮಣ್ಣು ಸುರಿದಿದ್ದಾನೆ.

ಕೆಲವೇ ದಿನದಲ್ಲಿ ಕಾರು ಕಳ್ಳತನ ವಾಗಿರುವ ಬಗ್ಗೆ ತನಿಖೆ ನಡೆಸಿದ ಚಂದ್ರಾಪುರ ಪೊಲೀಸರು ದಾಹುಲೆನನ್ನು ಬಂಧಿಸಿದ್ದರು. ಫೋನ್ ದಾಖಲೆಗಳು,ಮತ್ತು ವಿಚಾರಣೆ ವೇಳೆ ದಾಹುಲೆ ಮಹಿಳೆಯ ಕೊಲೆ ಮಾಡಿರುವುದು ಗೊತ್ತಾಗಿದೆ. ನಂತರ ಶವವನ್ನು ಎಸೆದ ಸ್ಥಳಕ್ಕೆ ಪೊಲೀಸರನ್ನು ಕರೆದೊಯ್ದರು ಪರಿಶೀಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಭಾರತಕ್ಕಾಗಿ ಒಗ್ಗೂಡಿದ ರಷ್ಯಾ ಉಕ್ರೇನ್ ತುಶಿಲ್ ಯುದ್ಧನೌಕೆ ಹಸ್ತಾಂತರ

**ಮಾಸ್ಕೋ:** ಹೆಚ್ಚುಕಡಿಮೆ ಕಳೆದ ಎರಡು ವರ್ಷಗಳಿಂದ ರಷ್ಯಾ-ಉಕ್ರೇನ್ ನಡ್ವೆ ಭೀಕರ ಯುದ್ಧ ನಡೀತಿದೆ. ಆದ್ರೆ, ಇಬ್ಬರೂ ಬದ್ಧ ವೈರಿಗಳು ಭಾರತಕ್ಕಾಗಿ ಒಗ್ಗೂಡಿದ ಅಪರೂಪದ ಘಟನೆ ನಡೆದಿದೆ. ರಷ್ಯಾ ಮತ್ತು ಉಕ್ರೇನ್ ನಡುವಿನ ವರ್ಷಗಳ ಸುದೀರ್ಘ ಯುದ್ಧದ ಹೊರತಾಗಿಯೂ, ಮಾಸ್ಕೋ ಮತ್ತು ಕೀವ್ ಭಾರತಕ್ಕಾಗಿ ಯುದ್ಧನೌಕೆ ನಿರ್ಮಾಣಕ್ಕಾಗಿ ಒಟ್ಟಾಗಿ ಸೇರಿವೆ.

ಭಾರತದ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಉನ್ನತ ಮಟ್ಟದ ಭೇಟಿಗಾಗಿ ಮಾಸ್ಕೋಗೆ ಆಗಮಿಸುತ್ತಿದ್ದಂತೆ ಸೋಮವಾರ ರಷ್ಯಾ-ಉಕ್ರೇನ್ ಜಂಟಿ ನಿರ್ಮಿತ ಯುದ್ಧ ನೌಕೆಯನ್ನು ಭಾರತಕ್ಕೆ ಅಧಿಕೃತವಾಗಿ ಹಸ್ತಾಂತರಿಸಲಾಗಿದೆ.

ಯುದ್ಧನೌಕೆ ಐಎನ್‌ಎಸ್ ತುಶಿಲ್ ವಿತರಣೆ ಕಾರ್ಯಕ್ರಮದಲ್ಲಿ ರಷ್ಯಾ, ಉಕ್ರೇನ್ ಪ್ರತಿನಿಧಿಗಳು ಹಾಜರಿದಿದ್ದು ಕಾರ್ಯಕ್ರಮದ ವಿಶೇಷವಾಗಿತ್ತು. 2016ರಲ್ಲಿ ಭಾರತ ಸರ್ಕಾರ 2 ಯುದ್ಧನೌಕೆಗಾಗಿ ಆರ್ಡರ್ ಮಾಡಿತ್ತು. ಇದು ರಷ್ಯಾ ನಿರ್ಮಿತ ಕ್ರಿವಾಕ್ III-ವರ್ಗದ ಯುದ್ಧ ನೌಕೆಯಾಗಿದ್ದು, ಇದು ಸುಧಾರಿತ ಸ್ಟೆಲ್ತ್ ಮಿಸೈಲ್ ಫ್ರಿಗೇಟ್ ಆಗಿದೆ.

ಭಾರತವು ಪ್ರಸ್ತುತ ಇಂತಹ ಆರು ಯುದ್ಧನೌಕೆಗಳನ್ನು ನಿರ್ವಹಿಸುತ್ತಿದೆ. ಅಲ್ಲದೇ ರಷ್ಯಾದಲ್ಲಿ ತಯಾರಾಗುತ್ತಿರುವ ಎರಡು ಹಡಗುಗಳು ಮಾತ್ರವಲ್ಲದೇ, ಇದೇ ರೀತಿಯ ಇನ್ನೂ ಎರಡು ಹಡಗುಗಳನ್ನು ಭಾರತದಲ್ಲಿ ಕೂಡ ತಯಾರಿಸಲು ಆದೇಶಿಸಲಾಗಿದೆ.

ಭಾರತದ ಗೋವಾ ಶಿಪ್‌ಯಾರ್ಡ್‌ನಲ್ಲಿ ಈ ಹಡಗುಗಳ ನಿರ್ಮಾಣ ಕಾರ್ಯ ಭರದಿಂದ ಸಾಗಿದೆ.

# ಕಾರ್ಯಕ್ರಮಕ್ಕೆ ಆಹ್ವಾನಿಸಿ ಸಿನಿಮಾ ನಟನನ್ನೇ ಅಪಹರಿಸಿದ ಖದೀಮರು

**ಮುಂಬೈ:** ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಬರುವಂತೆ ಆಹ್ವಾನಿಸಿ ಸ್ತ್ರೀ 2 ಚಿತ್ರದ ನಟ ಮುಷ್ತಾಖ್ ಖಾನ್ ಅವರನ್ನು ಅಪಹರಿಸಿ ಒಂದು ಕೋಟಿ ರೂ. ಗಳಿಗೆ ಬೇಡಿಕೆ ಇಟ್ಟಿರುವ ಘಟನೆ ಮೀರತ್‌ನಲ್ಲಿ ನಡೆದಿದೆ. ಆದರೆ, ಸೇಮ್ ಸಿನಿಮಾ ಹೀರೋಗಳಂತೆ ಖಾನ್ ಕೂಡ ಅಪಹರಣಕಾರರಿಂದ ಸಿನಿಮಿಯ ರೀತಿಯಲ್ಲಿ ತಪ್ಪಿಸಿಕೊಂಡು ಬಂದು ಪೊಲೀಸರಿಗೆ ದೂರು ನೀಡಿದ್ದಾರೆ. ಜನಪ್ರಿಯತೆ ಪಡೆಯಲು, ಟಿವಿ-ಪೇಪಗಳಲ್ಲಿ ಹೆಸರು ಬರಬೇಕು ಎಂಬ ಕಾರಣಕ್ಕೆ ಅವಾರ್ಡ್ ಫಂಕ್ಷನ್‌ಗಳನ್ನು ಮಾಡಿ, ದೊಡ್ಡ ದೊಡ್ಡ ಕಲಾವಿದರನ್ನು ಕರೆಸಿ, ಅವರಿಗೆ ದೊಡ್ಡ ಮೊತ್ತದ ಸಂಭಾವನೆ ಕೊಡುವುದನ್ನು ನೀವು ಕೇಳಿರುತ್ತೀರಿ.



**ಹೀಗಾಗಿ ಮುಷ್ತಖ್ ಮುಂಬೈನಿಂದ ದೆಹಲಿಗೆ ಪ್ರ ಯಾಣ ಬೆಳೆಸಿದರು. ದೆಹಲಿ ವಿಮಾನ ನಿಲ್ದಾಣ ಇಳಿಯುತ್ತಿದ್ದಂತೆ ಅವರನ್ನು ಪಿಕ್ ಮಾಡಲು ಕಾರು ಕೂಡ ಬಂತು. ಆದರೆ, ನಂತರ ಅವರನ್ನು ಅಪಹರಿಸಲಾಯಿತು.**

ಆದರೆ, ಇಲ್ಲಿ ಅವಾರ್ಡ್ ಕಾರ್ಯಕ್ರಮದ ಹೆಸರಲ್ಲಿ ನಟ ನನ್ನೇ ಕಿಡ್ನ್ಯಾಪ್ ಮಾಡಲಾಗಿದೆ. ಇದಕ್ಕಾಗಿ ಆ ನಟನಿಗೆ ಅಡ್ವಾನ್ಸ್ ಹಣ ಕೊಟ್ಟು ಅವ ರನ್ನು ತಮ ಬಳಿ ಕರೆಸಿಕೊಂಡಿದ್ದಾರೆ. ವೆಲ್ಕಮ್, ಸ್ತ್ರೀ 2 ಚಿತ್ರಗಳಲ್ಲಿ ನಟಿಸಿರೋ ಮುಷ್ತಖ್ ಖಾನ್ ಅವರನ್ನು ಮೀರತ್ನಲ್ಲಿ ಅವಾರ್ಡ್ ಕಾರ್ಯಕ್ರಮ ಆಯೋಜನೆ ಮಾಡಿದ್ದೇವೆ, ಅದಕ್ಕೆ ನೀವು ಬರಬೇಕು ಎಂದು ಮುಷ್ತಖ್ ಅವರಿಗೆ ಆಮಂತ್ರಣ ಬಂದಿತ್ತು. ಇಷ್ಟೇ ಆಗಿದ್ದರೆ ಅವರು ಅವಾರ್ಡ್ ಕಾರ್ಯಕ್ರಮಕ್ಕೆ ತೆರಳುವುದು ಹಾಗಿರಲಿ ಅದನ್ನು ನಂಬುತ್ತಲೂ ಇರಲಿಲ್ಲ.

ಆದರೆ, ನಟನಿಗೆ ನಂಬಿಕೆ ಬರಬೇಕು ಎಂಬ ಕಾರಣಕ್ಕೆ ಫ್ಲೈಟ್ ಟಿಕೆಟ್ ಅರೇಂಜ್ ಮಾಡಿ, ಅಡ್ವಾನ್ಸ್ ಹಣವನ್ನು ಕೂಡ ಹಾಕಿದ್ದರು. ಅಪಹರಣ ಮಾಡಿದ ವ್ಯಕ್ತಿಗಳು ಮುಷ್ತಖ್ ಅವರಿಂದ 1 ಕೋಟಿ ರೂಪಾಯಿಗೆ ಬೇಡಿಕೆ ಇಟ್ಟಿದ್ದರು. ಅವರು ಅಷ್ಟು ಹಣವಿಲ್ಲ ಎಂದಾಗ ಅವರಿಂದ 2 ಲಕ್ಷ ರೂಪಾಯಿ ಮಾತ್ರ ಕಿತ್ತುಕೊಂಡರು. ನಂತರ ಅವರು ಮುಂಜಾನೆ ಅಪಹರಣಕಾರರು ಪ್ರಾರ್ಥನೆ ಮಾಡುತ್ತಿದ್ದಾರೆ ಅವರು ಸಿನಿಮಿಯ ಮಾದರಿಯಲ್ಲಿ ತಪ್ಪಿಸಿ ಕೊಂಡು ಬಂದು ಪೊಲೀಸರಿಗೆ ದೂರು ನೀಡಿದ್ದಾರೆ.


# ಗಾಜಾ ಮೇಲೆ ಇಸ್ರೇಲ್ ದಾಳಿ: 29 ಮಂದಿ ಸಾವು

**ಗಾಜಾ ಪಟ್ಟಿ:** ಗಾಜಾ ಪಟ್ಟಿಯ ಮೇಲೆ ಮಂಗಳವಾರ ರಾತ್ರಿ, ಬುಧವಾರ ಇಸ್ರೇಲ್ ನಡೆಸಿದ ದಾಳಿಯಲ್ಲಿ 29 ಜನ ಮೃತಪಟ್ಟಿದ್ದಾರೆ.

ಗಾಜಾ ಗಡಿಭಾಗದಲ್ಲಿರುವ ಬೈತ್ ಲಹಿಯಾ ನಗರದಲ್ಲಿ 19 ಮಂದಿ ಮೃತಪಟ್ಟಿದ್ದಾರೆ. ನಸೀರತ್ ನಿರಾಶ್ರಿತರ ಶಿಬಿರದ ಮೇಲೆ ನಡೆದ ದಾಳಿಯಲ್ಲಿ 7 ಮಂದಿ ಸಾವಿಗೀಡಾಗಿದ್ದಾರೆ ಎಂದು ಪ್ಯಾಲೆಸ್ಟೀನ್‌ನ ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ.

ಆಸ್ಪತ್ರೆಯ ಪ್ರವೇಶ ದ್ವಾರದ ಬಳಿ ಸಂಭವಿಸಿದ ದಾಳಿಯಲ್ಲಿ ಒಬ್ಬ ಮಹಿಳೆ ಹಾಗೂ ಆಕೆಯ ಮೂವರು ಮಕ್ಕಳು ಸೇರಿದಂತೆ ಒಟ್ಟು ಮೂವರು ಮೃತಪಟ್ಟಿದ್ದಾರೆ ಎಂದು ಕಮಲ್ ಅಶ್ವಿನ್ ಆಸ್ಪತ್ರೆ ಹೇಳಿದೆ.

ದಾಳಿಯ ಬಗ್ಗೆ ಇಸ್ರೇಲ್ ಸೇನೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ನಾಗರಿಕರಿಗೆ ಹಾನಿಯಾಗುವುದನ್ನು ತಪ್ಪಿಸಲು ಪ್ರಯತ್ನಿಸುತ್ತಿದ್ದೇವೆ. ಆದರೆ ಬಂಡುಕೋರರು ಜನರ ನಡುವೆ ಅವಿತುಕೊಂಡು ಅವರ ಜೀವಕ್ಕೆ



ಸಂಚಕಾರ ತರುತ್ತಿದ್ದಾರೆ ಎಂದು ಇಸ್ರೇಲ್ ಪದೇ ಪದೇ ಹೇಳುತ್ತಿದೆ.

ಬಂಡುಕೋರರು ಬುಧವಾರ ಇಸ್ರೇಲ್ ಕಡೆಗೆ ನಾಲ್ಕು ರಾಕೆಟ್‌ಗಳನ್ನು ಹಾರಿಸಿದ್ದಾರೆ ಅದರಲ್ಲಿ ಎರಡನ್ನು ಹೊಡೆದುರುಳಿಸಲಾಗಿದೆ. ಇನ್ನೆರಡು ರಾಕೆಟ್‌ಗಳು ಖಾಲಿ ಜಾಗಕ್ಕೆ ಬಿದ್ದಿದ್ದು ಯಾವುದೇ ಹಾನಿ ಸಂಭವಿಸಿಲ್ಲ ಎಂದು ಇಸ್ರೇಲ್ ಸೇನೆ ತಿಳಿಸಿದೆ.

### ಬೈರೂತ್ ವರದಿ:

**ಲೆಬನಾನ್‌ನ ದಕ್ಷಿಣದಲ್ಲಿರುವ ಪಟ್ಟಣವೊಂದರ ಮೇಲೆ ಇಸ್ರೇಲ್ ಪಡೆಗಳು ಡ್ರೋನ್ ಮೂಲಕ ಬುಧವಾರ ನಡೆಸಿದ ದಾಳಿಯಲ್ಲಿ ಒಬ್ಬ ವ್ಯಕ್ತಿ ಮೃತಪಟ್ಟಿದ್ದಾನೆ ಎಂದು ಲೆಬನಾನ್ ಆರೋಗ್ಯ ಸಚಿವಾಲಯ ಹೇಳಿದೆ.**

# ಘನತೆ, ಗೌರವ ಮಹಿಳೆಯರಿಗಷ್ಟೇ ಅಲ್ಲ, ಪುರುಷರಿಗೂ ಇದೆ: ಹೈಕೋರ್ಟ್

**ಕೊಚ್ಚಿ:** 2007ರಲ್ಲಿ ನಟಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದಲ್ಲಿ ಹಿರಿಯ ನಟ, ನಿರ್ದೇಶಕ ಬಾಲಚಂದ್ರ ಮೆನನ್ ಅವರಿಗೆ ನಿರೀಕ್ಷಣಾ ಜಾಮೀನು ಮಂಜೂರು ಮಾಡಿ ರುವ ಕೇರಳ ಹೈಕೋರ್ಟ್, ಮಹಿಳೆಯರಷ್ಟೇ ಅಲ್ಲ, ಪುರುಷರಿಗೂ ಗೌರವ ಮತ್ತು ಘನತೆ ಇದೆ ಎಂದು ಹೇಳಿದೆ. ತಮಗೆ ಕಿರುಕುಳ ನೀಡಲಾಗಿದೆ ಎಂದು 17 ವರ್ಷಗಳ ಬಳಿಕ ನಟಿ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಿಸಿದ್ದಾರೆ.



ಇದರಲ್ಲಿ ನನ್ನ ಗೌರವ ಮತ್ತು ಘನತೆ ಹಾಳುಮಾಡುವ ಉದ್ದೇಶವಿದೆಯೇ ಹೊರತು ಬೇರೇನೂ ಅಲ್ಲ ಎಂದು ಮೆನನ್ ವಾದಿಸಿದ್ದರು. ಮೆನನ್ ಮನವಿಯನ್ನು ಪುರಸ್ಕರಿಸಿದ ನ್ಯಾಯಮೂರ್ತಿ ಪಿ.ವಿ. ಕುನ್ನಿಕೃಷ್ಣನ್ ಜಾಮೀನು ಮಂ ಜೂರು ಮಾಡಿದ್ದಾರೆ. ಆರೋಪಿಯ ವಾದದಲ್ಲಿ ಹುರುಳಿದೆ. 17 ವರ್ಷಗಳ ಬಳಿಕ ದೂರು ನೀಡಲಾಗಿದೆ. ಆರೋಪಿಯು ಖ್ಯಾತ ಸಿನಿಮಾ ನಟ. 40ಕ್ಕೂ ಅಧಿಕ ಚಿತ್ರಗಳನ್ನು ನಿರ್ದೇಶನ ಮಾಡಿದ್ದಾರೆ. ಎರಡು ರಾಷ್ಟ್ರೀಯ ಪ್ರಶಸ್ತಿಗಳನ್ನು ಪಡೆದಿದ್ದಾರೆ. ಪದ್ಮಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ. ಸಂತ್ರಸ್ತ ನಟಿಯ ಹೇಳಿಕೆಯನ್ನು ಆಧರಿಸಿ ನೋಡುವುದಾದರೆ, 17 ವರ್ಷಗಳ ಬಳಿಕ ಪ್ರಕರಣ ದಾಖಲಿಸಲಾಗಿದೆ.

ವಿಚಾರಣೆ ಬಳಿಕ ತನಿಖಾಧಿಕಾರಿಯು ಮೆನನ್ ಅವರನ್ನು ಬಂಧಿಸಲು ಬಯಸಿದರೆ, 50,000 ಬಾಂಡ್ ಮತ್ತು ಇಬ್ಬರ ಶೂರಿಟಿ ಪಡೆದು ಬಿಡುಗಡೆ ಮಾಡಬೇಕು ಎಂದು ನ್ಯಾಯಪೀಠ ಹೇಳಿದೆ. ಮಲಯಾಳಂ ಚಿತ್ರರಂಗದಲ್ಲಿ ಕಲಾವಿದೆಯರ ಮೇಲೆ ಲೈಂಗಿಕ ದೌರ್ಜನ್ಯ ನಡೆಯುತ್ತಿದೆ ಎಂಬ ಆರೋಪಗಳ ಹಿನ್ನೆಲೆ ಸಲ್ಲಿಕೆಯಾದ ನ್ಯಾಯಮೂರ್ತಿ ಹೇಮಾ ಸಮಿತಿ

### ಮಹಿಳೆಯರಿಗೆ ಸೀಮಿತವಲ್ಲ

**ತನಿಖೆ ಪ್ರಗತಿಯಲ್ಲಿರುವುದು ಸತ್ಯ. ಗೌರವ ಮತ್ತು ಘನತೆ ಕೇವಲ ಮಹಿಳೆಯರಿಗೆ ಸೀಮಿತವಲ್ಲ ಎಂಬುದನ್ನು ಪ್ರತಿಯೊಬ್ಬರೂ ಗಮನದಲ್ಲಿಟ್ಟುಕೊಳ್ಳಬೇಕಿದೆ. ಪುರುಷರಿಗೂ ಗೌರವ ಮತ್ತು ಘನತೆ ಇದೆ. ನ್ಯಾಯದ ದೃಷ್ಟಿಯಿಂದ ಈ ಪ್ರಕರಣದಲ್ಲಿ ಜಾಮೀನು ನೀಡಬಹುದು' ಎಂದು ನ್ಯಾಯಮೂರ್ತಿ ಹೇಳಿದ್ದಾರೆ. ಅಲ್ಲದೆ, ನಿರ್ದೇಶಕ ಮೆನನ್ ಅವರು ಎರಡು ವಾರಗಳಲ್ಲಿ ತನಿಖಾಧಿಕಾರಿ ಮುಂದೆ ವಿಚಾರಣೆಗೆ ಹಾಜರಾಗಬೇಕೆಂದು ನ್ಯಾಯಪೀಠ ಆದೇಶಿಸಿದೆ.**

ವರದಿ ಬೆನ್ನಲ್ಲೇ ನಟಿ ದೂರು ದಾಖಲಿಸಿದ್ದರು.

# ಆತ್ಮಹತ್ಯೆಗೆ ಯತ್ನಿಸಿದ ಮಾಜಿ ರಕ್ಷಣಾ ಸಚಿವ

**ಸೋಲ್:** ಸೇನಾ ಆಡಳಿತ ಹೇರಿಕೆ ಪ್ರಕರಣ ಸಂಬಂಧ ಬಂಧನದಲ್ಲಿರುವ ದಕ್ಷಿಣ ಕೊರಿಯಾ ಮಾಜಿ ರಕ್ಷಣಾ ಸಚಿವ ಕಿಮ್ ಯಾಂಗ್ ಟ್ಯೂನ್ ಆತ್ಮಹತ್ಯೆಗೆ ಯತ್ನಿಸಿದ್ದಾರೆ ಎಂದು ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ.



ಮಾಜಿ ರಕ್ಷಣಾ ಸಚಿವ ಕಿಮ್ ಅವರು ನಿನ್ನೆ ರಾತ್ರಿ ಸಿಯೋಲ್ ಜೈಲಿನಲ್ಲಿ ಆತ್ಮಹತ್ಯೆಗೆ ಯತ್ನಿಸಿದ್ದರು. ಅಧಿಕಾರಿಗಳು ಅವರನ್ನು ತಡೆದಿದ್ದಾರೆ ಮತ್ತು ಅವರ ಆರೋಗ್ಯ ಈಗ ಸ್ಥಿರವಾಗಿದೆ' ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ದಂಗೆಗೆ ಕಾರಣವಾದ ಮತ್ತು ಅಧಿಕಾರ ದುರುಪಯೋಗಪಡಿಸಿಕೊಂಡ ಆರೋಪಕ್ಕೆ ಸಂಬಂಧಿಸಿ ಸೋಲ್ ನ್ಯಾಯಾಲಯ ವಾರೆಂಟ್ ಜಾರಿಗೊಳಿ ಸಿದ ಬಳಿ ಕಿಮ್ ಅವರನ್ನು ಬಂಧಿಸಲಾಗಿದೆ.

ಸೇನಾ ಆಡ ಳಿತ ಹೇರಿಕೆ ಯತ್ನ ಪ್ರಕರಣಕ್ಕೆ ಸಂಬಂಧಿಸಿ ಮೊದಲ ಬಂ ಧನ ಇದಾಗಿದೆ. ದೇಶದಲ್ಲಿ ಸೇನಾ ಆಡಳಿತ ಹೇರಿಕೆಗೆ ಅಧ್ಯಕ್ಷ ಯುನ್ ಸುಕ್ ಯೋಲ್ ಅವರು ಯತ್ನಿಸಿದ್ದರು. ಈ ಬಗ್ಗೆ ತೀವ್ರ ವಿರೋಧ ವ್ಯಕ್ತವಾದ ಹಿನ್ನೆಲೆ ಘೋಷಣೆಯನ್ನು ಹಿಂಪಡೆದಿದ್ದರು. ಅಧ್ಯಕ್ಷ ಯುನ್ ಆಪ್ತರಾಗಿದ್ದ ಕಿಮ್, ಈ ಕಾನೂನಿನ ಹೇರಿಕೆಗೆ ಸಲಹೆ ನೀಡಿದ ಮತ್ತು ಅದರ ವಿರುದ್ಧ ಮತ ಚಲಾವಣೆಯಾಗದಂತೆ ತಡೆಯಲು ರಾಷ್ಟ್ರೀಯ ಅಸೆಂಬ್ಲಿಗೆ ಸೈನ್ಯವನ್ನು ಕಳುಹಿಸಿದ ಆರೋಪಗಳನ್ನು ಎದುರಿಸುತ್ತಿದ್ದಾರೆ.

ಕಾನೂನಿನ ವಿರುದ್ಧದ ಮತ ಚಲಾವಣೆಯನ್ನು ತಡೆಯಲು ಸಂಸತ್ತಿಗೆ ಪೊಲೀಸ್ ಪಡೆಯನ್ನು ಕಳುಹಿಸಿದ ಆರೋಪದಡಿ ರಾಷ್ಟ್ರೀಯ ಪೊಲೀಸ್ ಏಜೆನ್ಸಿ ಕಮಿಷನರ್ ಜನರಲ್, ಸೋಲ್ ನಗರ ಪೊಲೀಸ್ ಮುಖ್ಯಸ್ಥರನ್ನು ಪೊಲೀಸರು ಬುಧವಾರ ವಶಕ್ಕೆ ಪಡೆದಿದ್ದಾರೆ. ದೇಶದಲ್ಲಿ ಉಂಟಾದ ದಂಗೆಯಲ್ಲಿ ಯೂನ್, ಕಿಮ್ ಮತ್ತು ಇತರರು ಭಾಗಿಯಾಗಿದ್ದಾರೆಯೇ ಎಂಬುವುದನ್ನು ಪತ್ತೆ ಹಚ್ಚಲು ತನಿಖೆ ನಡೆಯುತ್ತಿದೆ. ಪ್ರಕರಣ ಸಂಬಂಧ ಅಧ್ಯಕ್ಷ ಯೂನ್ ಅವರ ಕಚೇರಿಯಲ್ಲಿ ಬುಧವಾರ ಶೋಧ ನಡೆಸಲು ಪೊಲೀಸರು ಮುಂದಾಗಿದ್ದರು ಆದರೆ ಭದ್ರತಾ ಸಿಬ್ಬಂದಿ ಅವರನ್ನು ಒಳಪ್ರವೇಶಿಸಲು ಬಿಡಲಿಲ್ಲ.

# ಸಿರಿಯಾದಲ್ಲಿ ಬಂಡುಕೋರರ ಹಂಗಾಮಿ ಸರಕಾರ ರಚನೆ

## ಸಂಘರ್ಷ ಪೀಡಿತ ಸಿರಿಯಾದಿಂದ 75 ಭಾರತೀಯರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿದ ಕೇಂದ್ರ ಸರಕಾರ

**ಡಮಾಸ್ಕಸ್:** ಸಿರಿಯಾದಲ್ಲಿ ಅರಾಜಕತೆ ಸೃಷ್ಟಿಯಾದ ಬೆನ್ನಲ್ಲೇ ಎರಡು ದಿನಗಳಲ್ಲಿ ಡಮಾಸ್ಕಸ್ ಮತ್ತು ಬೈರುತ್‌ನಲ್ಲಿರುವ ಭಾರತದ ರಾಯಭಾರ ಕಚೇರಿಗಳು 75 ಭಾರ ತೀಯರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿದೆ ಎಂದು ಭಾರತೀಯ ವಿದೇಶಾಂಗ ಸಚಿವಾಲಯ ಮಾಹಿತಿ ನೀಡಿದೆ. 75 ಮಂದಿಯಲ್ಲಿ ಸೈದಾ ಜೈನಬ್‌ನಲ್ಲಿದ್ದ ಜಮ್ಮು ಮತ್ತು ಕಾಶ್ಮೀರದ 44 ಜೈರೀನ್‌ಗಳೂ ಸೇರಿದ್ದು ಇವರನ್ನು ರಾಯಭಾರಿ ನೂರ್ ರೆಹಮಾನ್ ಲೆಬನಾನ್‌ನ ರಾಜಧಾನಿ ಬೈರುತ್‌ಗೆ ಆಹ್ವಾನಿಸಿದ್ದಾರೆ. ಇವರೆಲ್ಲ ಲಭ್ಯವಾಗುವ ವಿಮಾನದಲ್ಲಿ ಬೈರುತ್‌ನಿಂದ ಭಾರತಕ್ಕೆ ಮರಳಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.



ಮೊದಲ ಬಾರಿಗೆ ರಷ್ಯಾ ಸರಕಾರ ಸ್ಪಷ್ಟನೆ

**ಸಿರಿಯಾದಲ್ಲಿ ಬಂಡುಕೋರರ ಹಂಗಾಮಿ ಸರಕಾರ ರಚನೆ:** ಸಿರಿಯಾ ದೇಶದ ಆಡಳಿತ ನಿರ್ವಹಣೆಗೆ ಮೊಹಮ್ಮದ್ ಅಲ್ -ಬಶೀರ್ ಅವರನ್ನು ಮಧ್ಯಂತರ ಸರಕಾರದ ಮುಖ್ಯಸ್ಥರನ್ನಾಗಿ ಹಯಾತ್ ತಹ್ರೀರ್ ಅಲ್-ಶಾಮ್ ಸಂಘಟನೆಯ ಬಂಡುಕೋರರು ನೇಮಿಸಿದ್ದಾರೆ. 2025ರ ಮಾರ್ಚ್ 1 ರವರೆಗೆ ಬಶೀರ್ ಸಿರಿಯಾದ ನೂತನ ಪ್ರಧಾನ ಮಂತ್ರಿಯಾಗಿ ಮಧ್ಯಂತರ ಸರಕಾರ ಮುನ್ನಡೆಸಲಿದ್ದಾರೆ.

### ಬೈರುತ್‌ಗೆ ಆಹ್ವಾನ

**ಸಿರಿಯಾದಿಂದ ಎರಡು ದಿನಗಳಲ್ಲಿ ಡಮಾಸ್ಕಸ್, ಬೈರುತ್‌ನಲ್ಲಿರುವ ಭಾರತದ ರಾಯಭಾರ ಕಚೇರಿಗಳು 75 ಭಾರತೀಯರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿದೆ. 75 ಮಂದಿಯಲ್ಲಿ ಸೈದಾ ಜೈನಬ್‌ನಲ್ಲಿದ್ದ ಜಮ್ಮು ಮತ್ತು ಕಾಶ್ಮೀರದ 44 ಜೈರೀನ್‌ಗಳೂ ಸೇರಿದ್ದು ಇವರನ್ನು ರಾಯಭಾರಿ ನೂರ್ ರೆಹಮಾನ್ ಲೆಬನಾನ್‌ನ ರಾಜಧಾನಿ ಬೈರುತ್‌ಗೆ ಆಹ್ವಾನಿಸಿದ್ದಾರೆ ಎಂದು ಭಾರತೀಯ ವಿದೇಶಾಂಗ ಸಚಿವಾಲಯ ಮಾಹಿತಿ ನೀಡಿದೆ.**

ಸಿರಿ ಯಾ ರಾಜಧಾನಿ ಡಮಾಸ್ಕಸ್ ಅನ್ನು ಹಯಾತ್ ತಹ್ರೀರ್ ಅಲ್ ಶಾಮ್ ಬಂಡುಕೋರ ಪಡೆ ವಶಪಡಿಸಿ ಕೊಂಡಿತ್ತು. ಹಂಗಾಮಿ ಸರಕಾರ ರಚನೆ ಮಾಡಿ, ಸಿರಿಯಾದ ಹೊಸ ಪ್ರಧಾನಿಯಾಗಿ ಬಶೀರ್ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಬಂಡುಕೋರ ಪಡೆ ಪ್ರಕಟಿಸಿದೆ.

- ಸಿರಿಯಾದಿಂದ 2 ದಿನಗಳಲ್ಲಿ 75 ಭಾರತೀಯರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿದ ಸರಕಾರ
- ಮೊಹಮ್ಮದ್ ಅಲ್ -ಬಶೀರ್ 2025ರ ಮಾ.1ರವರೆಗೆ ಪ್ರಧಾನಿ

**ಅಮೆರಿಕ-ಇಸ್ರೇಲ್ ಯೋಜನೆ ಎಂದ ಇರಾನ್:** ಸಿರಿಯಾದಲ್ಲಿ ಸರಕಾರ ಪತನ ಸೇರಿದಂತೆ ಅಲ್ಲಿ ನಡೆದ ಈವರೆಗಿನ ಎಲ್ಲಾ ಬೆಳವಣಿಗೆಗಳಲ್ಲಿ ನೆರೆಯ ದೇಶ ಪ್ರಮುಖ ಪಾತ್ರವಹಿಸಿದೆ. ಸಿರಿಯಾದಲ್ಲಿ ನಡೆದಿರುವುದು ಅಮೆರಿಕ ಮತ್ತು ಇಸ್ರೇಲ್‌ನ ಜಂಟಿ ಯೋಜನೆಯ ಭಾಗವಾಗಿವೆ ಎಂದು ಇರಾನ್‌ನ ಪರಮೋಚ್ಚ ನಾಯಕ ಅಯತ್ ಉಲ್ಲಾಅಲಿ ಖಮೇನಿ ಹೇಳಿರುವುದಾಗಿ ಮಾಧ್ಯಮ ವರದಿ ಮಾಡಿದೆ.

**ರಷ್ಯಾದಲ್ಲಿ ಅಸಾದ್ ಆಶ್ರಯ:** ಪಲಾಯನ ಗೈದಿದ್ದ ಸಿರಿಯಾ ಅಧ್ಯಕ್ಷ ಬಶರ್ ಅಲ್ ಅಸಾದ್ ರಷ್ಯಾದಲ್ಲಿ ಆಶ್ರಯ ಪಡೆದಿದ್ದಾರೆ ಎಂದು ರಷ್ಯಾದ ಹಿರಿಯ ಅಧಿಕಾರಿಗಳು ಖಚಿತಪಡಿಸಿದ್ದಾರೆ.

ಅಸಾದ್ ದೇಶ ತೊರೆದ ಬಳಿಕ ಮೊದಲ ಬಾರಿಗೆ ರಷ್ಯಾ ಸರಕಾರ ಸ್ಪಷ್ಟನೆ ನೀಡಿದೆ. ಬಶರ್ ಅಲ್ ಅಸಾದ್ ಅವರನ್ನು ಸುರಕ್ಷಿತವಾಗಿ ರಷ್ಯಾಗೆ ಕರೆತರಲಾಗಿದ್ದು, ಪ್ರಸ್ತುತ ಸಿರಿಯಾ ಪರಿಸ್ಥಿತಿ ಬಗ್ಗೆ ಖಚಿತ ಮಾಹಿತಿ ಇಲ್ಲ ಎಂದು ಉಪ ವಿದೇಶಾಂಗ ಸಚಿವ ಸೆರ್ಗೆಯ್ ರಿಯಾಬ್ಕೊವ್ ಹೇಳಿದ್ದಾರೆ ಎಂದು ಸುದ್ದಿ ಸಂಸ್ಥೆ ಎನ್‌ಬಿಸಿ ವರದಿ ಮಾಡಿದೆ.

# ಮಿನಿ ನ್ಯೂಸ್

## ತಾನೇ ಜನ್ಮ ನೀಡಿದ್ದ ಹೆಣ್ಣು ಶಿಶುವನ್ನು ನದಿಗೆ ಎಸೆದ ನಿರ್ದಯಿ ತಾಯಿ

**ಜಮ್ಶೆಡ್ಪುರ:** ತಾನೇ ಜನ ನೀಡಿದ ಹೆಣ್ಣು ಶಿಶುವನ್ನು ತಾಯಿಯೊಬ್ಬರು ನದಿಗೆ ಎಸೆದಿರುವ ಘಟನೆ ಜಾರ್ಖಂಡ್‌ನಲ್ಲಿ ನಡೆದಿದೆ. ಜಾರ್ಖಂಡ್‌ನ ಪೂರ್ವ ಸಿಂಗ್ಭೂಮ್ ಜಿಲ್ಲೆಯಲ್ಲಿ ಮಹಿಳೆಯೊಬ್ಬರು ತನ್ನ ಹೆಣ್ಣು ಮಗುವನ್ನು ನದಿಗೆ ಎಸೆದಿದ್ದು, ಶಿಶು ಸಾವಿಗೆ ಕಾರಣವಾಯಿತು ಎಂದು ಪೊಲೀಸರು ತಿಳಿಸಿದ್ದಾರೆ. ಜದುಗೋರಾದ ದುರ್ಕು ಗ್ರಾಮದಲ್ಲಿ ಈ ಘಟನೆ ನಡೆ ದಿದ್ದು, ಆರೋಪಿ 30 ವರ್ಷದ ಮಹಿಳೆ ತನ್ನ ಮಗುವಿನೊಂದಿಗೆ ಸಮೀಪದ ನದಿಗೆ ಸ್ನಾನಕ್ಕೆ ತೆರಳಿದ್ದರು ಎಂದು ಅವರು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಆಕೆ ತನ್ನ ಹೆಣ್ಣು ಶಿಶು ವನ್ನು ನದಿಗೆ ಎಸೆದು ಹತ್ಯೆ ಮಾಡಿದ್ದಾರೆ ಎಂದು ಉಪ ಪೊಲೀಸ್ ವರಿಷ್ಠಾಧಿಕಾರಿ ಸಂದೀಪ್ ಭಗತ್ ತಿಳಿಸಿದ್ದಾರೆ.

ಮಹಿಳೆಯ ಪತಿ ಈ ಬಗ್ಗೆ ಎಫ್‌ಐಆರ್ ದಾಖಲಿಸಿದ್ದಾರೆ, ಆಕೆಯ ಕೃತ್ಯದ ಹಿಂದಿನ ನಿಖರವಾದ ಕಾರಣ ತಕ್ಷಣವೇ ತಿಳಿದುಬಂದಿಲ್ಲ ಎಂದು ಅವರು ಹೇಳಿದರು. ಆಕೆಯನ್ನು ಬಂಧಿಸಲಾಗಿದ್ದು, ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ ಎಂದು ಭಗತ್ ಹೇಳಿದ್ದಾರೆ.

## ಪಾಕ್ ಸೇನೆ ವಿರುದ್ಧ ಅಪಪ್ರಚಾರ ಆರೋಪ: 22 ಮಂದಿ ಬಂಧನ

**ಲಾಹೋರ್:** ಸಾಮಾಜಿಕ ಜಾಲತಾಣಗಳಲ್ಲಿ ಸೇನೆ ವಿರುದ್ಧ ಅಪಪ್ರಚಾರದ ಪೋಸ್ಟ್‌ಗಳನ್ನು ಹಂಚಿಕೊಳ್ಳುತ್ತಿದ್ದ ಆರೋಪದಡಿ 22 ಮಂದಿಯನ್ನು ಬಂಧಿಸಿರುವ ಅಧಿಕಾರಿಗಳು, ಇತರ 150 ಜನರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಬಂಧಿತರ ಪೈಕಿ ಬಹುತೇಕರು, ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಪಿಟಿಐ ಪಕ್ಷಕ್ಕೆ ಸೇರಿದವರಾಗಿದ್ದಾರೆ ಎನ್ನಲಾಗಿದೆ. ನವೆಂಬರ್ 26ರಂದು ಇಸ್ಲಾಮಾಬಾದ್‌ನಲ್ಲಿ ನಡೆದಿದ್ದ ಪಕ್ಷದ ಕಾರ್ಯಕರ್ತರ ಹತ್ಯೆ ವಿಚಾರವಾಗಿ ಪಿಟಿಐ ಕಾರ್ಯಕರ್ತರು ಅಪಪ್ರಚಾರದಲ್ಲಿ ತೊಡಗಿದ್ದರು ಎಂದು ಆರೋಪಿಸಲಾಗಿದೆ.

ಪಂಜಾಬ್ ಪ್ರಾಂತ್ಯದಲ್ಲಿ ಸಂಸ್ಥೆಯು 117 ದಾಳಿಗಳನ್ನು ನಡೆಸಿ, ಅಪಪ್ರಚಾರದಲ್ಲಿ ತೊಡಗಿದ್ದ ಶಂಕೆ ಮೇಲೆ 22 ಜನರನ್ನು ಬಂಧಿಸಿದೆ ಎಂದು ಫೆಡರಲ್ ಇನ್ವೆಸ್ಟಿಗೇಷನ್ ಏಜೆನ್ಸಿ ಮುಖ್ಯಸ್ಥರು ತಿಳಿಸಿದ್ದಾರೆ.

## 58 ನಕ್ಷತ್ರ ಆಮೆಗಳ ಅಕ್ರಮ ಸಾಗಣೆ ಸಿಂಗಪುರದಲ್ಲಿ ಭಾರತೀಯನಿಗೆ ಜೈಲು

**ಸಿಂಗಪುರ:** ಸಿಂಗಪುರಕ್ಕೆ 58 ನಕ್ಷತ್ರ ಆಮೆಗಳನ್ನು ಅಕ್ರಮವಾಗಿ ಸಾಗಿಸುತ್ತಿದ್ದ ಆರೋಪದಡಿ ಭಾರತೀಯ ಪ್ರಜೆಯೊಬ್ಬರಿಗೆ ಒಂದು ವರ್ಷ ನಾಲ್ಕು ತಿಂಗಳು ಜೈಲು ಶಿಕ್ಷೆ ವಿಧಿಸಲಾಗಿದೆ ಎಂದು ಮಾಧ್ಯಮವೊಂದು ವರದಿ ಮಾಡಿದೆ. ಆಗಸ್ಟ್ 29ರಂದು ಅಬ್ದುಲ್ ಜಾಫರ್ ಹಾಜಿ ಅಲಿ (40) ಅವರು ಭಾರತದಿಂದ ಜಕಾರ್ತಕ್ಕೆ ತೆರಳುತ್ತಿದ್ದ ವೇಳೆ, ಮತ್ತೊಂದು ವಿಮಾನದಲ್ಲಿ ಪ್ರಯಾಣ ಮುಂದುವರಿಸುವುದಕ್ಕಾಗಿ ಸಿಂ ಗಪುರದ ಚಾಂಗಿ ವಿಮಾನನಿಲ್ದಾಣದಲ್ಲಿ ಇಳಿದಿದ್ದರು.

ಈ ವೇಳೆ, ವಿಮಾನ ನಿಲ್ದಾಣ ಅಧಿಕಾರಿಗಳು ಅಲಿ ಅವರ ಬ್ಯಾಗ್ ಪರೀಕ್ಷಿಸಿದಾಗ, ಭಾರತೀಯ ನಕ್ಷತ್ರ ಆಮೆಗಳನ್ನು ಅಕ್ರಮವಾಗಿ ಸಾಗಿಸುತ್ತಿದ್ದುದು ಪತ್ತೆಯಾಗಿತ್ತು. 58 ಆಮೆಗಳ ಪೈಕಿ ಒಂದು ಮೃತಪಟ್ಟಿದ್ದು, 22 ಆಮೆಗಳ ದೇಹ ಸ್ಥಿತಿ ಉತ್ತಮವಾಗಿಲ್ಲ ಎಂದು ಸ್ಟ್ರೈಟ್ಸ್ ಟೈಮ್ಸ್ ವರದಿ ತಿಳಿಸಿದೆ.

## ಲಂಡನ್: ಶಸ್ತ್ರಾಸ್ತ್ರ ವಿತರಕ ಸಂಜಯ್ ಭಂಡಾರಿ ಮೇಲ್ಮನವಿ ವಿಚಾರಣೆ


**ಲಂಡನ್:** ಹಣ ಅಕ್ರಮ ವರ್ಗಾವಣೆ ಹಾಗೂ ತೆರಿಗೆ ವಂಚನೆ ಪ್ರಕರಣಕ್ಕೆ ಸಂಬಂಧಿಸಿ ತಮ್ಮನ್ನು ಭಾರತಕ್ಕೆ ಹಸ್ತಾಂತರಿಸುವಂತೆ ಮ್ಯಾಜಿಸ್ಟ್ರೇಟ್ ಕೋರ್ಟ್ ನೀಡಿದ್ದ ಅನುಮತಿ ಪ್ರಶ್ನಿಸಿ, ಶಸ್ತ್ರಾಸ್ತ್ರ ವಿತರಕ ಸಂಜಯ್ ಭಂಡಾರಿ ಸಲ್ಲಿಸಿದ್ದ ಮೇಲ್ಮನವಿ ವಿಚಾರಣೆಯನ್ನು ಲಂಡನ್ ಹೈಕೋರ್ಟ್ ಆರಂಭಿಸಿದೆ. ಮಂಗಳವಾರದಿಂದಲೇ ವಿಚಾರಣೆ ಆರಂಭವಾಗಿದ್ದು, 2025ರ ಜನವರಿಯಲ್ಲಿ ತೀರ್ಪು ಹೊರಬೀಳುವ ಸಾಧ್ಯತೆ ಇದೆ. '

ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ತೀರ್ಪು ಪ್ರಶ್ನಿಸಿ, ಭಂಡಾರಿ ಸಲ್ಲಿಸಿರುವ ಮೇಲ್ಮನವಿಯು ಪರಿಗಣನೆಗೆ ಯೋಗ್ಯವಾಗಿಲ್ಲ. ಹಾಗಾಗಿ, ಪ್ರಕರಣದ ವಿಚಾರಣೆಗೆ ನೀಡಿರುವ ಅನುಮತಿಯನ್ನು ರದ್ದುಗೊಳಿಸಬೇಕು' ಎಂದು ಭಾರತ ಸರ್ಕಾರದ ಪರ ವಾದ ಮಂಡಿಸುತ್ತಿರುವ ಕ್ರೌನ್ ಪ್ರಾಸಿಕ್ಯೂಷನ್ ಸರ್ವೀಸ್, ಪೀಠಕ್ಕೆ ಮನವಿ ಮಾಡಿತು. 'ಹಸ್ತಾಂತರ ಬಳಿಕ ಭಂಡಾರಿ ಅವರನ್ನು ದೆಹಲಿಯ ತಿಹಾರ್ ಜೈಲಿನಲ್ಲಿ ಇರಿಸಲಾಗುತ್ತದೆ. ಅಲ್ಲಿ ಖೈದಿಗಳು ಹಾಗೂ ಜೈಲು ಅಧಿಕಾರಿಗಳಿಂದ ಹಲ್ಲೆ ಅಥವಾ ಸುಲಿಗೆ ನಡೆಯುವ ಅಪಾಯವಿದೆ' ಎಂದು ಭಂಡಾರಿ ಪರ ವಕೀಲರು ನ್ಯಾಯಪೀಠಕ್ಕೆ ತಿಳಿಸಿದರು. ಲಂಡನ್ ವೆಸ್ಟ್‌ಮಿನ್‌ಸ್ಟರ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು, ಭಂಡಾರಿ ಅವರನ್ನು ಭಾರತಕ್ಕೆ ಹಸ್ತಾಂತರಿಸಲು 2022ರ ನವೆಂಬರ್‌ನಲ್ಲಿ ಅನುಮತಿ ನೀಡಿತ್ತು.

## ಸಿರಿಯಾ ಸರ್ಕಾರ ಪತನ ಇಸ್ರೇಲ್, ಅಮೆರಿಕದ ಜಂಟಿ ಯೋಜನೆ

**ಇರಾನ್:** ಸಿರಿಯಾದಲ್ಲಿ ಸರ್ಕಾರ ಪತನ ಸೇರಿದಂತೆ ಇತ್ತೀಚಿನ ಘಟನೆಗಳು ಅಮೆರಿಕ, ಇಸ್ರೇಲ್‌ನ ಜಂಟಿ ಯೋಜನೆಯ ಭಾಗವಾಗಿವೆ ಎಂದು ಇರಾನ್‌ನ ಪರಮೋಚ್ಚ ನಾಯಕ ಅಯತ್ ಉಲ್ಲಾ ಅಲಿ ಖಮೇನಿ ಹೇಳಿದ್ದಾರೆ.'ಸಿರಿಯಾದಲ್ಲಿ ಏನು ಆಗಿದೆಯೋ ಅದು ಅಮೆರಿಕ ಮತ್ತು ಇಸ್ರೇಲ್‌ನ ಜಂಟಿ ಯೋಜನೆಯ ಭಾಗ ಎಂಬುವುದರಲ್ಲಿ ಯಾವುದೇ ಸಂಶಯ ಉಳಿದಿಲ್ಲ. ನಮ್ಮ ಬಳಿ ಅದಕ್ಕೆ ಸಾಕ್ಷಿಗಳಿವೆ. ಈ ಸಾಕ್ಷಿಗಳು ನಮ್ಮ ಸಂಶಯವನ್ನು ದೂರಾಗಿಸಿವೆ' ಎಂದು ಖಮೇನಿ ಹೇಳಿರುವುದಾಗಿ ಸರ್ಕಾರಿ ಮಾಧ್ಯಮವೊಂದು ವರದಿ ಮಾಡಿದೆ. ಹೌದು, ಸಿರಿಯಾದ ನೆರೆಯ ದೇಶವು ಈ ವಿಷಯದಲ್ಲಿ ಸ್ಪಷ್ಟವಾದ ಪ್ರಮುಖ ಪಾತ್ರವನ್ನು ವಹಿಸುತ್ತಿದೆ ಎಂದು ಇಸ್ರೇಲ್ ಹೆಸರು ಉಲ್ಲೇಖಿಸದೇ ವಾಗ್ದಾಳಿ ನಡೆಸಿದರು. ಪ್ರತಿಯೊಬ್ಬರೂ ಇದನ್ನು ನೋಡುತ್ತಿದ್ದಾರೆ. ಎಲ್ಲರಿಗೂ ಇದು ತಿಳಿದಿದೆ.

ಆದರೆ, ಪ್ರಮುಖ ಸಂಚುಕೋರ, ಮಾಸ್ಟರ್ ಮೈಂಡ್ ಮತ್ತು ಕಮಾಂಡ್ ಸೆಂಟರ್ ಅಮೆರಿಕ ಎಂದು ಅವರು ಹೇಳಿದ್ದಾರೆ. ಸಿರಿಯಾ ಅಧ್ಯಕ್ಷರಾಗಿದ್ದ ಬಶರ್ ಅಸಾದ್ ಬಂಡುಕೋರರ ದಾಳಿಗೆ ಹೆದರಿ ಇತ್ತೀಚೆಗೆ ಪದವಿ ತೊರೆದು ದೇಶ ಬಿಟ್ಟು ಪರಾರಿಯಾಗಿದ್ದರು. ಬಶರ್ ಪಲಾಯನ ಮಾಡುತ್ತಿದ್ದಂತೆ ಪ್ರತಿಭಟನಕಾರರು ಭಾನುವಾರ ಮುಂಜಾನೆ ಮಿಂಚಿನ ಕಾರ್ಯಾಚರಣೆ ನಡೆಸಿದರು. ಆಡಳಿತದ ಮೇಲೆ ಹಿಡಿತ ಸಾಧಿಸಿದ್ದರು. ಅಲ್ಲದೆ, ಎಲ್ಲಾ ಕೈದಿಗಳನ್ನು ಬಿಡುಗಡೆ ಮಾಡಲಾಗಿತ್ತು. ಈ ಬೆಳವಣಿಗೆಯು ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ಕಂಪನ ಸೃಷ್ಟಿಸಿದೆ. ಈ ಪ್ರದೇಶದಲ್ಲಿ ರಷ್ಯಾ ಮತ್ತು ಇರಾನ್ ಹೊಂದಿದ್ದ ಪ್ರಭಾವಕ್ಕೆ ಭಾರಿ ಏಟು ಬಿದ್ದಂತಾಗಿದೆ. ಸಂಘರ್ಷದ ಉದ್ದಕ್ಕೂ ಬಶರ್‌ಗೆ ಈ ಎರಡೂ ದೇಶಗಳು ಬೆಂಬಲ ನೀಡಿದ್ದವು. ಆದರೆ, ಈಗ ತಮ್ಮ ದೇಶವೇ ಎದುರಿಸುತ್ತಿರುವ ಬಿಕ್ಕಟ್ಟಿನಿಂದಾಗಿ ದೂರ ಇದ್ದವು.



# ಪೂಜಾ ಹೆಗ್ಡೆಗೆ ಠಕ್ಕರ್ ನಾಗಚೈತನ್ಯಗೆ ಶ್ರೀಲೀಲಾ ಜೋಡಿ

ಶ್ರೀಲೀಲಾ ತಂಡ ಫೈನಲ್

ಕನ್ನಡತಿ ಶ್ರೀಲೀಲಾ 'ಪುಷ್ಪ 2' ಸಿನಿಮಾದಲ್ಲಿ ಐಟಂ ಹಾಡಿಗೆ ಸೊಂಟ ಬಳುಕಿಸಿದ ಮೇಲೆ ಬೇಡಿಕೆ ಹೆಚ್ಚಾಗಿದೆ. ಸದ್ಯ ಕರಾವಳಿ ನಟಿ ಪೂಜಾ ಹೆಗ್ಡೆಗೆ ಠಕ್ಕರ್ ಕೊಟ್ಟು ಶ್ರೀಲೀಲಾ ಬಿಗ್ ಆಫರ್‌ವೊಂದನ್ನು ಬಾಚಿಕೊಂಡಿದ್ದಾರೆ. ಸಮಂತಾ ಮಾಜಿ ಪತಿ ನಾಗಚೈತನ್ಯ ಸಿನಿಮಾಗೆ ನಾಯಕಿಯಾಗಿದ್ದಾರೆ ಎನ್ನಲಾದ ಸುದ್ದಿಯೊಂದು ಚರ್ಚೆಗೆ ಗ್ರಾಸವಾಗಿದೆ. ಟಾಲಿವುಡ್‌ನಲ್ಲಿ ನಟನೆ, ಡ್ಯಾನ್ಸ್, ಬ್ಯೂಟಿ ಮೂಲಕ ಎಲ್ಲಾರ ಮನಗೆದ್ದಿರುವ ಸುಂದರಿ ಶ್ರೀಲೀಲಾ ಸಾಲು ಸಾಲು ಅವಕಾಶಗಳು ಅರಸಿ ಬರುತ್ತಿವೆ.

ನಾಗಚೈತನ್ಯ ನಟನೆಯ 24ನೇ ಸಿನಿಮಾಗೆ ಪೂಜಾ ಹೆಗ್ಡೆರನ್ನು ಆಯ್ಕೆ ಮಾಡಿದೆ ಎಂಬ ಸುದ್ದಿ ಇತ್ತು. ಈಗ ಪೂಜಾರನ್ನು ನಾಯಕಿ ಪಾತ್ರಕ್ಕೆ ಕೈಬಿಡಲಾಗಿದ್ದು, ಶ್ರೀಲೀಲಾರನ್ನು ತಂಡ ಫೈನಲ್ ಮಾಡಿದೆ ಎನ್ನಲಾಗಿದೆ. ಚಿತ್ರತಂಡದಿಂದ ಈ ಕುರಿತು ಅಧಿಕೃತ ಮಾಹಿತಿ ಸಿಗುವವರೆಗೂ ಕಾದುನೋಡಬೇಕಿದೆ.

ಇನ್ನೂ 'ಪುಷ್ಪ 2' ಅಲ್ಲು ಅರ್ಜುನ್ ಮತ್ತು ರಶ್ಮಿಕಾ ಜೊತೆ ಶ್ರೀಲೀಲಾ ಡ್ಯಾನ್ಸ್ ಮಾಡುವ ಮೂಲಕ ಹೈಪ್ ಕ್ರಿಯೆಟ್ ಆಗಿದೆ. ಜೊತೆಗೆ ನಿತಿನ್ ಜೊತೆಗಿನ 'ರಾಬಿನ್‌ಹುಡ್' ಸಿನಿಮಾ ರಿಲೀಸ್‌ಗೆ ಸಿದ್ಧವಾಗಿದೆ.



# ಸಂಜು ವೆಡ್ಸ್ ಗೀತಾ 2 ರಿಲೀಸ್ ಡೇಟ್

ಸಂಜು ವೆಡ್ಸ್ ಗೀತಾ 2 ಸಿನಿಮಾವನ್ನು ನಾಗಶೇಖರ್ ನಿರ್ದೇಶಿಸಿದ್ದು, 2011 ರಲ್ಲಿ ಬಿಡುಗಡೆಯಾದ ಸಂಜು ವೆಡ್ಸ್ ಗೀತಾ ಸಿನಿಮಾದ ಸೀಕ್ವೆಲ್ ಇದಾಗಿದೆ. ದೀರ್ಘಾವಧಿಯ ವಿಳಂಬದ ಬಳಿಕ ಕೊನೆಗೂ ಸಂಜು ವೆಡ್ಸ್ ಗೀತಾ 2 ಸಿನಿಮಾ ಬಿಡುಗಡೆಯ ದಿನಾಂಕ ನಿಗದಿಯಾಗಿದೆ. ಸಂಜು ವೆಡ್ಸ್ ಗೀತಾ 2 ಸಿನಿಮಾವನ್ನು ನಾಗಶೇಖರ್ ನಿರ್ದೇಶಿಸಿದ್ದು, 2011 ರಲ್ಲಿ ಬಿಡುಗಡೆಯಾದ ಸಂಜು ವೆಡ್ಸ್ ಗೀತಾ ಸಿನಿಮಾದ ಸೀಕ್ವೆಲ್ ಇದಾಗಿದೆ.

ಶ್ರೀನಗರ ಕಿಟ್ಟಿ ನಾಯಕ ನಟನಾಗಿದ್ದರೆ, ಸೀಕ್ವೆಲ್ ಸಿನಿಮಾದಲ್ಲಿ ರಚಿತಾರಾಮ್ ನಾಯಕಿಯಾಗಿದ್ದಾರೆ. ಶರಣ್, ಅದಿತಿ ಪ್ರಭುದೇವ ಮತ್ತು ಮೇಘನಾ ಗಾಂವ್ಕರ್ ನಟಿಸಿದ ಕನ್ನಡದ ಹಾರರ್ ಎಂಟರ್ಟೈನರ್ ಚೂಮಂತರ್ ಸೇರಿದಂತೆ ಇತರ ಪ್ರಮುಖ ಸಿನಿಮಾಗಳ ಜೊತೆಗೆ ಸಂಜು ವೆಡ್ಸ್ ಗೀತಾ 2 ಸಿನಿಮಾ ಬಿಡುಗಡೆಯಾಗುತ್ತಿದೆ. ರಾಮ್ ಚರಣ್ ಅವರ ಗೇಮ್ ಚೇಂಜರ್ ಮತ್ತು ಇತರ ಕೆಲವು ಚಿತ್ರಗಳು ಸಹ ಅದೇ ಸಮಯದಲ್ಲಿ ತೆರೆಗೆ ಬರಲು ಸಿದ್ಧವಾಗಿವೆ.

ಸಂಜು ವೆಡ್ಸ್ ಗೀತಾ ಸಿನಿಮಾ ಕುರಿತ ನಿರೀಕ್ಷೆ ಹೆಚ್ಚಾಗಿದ್ದು, ಫ್ರ್ಯಾಂಚೈಸ್‌ಗೆ ಹೊಸ ಗುರುತನ್ನು ತಂದುಕೊಟ್ಟಿದ್ದಾರೆ. ಚಿತ್ರದ ಪ್ರಮುಖ ಭಾಗಗಳನ್ನು ಸ್ವಿಟ್ಜರ್ಲೆಂಡ್‌ನ ಸುಂದರವಾದ ಪ್ರದೇಶಗಳಲ್ಲಿ ಚಿತ್ರೀಕರಿಸಲಾಗಿದೆ. ಭವ್ಯತೆ ಮತ್ತು ಭಾವನಾತ್ಮಕ ಆಳವನ್ನು ಸಂಯೋಜಿಸುವ ಚಿತ್ರವನ್ನು ಚಲಪತಿ ಕುಮಾರ್ ಅವರು ನಾಗಶೇಖರ್ ಮೂವೀಸ್, ಪವಿತ್ರಾ ಇಂಟರ್ನ್ಯಾಷನಲ್ ಮೂವೀಸ್ ಮತ್ತು ಮಹಾನಂದಿ ಕ್ರಿಯೇಷನ್ಸ್ ಸಹಯೋಗದೊಂದಿಗೆ ನಿರ್ಮಿಸಿದ್ದಾರೆ.



# ರಿಪ್ಪನ್ ಸ್ವಾಮಿ ಜನವರಿಯಲ್ಲಿ ತೆರೆಗೆ

ಚಿತ್ರದಲ್ಲಿ ರಾಷ್ಟ್ರಪ್ರಶಸ್ತಿ ವಿಜೇತ ನಟ ವಿಜಯ್ ಅವರು ವಿಭಿನ್ನ ಪಾತ್ರದ ಮೂಲಕ ಪ್ರೇಕ್ಷಕರ ಮುಂದೆ ಬರುತ್ತಿದ್ದಾರೆ. ವಿಜಯ್ ಅವರಿಗೆ ಜೋಡಿಯಾಗಿ ಅಶ್ವಿನಿ ಚಂದ್ರಶೇಖರ್ ಅವರು ಕಾಣಿಸಿಕೊಳ್ಳುತ್ತಿದ್ದಾರೆ. ಯುವ ನಿರ್ದೇಶಕ ಕಿಶೋರ್ ಮೂಡುಬಿದ್ರೆ ಆಕ್ಷನ್- ಕಟ್ ಹೇಳಿರುವ ಹಾಗೂ ವಿಜಯ್ ರಾಘವೇಂದ್ರ ಅವರು ನಾಯಕನಾಗಿ ನಟಿಸಿರುವ ರಿಪ್ಪನ್‌ಸ್ವಾಮಿ ಚಿತ್ರದ ಸೆನ್ಸಾರ್ ಮುಗಿದಿದ್ದು, ಸಿನಿಮಾಕ್ಕೆ 'ಯು/ಎ' ಸರ್ಟಿಫಿಕೇಶನ್ ದೊರೆತಿದೆ. ಚಿತ್ರವು 2025ರ ಜನವರಿ ತಿಂಗಳಲ್ಲಿನಲ್ಲಿ ಬಿಡುಗಡೆಗೆ ಸಜ್ಜಾಗಿದೆ. ಚಿತ್ರದಲ್ಲಿ ರಾಷ್ಟ್ರಪ್ರಶಸ್ತಿ ವಿಜೇತ ನಟ ವಿಜಯ್ ಅವರು ವಿಭಿನ್ನ ಪಾತ್ರದ ಮೂಲಕ ಪ್ರೇಕ್ಷಕರ ಮುಂದೆ ಬರುತ್ತಿದ್ದಾರೆ. ವಿಜಯ್ ಅವರಿಗೆ ಜೋಡಿಯಾಗಿ ಅಶ್ವಿನಿ ಚಂದ್ರಶೇಖರ್ ಅವರು ಕಾಣಿಸಿಕೊಳ್ಳುತ್ತಿದ್ದಾರೆ. ವೈದ್ಯೆ ಪಾತ್ರದಲ್ಲಿ ಅಶ್ವಿನಿಯವರು ನಟಿಸಿದ್ದಾರೆ. ಚಿತ್ರದ ಚಿತ್ರೀಕರಣ ಕೊಪ್ಪ, ಕಳಸ ಮತ್ತು ಬಾಳೆಹೊನ್ನೂರಿನಂತಹ ಸುಂದರವಾದ ಸ್ಥಳಗಳಲ್ಲಿ ನಡೆದಿದ್ದು, ಕೇವಲ 48 ದಿನಗಳಲ್ಲಿ ಚಿತ್ರೀಕರಣವನ್ನು ಪೂರ್ಣಗೊಳಿಸಲಾಗಿದೆ.

ಕಿಶೋರ್ ಮೂಡುಬಿದ್ರೆ ನಿರ್ದೇಶನದ ಈ ಚಿತ್ರ ಪಂಚಾಂನನ ಬ್ಯಾನರ್ ಅಡಿಯಲ್ಲಿ ನಿರ್ಮಾಣಗೊಂಡಿದೆ. ಚಿತ್ರಕ್ಕೆ ಮಲಯಾಳಂನ ಖ್ಯಾತ ಸಂಗೀತ ನಿರ್ದೇಶಕ ಸ್ಯಾಮ್ಯುಯೆಲ್ ಅಬಿ ಸಂಗೀತ ಸಂಯೋಜಿಸಿದ್ದಾರೆ. ರಂಗನಾಥ್ ಸಿಎಂ ಅವರು ಛಾಯಾಗ್ರಹಣವನ್ನು ನಿರ್ವಹಿಸಿದ್ದಾರೆ. ಶಶಾಂಕ್ ನಾರಾಯಣ್ ಸಂಕಲನ ನೀಡಿದ್ದಾರೆ. ಚಿತ್ರದ ಪೋಷಕ ಪಾತ್ರದಲ್ಲಿ ಪ್ರಕಾಶ್ ತೂಮಿನಾಡ್, ವಜ್ರಧೀರ್ ಜೈನ್, ಯಮುನಾ ಶ್ರೀನಿಧಿ, ಮೋಹನ್ ಶೇಣಿ ಮತ್ತು ಕೃಷ್ಣಮೂರ್ತಿ ಕವತಾರ್ ಕಾಣಿಸಿಕೊಂಡಿದ್ದಾರೆ.

# ಪಿಎಂ ಮೋದಿರನ್ನು ಭೇಟಿಯಾದ ಕರೀನಾ

ಬಾಲಿವುಡ್ ಬ್ಯೂಟಿ ಕರೀನಾ ಕಪೂರ್ ಕುಟುಂಬ ಪಿಎಂ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ್ದಾರೆ. ಈ ಕುರಿತು ಸ್ಪೆಷಲ್ ಪೋಸ್ಟ್‌ವೊಂದನ್ನು ನಟಿ ಹಂಚಿಕೊಂಡಿದ್ದಾರೆ. ರಾಜ್ ಕಪೂರ್ 100ನೇ ವರ್ಷದ ಹುಟ್ಟು ಹಬ್ಬದ ಹಿನ್ನೆಲೆ ಮೋದಿಗೆ ಕಪೂರ್ ಕುಟುಂಬ ಆಹ್ವಾನ ನೀಡಿದೆ. ಇದೇ ಡಿ.14ರಂದು ನಟ, ನಿರ್ಮಾಪಕ ರಾಜ್ ಕಪೂರ್ ಅವರ ಹುಟ್ಟಿದ ದಿನವಾಗಿದ್ದು, 2024ಕ್ಕೆ 100ನೇ ವರ್ಷದ ಬರ್ತ್ಡೇ ಸಂಭ್ರಮ. ರಾಜ್ ಕಪೂರ್ 100ನೇ ವರ್ಷದ ಜನ್ಮ ದಿನದ ಗೌರವಾರ್ಥವಾಗಿ ಅವರ 10 ಸಿನಿಮಾಗಳ ಪ್ರದರ್ಶನ ಮತ್ತು ವಿಶೇಷ ಕಾರ್ಯಕ್ರಮವನ್ನು ಕೂಡ ಕಪೂರ್ ಕುಟುಂಬ ಆಯೋಜಿಸಿದೆ. ಈ ಹಿನ್ನೆಲೆ ದೆಹಲಿಯಲ್ಲಿ ಪಿಎಂ ಕಚೇರಿಯಲ್ಲಿ ಕಪೂರ್ ಫ್ಯಾಮಿಲಿ ಮೋದಿರನ್ನು ಭೇಟಿ ಮಾಡಿ ಆಹ್ವಾನ ನೀಡಿದೆ.

ಕರೀನಾ ಕಪೂರ್ ದಂಪತಿ, ನೀತು ಕಪೂರ್, ಆಲಿಯಾ- ರಣ್‌ಬೀರ್ ಕಪೂರ್ ಜೋಡಿ, ಕರೀಷ್ಮಾ ಕಪೂರ್ ಕುಟುಂಬಸ್ಥರು ಮೋದಿರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಈ ಕುರಿತಾದ ವಿಶೇಷ ಫೋಟೋವನ್ನು ಹಂಚಿಕೊಂಡಿದ್ದಾರೆ. ಅದರಲ್ಲಿ ಕರೀನಾ ಮಕ್ಕಳಾದ ಟಿಮ್ ಮತ್ತು ಜೆಹ್ ಹೆಸರನ್ನು ಬರೆದು ಪಿಎಂ ಆಟೋಗ್ರಾಫ್ ನೀಡಿರೋದು ಎಲ್ಲಾರ ಗಮನ ಸೆಳೆದಿದೆ. ಜೊತೆಗೆ ಕರೀನಾ ಹಂಚಿಕೊಂಡಿರುವ ಪೋಸ್ಟ್‌ನಲ್ಲಿ ಮೋದಿರವರ ಸರಳತೆ ಮತ್ತು ಬೆಂಬಲವನ್ನು ಕೊಂಡಾಡಿದ್ದಾರೆ. ಅಂದಹಾಗೆ, ರಾಜ್ ಕಪೂರ್ 100ನೇ ವರ್ಷದ ಬರ್ತ್ ಆಯನಿವರ್ಸರಿ ಪ್ರಯುಕ್ತ ಡಿ.13ರಿಂದ 15ರವರೆಗೆ 40 ನಗರಗಳಲ್ಲಿ 10 ಸಿನಿಮಾಗಳು 135 ಚಿತ್ರಮಂದಿರಗಳಲ್ಲಿ ಪ್ರಸಾರವಾಗಲಿದೆ ಎಂದು ನಟಿ ತಿಳಿಸಿದ್ದಾರೆ.





# ಕೂದಲು ದಾನ ಮಾಡಿದ ದೀಪಿಕಾ

ಸಿಂಗರ್ ದಿಲ್ಜಿತ್‌ಗೆ ಕನ್ನಡ ಕಲಿಸಿದ ನಟಿ

ಬಾಲಿವುಡ್ ಬೆಡಗಿ ದೀಪಿಕಾ ಪಡುಕೋಣೆ ಹೆಣ್ಣು ಮಗುವಿಗೆ ಸೆ.8ರಂದು ಜನ್ಮ ನೀಡಿದರು. ನಟನೆಯಿಂದ ಅಂತರ ಕಾಯ್ದುಕೊಂಡು ಮಗಳ ಪಾಲನೆಯಲ್ಲಿ ನಟಿ ಬ್ಯುಸಿಯಾಗಿದ್ದಾರೆ. ಇನ್ನೂ ಮೊಮ್ಮಗಳು ದುವಾ ಹುಟ್ಟಿ 3 ತಿಂಗಳಾದ ಖುಷಿಯಲ್ಲಿ ದೀಪಿಕಾ ಅತ್ತೆ ಅಂಜು ಕೂದಲು ದಾನ ಮಾಡಿದ್ದಾರೆ. ಸೆ.8ರಂದು ಜನಿಸಿದ ದುವಾಗೆ ಈಗ 3 ತಿಂಗಳು ತುಂಬಿದ ಸಂಭ್ರಮದ ಹಿನ್ನೆಲೆ ರಣ್‌ವೀರ್ ಸಿಂಗ್ ತಾಯಿ ಕೂದಲು ದಾನ ಮಾಡಿದ್ದಾರೆ. ಈ ಕುರಿತು ಸೋಶಿಯಲ್ ಮೀಡಿಯಾದಲ್ಲಿ ನನ್ನ ಪ್ರೀತಿಯ ದುವಾ, ನಾನು ನಿಮಗೆ ಮೂರನೇ ತಿಂಗಳ ಜನ್ಮದಿನದ ಶುಭಾಶಯಗಳನ್ನು ಕೋರುತ್ತೇನೆ. ದುವಾ ಬೆಳವಣಿಗೆಯ ಪ್ರತಿ ತಿಂಗಳು ನಾವು ಆಚರಿಸುತ್ತಿದ್ದೇವೆ. ಇದು ಒಳ್ಳೆಯತನ ಮತ್ತು ದಯೆಯ ಶಕ್ತಿಯನ್ನು ಸಹ ನಮಗೆ ನೆನಪಿಸುತ್ತದೆ. ನನ್ನ ಈ ಸಣ್ಣ ಕೆಲಸವು ಕಷ್ಟದ ಸಂದರ್ಭಗಳನ್ನು ಎದುರಿಸುತ್ತಿರುವ ಕೆಲವು ಜನರಿಗೆ ಉಪಯುಕ್ತವಾಗಲಿದೆ. ಅವರಿಗೆ ಸಾಂತ್ವನ ಮತ್ತು ಆತ್ಮವಿಶ್ವಾಸವನ್ನು ನೀಡುತ್ತದೆ ಎಂದು ನಾನು ಭಾವಿಸುತ್ತೇನೆ ಎಂದು ಅವರು ಬರೆದುಕೊಂಡಿದ್ದಾರೆ. ರಣ್‌ವೀರ್ ತಾಯಿಯ ನಡೆಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ.ಅಂದಹಾಗೆ, ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಶೋನಲ್ಲಿ ಪಂಜಾಬಿ ಸಿಂಗರ್ ದಿಲ್ಜಿತ್‌ಗೆ ನಟಿ ಕನ್ನಡ ಕಲಿಸಿದ್ದಾರೆ. ನಾನು ನಿಮ್ಮನ್ನು ಪ್ರೀತಿಸುತ್ತೇನೆ ಎಂದು ಕಾರ್ಯಕ್ರಮಕ್ಕೆ ಸೇರಿದ್ದ ಅಭಿಮಾನಿಗಳಿಗೆ ಎಂದು ಹೇಳಿ ಎಂದು ನಟಿ ಮುದ್ದಾಗಿ ಕನ್ನಡ ಹೇಳಿ ಕೊಟ್ಟಿದ್ದಾರೆ. ನಟಿಯ ನಡೆಗೆ ಕನ್ನಡಿಗರು ಭೇಷ್ ಎಂದಿದ್ದರು. ಇನ್ನೂ ದೀಪಿಕಾರವರು ಕೆಲ ದಿನಗಳ ಕಾಲ ತವರು ಮನೆ ಬೆಂಗಳೂರಿನಲ್ಲಿಯೇ ಉಳಿದುಕೊಂಡಿದ್ದರು. ಇದೀಗ ಮುಂಬೈಗೆ ವಾಪಸ್ ಆಗಿದ್ದಾರೆ.

# 27 ತಿಂಗಳಲ್ಲೇ ಅಗ್ರಸ್ಥಾನ ಅಲಂಕರಿಸಿದ ಹ್ಯಾರಿ ಬ್ರೂಕ್



ಐಸಿಸಿ ಟೆಸ್ಟ್ ಬ್ಯಾಟರ್‌ಗಳ ನೂತನ ರಯಾಂಕಿಂಗ್ ಪಟ್ಟಿಯನ್ನು ಪ್ರಕಟಿಸಿದೆ. ಈ ಬಾರಿ ದಿಗ್ಗಜರನ್ನೇ ಹಿಂದಿಕ್ಕಿ ಇಂಗ್ಲೆಂಡ್ ತಂಡದ ಯುವ ದಾಂಡಿಗ ಹ್ಯಾರಿ ಬ್ರೂಕ್ ಅಗ್ರಸ್ಥಾನ ಅಲಂಕರಿಸಿದ್ದಾರೆ. ಅದು ಕೂಡ ಕೇವಲ 27 ತಿಂಗಳಲ್ಲಿ ಎಂಬುದು ವಿಶೇಷ.

ಅಂದರೆ 2022 ರಲ್ಲಿ ಟೆಸ್ಟ್ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ್ದ ಹ್ಯಾರಿ ಬ್ರೂಕ್ ಕೇವಲ 23 ಪಂದ್ಯಗಳ ಮೂಲಕ 2280 ರನ್ ಗಳಿಸಿದ್ದಾರೆ. ಈ ವೇಳೆ 8 ಶತಕ ಹಾಗೂ 10 ಅರ್ಧಶತಕಗಳನ್ನು ಬಾರಿಸಿದ್ದಾರೆ. ಈ ಭರ್ಜರಿ ಪ್ರದರ್ಶನದೊಂದಿಗೆ 898 ಅಂಕಗಳನ್ನು ಕಲೆಹಾಕಿರುವ ಬ್ರೂಕ್ ಟೆಸ್ಟ್ ಕ್ರಿಕೆಟ್‌ನ ನಂಬರ್ 1 ಬ್ಯಾಟರ್ ಎನಿಸಿಕೊಂಡಿದ್ದಾರೆ. ಇನ್ನು ಈ ಪಟ್ಟಿಯಲ್ಲಿ ಇಂಗ್ಲೆಂಡ್‌ನ ಜೋ ರೂಟ್ ದ್ವಿತೀಯ ಸ್ಥಾನದಲ್ಲಿದ್ದು, ಒಟ್ಟು 897 ಅಂಕಗಳನ್ನು ಪಡೆದಿದ್ದಾರೆ.

ಹಾಗೆಯೇ 812 ಅಂಕಗಳನ್ನು ಹೊಂದಿರುವ ನ್ಯೂಝಿಲೆಂಡ್ ತಂಡದ ಕೇನ್ ವಿಲಿಯಮ್ಸನ್ ಮೂರನೇ ಸ್ಥಾನ ಅಲಂಕರಿಸಿದ್ದಾರೆ. 4ನೇ ಸ್ಥಾನದಲ್ಲಿ ಟೀಮ್ ಇಂಡಿಯಾದ ಯುವ ದಾಂಡಿಗ ಯಶಸ್ವಿ ಜೈಸ್ವಾಲ್ ಕಾಣಿಸಿಕೊಂಡಿದ್ದಾರೆ. ಒಟ್ಟು 811 ಅಂಕಗಳನ್ನು ಹೊಂದಿರುವ ಜೈಸ್ವಾಲ್, ಟಾಪ್-5 ನಲ್ಲಿ ಕಾಣಿಸಿಕೊಂಡ ಏಕೈಕ ಭಾರತೀಯ ಬ್ಯಾಟ್ಸ್‌ಮನ್ ಎಂಬುದು ವಿಶೇಷ. ಇನ್ನು ಅಡಿಲೇಡ್ ಟೆಸ್ಟ್‌ನಲ್ಲಿ ಭರ್ಜರಿ ಶತಕ ಸಿಡಿಸಿದ್ದ ಟ್ರಾವಿಸ್ ಹೆಡ್ ಈ ಬಾರಿ 6 ಸ್ಥಾನ ಮೇಲೇರಿದ್ದಾರೆ. ಅದರಂತೆ ನೂತನ ಟೆಸ್ಟ್ ರ್ಯಾಂಕಿಂಗ್ ಪಟ್ಟಿಯಲ್ಲಿ 781 ಅಂಕಗಳೊಂದಿಗೆ 5ನೇ ಸ್ಥಾನ ಅಲಂಕರಿಸಿದ್ದಾರೆ. ಆರನೇ ಸ್ಥಾನದಲ್ಲಿ ಶ್ರೀಲಂಕಾದ ಕಮಿಂದು ಮೆಂಡಿಸ್ (759) ಇದ್ದರೆ, ಏಳನೇ ಸ್ಥಾನದಲ್ಲಿ ಸೌತ್ ಆಫ್ರಿಕಾದ ಟೆಂಬಾ ಬವುಮಾ (753) ಕಾಣಿಸಿಕೊಂಡಿದ್ದಾರೆ. ಇನ್ನು ನ್ಯೂಝಿಲೆಂಡ್‌ನ ಡೇರಿಲ್ ಮಿಚೆಲ್ (729) ಎಂಟನೇ ಸ್ಥಾನದಲ್ಲಿದ್ದಾರೆ. ಒಂಬತ್ತನೇ ಸ್ಥಾನದಲ್ಲಿ ಟೀಮ್ ಇಂಡಿಯಾದ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ ಕಾಣಿಸಿಕೊಂಡಿದ್ದಾರೆ. ಒಟ್ಟು 724 ಅಂಕಗಳನ್ನು ಹೊಂದಿರುವ ಪಂತ್ ಟಾಪ್-10 ನಲ್ಲಿ ಕಾಣಿಸಿಕೊಂಡ ಎರಡನೇ ಭಾರತೀಯ ಆಟಗಾರ. ಇನ್ನು ಹತ್ತನೇ ಸ್ಥಾನ ಅಲಂಕರಿಸುವಲ್ಲಿ ಪಾಕಿಸ್ತಾನದ ಸೌದ್ ಶಕೀಲ್ (724) ಯಶಸ್ವಿಯಾಗಿದ್ದಾರೆ.


# ಪಂದ್ಯದ ಟಿಕೆಟ್ ಸೋಲ್ಡ್ ಔಟ್

ಭಾರತ ಮತ್ತು ಇಂಗ್ಲೆಂಡ್ ನಡುವಣ ಟೆಸ್ಟ್ ಆರಂಭಕ್ಕೆ ಇನ್ನೂ 6 ತಿಂಗಳುಗಳಿವೆ. ಅದಕ್ಕೂ ಮುನ್ನವೇ ಬರ್ಮಿಂಗ್‌ಹ್ಯಾಮ್ ಟೆಸ್ಟ್ ಪಂದ್ಯದ 4 ದಿನದಾಟಗಳ ಟಿಕೆಟ್ ಸಂಪೂರ್ಣ ಮಾರಾಟವಾಗಿದೆ. ಈ ಸರಣಿಯಲ್ಲಿ ಭಾರತ ಮತ್ತು ಇಂಗ್ಲೆಂಡ್ 5 ಟೆಸ್ಟ್ ಪಂದ್ಯಗಳನ್ನಾಡಲಿದೆ. ಇಂಗ್ಲೆಂಡ್‌ನಲ್ಲಿ ನಡೆಯಲಿರುವ ಈ ಸರಣಿಯ ಕ್ರೇಝ್ ಈಗಲೇ ಶುರುವಾಗಿದ್ದು, ಇದೀಗ 200 ದಿನಕ್ಕೂ ಮುಂಚಿತವಾಗಿ ಪಂದ್ಯಗಳ ಟಿಕೆಟ್‌ಗಳು ಬಿಕರಿಯಾಗುತ್ತಿರುವುದು ಕುತೂಹಲಕ್ಕೆ ಕಾರಣವಾಗಿದೆ.

ಇಲ್ಲಿ ಮತ್ತೊಂದು ಕುತೂಹಲಕಾರಿ ಸಂಗತಿ ಎಂದರೆ ಬಿಕರಿಯಾಗಿರುವುದು ಎರಡನೇ ಟೆಸ್ಟ್ ಪಂದ್ಯದ ಟಿಕೆಟ್‌ಗಳು ಎಂಬುದು ವಿಶೇಷ. ಅಂದರೆ ಬರ್ಮಿಂಗ್ ಹ್ಯಾಮ್‌ನ ಎಡ್ಜ್‌ಬಾಸ್ಟನ್ ಸ್ಟೇಡಿಯಂನಲ್ಲಿ ಜುಲೈ 2 ರಿಂದ ಆರಂಭವಾಗಲಿರುವ ಪಂದ್ಯದ ಟಿಕೆಟ್‌ಗಳು ಆರು ತಿಂಗಳಿಗೂ ಮುಂಚಿತವಾಗಿ ಮಾರಾಟವಾಗುತ್ತಿದೆ. ಹೀಗಾಗಿ ಸರಣಿ ಆರಂಭಕ್ಕೂ ಮುನ್ನವೇ ಎಲ್ಲಾ ಪಂದ್ಯಗಳ ಟಿಕೆಟ್ ಬಿಕರಿಯಾಗುವ ನಿರೀಕ್ಷೆಯಲ್ಲಿದ್ದಾರೆ ಇಂಗ್ಲೆಂಡ್ ಕ್ರಿಕೆಟ್ ಬೋರ್ಡ್. ಇನ್ನು ಈ ಸರಣಿಯೊಂದಿಗೆ 2027ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಶುರುವಾಗಲಿದೆ.

ಏಕೆಂದರೆ ಜೂನ್ 11 ರಂದು 2025ರ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ಪಂದ್ಯ ಆರಂಭವಾಗಲಿದ್ದು, ಈ ಪಂದ್ಯದ ಮುಕ್ತಾಯದ ಬೆನ್ನಲ್ಲೇ ಜೂನ್ 20 ರಂದು ಭಾರತ ಮತ್ತು ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿದೆ. ಈ ಟೆಸ್ಟ್ ಸರಣಿಯ ಮೊದಲ ಪಂದ್ಯವು ಲೀಡ್ಸ್‌ನಲ್ಲಿ ನಡೆದರೆ, ದ್ವಿತೀಯ ಟೆಸ್ಟ್ ಪಂದ್ಯಕ್ಕೆ ಬರ್ಮಿಂಗ್‌ಹ್ಯಾಮ್ ಆತಿಥ್ಯವಹಿಸಲಿದೆ. ಇನ್ನು ಮೂರನೇ ಟೆಸ್ಟ್ ಪಂದ್ಯವು ಕ್ರಿಕೆಟ್ ಕಾಶಿ ಲಾರ್ಡ್ಸ್ ಮೈದಾನದಲ್ಲಿ ನಡೆಯಲಿದೆ. ಹಾಗೆಯೇ ನಾಲ್ಕನೇ ಪಂದ್ಯವು ಮ್ಯಾಚೆಂಸ್ಟರ್‌ನಲ್ಲಿ ನಡೆಯಲಿದ್ದು, ಐದನೇ ಪಂದ್ಯವು ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ಜರುಗಲಿದೆ.

ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ 2025ರ ಫೈನಲ್ ಪಂದ್ಯವು ಜೂನ್ 11 ರಿಂದ 15 ರವರಗೆ ನಡೆಯಲಿದೆ. ಈ ಪಂದ್ಯಕ್ಕೆ ಇಂಗ್ಲೆಂಡ್‌ನ ಲಾರ್ಡ್ಸ್



ಮೈದಾನ ಆತಿಥ್ಯವಹಿಸಲಿದ್ದು, ಪ್ರಸ್ತುತ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಅಂಕ ಪಟ್ಟಿಯಲ್ಲಿ ಮೊದಲೆರಡು ಸ್ಥಾನಗಳನ್ನು ಅಲಂಕರಿಸುವ ತಂಡಗಳು ಅಂತಿಮ ಪಂದ್ಯದಲ್ಲಿ ಮುಖಾಮುಖಿಯಾಗಲಿದೆ. ಸದ್ಯ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಅಂಕ ಪಟ್ಟಿಯಲ್ಲಿ ಸೌತ್ ಆಫ್ರಿಕಾ ಅಗ್ರಸ್ಥಾನದಲ್ಲಿದ್ದರೆ, ಆಸ್ಟ್ರೇಲಿಯಾ ದ್ವಿತೀಯ ಸ್ಥಾನದಲ್ಲಿದೆ. ಇನ್ನು ಟೀಮ್ ಇಂಡಿಯಾ ಮೂರನೇ ಸ್ಥಾನದಲ್ಲಿದೆ. ಹೀಗಾಗಿ ಈ ಮೂರು ತಂಡಗಳಲ್ಲಿ ಯಾರು ಫೈನಲ್‌ನಲ್ಲಿ ಮುಖಾಮುಖಿಯಾಗಲಿದೆ ಎಂಬ ಕುತೂಹಲ ಮೂಡಿದೆ.

**ಭಾರತ ಮತ್ತು ಇಂಗ್ಲೆಂಡ್ ಟೆಸ್ಟ್ ಸರಣಿ ವೇಳಾಪಟ್ಟಿ**

| | | |
|---|---|---|
| ಮೊದಲ ಟೆಸ್ಟ್ | 20-24 ಜೂನ್, 2025 | ಹೆಡ್ಡಿಂಗ್ಲಿ, ಲೀಡ್ಸ್ |
| ಎರಡನೇ ಟೆಸ್ಟ್ | 2-6 ಜುಲೈ, 2025 | ಬರ್ಮಿಂಗ್‌ಹ್ಯಾಮ್ |
| ಮೂರನೇ ಟೆಸ್ಟ್ | 10-14 ಜುಲೈ, 2025 | ಲಾರ್ಡ್ಸ್ |
| ನಾಲ್ಕನೇ ಟೆಸ್ಟ್ | 23-27 ಜುಲೈ, 2025 | ಮ್ಯಾಂಚೆಸ್ಟರ್ |
| ಐದನೇ ಟೆಸ್ಟ್ | 31 ಜುಲೈ-4 ಆಗಸ್ಟ್, 2025 | ಲಂಡನ್ |

# ಕರ್ನಾಟಕ ತಂಡದಲ್ಲಿ ಮನೀಶ್ ಪಾಂಡೆ ಯುಗಾಂತ್ಯ

ವಿಜಯ ಹಝಾರೆ ಟೂರ್ನಿಗಾಗಿ ಕರ್ನಾಟಕ ತಂಡದ ಸಂಭಾವ್ಯ ಆಟಗಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ. 32 ಸದಸ್ಯರ ಈ ಬಳಗದಿಂದ ಅನುಭವಿ ಬ್ಯಾಟರ್ ಮನೀಶ್ ಪಾಂಡೆಯನ್ನು ಹೊರಗಿಡಲಾಗಿದೆ. ಇದರೊಂದಿಗೆ ಕರ್ನಾಟಕ ತಂಡದಲ್ಲಿ ಪಾಂಡ್ಯ ಯುಗಾಂತ್ಯವಾಗಿರುವುದು ಖಚಿತವಾಗಿದೆ. ಮುಂಬರುವ ವಿಜಯ ಹಝಾರೆ ಹಾಗೂ ರಣಜಿ ಟೂರ್ನಿಯಲ್ಲಿ ಮನೀಶ್ ಪಾಂಡೆ ಕರ್ನಾಟಕ ಪರ ಕಣಕ್ಕಿಳಿಯುವುದಿಲ್ಲ. ಯುವ ಆಟಗಾರರಿಗೆ ಹೆಚ್ಚಿನ ಅವಕಾಶ ನೀಡುವ ಸಲುವಾಗಿ 35 ವರ್ಷದ ಪಾಂಡೆ ಅವರನ್ನು ತಂಡದಿಂದ ಹೊರಗಿಡಲಾಗಿದೆ ಎಂದು ಕೆಎಸ್‌ಸಿಎ ಆಯ್ಕೆ ಸಮಿತಿ ಅಧ್ಯಕ್ಷ ಜೆ.ಅಭಿರಾಮ್ ತಿಳಿಸಿದ್ದಾರೆ.

ಮನೀಶ್ ಪಾಂಡೆ ಅದ್ಭುತ ವೃತ್ತಿಜೀವನವನ್ನು ಹೊಂದಿದ್ದಾರೆ. ಅದರ ಬಗ್ಗೆ ಸಂದೇಹವಿಲ್ಲ. ಆದರೆ ಕೆಲವು ಹಂತದಲ್ಲಿ, ನೀವು ಯುವಕರಿಗೆ ದಾರಿ ಮಾಡಿಕೊಡಬೇಕಾಗುತ್ತದೆ. ನಮ್ಮಲ್ಲಿ ಕೆಲವು ಅತ್ಯಾಕರ್ಷಕ ಯುವ ಬ್ಯಾಟರ್‌ಗಳಿದ್ದಾರೆ. ಪ್ರಖರ್ ಚತುರ್ವೇದಿ, ಅನೀಶ್ವರ್ ಗೌತಮ್, ಕೆವಿ ಅನೀಶ್, ಇವರಿಗೆ ಹೆಚ್ಚು ಅವಕಾಶಗಳು ಸಿಕ್ಕಷ್ಟು ಉತ್ತಮ ಎಂದು ಅಭಿರಾಮ್ ಸ್ಪೋರ್ಟ್ ಸ್ಟಾರ್‌ಗೆ ತಿಳಿಸಿದ್ದಾರೆ. ಕುತೂಹಲಕಾರಿ ವಿಷಯ ಎಂದರೆ ಈ ಬಾರಿಯ ರಣಜಿ ಟೂರ್ನಿಯ ಮೊದಲ ಸುತ್ತಿನಲ್ಲಿ ಮನೀಶ್ ಪಾಂಡೆ ಕರ್ನಾಟಕ ತಂಡದ ಉಪನಾಯಕರಾಗಿದ್ದರು. ಆದರೆ ಮುಂದಿನ ತಿಂಗಳು ನಡೆಯಲಿರುವ ದ್ವಿತೀಯ ಸುತ್ತಿನಲ್ಲಿ ಪಾಂಡೆ ಕರ್ನಾಟಕ ತಂಡದಲ್ಲಿ ಕಾಣಿಸಿಕೊಳ್ಳುವುದಿಲ್ಲ. ಇದನ್ನು ಖುದ್ದು ಆಯ್ಕೆ ಸಮಿತಿ ಅಧ್ಯಕ್ಷರಾದ ಅಭಿರಾಮ್ ಅವರು ಖಚಿತಪಡಿಸಿದ್ದಾರೆ. ಇದರೊಂದಿಗೆ ಕರ್ನಾಟಕ ತಂಡದಲ್ಲಿ ಮನೀಶ್ ಪಾಂಡೆ ವೃತ್ತಿಜೀವನ ಕೊನೆಗೊಂಡಿರುವುದು ಖಚಿತವಾಗಿದೆ. ಇದಾಗ್ಯೂ ಪಾಂಡೆ ಮುಂದಿನ ದಿನಗಳಲ್ಲಿ ಬೇರೊಂದು ರಾಜ್ಯವನ್ನು ಪ್ರತಿನಿಧಿಸಲಿದ್ದಾರಾ ಕಾದು ನೋಡಬೇಕಿದೆ.

**ಕರ್ನಾಟಕ ಸಂಭಾವ್ಯ ತಂಡ:** ಕೆಎಲ್ ರಾಹುಲ್, ಮಯಾಂಕ್ ಅಗರ್ವಾಲ್, ಪ್ರಸಿದ್ಧ್ ಕೃಷ್ಣ, ದೇವದತ್ ಪಡಿಕ್ಕಲ್, ಎಲ್ ಆರ್ ಚೇತನ್, ಮ್ಯಾಕ್ನೀಲ್ ನೊರೊನ್ಹ, ಶ್ರೇಯಸ್ ಗೋಪಾಲ್, ಕೆಎಲ್ ಶ್ರೀಜಿತ್, ಅಭಿನವ್ ಮನೋಹರ್, ಮನೋಜ್ ಭಾಂಡಗೆ, ಹಾರ್ದಿಕ್ ರಾಜ್, ವಿ. ಕೌಶಿಕ್, ವಿದ್ಯಾಧರ್ ಪಾಟೀಲ್, ಶುಭಾಂಗ್ ಹೆಗ್ಡೆ, ಅಭಿಲಾಷ್ ಶೆಟ್ಟಿ, ಆರ್. ಸ್ಮರನ್, ಲವ್‌ನೀತ್ ಸಿಸೋಡಿಯಾ, ವಿ.ವೈಶಾಕ್, ಮನ್ವಂತ್ ಕುಮಾರ್, ಯಶೋವರ್ಧನ್ ಪರಂತಪ್, ಪ್ರವೀಣ್ ದುಬೆ, ಎಂ.ವೆಂಕಟೇಶ್, ನಿಕಿನ್ ಜೋಸ್, ಕೆ.ವಿ ಅನೀಶ್, ಕೆ.ಶಶಿಕುಮಾರ್, ಪಾರಸ್ ಗುರ್ಬಕ್ಸ್ ಆರ್ಯ, ಶಿಖರ್ ಶೆಟ್ಟಿ, ಕಿಶನ್ ಬೇದರೆ, ಹರ್ಷಿಲ್ ಧರ್ಮಾನಿ, ವಿದ್ವತ್ ಕಾವೇರಪ್ಪ, ಕೃತಿಕ್ ಕೃಷ್ಣ.



# ಶಸ್ತ್ರಚಿಕಿತ್ಸೆಗೆ ಒಳಗಾದ ಟೀಮ್ ಇಂಡಿಯಾ ಆಟಗಾರ



ಭಾರತ ತಂಡದ ಯುವ ಬ್ಯಾಟರ್ ಸಾಯಿ ಸುದರ್ಶನ್ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದಾರೆ. ಕಳೆದ ಕೆಲ ತಿಂಗಳಿಂದ ಸ್ಪೋರ್ಟ್ಸ್ ಹರ್ನಿಯಾ ಸಮಸ್ಯೆಯಿಂದ ಬಳಲುತ್ತಿದ್ದ ಸಾಯಿ ಇದೀಗ ವಿದೇಶದಲ್ಲಿ ಸರ್ಜರಿಗೆ ಒಳಗಾಗಿದ್ದಾರೆ ಎಂದು ತಿಳಿದು ಬಂದಿದೆ.

ಇದಕ್ಕೂ ಮುನ್ನ ಸಾಯಿ ಸುದರ್ಶನ್ ಆಸ್ಟ್ರೇಲಿಯಾ ಎ ತಂಡದ ವಿರುದ್ಧದ ಸರಣಿಯಲ್ಲಿ ಭಾರತ ಎ ತಂಡವನ್ನು ಪ್ರತಿನಿಧಿಸಿದ್ದರು. ಅಲ್ಲದೆ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಗೂ ಮುನ್ನ ಟೀಮ್ ಇಂಡಿಯಾ ವಿರುದ್ಧದ ಅಭ್ಯಾಸ ಪಂದ್ಯದಲ್ಲೂ ಕಾಣಿಸಿಕೊಂಡಿದ್ದರು.

ಇದಾಗ್ಯೂ ಉತ್ತಮ ಫಾರ್ಮ್‌ನಲ್ಲಿದ್ದ ಸಾಯಿ ಸುದರ್ಶನ್ ಅವರನ್ನು ಪರ್ತ್ ಟೆಸ್ಟ್‌ನಿಂದ ಹೊರಗುಳಿದಿದ್ದ ಶುಭ್‌ಮನ್ ಗಿಲ್ ಅವರ ಬದಲಿ ಆಟಗಾರನಾಗಿ ಆಯ್ಕೆ ಮಾಡಲಾಗಿರಲಿಲ್ಲ. ಇದಕ್ಕೆ ಮುಖ್ಯ ಕಾರಣ ಸ್ಪೋರ್ಟ್ಸ್ ಹರ್ನಿಯಾ ಸಮಸ್ಯೆ ಎಂದು ತಿಳಿದು ಬಂದಿದೆ.

ಹೀಗಾಗಿಯೇ ಆಸ್ಟ್ರೇಲಿಯಾದಿಂದ ಹಿಂತಿರುಗಿದ ಬಳಿಕ ಸಾಯಿ ಸುದರ್ಶನ್ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದಾರೆ. ಈ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ಮಾಹಿತಿ ಹಂಚಿಕೊಂಡಿರುವ ಸಾಯಿ, ಶೀಘ್ರದಲ್ಲೇ ಕಂಬ್ಯಾಕ್ ಮಾಡುತ್ತೇನೆ. ಎಲ್ಲಾ ರೀತಿಯ ಬೆಂಬಲಕ್ಕೆ ವೈದ್ಯಕೀಯ ತಂಡ ಹಾಗೂ ಬಿಸಿಸಿಐಗೆ ದೊಡ್ಡ ಧನ್ಯವಾದಗಳು. ಹಾಗೆಯೇ ಗುಜರಾತ್ ಟೈಟಾನ್ಸ್ ಫ್ಯಾಮಿಲಿಯ ಪ್ರೀತಿಗೆ ಮತ್ತು ಬೆಂಬಲಕ್ಕೆ ಧನ್ಯವಾದ ಎಂದು ಬರೆದುಕೊಂಡಿದ್ದಾರೆ. ಅಂದಹಾಗೆ ಈ ಬಾರಿಯ ಐಪಿಎಲ್‌ನಲ್ಲಿ ಸಾಯಿ ಸುದರ್ಶನ್ ಗುಜರಾತ್ ಟೈಟಾನ್ಸ್ ಪರ ಕಣಕ್ಕಿಳಿಯಲಿದ್ದಾರೆ. ಐಪಿಎಲ್ ಮೆಗಾ ಹರಾಜಿಗೂ ಮುನ್ನ ಗುಜರಾತ್ ಫ್ರಾಂಚೈಸಿ ಯುವ ಎಡಗೈ ದಾಂಡಿಗನನ್ನು 8.5 ಕೋಟಿ ರೂ.ಗೆ ರಿಟೈನ್ ಮಾಡಿಕೊಂಡಿದೆ. ಅದರಂತೆ ಮುಂಬರುವ ಐಪಿಎಲ್ ಸೀಸನ್‌ನಲ್ಲಿ ಸಾಯಿ ಸುದರ್ಶನ್ ಗುಜರಾತ್ ಟೈಟಾನ್ಸ್ ಪರ ಬ್ಯಾಟ್ ಬೀಸಲಿದ್ದಾರೆ.


**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news



**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**